24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 35 | ನವದೆಹಲಿ | ಬೆಲೆ ₹10 | ಜುಲೈ 31 2026, ಶುಕ್ರವಾರ

## ಒಳಪುಟಗಳಲ್ಲಿ

ಭರ್ತಿ ಮಾಡಿದ ಗಣತಿ ನಮೂನೆಗಳನ್ನು ಕೂಡಲೇ ಹಿಂದಿರುಗಿಸಿ: ಮುಖ್ಯ ಆಯುಕ್ತ ಮಹೇಶ್ವರ್‌ರಾವ್ ಮನವಿ - ಪು.5

ಶಾಲೆ ಆರಂಭವಾಗಿ ಎರಡು ತಿಂಗಳಾದರೂ ವಿದ್ಯಾರ್ಥಿಗಳಿಗಿಲ್ಲ ಶೂ ಭಾಗ್ಯ: ಬರಿಗಾಲಲ್ಲೇ ಶಾಲೆಗೆ ಬರುತ್ತಿರುವ ಮಕ್ಕಳು - ಪು.6

ಬೀದರ್ ಉತ್ತರ ಕ್ಷೇತ್ರದಲ್ಲಿ 21 ಸಾವಿರ ನಕಲಿ ಮತದಾರರು: ಜೆಡಿಎಸ್ ಆರೋಪ - ಪು.7

# ಕರ್ನಾಟಕಕ್ಕೆ ಶಾಕ್, ತಮಿಳುನಾಡಿಗೆ ಪ್ರತಿನಿತ್ಯ 3,500 ಕ್ಯೂಸೆಕ್ ನೀರು ಹರಿಸಿ

### ಸಿಡಬ್ಲ್ಯುಆರ್‌ಸಿ ಆದೇಶ ಎತ್ತಿಹಿಡಿದ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ

**ನವದೆಹಲಿ, ಜು.30:** ಕಾವೇರಿ ನೀರು ನಿಯಂತ್ರಣ ಸಮಿತಿಯ (ಸಿಡಬ್ಲ್ಯುಆರ್‌ಸಿ) ಶಿಫಾರಸಿನಂತೆ ತಮಿಳುನಾಡಿಗೆ ನೀರು ಬಿಡುಗಡೆ ಮಾಡುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯುಎಂಎ) ಕರ್ನಾಟಕ ಸರ್ಕಾರಕ್ಕೆ ನಿರ್ದೇಶನ ನೀಡಿದೆ.

ಮುಂದಿನ 15 ದಿನಗಳ ಕಾಲ ತಮಿಳುನಾಡಿಗೆ ದಿನಂಪ್ರತಿ 3,500 ಕ್ಯೂಸೆಕ್‌ನಂತೆ ನೀರು ಹರಿಸಬೇಕು ಎಂದು ಸಮಿತಿ ಆದೇಶಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಕರ್ನಾಟಕ ಸರ್ಕಾರವು ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿತ್ತು. ಆದರೆ ಪ್ರಾಧಿಕಾರವು ಸಮಿತಿ ಆದೇಶವನ್ನು ಎತ್ತಿಹಿಡಿದಿದ್ದು ನೀರು ಬಿಡುವಂತೆ ರಾಜ್ಯಕ್ಕೆ ಸೂಚಿಸಿದೆ.

ಎಸ್.ಕೆ. ಹಲದರ್ ಅಧ್ಯಕ್ಷತೆಯಲ್ಲಿ ದೆಹಲಿಯಲ್ಲಿ ಗುರುವಾರ ಪ್ರಾಧಿಕಾರದ ಮಹತ್ವದ ಸಭೆ ನಡೆಯಿತು. ಈ ಸಭೆಯಲ್ಲಿ ಕರ್ನಾಟಕದ ಪರವಾಗಿ ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಭಾಗವಹಿಸಿ ರಾಜ್ಯದ ಜಲಾಶಯಗಳ ನೀರಿನ ಅಭಾವದ ಪರಿಸ್ಥಿತಿಯನ್ನು ವಿವರಿಸಿದರು. ತಮಿಳುನಾಡು ಸರ್ಕಾರದ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಪಾಲ್ಗೊಂಡಿದ್ದರು.

ಸುಪ್ರೀಂಕೋರ್ಟ್ ಆದೇಶದ ಆಧಾರದ ಮೇಲೆ, ತಮಿಳುನಾಡಿಗೆ ಜುಲೈ 29ರವರೆಗೆ ಅಂದರೆ ಜೂನ್ ಮತ್ತು ಜುಲೈ ತಿಂಗಳಿಗೆ 32 ಟಿಎಂಸಿ ನೀರು ಬಿಡುಗಡೆ ಮಾಡಬೇಕಿತ್ತು



ಆದರೆ ಕೇವಲ 3 ಟಿಎಂಸಿ ನೀರು ಬಿಡುಗಡೆ ಮಾಡಲಾಗಿದೆ. ಆದ್ದರಿಂದ, ಮೆಟ್ಟೂರು ಅಣೆಕಟ್ಟಿನಲ್ಲಿ ನೀರಿನ ಒಳಹರಿವು ಕಡಿಮೆಯಾಗಿದೆ ಪ್ರಸ್ತುತ ಪರಿಸ್ಥಿತಿಯಲ್ಲಿ, ಮೇಟೂರು ಅಣೆಕಟ್ಟಿನಲ್ಲಿ ನೀರಿನ ಸಂಗ್ರಹ ಕೇವಲ 40 ಟಿಎಂಸಿ. 50 ಟಿಎಂಸಿ ಇದ್ದರೆ ಮಾತ್ರ ನೀರಾವರಿಗಾಗಿ ನೀರು ಬಿಡುಗಡೆ ಮಾಡಬಹುದು ಎಂದು ತಮಿಳುನಾಡು ಹೇಳಿದೆ.

ಸಾಕಷ್ಟು ನೀರಿನ ಸಂಗ್ರಹವಿಲ್ಲದ ಕಾರಣ ಜೂನ್ 14ರಂದು ಕೃಷಿಗಾಗಿ ತೆರೆಯಬೇಕಿದ್ದ ಮೇಟೂರು ಅಣೆಕಟ್ಟನ್ನು ತೆರೆಯಲಾಗಿಲ್ಲ 15 ದಿನಗಳವರೆಗೆ 11,500 ಕ್ಯೂಸೆಕ್ ನೀರನ್ನು ಬಿಡುಗಡೆ ಮಾಡಬೇಕು.

ಈ ರೀತಿ ತೆರೆದರೆ ಮಾತ್ರ, ತಮಿಳುನಾಡಿನಲ್ಲಿ ಮುಂಗಾರು ಕೃಷಿಯ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಆದ್ದರಿಂದ, ಹೆಚ್ಚುವರಿ ನೀರನ್ನು ಬಿಡುಗಡೆ ಮಾಡುವಂತೆ ತಮಿಳುನಾಡು ಮನವಿ ಮಾಡಿತ್ತು. ಪ್ರಸ್ತುತ ಅವಧಿಯಲ್ಲಿ ಮಳೆ 60% ಕ್ಕಿಂತ ಕಡಿಮೆ ಇದೆ. ಆದ್ದರಿಂದ, ಕರ್ನಾಟಕದ ಜಲಮೂಲಗಳಲ್ಲಿ ಕಡಿಮೆ ನೀರು ಇದೆ ಕರ್ನಾಟಕದ ಕುಡಿಯುವ ನೀರು ಮತ್ತು ನೀರಾವರಿ ಅಗತ್ಯಗಳಿಗೆ ಸಾಕಷ್ಟು ನೀರು ಇಲ್ಲದ ಪರಿಸ್ಥಿತಿ ಇದೆ ಆದ್ದರಿಂದ, ತಮಿಳುನಾಡಿಗೆ ನೀರು ಬಿಡಲು ಸಾಧ್ಯವಿಲ್ಲ ಎಂದು ಕರ್ನಾಟಕ ಹೇಳಿತು.

### ಪ್ರಾಧಿಕಾರದ ಲೆಕ್ಕಾಚಾರವೇನು?

ಎರಡೂ ಕಡೆಯ ಅಭಿಪ್ರಾಯಗಳನ್ನು ಕೇಳಿದ ನಂತರ, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು, ಪ್ರಸ್ತುತ, ಕರ್ನಾಟಕದ ಅಣೆಕಟ್ಟುಗಳಲ್ಲಿ 55 ಟಿಎಂಸಿ ನೀರಿದೆ. ಇದಲ್ಲದೆ, ಮುಂದಿನ ದಿನಗಳಲ್ಲಿ ಮಳೆಯಾಗುವುದರಿಂದ, ಕರ್ನಾಟಕದ ಜಲಮೂಲಗಳಲ್ಲಿ ನೀರಿನ ಒಳಹರಿವು ದಿನಕ್ಕೆ 1ರಿಂದ 2 ಟಿಎಂಸಿ ಇರುತ್ತದೆ ಎಂದು ಅಂದಾಜಿಸಲಾಗಿದೆ. ಆದ್ದರಿಂದ, ಮುಂದಿನ ಕೆಲವು ದಿನಗಳಲ್ಲಿ 60 ರಿಂದ 70 ಟಿಎಂಸಿ ನೀರು ಇರುತ್ತದೆ ಎಂದು ನಿರೀಕ್ಷಿಸಲಾಗಿದೆ ಎಲ್ಲಾ ಅಂಶಗಳನ್ನು ಪರಿಗಣಿಸಿ, ನಿಯಂತ್ರಣ ಸಮಿತಿಯ ಶಿಫಾರಸಿನಂತೆ ಮುಂದಿನ 15 ದಿನಗಳವರೆಗೆ 4.5 ಟಿಎಂಸಿ ನೀರು ಬಿಡುಗಡೆ ಮಾಡಲು ಆದೇಶ ನೀಡಿದರು.

# ಜೋಶಿ ನೇತೃತ್ವದಲ್ಲಿ ಕರ್ನಾಟಕ ಸಂಸದರ ನಿಯೋಗದಿಂದ ಕೇಂದ್ರ ಜಲಶಕ್ತಿ ಸಚಿವ ಪಾಟೀಲ್ ಭೇಟಿ, ಪರಿಸ್ಥಿತಿ ವಿವರಣೆ

### ಕರ್ನಾಟಕದ ಜಲ, ನೀರಾವರಿ ಮತ್ತು ಕುಡಿಯುವ ನೀರು ಪರಿಸ್ಥಿತಿ ಕುರಿತ ಪರಿಶೀಲನೆ ಸಂಬಂಧ ಚರ್ಚೆ



**ಬೆಂಗಳೂರು, ಜು.30:** ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಪ್ರಲ್ಹಾದ್ ಜೋಶಿ ನೇತೃತ್ವದ ಸಂಸದರ ನಿಯೋಗ ದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ಭೇಟಿ ಮಾಡಿ, ಕರ್ನಾಟಕದಲ್ಲಿನ ಜಲ, ನೀರಾವರಿ ಮತ್ತು ಕುಡಿಯುವ ನೀರು ಪರಿಸ್ಥಿತಿ ಕುರಿತ ಪರಿಶೀಲನೆ ಸಂಬಂಧ ಚರ್ಚೆ ನಡೆಸಿತು.

ನಿಯೋಗದಲ್ಲಿ ಸಂಸದರಾದ ಬಸವರಾಜ ಬೊಮ್ಮಾಯಿ, ಜಗದೀಶ್ ಶೆಟ್ಟರ್, ಗೋವಿಂದ ಕಾರಜೋಳ, ಪಿ.ಸಿ.ಗದ್ದಿಗೌಡರ್, ಪಿ.ಸಿ.ಮೋಹನ್, ವಿಶ್ವೇಶ್ವರ ಹೆಗಡೆ ಕಾಗೇರಿ ಸೇರಿದಂತೆ ಮತ್ತಿತರರು ಇದ್ದರು.

ಸಭೆಯ ನಂತರ ಸಾಮಾಜಿಕ ಮಾಧ್ಯಮದಲ್ಲಿ ವಿಷಯ ಹಂಚಿಕೊಂಡಿರುವ ಸಚಿವ ಪ್ರಲ್ಹಾದ್ ಜೋಶಿ, ಕರ್ನಾಟಕದಲ್ಲಿ ತೀವ್ರ ಮಳೆಯ ಕೊರತೆಯಾಗಿದ್ದು, ಇದರಿಂದ ಜಲಾಶಯಗಳಿಗೆ ನೀರಿನ ಒಳಹರಿವು ಗಣನೀಯ ಕಡಿಮೆಯಾಗಿದೆ. ಇಂದಿನ ಸಭೆಯಲ್ಲಿ ಸಚಿವರೊಂದಿಗೆ ಕುಡಿಯುವ ನೀರಿನ ತೀವ್ರ ಕೊರತೆ ಮತ್ತು ರಾಜ್ಯದಲ್ಲಿನ ಬರ ಪರಿಸ್ಥಿತಿ ಕುರಿತು ಸಮಗ್ರವಾಗಿ ಕೇಂದ್ರ ಜಲಶಕ್ತಿ ಸಚಿವರಿಗೆ ಮಾಹಿತಿ ನೀಡಲಾಗಿದೆ ಎಂದು ಹೇಳಿದ್ದಾರೆ.

### ನೀರು ಹರಿಸಬೇಡಿ, ಕಾನೂನು ಹೋರಾಟ ನಡೆಸಿ: ಬಸವರಾಜ ಬೊಮ್ಮಾಯಿ

**ನವದೆಹಲಿ, ಜು.30:** ಕರ್ನಾಟಕದಲ್ಲಿ ಪ್ರಸ್ತುತ ಕುಡಿಯುವ ನೀರಿಗೆ ಮಾತ್ರ ಸಾಲುವಷ್ಟು ನೀರಿದ್ದು, ಯಾವುದೇ ಕಾರಣಕ್ಕೂ ತಮಿಳುನಾಡಿಗೆ ಕಾವೇರಿ ನೀರನ್ನು ಹರಿಸಬಾರದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ದೆಹಲಿಯಲ್ಲಿ ಮಾತನಾಡಿದ ಅವರು, ಕಾವೇರಿ ವಿಚಾರದಲ್ಲಿ ರಾಜ್ಯ ಸರ್ಕಾರದ ಪರವಾಗಿ ವಾದ ಮಂಡಿಸುತ್ತಿರುವ ಕಾನೂನು ತಂಡ ಮತ್ತು ಪ್ರಾಧಿಕಾರಗಳಲ್ಲಿನ (ಸಿಡಬ್ಲ್ಯುಎಂಎ/ಸಿಡಬ್ಲ್ಯುಆರ್‌ಸಿ) ರಾಜ್ಯದ ಪ್ರಾತಿನಿಧ್ಯ ತೀರಾ ದುರ್ಬಲವಾಗಿದೆ ಎಂದು ವಾಗ್ದಾಳಿ ನಡೆಸಿದರು.

ನಮ್ಮ ಜಲಾಶಯಗಳಲ್ಲಿ ಪ್ರಸ್ತುತ ಇರುವ ನೀರು ಕರ್ನಾಟಕದ ಕುಡಿಯುವ ನೀರಿನ ಅಗತ್ಯಗಳಿಗೆ ಮಾತ್ರ ಸಾಕಾಗುತ್ತದೆ. ಹೀಗಾಗಿ ಬೇರೆ ಉದ್ದೇಶಗಳಿಗೆ ನೀರು ಬಳಕೆ ಮಾಡುತ್ತಿಲ್ಲ. ಇಂತಹ ಸಂದರ್ಭದಲ್ಲಿ ತಮಿಳುನಾಡು ನೀರು ಬಿಡುವಂತೆ ಒತ್ತಡ ಹೇರುತ್ತಿದೆ. ಇದು ದೀರ್ಘಕಾಲದ ಪ್ರಕರಣವಾಗಿದ್ದರೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ರಾಜ್ಯದ ನೈಜ ಪರಿಸ್ಥಿತಿಯನ್ನು ಬಲವಾಗಿ ಮಂಡಿಸುವಲ್ಲಿ ರಾಜ್ಯದ ಪ್ರತಿನಿಧಿಗಳು ವಿಫಲರಾಗಿದ್ದಾರೆ. ಇದೇ ಕಾರಣಕ್ಕೆ ತಮಿಳುನಾಡು ಪದೇಪದೆ ನೀರಿಗಾಗಿ ಒತ್ತಡ ಹೇರುತ್ತಿದೆ. ಈ ಕುರಿತು ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜೊತೆಗೆ ಮಾತನಾಡಿದೆ, ಅವರೂ ಇದೇ ಅಭಿಪ್ರಾಯ ಹೊಂದಿದ್ದಾರೆ ಎಂದು ಹೇಳಿದರು.

ರಾಜ್ಯದ ರೈತರ ಹಿತಕಾಯುವುದು ರಾಜ್ಯ ಸರ್ಕಾರದ ಕರ್ತವ್ಯ. ನಮ್ಮ ಸರ್ಕಾರದ ಅವಧಿಯಲ್ಲೂ ಇಂತಹ ಆದೇಶಗಳು ಬಂದಾಗ ದೃಢವಾಗಿ ನಿಂತು ನೀರು ಹರಿಸಿರಲಿಲ್ಲ. ಈಗಿನ ಸರ್ಕಾರವೂ ಅದೇ ರೀತಿ ದೃಢ ನಿರ್ಧಾರ ತೆಗೆದುಕೊಂಡು ನಮ್ಮ ರೈತರ ಮತ್ತು ಕುಡಿಯುವ ನೀರಿನ ಹಿತಾಸಕ್ತಿಯನ್ನು ಕಾಯಬೇಕು ಹಾಗೂ ಕಾನೂನು ಹೋರಾಟ ನಡೆಸಬೇಕು ಎಂದು ಆಗ್ರಹಿಸಿದರು.

# ಕಾವೇರಿ ನೀರು ಚರ್ಚೆಗೆ ಭಾನುವಾರ ಸರ್ವಪಕ್ಷ ಸಭೆ: ಸಿಎಂ ಡಿ.ಕೆ. ಶಿವಕುಮಾರ್



**ನವದೆಹಲಿ, ಜು.30:** ಕಾವೇರಿ ನೀರಿನ ವಿಚಾರವಾಗಿ ಭಾನುವಾರ (ಆಗಸ್ಟ್ 2) ಗೃಹ ಕಚೇರಿ ಕೃಷ್ಣಾದಲ್ಲಿ ಸರ್ವಪಕ್ಷ ಸಭೆ ಕರೆಯಲಾಗಿದೆ. ರಾಜ್ಯದ ಮಾಜಿ ಮುಖ್ಯಮಂತ್ರಿಗಳು, ಕಾವೇರಿ ಜಲಾನಯನ ಪ್ರದೇಶದ ಸಂಸದರು, ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ತಿಳಿಸಿದರು.

ದೆಹಲಿಯ ಕರ್ನಾಟಕ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಿದ್ದು, ಮುಂದೆ ಈ ವಿಚಾರವನ್ನು ಹೇಗೆ ತೆಗೆದುಕೊಂಡು ಹೋಗಬೇಕು ಎಂದು ಸರ್ವಪಕ್ಷ ಸಭೆಯಲ್ಲಿ ಚರ್ಚಿಸಲಾಗುವುದು. ಈ ವಿಚಾರವಾಗಿ ಸಂಸದರು, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ಸೋಮಣ್ಣ, ಜಗದೀಶ್ ಶೆಟ್ಟರ್, ಬೊಮ್ಮಾಯಿ ಅವರ ಜೊತೆ ಚರ್ಚೆ ಮಾಡಿದ್ದು, ಅವರು ರಾಜ್ಯದ ಹಿತಕ್ಕಾಗಿ ಶಕ್ತಿ ಮೀರಿ ಪ್ರಯತ್ನ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಕರ್ನಾಟಕ ಕಾಂಗ್ರೆಸ್ ನಾಯಕರ ಬದಲು ದೆಹಲಿ ಸರ್ಕಾರವನ್ನು ಭೇಟಿ ಮಾಡಿ ಎಂದು ತಮಿಳುನಾಡು ಸಿಎಂ ವಿಜಯ್ ಅವರಿಗೆ ಡಿಎಂಕೆ ನಾಯಕ ಅನ್ಬುಮಣಿ ಸಲಹೆ ನೀಡಿರುವ ಬಗ್ಗೆ ಕೇಳಿದಾಗ, ಆ ವಿಚಾರವಾಗಿ ಪ್ರತಿಕ್ರಿಯೆ ನೀಡುವುದಿಲ್ಲ. ನಮಗೆ ಪರಸ್ಪರ ಕಿತ್ತಾಟ ಮಾಡಲು ಇಷ್ಟವಿಲ್ಲ. ನೆಲದ ಕಾನೂನು ಇದೆ. ನಾವು ಪರಸ್ಪರ ಗೌರವಿಸಬೇಕು. ಇಡೀ ದೇಶ ಒಂದಾಗಿ ಕೆಲಸ ಮಾಡಬೇಕು ಎಂದರು.

**ಸಂಪುಟ ರಚಿಸದೇ ಬಿಎಸ್‌ವೈ ಅಧಿಕಾರ ಮಾಡಲಿಲ್ಲವೇ?:** ಸಚಿವ ಸಂಪುಟ ವಿಸ್ತರಣೆ ಕುರಿತು ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ, ಯಡಿಯೂರಪ್ಪನವರು ಕೂಡ ಸಚಿವ ಸಂಪುಟ ರಚನೆ ಮಾಡದೇ ಅಧಿಕಾರ ಮಾಡಿರಲಿಲ್ಲವೇ. ಆಗ ಅಪ್ಪ-ಮಗ ಅಧಿಕಾರವನ್ನು ಅನುಭವಿಸಲಿಲ್ಲವೇ ಎಂದು ಡಿ.ಕೆ. ಶಿವಕುಮಾರ್ ಮರುಪ್ರಶ್ನಿಸಿದರು.

# ಸಂಪುಟ ವಿಸ್ತರಣೆ ಕಸರತ್ತು ಅಂತಿಮ ಹಂತಕ್ಕೆ; ಸೋಮವಾರ ಪ್ರಮಾಣವಚನ?

**ನವದೆಹಲಿ, ಜು.30:** ಕರ್ನಾಟಕ ಸಚಿವ ಸಂಪುಟ ವಿಸ್ತರಣೆಯ ಕಸರತ್ತು ಅಂತಿಮ ಘಟ್ಟ ತಲುಪಿದ್ದು, ನೂತನ ಸಚಿವರ ಆಯ್ಕೆ ಈಗ ಸಂಪೂರ್ಣವಾಗಿ ಕಾಂಗ್ರೆಸ್ ಹೈಕಮಾಂಡ್ ಕೈಯಲ್ಲಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿವಾಸದಲ್ಲಿ ರಾಹುಲ್ ಗಾಂಧಿ ಸಮ್ಮುಖದಲ್ಲಿ ಗುರುವಾರ ರಾತ್ರಿ ನಡೆದ ಮಹತ್ವದ ಸಭೆಯಲ್ಲಿ ಸಚಿವರ ಆಯ್ಕೆ, ಸಾಮಾಜಿಕ ಸಮತೋಲನ, ಪ್ರಾದೇಶಿಕ ಪ್ರಾತಿನಿಧ್ಯ ಹಾಗೂ ಮುಂಬರುವ ಚುನಾವಣೆಯ ರಾಜಕೀಯ ಲೆಕ್ಕಾಚಾರಗಳ ಕುರಿತು ಸುದೀರ್ಘ ಚರ್ಚೆ ನಡೆಯಿತು.

ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಹಾಗೂ ಎಐಸಿಸಿ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಪಾಲ್ಗೊಂಡು ಸಚಿವಾಕಾಂಕ್ಷಿಗಳ ಬಗ್ಗೆ ಅಭಿಪ್ರಾಯಗಳನ್ನು ವರಿಷ್ಠರ ಮುಂದಿಟ್ಟರು.

ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ನಡೆದ ಸಭೆಯಲ್ಲಿ ವಿವಿಧ ಹೆಸರುಗಳು ಹಾಗೂ ರಾಜಕೀಯ ಸಮೀಕರಣಗಳ ಬಗ್ಗೆ ಸಮಾಲೋಚನೆ ನಡೆದಿದೆ. ಸಭೆ ಬಳಿಕ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ನಿರ್ಗಮಿಸಿದ ನಂತರ ಬಿ.ಕೆ. ಹರಿಪ್ರಸಾದ್ ಅವರೊಂದಿಗೆ ವರಿಷ್ಠರು ಪ್ರತ್ಯೇಕ ಮಾತುಕತೆ ನಡೆಸಿರುವುದು ಕುತೂಹಲಕ್ಕೆ ಕಾರಣವಾಗಿದೆ. ಎಲ್ಲ ನಾಯಕರ ಅಭಿಪ್ರಾಯಗಳನ್ನು ಆಲಿಸಿರುವ ಹೈಕಮಾಂಡ್ ತನ್ನದೇ ಮಾನದಂಡದ ಆಧಾರದ ಮೇಲೆ ಅಂತಿಮ ಪಟ್ಟಿಯನ್ನು ಸಿದ್ಧಪಡಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಸಭೆಯಲ್ಲಿ ಸಿದ್ದರಾಮಯ್ಯ ಅವರು ಮುಂಬರುವ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಹಿಂದುಳಿದ ವರ್ಗಗಳಿಗೆ (ಒಬಿಸಿ) ಹೆಚ್ಚಿನ ಪ್ರಾತಿನಿಧ್ಯ ನೀಡುವಂತೆ ಮನವಿ ಮಾಡಿದ್ದಾರೆ. ಇದಕ್ಕೆ ಪ್ರತಿಕ್ರಿಯೆಯಾಗಿ ಡಿ.ಕೆ. ಶಿವಕುಮಾರ್, ಎಲ್ಲ ಸಮುದಾಯಗಳಿಗೆ ಸಮಾನ ಆದ್ಯತೆ ನೀಡುವುದು ಅಗತ್ಯವಾಗಿದ್ದು, ಚುನಾವಣೆಯಲ್ಲಿ ಎಲ್ಲ ವರ್ಗಗಳ ವಿಶ್ವಾಸ ಗಳಿಸುವುದು ಪಕ್ಷದ ಪ್ರಮುಖ ಗುರಿಯಾಗಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸಾಮಾಜಿಕ ಹಾಗೂ ರಾಜಕೀಯ ಸಮತೋಲನ ಕಾಯ್ದುಕೊಳ್ಳುವ ರೀತಿಯಲ್ಲಿ ಅಂತಿಮ ನಿರ್ಧಾರ ಕೈಗೊಳ್ಳುವ ಹೊಣೆ ಹೈಕಮಾಂಡ್ ಮೇಲಿದೆ.

ಸಂಪುಟದಲ್ಲಿ ಖಾಲಿ ಇರುವ 16ರಿಂದ 18 ಸ್ಥಾನಗಳನ್ನು ಭರ್ತಿ ಮಾಡುವ ಲೆಕ್ಕಾಚಾರ ನಡೆಯುತ್ತಿದೆ. ನೂತನ ಸಚಿವರ ಪಟ್ಟಿಯನ್ನು ಶೀಘ್ರದಲ್ಲೇ ರಾಜ್ಯ ನಾಯಕರಿಗೆ ಕಳುಹಿಸುವುದಾಗಿ ಹೈಕಮಾಂಡ್ ಸೂಚಿಸಿದ್ದು, ಪ್ರಮಾಣವಚನ ಸಮಾರಂಭದ ದಿನಾಂಕವನ್ನು ಅಧಿಕೃತವಾಗಿ ತಿಳಿಸುವಂತೆ ತಿಳಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರವೇ ನೂತನ ಸಚಿವರ ಪ್ರಮಾಣವಚನ ಕಾರ್ಯಕ್ರಮ ನಡೆಸುವ ಇಂಗಿತ ವ್ಯಕ್ತಪಡಿಸಿರುವುದಾಗಿ ತಿಳಿದುಬಂದಿದೆ. ಆದರೆ ಅಂತಿಮ ದಿನಾಂಕ ಮತ್ತು ಸಚಿವರ ಪಟ್ಟಿಗೆ ಹೈಕಮಾಂಡ್ ಅನುಮೋದನೆ ದೊರೆತ ನಂತರವೇ ಅಧಿಕೃತ ಘೋಷಣೆ ಹೊರಬೀಳಲಿದೆ. ಇದರಿಂದ ಸಚಿವಾಕಾಂಕ್ಷಿಗಳ ಚಿತ್ತ ಈಗ ದೆಹಲಿಯತ್ತ ನೆಟ್ಟಿದ್ದು, ಹೈಕಮಾಂಡ್‌ನ ಅಂತಿಮ ತೀರ್ಮಾನಕ್ಕಾಗಿ ಕಾಂಗ್ರೆಸ್ ವಲಯ ಕಾತರದಿಂದ ಕಾಯುತ್ತಿದೆ.

# ಮೋದಿ, ಅಮಿತ್ ಶಾ ಮಾತನಾಡದಿದ್ದರೆ ವಿದ್ಯಾರ್ಥಿಗಳೇ ಪಾಠ ಕಲಿಸುತ್ತಾರೆ

**ನವದೆಹಲಿ, ಜು.30:** ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಹಾಗೂ ವಿದ್ಯಾರ್ಥಿ ಪ್ರತಿಭಟನೆಗಳ ವಿಚಾರವಾಗಿ ರಾಜ್ಯಸಭೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಹಾಗೂ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ವಿದ್ಯಾರ್ಥಿಗಳ ಪ್ರತಿಭಟನೆ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಮೌನವನ್ನು ಟೀಕಿಸಿದ ಅವರು, ಅವರು ಮಾತನಾಡದಿದ್ದರೆ ವಿದ್ಯಾರ್ಥಿಗಳೇ ಮತ್ತೊಮ್ಮೆ ಅವರಿಗೆ ಪಾಠ ಕಲಿಸುತ್ತಾರೆ" ಎಂದು ಎಚ್ಚರಿಕೆ ನೀಡಿದರು.

ಪ್ರಶ್ನೆಪತ್ರಿಕೆ ಸೋರಿಕೆಯಿಂದ ಎಷ್ಟು ಅಮಾಯಕ ವಿದ್ಯಾರ್ಥಿಗಳು ತೊಂದರೆ ಅನುಭವಿಸಿದ್ದಾರೆ, ಎಷ್ಟು ಮಂದಿ ಪೋಷಕರು ಸಂಕಷ್ಟಕ್ಕೆ ಸಿಲುಕಿದ್ದಾರೆ, ಎಷ್ಟು ಮಹಿಳೆಯರು ಮತ್ತು ಮಕ್ಕಳು ಸಂಕಷ್ಟ ಎದುರಿಸಿದ್ದಾರೆ ಎಂಬುದನ್ನು ಸರ್ಕಾರ ಅರಿಯಬೇಕು. ಚರ್ಚೆಗೆ ಬಂದಿರುವ ಸಾರ್ವಜನಿಕ ಪರೀಕ್ಷೆಗಳು (ಅಕ್ರಮ ತಡೆ) ತಿದ್ದುಪಡಿ ಮಸೂದೆ-2026ಯಲ್ಲಿ ಕೇವಲ ಅಂಕಿಅಂಶಗಳನ್ನು ಮಾತ್ರ ಬದಲಿಸಲಾಗಿದೆ. ಇದರಿಂದ ಯಾವುದೇ ಪ್ರಯೋಜನವಾಗುವುದಿಲ್ಲ" ಎಂದು ಹೇಳಿದರು.



ಕೇಂದ್ರ ಸರ್ಕಾರದ ವಿರುದ್ಧ ಮಲ್ಲಿಕಾರ್ಜುನ ಖರ್ಗೆ ವಾಗ್ದಾಳಿ

ಅಂತೆಯೇ ಹೆಚ್ಚಿನ ದಂಡ, ಕಠಿಣ ಶಿಕ್ಷೆ, ವಿಶೇಷ ಕಾರ್ಯಪಡೆ, ಫಾಸ್ಟ್ ಟ್ರ್ಯಾಕ್ ನ್ಯಾಯಾಲಯಗಳಂತಹ ಕ್ರಮಗಳನ್ನು ಮಸೂದೆಯಲ್ಲಿ ಸೇರಿಸಿದ್ದರೂ ಅದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ಪರೀಕ್ಷೆಗಳನ್ನು ಹೇಗೆ ನಡೆಸುತ್ತೀರಿ, ಪ್ರಶ್ನೆಪತ್ರಿಕೆ ಸೋರಿಕೆಯಾಗದಂತೆ ಯಾವ ವ್ಯವಸ್ಥೆ ರೂಪಿಸುತ್ತೀರಿ ಎಂಬುದೇ ಮುಖ್ಯ ಎಂದು ಹೇಳಿದರು. 2024ರಲ್ಲೇ ಇಂತಹ ಕಠಿಣ ಕಾನೂನು ತರಬೇಕೆಂದು ಕಾಂಗ್ರೆಸ್ ಒತ್ತಾಯಿಸಿತ್ತು. ಆದರೆ ಆಗ ಸರ್ಕಾರ ಅದನ್ನು ಒಪ್ಪಲಿಲ್ಲ, ಎರಡು ವರ್ಷಗಳ ಬಳಿಕ ಮಾಡುತ್ತಿರುವ ಕೆಲಸವನ್ನು ಆಗಲೇ ಏಕೆ ಮಾಡಲಿಲ್ಲ ಎಂದು ಪ್ರಶ್ನಿಸಿದರು.

**ಬಾಗಿಲ ಹಿಂದೆ ಅಡಗಿಕೊಳ್ಳಲು ಸಾಧ್ಯವಿಲ್ಲ:** ಜುಲೈ 20ರಂದು ದೆಹಲಿಯ ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿ ಪ್ರತಿಭಟನಾಕಾರರ ವಿರುದ್ಧದ ಪೊಲೀಸ್ ಕ್ರಮದ ಕುರಿತು ಮಾತನಾಡಿದ ಖರ್ಗೆ, ಪ್ರಧಾನಿ ಮತ್ತು ಗೃಹ ಸಚಿವರು ಮೌನವಾಗಿದ್ದಾರೆ. ಗೃಹ ಸಚಿವ ಅಮಿತ್ ಶಾ ವಿದ್ಯಾರ್ಥಿಗಳ ಮೇಲಿನ ದೌರ್ಜನ್ಯಕ್ಕೆ ಹೊಣೆಗಾರರು. ಅವರು ಮುಚ್ಚಿದ ಬಾಗಿಲಿನ ಹಿಂದೆ ಅಡಗಿಕೊಳ್ಳಲು ಸಾಧ್ಯವಿಲ್ಲ ಎಂದು ಆರೋಪಿಸಿದರು. ರಾಜ್ಯಸಭೆಯಲ್ಲಿ ಗದ್ದಲ-ಖರ್ಗೆ ಭಾಷಣದ ವೇಳೆ ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರ ನಡುವೆ ತೀವ್ರ ವಾಗ್ವಾದ ನಡೆಯಿತು. ಘೋಷಣೆಗಳ ನಡುವೆ ಸದನದಲ್ಲಿ ಕೆಲಕಾಲ ಗದ್ದಲದ ವಾತಾವರಣ ನಿರ್ಮಾಣವಾಯಿತು.

# ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರೋಧಿ ಹೋರಾಟ: ವಿದ್ಯಾರ್ಥಿಗಳ ಮೇಲೆ ಪೋಲೀಸ್ ಕ್ರಮಕ್ಕೆ ಆಕ್ರೋಶ

### ಪ್ರತಿಪಕ್ಷ ಸದಸ್ಯರಿಂದ ಸಂಸತ್ ಭವನದ ಬಳಿ ಪ್ರತಿಭಟನೆ

**ನವದೆಹಲಿ, ಜು.30:** ನೀಟ್ ಪತ್ರಿಕೆ ಸೋರಿಕೆ ವಿಷಯವನ್ನು ಪ್ರತಿಭಟಿಸಿದ ವಿದ್ಯಾರ್ಥಿಗಳ ವಿರುದ್ಧ ಪೊಲೀಸ್ ಕ್ರಮ ಕೈಗೊಳ್ಳಲಾಗಿದೆ ಎಂದು ವಿಪಕ್ಷಗಳು ಕೇಂದ್ರ ಸರ್ಕಾರದ ವಿರುದ್ಧ ಗುರುವಾರವೂ ದಾಳಿ ಮುಂದುವರಿಸಿದವು. ಸಂಸತ್ ಭವನದ ಸಂಕೀರ್ಣದೊಳಗೆ ಗದ್ದಲದ ಪ್ರದರ್ಶನ ನಡೆಸಿ, ಲೋಕಸಭೆಯಲ್ಲಿ ಕಲಾಪಕ್ಕೆ ಅಡ್ಡಿಪಡಿಸಿದವು. ನಿರಂತರ ಘೋಷಣೆಗಳ ನಡುವೆಯೇ ಸಂಸತ್ತಿನ ಕಲಾಪವನ್ನು ಮಧ್ಯಾಹ್ನ 2 ಗಂಟೆಯವರೆಗೆ ಮುಂದೂಡಲಾಯಿತು.

ನೀಟ್ ಪರೀಕ್ಷೆಯಲ್ಲಿ ನಡೆದ ಅಕ್ರಮಗಳ ಬಗ್ಗೆ ಹೊಣೆಗಾರಿಕೆಯನ್ನು ಒತ್ತಾಯಿಸಲು ಜಂತರ್ ಮಂತರ್‌ನಲ್ಲಿ ಜಮಾಯಿಸಿದ್ದ ವಿದ್ಯಾರ್ಥಿಗಳ ಮೇಲೆ ಸರ್ಕಾರ "ಪೊಲೀಸ್ ದೌರ್ಜನ್ಯ" ನಡೆಸುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ಮತ್ತು ಹಲವಾರು ವಿರೋಧ ಪಕ್ಷಗಳ ನಾಯಕರು ಸಂಸತ್ ಸಂಕೀರ್ಣದ ಮಕರ ದ್ವಾರದ ಮೆಟ್ಟಿಲುಗಳ ಬಳಿ ಜಮಾಯಿಸಿ ಪ್ರತಿಭಟನೆ ನಡೆಸಿದರು. ಜತೆಗೆ "ಪ್ರತಿಭಟನಾನಿರತ ವಿದ್ಯಾರ್ಥಿಗಳ ಮೇಲೆ ಪೊಲೀಸರ ಕ್ರಮಕ್ಕೆ ಆದೇಶ ನೀಡಿದವರು ಯಾರು ಎಂದು ಘೋಷಣೆ ಕೂಗಿದರು.

ಪ್ರತಿಭಟನೆಯ ನೇತೃತ್ವವನ್ನು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ಸಂಸದ ಪ್ರಿಯಾಂಕಾ ಗಾಂಧಿ ವಾದ್ರಾ ವಹಿಸಿದ್ದರು, ಅವರೊಂದಿಗೆ ಕಾಂಗ್ರೆಸ್ ರಾಜ್ಯಸಭಾ ಸಂಸದ ಇಮ್ರಾನ್ ಪ್ರತಾಪ್‌ಗಢಿ ಮತ್ತು ಕಾಂಗ್ರೆಸ್ ಲೋಕಸಭಾ ಸಂಸದೆ ಸಂಜನಾ ಜಾತವ್ ಸೇರಿ ಹಲವಾರು ಸಂಸದರು ಮತ್ತು ಇತರ ವಿರೋಧ ಪಕ್ಷಗಳ ಶಾಸಕರು ಸೇರಿಕೊಂಡರು. ರಾಮಮಂದಿರದ ದೇಣಿಗೆಯಲ್ಲಿರುವ ಅಕ್ರಮವನ್ನು ಖಂಡಿಸಲು, ನಡೆದ ಪ್ರತಿಭಟನಾನಿರತ ಸಂಸದರು ತಮ್ಮ ಬಳಿ ದೇಣಿಗೆ ಪೆಟ್ಟಿಗೆಯನ್ನು ಇಟ್ಟುಕೊಂಡಿದ್ದರು. ಅದಕ್ಕೆ ಹಣವನ್ನು ಹಾಕುವ ಮೂಲಕ ದೇಣಿಗೆ ಕಳುವಾಗ ಸಾಂಕೇತಿಕವಾಗಿ, ವಿಭಿನ್ನವಾಗಿ ಪ್ರತಿಭಟಿಸಿದರು.

ಸಂಸದರು ದೊಡ್ಡ ಬ್ಯಾನರ್ ಮತ್ತು ಫಲಕಗಳನ್ನು ಹಿಡಿದು ಪೊಲೀಸರ ಕ್ರಮಕ್ಕೆ ಹೊಣೆಗಾರಿಕೆಯನ್ನು ಕೋರಿದರು ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಂದ ಅಧಿಕೃತ ಕ್ಷಮೆಯಾಚಿಸಲು ಕೋರಿದರು. ರಾಜ್ಯಸಭೆಯಲ್ಲಿ ಸಾರ್ವಜನಿಕ ಪರೀಕ್ಷೆಗಳು (ಅಕ್ರಮ ತಡೆ) ತಿದ್ದುಪಡಿ ವಿಧೇಯಕ, 2026 ಅನ್ನು ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ತೆಗೆದುಕೊಳ್ಳುವ ಕೆಲವೇ ಸಮಯದ ಮೊದಲು ಈ ಪ್ರತಿಭಟನೆ ನಡೆಯಿತು. ಇದಕ್ಕೂ ಒಂದು ದಿನ ಮೊದಲು (ಬುಧವಾರ), ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ನೇತೃತ್ವದ ಎಸ್‌ಪಿ ಸಂಸದರು ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ದೇವಾಲಯದಲ್ಲಿ ಅರ್ಪಿಸಲಾದ ಕಾಣಿಕೆಗಳ ದುರ್ಬಳಕೆ ಮತ್ತು ಕಳವನ್ನು ಖಂಡಿಸಿ ಮಕರ ದ್ವಾರದ ಬಳಿ ಧರಣಿ ನಡೆಸಿದ್ದರು.




### ಲೋಕಸಭೆ ಕಲಾಪ ಮುಂದೂಡಿಕೆ

ಪೊಲೀಸರ ದೌರ್ಜನ್ಯ ಮತ್ತು ಪರೀಕ್ಷಾ ಸುಧಾರಣೆಗಳ ಸುತ್ತಲಿನ ವ್ಯಾಪಕ ಕಳವಳಗಳ ಕುರಿತು ಚರ್ಚೆಗೆ ವಿರೋಧ ಪಕ್ಷದ ಸದಸ್ಯರು ಒತ್ತಾಯಿಸುತ್ತಲೇ ಇದ್ದುದರಿಂದ ಲೋಕಸಭೆಯೊಳಗೆ ಕಲಾಪಗಳು ಪದೇ ಪದೇ ಅಡ್ಡಿಪಡಿಸಲ್ಪಟ್ಟವು. ವಿರೋಧ ಪಕ್ಷದ ಸಂಸದರ ಗದ್ದಲ ಮತ್ತು ಘೋಷಣೆಗಳ ನಡುವೆ, ಸದನವನ್ನು ಮಧ್ಯಾಹ್ನ 2 ಗಂಟೆಯವರೆಗೆ ಮುಂದೂಡಲಾಯಿತು.

## ನಿತ್ಯ ಪಂಚಾಂಗ 31.07.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ನಿಜ ಜ್ಯೇಷ್ಠ – ಆಷಾಢ ಮಾಸ

ಆಷಾಢ ಬಹುಳ, ಬಿದಿಗೆ, ಧನಿಷ್ಠ ನಕ್ಷತ್ರ, ಆಷಾಢ/ಆಡಿ ಶುಕ್ರವಾರ, ಅಶೂನ್ಯಶಯನ ವ್ರತ, ವೃಷಭ ತೀರ್ಥಂಕರ ಗರ್ಭಕಲ್ಯಾಣ, ಮಳೂರು 26 ದೇವಾಲಯ ಮಹಾಭಿಷೇಕ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ರಾಜೀನಾಮೆ ನೀಡುವಂತೆ ಸಭಾಪತಿ ಹೊರಟ್ಟಿಗೆ ಸೂಚನೆ

## ವಿಧಾನ ಪರಿಷತ್‌ನ ಪ್ರಮುಖ ಸ್ಥಾನದ ಮೇಲೆ ಸಿಎಂ, ಕೆಪಿಸಿಸಿ ಅಧ್ಯಕ್ಷರ ಕಣ್ಣು

**ಬೆಂಗಳೂರು, ಜು.30:** ಮಂತ್ರಿಮಂಡಲಕ್ಕೆ ಸೇರಲು ಆಕಾಂಕ್ಷಿಗಳಪಟ್ಟಿ ದೊಡ್ಡದಾಗಿರುವ ಹಿನ್ನೆಲೆಯಲ್ಲಿ ತಮ್ಮ ಶಾಸಕರಿಗೆ ಹೆಚ್ಚಿನ ಅಧಿಕಾರ ದೊರಕಿಸಿಕೊಡಲು ಮುಂದಾಗಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಇದೀಗ ವಿಧಾನಪರಿಷತ್ ಸಭಾಪತಿ ಹುದ್ದೆಯ ಮೇಲೆ ಕಣ್ಣಿಟ್ಟಿದ್ದಾರೆ. ಪರಿಷತ್ತಿನಲ್ಲಿ ಬದಲಾಗುತ್ತಿರುವ ರಾಜಕೀಯ ಸಮೀಕರಣಗಳು ಮತ್ತು ಸಂಖ್ಯಾಬಲದ ಆಧಾರದ ಮೇಲೆ, ಮೇಲನೆಯ ಸಭಾಪತಿ ಸ್ಥಾನದ ಸುತ್ತ ಹೊಸ ರಾಜಕೀಯ ಬಿರುಗಾಳಿ ಎದ್ದಿದೆ. ಪರಿಷತ್ತಿನಲ್ಲಿ ಕಾಂಗ್ರೆಸ್ ಪಕ್ಷ ಸ್ಪಷ್ಟ ಬಹುಮತ ಗಳಿಸಿರುವ ಹಿನ್ನೆಲೆಯಲ್ಲಿ, ಸಭಾಪತಿ ಬಸವರಾಜ್ ಹೊರಟ್ಟಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರು ಸೂಚನೆ ನೀಡಿರುವುದು ರಾಜ್ಯ ರಾಜಕೀಯದಲ್ಲಿ ತೀವ್ರ ಕುತೂಹಲ ಮೂಡಿಸಿದೆ.

ವಿಧಾನ ಪರಿಷತ್ತಿನಲ್ಲಿ ಜೆಡಿಎಸ್ ಮತ್ತು ಬಿಜೆಪಿ ನಡುವಿನ ಒಪ್ಪಂದ ಹಾಗೂ ಹೊಂದಾಣಿಕೆ ರಾಜಕಾರಣದ ಫಲವಾಗಿ ಬಸವರಾಜ್ ಹೊರಟ್ಟಿ ಅವರು ದೀರ್ಘಕಾಲದಿಂದ ಸಭಾಪತಿ ಸ್ಥಾನವನ್ನು ಅಲಂಕರಿಸುತ್ತಾ ಬಂದಿದ್ದಾರೆ. ಹಿರಿಯ ರಾಜಕಾರಣಿ, ಇಡೀ ದೇಶದಲ್ಲಿಯೇ ಅತಿಹೆಚ್ಚು ಅವಧಿಗೆ ಮೇಲ್ಮನೆಗೆ ಗೆದ್ದಿರುವ ಅವರು, ಜೆಡಿಎಸ್ ಮತ್ತು ತದನಂತರ ಬಿಜೆಪಿ ಬೆಂಬಲದೊಂದಿಗೆ ಈ ಸ್ಥಾನಕ್ಕೇರಿದ್ದರು.

ಇತ್ತೀಚಿನ ರಾಜಕೀಯ ಬೆಳವಣಿಗೆಗಳು ಮತ್ತು ಚುನಾವಣೆಗಳ ಫಲವಾಗಿ ವಿಧಾನ ಪರಿಷತ್ತಿನಲ್ಲಿ ಕಾಂಗ್ರೆಸ್ ಪಕ್ಷ ಸ್ಪಷ್ಟ ಬಹುಮತ ಹೊಂದಿದೆ. ವಿರೋಧ ಪಕ್ಷದ ಕೈಯಲ್ಲಿದ್ದ ಮೇಲ್ಮನೆಯ ನಿಯಂತ್ರಣವನ್ನು ತನ್ನ ಹಿಡಿತಕ್ಕೆ ತೆಗೆದುಕೊಳ್ಳಲು ಆಡಳಿತಾರೂಢ ಪಕ್ಷ ಈಗ ಗಂಭೀರ ಹೆಜ್ಜೆ ಇಟ್ಟಿದೆ. ಒಂದು ವೇಳೆ ಸಭಾಪತಿಯವರು ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡದಿದ್ದರೆ, ಮುಂಬರುವ ಅಧಿವೇಶನದಲ್ಲಿ ಅವಿಶ್ವಾಸ ನಿರ್ಣಯ ಮಂಡಿಸುವ ಸಾಧ್ಯತೆ ಇದೆ.

ಆದರೆ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ನಂತರ ಮತ್ತು ಪರಿಷತ್ತಿನಲ್ಲಿ ಕಾಂಗ್ರೆಸ್ ಸದಸ್ಯರ ಸಂಖ್ಯೆ ಗಣನೀಯವಾಗಿ ಹೆಚ್ಚಾದ ನಂತರ, ಆಡಳಿತ ಪಕ್ಷವು ಮೇಲನೆಯ ಸಭಾಪತಿ ಪೀಠವನ್ನು ತನ್ನ ಹಿಡಿತಕ್ಕೆ ಪಡೆಯುವುದು ರಾಜಕೀಯವಾಗಿ ಅನಿವಾರ್ಯ ಎಂಬಂತಾಗಿದೆ.

ವಿಧಾನ ಪರಿಷತ್‌ನಲ್ಲಿ ಇತ್ತೀಚಿನ ಚುನಾವಣೆಗಳು ಮತ್ತು ನಾಮನಿರ್ದೇಶನಗಳ ಬಳಿಕ ಕಾಂಗ್ರೆಸ್ ಪಕ್ಷವು 44 ಸ್ಥಾನಗಳೊಂದಿಗೆ ಸ್ಪಷ್ಟ ಬಹುಮತವನ್ನು ಸಾಧಿಸಿದೆ. ಮೇಲನೆಯಲ್ಲಿ ಬಹುಮತವಿರುವುದರಿಂದ ಆಡಳಿತ ಪಕ್ಷಕ್ಕೆ ಶಾಸನಬದ್ಧ ಮಸೂದೆಗಳನ್ನು ಅಂಗೀಕರಿಸಲು ಹಾಗೂ ಪ್ರಮುಖ ಸಾಂವಿಧಾನಿಕ ಹುದ್ದೆಗಳನ್ನು ಹಿಡಿತಕ್ಕೆ ತೆಗೆದುಕೊಳ್ಳಲು ಸುಲಭವಾಗಿದೆ.

ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟವು ಒಟ್ಟಾಗಿ 30 ಸದಸ್ಯರ ಬಲವನ್ನು ಮಾತ್ರ ಹೊಂದಿದ್ದು, ಮೇಲನೆಯಲ್ಲಿ ಸಂಖ್ಯಾಬಲದ ಕೊರತೆಯನ್ನು ಎದುರಿಸುತ್ತಿವೆ. ಸಭಾಪತಿ ಪೀಠವನ್ನು ಉಳಿಸಿಕೊಳ್ಳಲು ಪ್ರತಿಪಕ್ಷಗಳಿಗೆ ಸಾಧಾರಣ ಬಹುಮತದ ಕೊರತೆ ಕಾಡುತ್ತಿದ್ದು, ಕಾಂಗ್ರೆಸ್‌ನ ಆಕ್ರಮಣಕಾರಿ ರಾಜಕೀಯ ತಂತ್ರದ ಮುಂದೆ ಎನ್‌ಡಿಎ ಪಾಳಯಕ್ಕೆ ತೀವ್ರ ಹಿನ್ನಡೆಯಾಗಿದೆ. ಸರ್ಕಾರದ ಮಸೂದೆಗಳು ಮತ್ತು ಶಾಸಕಾಂಗ ಕಾರ್ಯಕಲಾಪಗಳನ್ನು ಸರಾಗವಾಗಿ ಅಂಗೀಕರಿಸಿಕೊಳ್ಳಲು ಸ್ವಪಕ್ಷದ ಸಭಾಪತಿ ಇರುವುದು ಸರ್ಕಾರದ ಕಾರ್ಯತಂತ್ರಕ್ಕೆ ಅತ್ಯಗತ್ಯವಾಗಿದ್ದು, ಈ ಬೆಳವಣಿಗೆಯು ಆಡಳಿತ ಮತ್ತು ವಿರೋಧ ಪಕ್ಷಗಳ ನಡುವಿನ ಶಕ್ತಿ ಪ್ರದರ್ಶನಕ್ಕೆ ವೇದಿಕೆ ಕಲ್ಪಿಸಿದೆ.

ಸಭಾಪತಿ ಸ್ಥಾನ ತೆರವಾಗುವ ಮುನ್ಸೂಚನೆ ಸಿಗುತ್ತಿದ್ದಂತೆ, ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರ ನಡುವೆ ಲಾಬಿ ಜೋರಾಗಿದೆ. ಎನ್.ಬೋಸರಾಜು–ಸಚಿವರಾಗಿ ಮತ್ತು ಹಿರಿಯ ಪರಿಷತ್ ಸದಸ್ಯರಾಗಿ ಸುದೀರ್ಘ ಅನುಭವ ಹೊಂದಿರುವ ಇವರು ಪಕ್ಷದ ವಲಯದಲ್ಲಿ ಪ್ರಬಲ ಆಕಾಂಕ್ಷಿಯಾಗಿದ್ದಾರೆ. ಎಂ.ಆರ್. ಸಲೀಂ–ಸಂಘಟನಾತಕ ಹಿನ್ನೆಲೆ ಮತ್ತು ಹಿರಿಯ ಸದಸ್ಯತ್ವದ ಆಧಾರದ ಮೇಲೆ ಇವರ ಹೆಸರೂ ಸಹ ಪರಿಗಣನೆಯಲ್ಲಿದೆ. ಪುಟ್ಟಣ್ಣ–ಇವರು ಕೂಡ ಸಭಾಪತಿ ರೇಸ್‌ನಲ್ಲಿ ಪ್ರಮುಖ ಸ್ಪರ್ಧಿಯಾಗಿದ್ದಾರೆ. ಪಕ್ಷದ ನಿಷ್ಠೆ, ಪ್ರಾದೇಶಿಕ ಹಾಗೂ ಸಾಮಾಜಿಕ ಸಮತೋಲನ ವನ್ನು ಕಾಪಾಡುವ ದೃಷ್ಟಿಯಿಂದ ಹೈಕಮಾಂಡ್ ಯಾರಿಗೆ ಮಣೆ ಹಾಕಲಿದೆ ಎಂಬುದು ಸದ್ಯದಲ್ಲೇ ಸ್ಪಷ್ಟವಾಗಲಿದೆ.

ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಗಳ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಸಂವಿಧಾನಾತ್ಮಕವಾಗಿ ಮತ್ತು ನಿಯಮಾನುಸಾರ ಅವಕಾಶವಿದೆ. ಸಂವಿಧಾನದ ವಿಧಿ 183(ಸಿ) ಮತ್ತು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡಾವಳಿಗಳ ಅನ್ವಯ (ನಿಯಮ 165), ವಿಧಾನ ಪರಿಷತ್ತಿನ ಸಭಾಪತಿಗಳನ್ನು ಆ ಹುದ್ದೆಯಿಂದ ಕೆಳಗಿಳಿಸಲು ನಿರ್ಣಯವನ್ನು ಮಂಡಿಸಬಹುದು.

ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಬಯಸುವ ಸದಸ್ಯರು ಕನಿಷ್ಠ 14 ದಿನಗಳ ಮುಂಚಿತವಾಗಿ ಲಿಖಿತ ರೂಪದಲ್ಲಿ ಕಾರ್ಯದರ್ಶಿಗೆ ನೋಟಿಸ್ ನೀಡಬೇಕು. ಸದನದಲ್ಲಿ ಈ ಪ್ರಸ್ತಾವನೆ ಮಂಡನೆಗೆ ಅನುಮತಿ ಸಿಗಲು ಕನಿಷ್ಠ 10 ಸದಸ್ಯರ ಬೆಂಬಲ ಕಡ್ಡಾಯವಾಗಿದೆ. ಮಂಡಿಸಲಾದ ನೋಟಿಸ್ ಮತ್ತು ನಿರ್ಣಯವು ಪರಿಷತ್ತಿನ ನಿಯಮಾವಳಿಗಳಿಗೆ ಸಂಪೂರ್ಣವಾಗಿ ಅನುಗುಣವಾಗಿದೆಯೆ ಎಂಬುದನ್ನು ಸಭಾಪತಿಗಳು ಪರಿಶೀಲಿಸಿ ಚರ್ಚೆಗೆ ದಿನಾಂಕ ನಿಗದಿಪಡಿಸುತ್ತಾರೆ.

## ರಾಜೀನಾಮೆ ಕೇಳಿದರೆ ತಕ್ಷಣ ನೀಡುತ್ತೇನೆ: ಹೊರಟ್ಟಿ ಸ್ಪಷ್ಟನೆ



ಹುಬ್ಬಳ್ಳಿ, ಜು.30: ಸಭಾಪತಿ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಸ್ವತಃ ಬಸವರಾಜ ಹೊರಟ್ಟಿ ಸ್ಪಷ್ಟನೆ ನೀಡಿದ್ದಾರೆ.

ಸಭಾಪತಿ ಹುದ್ದೆಗೆ ರಾಜೀನಾಮೆ ಕೊಡುವಂತೆ ಸಿಎಂ ಕರೆ ಮಾಡಿಲ್ಲ. ಇದು ಗಾಳಿ ಸುದ್ದಿ. ನನಗೆ ಯಾರೂ ನೇರವಾಗಿ ರಾಜೀನಾಮೆ ಕೇಳಿಲ್ಲ. ಕೇಳಿದರೆ ತಕ್ಷಣವೇ ರಾಜೀನಾಮೆ ನೀಡುತ್ತೇನೆ ಎಂದಿದ್ದಾರೆ. ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದ ಅವರು, ನಾನು ಆಸ್ಪತ್ರೆಯಲ್ಲಿದ್ದೆ. ಹೀಗಾಗಿ ಆರೋಗ್ಯ ವಿಚಾರಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಫೋನ್ ಮಾಡಿದ್ದರು. ಆದರೆ ರಾಜೀನಾಮೆ ಬಗ್ಗೆ ಮಾತನಾಡಿಲ್ಲ. ಯಾವತ್ತೂ ಕುರ್ಚಿಗೆ ಅಂಟಿಕೊಂಡು ಕೂರುವುದಿಲ್ಲ ಎಂದಿದ್ದಾರೆ.

1956ರಿಂದ ಇಲ್ಲಿಯವರೆಗೆ ಎಲ್ಲರೂ ತಮ್ಮ ಅವಧಿ ಮುಗಿಸಿದ್ದಾರೆ. ಸರ್ಕಾರ ಬದಲಾವಣೆಯಾದಾಗ ಸಭಾಪತಿ ಬದಲಾವಣೆ ಮಾಡಿಲ್ಲ. ಬಹುಮತ ಇದ್ದಾಗಲೂ ಬದಲಾವಣೆ ಆಗಿಲ್ಲ. ಜುಲೈ 2028ರವರೆಗೆ ನನ್ನ ಅವಧಿ ಇದೆ. ಇಲ್ಲಿಯವರೆಗೆ ಸಭಾಪತಿ ವಿರುದ್ಧ ಅವಿಶ್ವಾಸ ಮಂಡಿಸಿದ ಉದಾಹರಣೆ ಇಲ್ಲ. ಈವರೆಗೆ ಸಭಾಪತಿ ಆಗಲು ಎಲ್ಲರೂ ಹಿಂದುಮುಂದು ನೋಡುತ್ತಿದ್ದರು. ಇದೀಗ ಯಾಕೆ ಎಲ್ಲರಿಗೂ ಸಭಾಪತಿ ಹುದ್ದೆಯ ಬಗ್ಗೆ ಪ್ರೀತಿ ಬಂದಿದೆಯೋ ಗೊತ್ತಿಲ್ಲ ಎಂದು ಹೊರಟ್ಟಿ ತಿಳಿಸಿದ್ದಾರೆ. ಕೆಲವರು ಸಭಾಪತಿ ಆಗಲು ನನಗೆ ಕಿರಿಕಿರಿ ಮಾಡುತ್ತಿದ್ದಾರೆ ಅಂತಾ ಈ ಹಿಂದೆ ಸಿಎಂ ಹೇಳಿದ್ದರು. ಆನಂತರ ಮಾತಾಡೋಣ ಅಂತ ತಿಳಿಸಿದ್ದರು. ಆದರೆ ಇಲ್ಲಿಯವರೆಗೆ ಮಾತಾಡಿಲ್ಲ. ನೋಟಿಸ್ ಪಡೆದು, ಅವಿಶ್ವಾಸ ಮಂಡನೆ ಮಾಡುವವರೆಗೆ ಕಾಯುವುದಿಲ್ಲ. ಅಷ್ಟು ನಿರ್ಲಜ್ಜಕ್ಕೆ ನಾನು ಹೋಗುವುದಿಲ್ಲ. ಸಭಾಪತಿಯನ್ನು ಇಳಿಸಲು ಸೂಕ್ತ ಕಾರಣ ಇರಬೇಕು ಎಂದು ಹೇಳಿದರು.

# ಇಡೀ ಸರ್ಕಾರ ದಿಲ್ಲಿಯಲ್ಲಿಲ್ಲ, ಸಿಎಂ ಮಾತ್ರ ಇದ್ದಾರೆ

**ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ಸಂಬಂಧ ಉಳಿದಿದ್ದಾರೆ ಅಷ್ಟೇ: ಕೆಪಿಸಿಸಿ ಅಧ್ಯಕ್ಷ ಬಿ. ಕೆ. ಹರಿಪ್ರಸಾದ್**



**ಬೆಂಗಳೂರು ಜು.30:** ಇಡೀ ಸರ್ಕಾರವೇನೂ ದೆಹಲಿಯಲ್ಲಿ ಇಲ್ಲ, ಕೇವಲ ಮುಖ್ಯಮಂತ್ರಿಗಳು ಇದ್ದಾರೆ. ಕೇಂದ್ರದಿಂದ ಅನುದಾನ ಬಿಡುಗಡೆ ಸಂಬಂಧ ರಾಷ್ಟ್ರರಾಜಧಾನಿಯಲ್ಲಿದ್ದಾರೆ ಅಷ್ಟೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದ್ದಾರೆ.

ರಾಜ್ಯ ಸರ್ಕಾರ ದೆಹಲಿಯಲ್ಲಿದೆ ಎಂದು ಬಿಜೆಪಿ ಟೀಕೆ ವಿಚಾರವಾಗಿ ದೆಹಲಿಯಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಹರಿಪ್ರಸಾದ್, ಕರ್ನಾಟಕ ಸರ್ಕಾರ ದೆಹಲಿಯಲ್ಲಿ ಇಲ್ಲ,ಮಂತ್ರಿ ಮಂಡಲಕ್ಕೂ ಇದಕ್ಕೂ ಏನೂ ಸಂಬಂಧ ಇಲ್ಲ.ಮೊದಲ ದಿನ ಸಂಸದರ ಜೊತೆ ಸಿಎಂ ಸಭೆ ನಡೆಸಿದ್ದಾರೆ.ಎರಡನೇ ದಿನ ಕೇಂದ್ರ ಸಚಿವರನ್ನು ಭೇಟಿ ಮಾಡಿದ್ದಾರೆ. ಜೊತೆಗೆ ಅತಿ ವೃಷ್ಟಿ ಹಾಗೂ ಅನಾವೃಷ್ಟಿ ವಿಚಾರದಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಮನವಿ ಮಾಡಿದ್ದಾರೆ ಎಂದು ತಿಳಿಸಿದರು.

ರಾಜ್ಯದಲ್ಲಿ ಆಡಳಿತ ಯಂತ್ರ ಕುಸಿದಿದೆ ಎಂಬ ಬಿಜೆಪಿ ನಾಯಕ ಬಿ.ಎಲ್.ಸಂತೋಷ್ ಹೇಳಿಕೆಗೆ ತಿರುಗೇಟು ನೀಡಿದ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಸಂತೋಷ್ ಬಿಜೆಪಿಗೆ ಆರ್ ಎಸ್ ಎಸ್ ನಿಂದ ದೇಣಿಗೆಯಾಗಿ ಬಂದಿದ್ದಾರೆ.ಆರ್ ಎಸ್ ಎಸ್ ನಿಂದ ಬಂದು ಬಿಜೆಪಿಯಲ್ಲಿನ ಚಟುವಟಿಕೆಗಳನ್ನು ನಿಯಂತ್ರಣ ಮಾಡುತ್ತಿದ್ದಾರೆ.ರಾಜ್ಯ ಕಾಂಗ್ರೆಸ್ ನಲ್ಲೂ ಇದೇ ರೀತಿ ಇದೆ ಅಂದುಕೊಂಡಿದ್ದಾರೆ.ಆದರೆ ನಾವು ನೊಂದಾಯಿತಗೊಳ್ಳದ ಯಾವುದೇ ಸಂಘ ಸಂಸ್ಥೆಗಳ ಜೊತೆ ಚರ್ಚೆ ಮಾಡುವುದಿಲ್ಲ ಎಂದರು.

ಜನಗಳು ಆರಿಸಿದಂತೆ ಸರ್ಕಾರವು ಸಂವಿಧಾನದ ಚೌಕಟ್ಟಿನಲ್ಲಿ ಯಾರ ಜೊತೆ ಚರ್ಚೆ ಮಾಡಬೇಕು,ಅವರ ಜೊತೆ ಚರ್ಚೆ ಮಾಡಿ ತೀರ್ಮಾನ ತೆಗೆದುಕೊಳ್ಳುತ್ತೇವೆ.ಬಿ.ಎಲ್.ಸಂತ ೋಷ್ ಆರ್ ಎಸ್ ಎಸ್ ನಿಂದ ಬಿಜೆಪಿಯ ಮೇಲುಸ್ತುವಾರಿ ನಡೆಸುತ್ತಿದ್ದಾರೆ.ನಾವು ನಾಗಪುರದಿಂದ ಯಾವುದೇ ರೀತಿಯ ನಿರ್ದೇಶನಗಳನ್ನು ತೆಗೆದುಕೊಳ್ಳುವುದಿಲ್ಲ.ಅವರಿಗೆ ಅಭ್ಯಾಸ ಇದ್ದರೆ ಅವರು ನಿರ್ದೇಶನಗಳನ್ನು ತೆಗೆದುಕೊಂಡು ಕೆಲಸ ಮಾಡಲಿ ಎಂದು ವ್ಯಂಗ್ಯವಾಡಿದರು.

ರಾಜ್ಯ ಬಿಜೆಪಿಯಲ್ಲಿ ಎಲ್ಲವೂ ಸರಿ ಇಲ್ಲ.ಅದನ್ನು ಸರಿಮಾಡಿಕೊಂಡು ಆ ಬಳಿಕ ಕಾಂಗ್ರೆಸ್ ಬಗ್ಗೆ ಮಾತನಾಡುವುದು ಒಳಿತು.ಅವರಿಗೆ ಕಾಂಗ್ರೆಸ್ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ಬಿಜೆಪಿ ನಾಯಕರಿಗೆ ತಿರುಗೇಟು ನೀಡಿದರು.



ನವದೆಹಲಿಯ ಕರ್ನಾಟಕ ಭವನದಲ್ಲಿ ಗುರುವಾರ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಾಸಕರಾದ ಅಶೋಕ್ ಪಟ್ಟಣ್, ಎಂ.ಆರ್.ಸೀತಾರಾಮ್, ಡಾ.ಅಜಯ್ ಧರಂ ಸಿಂಗ್, ವಿಜಯಾನಂದ ಕಾಶಪ್ಪನವರ್, ಪುಟ್ಟರಂಗ ಶೆಟ್ಟಿ, ಶಿವಲಿಂಗೇಗೌಡ ಮತ್ತು ಮಧು ಬಂಗಾರಪ್ಪ ಅವರೊಂದಿಗೆ ಚರ್ಚೆ ನಡೆಸಿದರು.

# ಲೋಕಸಭೆ ಘನತೆ, ಗೌರವ ಎತ್ತಿಹಿಡಿಯುವ ಕೆಲಸವಾಗಲಿ

## ರಾಹುಲ್‌ಗಾಂಧಿ ವರ್ತನೆಗೆ ಸಂಸದ ಗೋವಿಂದ ಕಾರಜೋಳ ಕಿಡಿ



**ನವದೆಹಲಿ, ಜು.30:** ರಾಜ್ಯದಲ್ಲಿ ಹಲವು ಬಾರಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ, ರಾಹುಲ್ ಗಾಂಧಿ ಈ ಬಗ್ಗೆ ಒಮ್ಮೆಯಾದ್ರೂ ಮಾತನಾಡಿದ್ದಾರಾ ಎಂದು ಸಂಸದ ಗೋವಿಂದ ಕಾರಜೋಳ ಪ್ರಶ್ನೆ ಮಾಡಿದ್ದಾರೆ. ದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ರಾಹುಲ್ ಗಾಂಧಿ ಅವರ ಮೂರ್ಖ ಮತ್ತು ಅಂಧಭಕ್ತ ಹೇಳಿಕೆಗೆ ಪ್ರತಿಕ್ರಿಯಿಸಿದ್ದಾರೆ. ಲೋಕಸಭೆ ಒಂದು ಸಾಂವಿಧಾನಿಕ ಸಂಸ್ಥೆ, ಅದರ ಘನತೆ ಗೌರವ ಎತ್ತಿ ಹಿಡಿಯಬೇಕು. ಇದು ಎಲ್ಲರ ಕರ್ತವ್ಯ, ಕಳೆದ ಒಂದು ವಾರದಿಂದ. ವಿಪಕ್ಷಗಳು ಗದ್ದಲ ಮಾಡುತ್ತಿವೆ. ರಾಹುಲ್ ಗಾಂಧಿ ಜೋಕರ್ ಥರಕ್ಕೆ ವರ್ತಿಸುತ್ತಿದ್ದಾರೆ ಎಂದು ಕುಟುಕಿದ್ದಾರೆ.

2012ರಲ್ಲಿ ಪಿಯು ಪತ್ರಿಕೆ ಸೋರಿಕೆಯಾಯಿತು, 2014 ಸಿಓಡಿ ವರದಿ ಬಂತು. 2016 ರಲ್ಲೂ ಪ್ರಶ್ನೆ ಪತ್ರಿಕೆ ಸೋರಿಕೆಯಾಯಿತು. ಹಲವು ಬಾರಿ ರಾಜ್ಯದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಆಗಿದೆ. ಈ ಬಗ್ಗೆ ರಾಹುಲ್ ಗಾಂಧಿ ಯಾಕೆ ಮಾತನಾಡಲ್ಲ ಕಾಂಗ್ರೆಸ್ ನಾಯಕರು ಈ ಬಗ್ಗೆ ಮಾತನಾಡುವುದಿಲ್ಲ, ಪ್ರಶ್ನೆ ಪತ್ರಿಕೆ ವಿಚಾರದಲ್ಲಿ ಸರಿಯಾಗಿ ಕಾಂಗ್ರೆಸ್ ಸರ್ಕಾರ ಕಾನೂನು ಹೋರಾಟ ಮಾಡಲಿಲ್ಲ. ಇದರಿಂದ ಆರೋಪಿಗಳು ಪಾರಾದರೂ, 2018–19 ರಲ್ಲಿ ಪರಮೇಶ್ವರ್ ಪಿಎ ಆತ್ಮಹತ್ಯೆ ಮಾಡಿಕೊಂಡರು. ಇದರ ಬಗ್ಗೆ ರಾಹುಲ್ ಗಾಂಧಿ ಮಾತನಾಡಬೇಕಿತ್ತು ಎಂದು ಹೇಳಿದ್ದಾರೆ.

ನೀಟ್‌ನಿಂದ ವೈದ್ಯಕೀಯ ಸೀಟುಗಳ ಮಾರಾಟ ನಿಯಂತ್ರಣಕ್ಕೆ ಬಂದಿದೆ. ಮೋದಿ ಅವರು ನೀಟ್ ಪರೀಕ್ಷೆ ಆರಂಭಿಸಿದ ಮೇಲೆ ದಲಿತ ಹಿಂದುಳಿದ ವರ್ಗಗಳಿಗೆ ಅವಕಾಶ ಸಿಕ್ಕಿದೆ. ದರ ಶ್ಲಾಘಿಸುವ ಬದಲು ವಿರೋಧ ಮಾಡುತ್ತಿದ್ದಾರೆ, ಸರ್ಕಾರ ತಪ್ಪು ಮಾಡಿದ್ದರೆ ಲೋಕಸಭೆಯಲ್ಲಿ ವಿಪಕ್ಷ ನಾಯಕನಾಗಿ ಮಾತನಾಡಬೇಕು, ಅದರ ಬದಲು ಜೋಕರ್ ರೀತಿಯಲ್ಲಿ ಅಸಾಂವಿಧಾನಿಕವಾಗಿ ಮಾತನಾಡುವುದಾ ಎಂದು ಕಿಡಿಕಾರಿದ್ದಾರೆ.

# ರಾಜ್ಯದ ಹಿತಾಸಕ್ತಿ ಮರೆತ ಮುಖ್ಯಮಂತ್ರಿ, ಶಾಸಕರ ವಿರುದ್ಧ ಬಿಜೆಪಿ ಆಕ್ರೋಶ

**ಹೋರಾಟದ ಎಚ್ಚರಿಕೆ ನೀಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್**

ಬೆಂಗಳೂರು, ಜು.30: ಬರ ಪರಿಸ್ಥಿತಿ, ಕಾವೇರಿ ವಿವಾದ, ವಿದ್ಯುತ್ ಕಡಿತ ಸೇರಿ ಹಲವು ಗಂಭೀರ ಸಮಸ್ಯೆಗಳನ್ನು ರಾಜ್ಯ ಎದುರಿಸುತ್ತಿರುವ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿ 70ಕ್ಕೂ ಹೆಚ್ಚು ಶಾಸಕರು ರಾಜ್ಯದ ಹಿತಾಸಕ್ತಿ ಮರೆತು ದೆಹಲಿಯಲ್ಲಿ ಮಂತ್ರಿಮಂಡಲ ವಿಸ್ತರಣೆಗಾಗಿ ದೆಹಲಿಯಲ್ಲಿ ಠಿಕಾಣಿ ಹೂಡಿರುವ ಬಗ್ಗೆ ಆಕ್ರೋಶ ವ್ಯಕ್ತವಾಗಿದೆ.

ಪ್ರತಿಪಕ್ಷಗಳು ಸಹ ಸರ್ಕಾರದ ವಿರುದ್ಧ ಈ ವಿಚಾರವಾಗಿ ವಿರೋಧ ಪಕ್ಷಗಳ ನಾಯಕರು ಆಕ್ಷೇಪ ಎತ್ತಿದ್ದು ಜನ ಬೀದಿಗಿಳಿಯುವ ಎಚ್ಚರಿಕೆ ನೀಡಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪ್ರತಿಪಕ್ಷ ನಾಯಕ ಆರ್. ಅಶೋಕ್ಕ ಆಕ್ರೋಶ ವ್ಯಕ್ತಪಡಿಸಿದ್ದು, ರಬ್ಬರ್ ಸ್ಟ್ಯಾಂಪ್ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೇ, ಕರ್ನಾಟಕ ಕಂಡ ಅತ್ಯಂತ ದುರ್ಬಲ ಹಾಗೂ ಅಸಹಾಯಕರ ಮುಖ್ಯಮಂತ್ರಿ ಎಂದರೆ ಅದು ನೀವೇ ಎನ್ನುವುದರಲ್ಲಿ ಯಾವುದೇ ಅನುಮಾನ ವಿಲ್ಲ. ಒಂದು ಕಡೆ ರಾಜ್ಯದಲ್ಲಿ ಕೃಷಿ, ಶಿಕ್ಷಣ, ಉನ್ನತ ಶಿಕ್ಷಣ, ಸಮಾಜ ಕಲ್ಯಾಣದಂತಹ ಪ್ರಮುಖ ಇಲಾಖೆಗಳು ಸಚಿವರಿಲ್ಲದೆ ಅನಾಥವಾಗಿ ಆಡಳಿತ ಯಂತ್ರ ಸಂಪೂರ್ಣ ಕುಸಿದುಬಿದ್ದಿದೆ. ಬರ, ಕಾವೇರಿ ಬಿಕ್ಕಟ್ಟಿನಿಂದ ರಾಜ್ಯದ ಜನತೆ ತತ್ತರಿಸಿ ಹೋಗಿದ್ದಾರೆ.

ಆದರೆ, ನಿಮ್ಮ ದುರಹಂಕಾರಿ ಹೈಕಮಾಂಡ್ ಮತ್ತು ನಾಲಾಯಕ್ ನಾಯಕ ರಾಹುಲ್ ಗಾಂಧಿ ಅವರಿಗೆ ಮಾತ್ರ ಕರ್ನಾಟಕದ ಹಿತಾಸಕ್ತಿಗಿಂತ ತಮ್ಮ ರಾಜಕೀಯ ಮೇಲಾಟವೇ ಹೆಚ್ಚಾಯಿತು. ಮುಖ್ಯಮಂತ್ರಿ ಆದಿಯಾಗಿ ಸಚಿವಾಕಾಂಕ್ಷಿ ಶಾಸಕರನ್ನು ಕಳೆದ ಒಂದು ವಾರದಿಂದ ದೆಹಲಿಯ ಬೀದಿಗಳಲ್ಲಿ, ಹೈಕಮಾಂಡ್ ಅರಮನೆಯ ಪಡಸಾಲೆಗಳಲ್ಲಿ ಚಾತಕ ಪಕ್ಷಿಗಳಂತೆ ಕಾಯಿಸಿ, ಅಪಮಾನಿಸುತ್ತಿದ್ದರೂ ಹೈಕಮಾಂಡ್ ನಾಯಕರ ಮುಂದೆ ಧ್ವನಿ ಎತ್ತಲಾಗದ ನಿಮ್ಮ ಈ ಅಸಹಾಯಕತೆಯನ್ನ ಗುಲಾಮಗಿರಿ ಅನ್ನದೇ ಇನ್ನೇನ್ನಲು ಸಾಧ್ಯ.

ಜನರಿಗೆ ಮಳೆಯ ಚಿಂತೆಯಾದರೆ, ಶಾಸಕರಿಗೆ ಸಚಿವ ಸ್ಥಾನದ ಚಿಂತೆ, ಪ್ರಮುಖ ನಾಯಕರಿಗೆ ಕುರ್ಚಿಯ ಕಾಳಜಿ ಎಂಬಂತಾಗಿದೆ. ಆಡಳಿತ ನಡೆಸುವವರ ಧೋರಣೆ ವಿರುದ್ಧ ಜನಾಕ್ರೋಶ ಹೆಚ್ಚಾಗುತ್ತಿದೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ದೆಹಲಿಯಲ್ಲೇ ಬೀಡುಬಿಟ್ಟಿದ್ದಾರೆ. ಜೊತೆಗೆ ಕಾಂಗ್ರೆಸ್‌ನ 70ಕ್ಕೂ ಹೆಚ್ಚು ಮಂದಿ ಶಾಸಕರು ದೆಹಲಿಯಲ್ಲೇ ಉಳಿದಿದ್ದಾರೆ. ಹೀಗಾಗಿ ಬರಪೀಡಿತ ಪ್ರದೇಶಗಳಲ್ಲಿ ಜನಪ್ರತಿನಿಧಿಗಳ ಕೊರತೆ ಎದ್ದುಕಾಣುತ್ತಿದೆ. ಜನ ಕುಡಿಯುವ ನೀರು, ಬೆಳೆಹಾನಿಯಂತಹ ಸಮಸ್ಯೆಗಳಿಂದ ಚಿಂತಿತರಾಗಿದ್ದಾರೆ. ಕೆಲವು ಭಾಗಗಳಲ್ಲಿ ಉದ್ಯೋಗಕ್ಕಾಗಿ ನಗರಗಳತ್ತ ವಲಸೆ ಹೆಚ್ಚಾಗುತ್ತಿದೆ. ಉದ್ಯೋಗ ಖಾತ್ರಿ ಯೋಜನೆಯಡಿ ಸ್ಥಳೀಯವಾಗಿ ಉದ್ಯೋಗ ಸೃಷ್ಟಿಸಲು ಕ್ರಿಯಾ ಯೋಜನೆಗಳಿಗೆ ಶಾಸಕರ ಅನುಮೋದನೆ ಅಗತ್ಯ ಇದೆ ಮತ್ತು ಬರ ನಿರ್ವಹಣೆಗಾಗಿ ಬಿಡುಗಡೆ ಮಾಡಲಾಗುವ ಹಣದ ಬಳಕೆಯ ಮೇಲುಸ್ತುವಾರಿಗೂ ಶಾಸಕರ ಉಪಸ್ಥಿತಿ ಅತ್ಯಂತ ಜರೂರಿನ ವಿಷಯ.

ಕೆಲ ಸಚಿವರು ಮತ್ತು ಮುಖ್ಯಮಂತ್ರಿಯವರು ದೆಹಲಿಯಲ್ಲೇ ಉಳಿದಿದ್ದು, ಬರ ನಿರ್ವಹಣೆಗಾಗಿ ಕೇಂದ್ರದಿಂದ ಹೆಚ್ಚಿನ ಅನುದಾನ ಪಡೆಯಲು ಪ್ರಯತ್ನಿಸಲಾಗುತ್ತಿದೆ ಎಂಬ ಸಮರ್ಥನೆ ನೀಡಲಾಗುತ್ತಿದೆ. ಆದರೆ ಸಂಸತ್ ಅಧಿವೇಶನ ನಡೆಯುತ್ತಿರುವುದರಿಂದ ಎಲ್ಲಾ ಸಚಿವರು ಅದರ ಕಾರ್ಯದೊತ್ತಡದಲ್ಲಿದ್ದಾರೆ. ರಾಜ್ಯದ ಮುಖ್ಯಮಂತ್ರಿ ಹಾಗೂ ಸಚಿವರ ಭೇಟಿಗೆ ಸಮಯ ನೀಡುತ್ತಿಲ್ಲ ಎನ್ನಲಾಗಿದೆ.

# ಆಧಾರ್ ದೃಢೀಕರಣ ವ್ಯವಸ್ಥೆ ಸುರಕ್ಷತೆ ಮತ್ತಷ್ಟು ಬಲಪಡಿಸಲು ಎಚ್‌ಎಸ್‌ಎಂ ಉನ್ನತೀಕರಣ: ಸಚಿವ ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಜು.30:** ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಬಳಸಲಾಗುತ್ತಿರುವ ಆಧಾರ್ ದೃಢೀಕರಣ ವ್ಯವಸ್ಥೆಯ ಭದ್ರತೆ ಮತ್ತು ವಿಶ್ವಾಸಾರ್ಹತೆಯನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ಹಾರ್ಡ್‌ವೇರ್ ಸೆಕ್ಯುರಿಟಿ ಮಾಡ್ಯೂಲ್ ಅನ್ನು ಉನ್ನತೀಕರಿಸುವ ಕಾರ್ಯವನ್ನು ಸರ್ಕಾರ ಕೈಗೊಂಡಿದೆ ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಇದು ಸಾಮಾನ್ಯ ನಿರ್ವಹಣಾ ಕಾರ್ಯವಲ್ಲ; ರಾಜ್ಯದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯವನ್ನು ಮತ್ತಷ್ಟು ಸುರಕ್ಷಿತ, ವಿಶ್ವಾಸಾರ್ಹ ಹಾಗೂ ಭವಿಷ್ಯದ ಅಗತ್ಯಗಳಿಗೆ ಸಜ್ಜುಗೊಳಿಸುವ ತಾಂತ್ರಿಕ ಸುಧಾರಣೆಯಾಗಿದೆ ಎಂದು ಸಚಿವರು ಹೇಳಿದ್ದಾರೆ.

"ನಾಗರಿಕ ಸೇವೆಗಳ ಪರಿಣಾಮಕಾರಿ ವಿತರಣೆಗೆ ಸುರಕ್ಷಿತ ಡಿಜಿಟಲ್ ವ್ಯವಸ್ಥೆಗಳು ಅತ್ಯಗತ್ಯ. ಸರ್ಕಾರದ ಪ್ರಮುಖ ಡಿಜಿಟಲ್ ಮೂಲಸೌಕರ್ಯಗಳನ್ನು ಅತ್ಯಾಧುನಿಕ ಭದ್ರತಾ ಮಾನದಂಡಗಳಿಗೆ ಅನುಗುಣವಾಗಿ ನಿರಂತರವಾಗಿ ಬಲಪಡಿಸುವ ಕಾರ್ಯವನ್ನು ನಾವು ಕೈಗೊಳ್ಳುತ್ತಿದ್ದೇವೆ," ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

ಆಧಾರ್ ದೃಢೀಕರಣ ಸೇವೆಯಲ್ಲಿ ಬಳಸುವ ಎನ್‌ಕ್ರಿಪ್ಷನ್ ಕೀಗಳನ್ನು ಸುರಕ್ಷಿತವಾಗಿ ನಿರ್ವಹಿಸುವ ಪ್ರಮುಖ ವ್ಯವಸ್ಥೆಯಾದ ಎಚ್.ಎಸ್.ಎಂ ಮೂಲಕ ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಪ್ರತಿದಿನ ಸುಮಾರು 10 ರಿಂದ 12 ಲಕ್ಷ ಆಧಾರ್ ದೃಢೀಕರಣ ವ್ಯವಹಾರಗಳು ನಡೆಯುತ್ತಿವೆ. ಈ ಉನ್ನತೀಕರಣದ ಭಾಗವಾಗಿ ಇತ್ತೀಚಿನ ಭದ್ರತಾ ಪ್ಯಾಚ್‌ಗಳು, ಬಗ್ ಫಿಕ್ಸ್‌ಗಳು ಹಾಗೂ ಓ.ಇ.ಎಂ ಬೆಂಬಲಿತ ತಂತ್ರಾಂಶ ನವೀಕರಣಗಳನ್ನು ಅಳವಡಿಸಲಾಗುತ್ತಿದೆ.

ಈ ಕಾರ್ಯವನ್ನು ಸಾರ್ವಜನಿಕ ಸೇವೆಗಳಿಗೆ ಹೆಚ್ಚಿನ ತೊಂದರೆ ಉಂಟಾಗುವಂತೆ ಜುಲೈ 31, ಆಗಸ್ಟ್ 1 ಮತ್ತು ಆಗಸ್ಟ್ 2ರಂದು ಸಂಜೆ 6.00 ಗಂಟೆಯಿಂದ ಮರುದಿನ ಬೆಳಗ್ಗೆ 6.00 ಗಂಟೆಯವರೆಗೆ ಕಚೇರಿ ವೇಳೆಯ ನಂತರ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ತಿಳಿಸಿದ್ದು, ಸಾರ್ವಜನಿಕರಿಗೆ ಆಗಬಹುದಾದ ಅನಾನುಕೂಲವನ್ನು ಸಾಧ್ಯವಾದಷ್ಟು ಕಡಿಮೆಗೊಳಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

# ದ್ವೇಷ ಬಿತ್ತಲು ಯತ್ನಿಸುವ ಯಾರೇ ಆದರೂ ಕಾನೂನು ಕ್ರಮಕ್ಕೆ ಒಳಪಡಲೇಬೇಕು: ಸಚಿವ ಪ್ರಿಯಾಂಕ್ ಖರ್ಗೆ

**ಬೆಂಗಳೂರು, ಜು.30:** ಕಣಕಣದಲ್ಲೂ ಸಮಾಜಘಾತಕವನವನ್ನು ಮೈಗೂಡಿಸಿಕೊಂಡಿರುವ ಬಿಜೆಪಿಗರಿಗೆ ಕೇಸ್ ಹಾಕದೆ ಮುದ್ದುಮಾಡಿ, ಲಾಲಿ ಹಾಡುತ್ತಾ ಮಲಗಿಸಬೇಕಿತ್ತೇ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ ಮಾಡಿದ್ದಾರೆ.

ಸಮಾಜದಲ್ಲಿ ದ್ವೇಷದ ವಿಷತುಂಬಲು ಪ್ರಯತ್ನಿಸುವ ಯಾರೇ ಆದರೂ ಕಾನೂನು ಕ್ರಮಕ್ಕೆ ಒಳಪಡಲೇಬೇಕು. ಕಾನೂನು ಪಾಲನೆ ಮಾಡುವ ಪೊಲೀಸರ ಬಗ್ಗೆ ಅತ್ಯಂತ ತುಚ್ಛವಾಗಿ ಮಾತನಾಡಿದ ಭರತ್ ಶೆಟ್ಟಿ ಬಿಜೆಪಿಯ "ಸುಸಂಸ್ಕೃತ" ಪರಂಪರೆಯ ರಾಯಭಾರಿಯಾಗಿ ಮಾತನಾಡಿದ್ದಾರೆ ಎಂದು ಹೇಳಿದ್ದಾರೆ.

ಸಿ.ಟಿ. ರವಿ, ಯಶ್‌ಪಾಲ್ ಸುವರ್ಣ ಬಿಜೆಪಿ ಸಂಸ್ಕೃತಿಯ ರಾಯಭಾರಿ ಸ್ಥಾನಕ್ಕೆ ಪೈಪೋಟಿ ನಡೆಸುತ್ತಿರುವಾಗಲೇ ಭರತ್ ಶೆಟ್ಟಿಯವರೂ ನಾನೇನೂ ಕಮ್ಮಿ ಇಲ್ಲ ಎಂದು ಅಖಾಡಕ್ಕೆ ಇಳಿದಿದ್ದಾರೆ. ಶಾಸಕ, ಸಂಸದರಂತಹ ಎಷ್ಟೇ ಪ್ರಭಾವಿ ಸ್ಥಾನದಲ್ಲಿದ್ದರೂ ಕಾನೂನು ಪಾಲನೆಯ ಕರ್ತವ್ಯ ಮಾಡಿದ ಪೊಲೀಸರನ್ನು ಜನತೆ ಶ್ಲಾಘಿಸುತ್ತಿದ್ದಾರೆ, ನಿಂದನೆಗೆ ಇಳಿದಿರುವ ಬಿಜೆಪಿಗರಿಗೆ ತಿಳಿದಿರಲಿ, ಪೊಲೀಸರು ಖಾಕಿ ಹಾಕಿಕೊಂಡು ಕಾನೂನು ಪಾಲನೆ ಮಾಡುತ್ತಿದ್ದಾರೆಯೇ ಹೊರತು ಬಿಜೆಪಿಗರಂತೆ ಖಾಕಿ ಚಡ್ಡಿ ಹಾಕಿಕೊಂಡು ಸಮಾಜಘಾತುಕ ಕೆಲಸಗಳನ್ನು ಮಾಡುತ್ತಿಲ್ಲ. ಬಿಜೆಪಿಗರು ತಾವು ಸಂವಿಧಾನ, ಕಾನೂನು, ನಿಯಮಗಳಿಗೆ ಅತೀತರು ಎಂದು ಭಾವಿಸಿಕೊಂಡಿದ್ದಾರೆ, ಈ ಭ್ರಮೆಯಿಂದ ಹೊರಬಂದು ಸಭ್ಯರಾಗದೇ ಇದ್ದಲ್ಲಿ ಕಾನೂನು ತನ್ನ ಕೆಲಸವನ್ನು ಮಾಡುತ್ತದೆ, ಇದಕ್ಕೆ ಯಾರೂ ಹೊರತಲ್ಲ. ಬಿಜೆಪಿ ನಾಯಕರಾಗಲಿ, ಕಾರ್ಯಕರ್ತರೇ ಆಗಿರಲಿ, ಕಾನೂನು ಕ್ರಮ ಜರುಗಿಸಬಾರದು ಎಂದರೆ ಸಂವಿಧಾನ ಮತ್ತು ಕಾನೂನಿನ ಚೌಕಟ್ಟಿನೊಳಗೆ ತಮ್ಮ ಮಾತು ಮತ್ತು ಕೃತಿಗಳನ್ನು ನಿರ್ವಹಿಸಬೇಕು. ಬಿಜೆಪಿ ಕರ್ನಾಟಕ ನಾಯಕರು ಕರ್ನಾಟಕದ ಪೊಲೀಸರನ್ನು ನಾಯಿಗೆ ಹೋಲಿಸುವ ಮಾತುಗಳು ಅವರ ದುರಹಂಕಾರದ ಪರಮಾವಧಿಯನ್ನು ಸೂಚಿಸುತ್ತದೆ. ನಮ್ಮ ಅಧಿಕಾರಿಗಳ ನೈತಿಕ ಸ್ಥೈರ್ಯ ಕಸಿಯುವ ಯಾವುದೇ ಪ್ರಯತ್ನಗಳನ್ನೂ ನಾನು ಸಹಿಸುವುದಿಲ್ಲ ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಎಚ್ಚರಿಕೆ ನೀಡಿದ್ದಾರೆ.

ಕಾಂಗ್ರೆಸ್ ಪಕ್ಷ ಮತ್ತು ಕಾಂಗ್ರೆಸ್ ನಾಯಕರ ತೇಜೋವಧೆಗೆ ಬಿಜೆಪಿ ಬಳಸಿದ ವಾಮಮಾರ್ಗಗಳು ಒಂದೆರಡಲ್ಲ, ಸತ್ಯವನ್ನು ಸೋಲಿಸಲು ಸಾಧ್ಯವಿಲ್ಲದಿದ್ದರೂ, ಸುಳ್ಳು ಸೃಷ್ಟಿಸುವ ಅನಾಹುತಗಳು ಭೀಕರ ಪರಿಣಾಮಗಳನ್ನು ಉಂಟುಮಾಡುತ್ತವೆ ಎಂದೂ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದ್ದಾರೆ. 2ಜಿ ಸ್ಪೆಕ್ಟ್ರಂ ವಿಷಯದಲ್ಲಿ ಬಿಜೆಪಿ ಮಾಡಿದ ಆರೋಪಗಳು ನಿರಾಧಾರ ಎಂಬುದು ನ್ಯಾಯಾಲಯದಲ್ಲಿ ನಿರೂಪಿತವಾಗಿದ್ದು ಈಗ ಇತಿಹಾಸ, ಅಂತೆಯೇ ಕಲ್ಲಿದ್ದಲು ಹಂಚಿಕೆಯಲ್ಲಿ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಮೇಲೆ ಬಿಜೆಪಿ ಹೊರಿಸಿದ್ದ ಆರೋಪದಲ್ಲೂ ಈಗ ಸತ್ಯದ ಅನಾವರಣವಾಗಿದೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

# ನಮ್ಮ ನೀರು ನಮ್ಮ ರೈತರಿಗೆ ಮೊದಲು ಕೊಡಿ, ಹಕ್ಕು ಉಳಿಸಿ: ಸಿಎಂಗೆ ಸಿ.ಟಿ. ರವಿ ಆಗ್ರಹ

**ಚಿಕ್ಕಮಗಳೂರು, ಜು.30:** ಕಾವೇರಿ ನದಿ ನೀರಿನ ಕುರಿತ ಮಧ್ಯಂತರ ಆದೇಶದಲ್ಲಿ 3,500 ಕ್ಯೂಸೆಕ್‌ಗೂ ಹೆಚ್ಚು ನೀರನ್ನು ಪ್ರತಿದಿನವೂ ತಮಿಳುನಾಡಿಗೆ ಬಿಡಬೇಕೆಂದು ಆದೇಶಿಸಲಾಗಿದೆ.

ನಾನು ಕೊಪ್ಪಳ ಜಿಲ್ಲೆಗೆ ಭೇಟಿ ನೀಡಿದ್ದಾಗ, ನಮಗೆ ಬಚಾವತ್ ತೀರ್ಪಿನ ಪ್ರಕಾರ ಎಡದಂಡೆ ಮತ್ತು ಬಲದಂಡೆಗೆ 5 ಟಿಎಂಸಿ ನೀರು ನೀಡಬೇಕು, ವರ್ಷದ 11 ತಿಂಗಳು ನೀರು ಹರಿಸಬೇಕು ಎನ್ನುವ ಆದೇಶ ಇದ್ದರೂ, ನೀರು ಹರಿಸಿಲ್ಲ ಎಂದಿದ್ದರು. ಬಚಾವತ್ ತೀರ್ಪು ಹೀಗಿದ್ದರೂ ಮುಖ್ಯಮಂತ್ರಿಗಳು ನೀರು ಬಿಡುವ ಆಲೋಚನೆ ಮಾಡಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಡಾ. ರವಿ ಸಿ.ಟಿ ಹೇಳಿದರು.

ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಮಂಡ್ಯದಲ್ಲಿ ಕುಡಿಯುವ ನೀರಿಗೂ ಒದ್ದಾಡುವ ಪರಿಸ್ಥಿತಿ ಇದೆ ಎಂದು ರೈತರು ಹೇಳುತ್ತಿದ್ದಾರೆ. ವಿರೋಧ ಪಕ್ಷದಲ್ಲಿದ್ದಾಗ ನಮ ನೀರು ನಮ ಹಕ್ಕು ಎಂದು ಚಳವಳಿ ಮಾಡಿದವರು ನೀವು. ಆಗ ಚಳವಳಿ ಮಾಡಿದವರು ಈಗ ಮುಖ್ಯಮಂತ್ರಿ ಆಗಿದ್ದೀರಿ. ನಮ ನೀರನ್ನು ಮೊದಲು ನಮ್ಮ ರೈತರಿಗೆ ಕೊಡಿ. ಆ ಮೂಲಕ ನಮ್ಮ ಹಕ್ಕನ್ನು ಉಳಿಸುವ ಕೆಲಸ ಮಾಡಿ ಎಂದು ಆಗ್ರಹಿಸಿದರು.

ಚಿಕ್ಕಮಗಳೂರು, ಕೊಡಗು, ಮೈಸೂರು, ಹಾಸನ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಬಾಂಗ್ಲಾದೇಶಿ ನಿವಾಸಿಗಳು ಅಸ್ಸಾಂ, ಪಶ್ಚಿಮ ಬಂಗಾಳದ ನಿವಾಸಿಗಳ ರೀತಿಯಲ್ಲಿ ನಕಲಿ ಆಧಾರ್ ಕಾರ್ಡ್ ಚೀಟಿ ಪಡೆದುಕೊಂಡು ವಾಸಿಸುತ್ತಿದ್ದಾರೆ. ಇದಕ್ಕಿಂತ ವೈಫಲ್ಯ ಇದೆಯೇ, ಎಸ್‌ಐಆರ್‌ಓನಲ್ಲಿ ನಿವಾಸಿಗಳು ನೋಂದಣಿ ಮಾಡಿಕೊಂಡಿದ್ದಾರೆಯೇ ನೋಂದಣಿ ಮಾಡಿಕೊಳ್ಳದವರನ್ನು ಪತ್ತೆಹಚ್ಚುವ ಕೆಲಸ ನಡೆಯುತ್ತಿದೆಯೇ ಎಂದು ರವಿ ಪ್ರಶ್ನಿಸಿದರು.

# ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಯೋಜನೆ ಜಾರಿ

**ತಕ್ಷಣ ಸಮಿತಿ ಸಭೆಗೆ ಕೆಯುಡಬ್ಲ್ಯೂಜೆ ಆಗ್ರಹ**

ಬೆಂಗಳೂರು, ಜು.30: ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಯೋಜನೆ ಹಾಗೂ ಮುಖ್ಯಮಂತ್ರಿ ಮಾಧ್ಯಮ ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೆ ಸಂಬಂಧಿಸಿದಂತೆ ತಕ್ಷಣ ಸಮಿತಿ ಸಭೆ ಕರೆದು ಅಗತ್ಯ ಕ್ರಮ ಕೈಗೊಳ್ಳುವಂತೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ರಾಜ್ಯ ಸರ್ಕಾರವನ್ನು ಆಗ್ರಹಿಸಿದೆ.

ಈ ಸಂಬಂಧ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಎಂ.ಎನ್. ಅನುಚೇತ ಅವರನ್ನು ಭೇಟಿಯಾದ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಮನವಿ ಸಲ್ಲಿಸಿ ಎರಡೂ ಮಹತ್ವದ ಕಲ್ಯಾಣ ಯೋಜನೆಗಳ ಅನುಷ್ಠಾನವನ್ನು ತ್ವರಿತಗೊಳಿಸುವಂತೆ ಕೋರಿದರು.

ಮನವಿಯಲ್ಲಿ, ಗ್ರಾಮೀಣ ಪತ್ರಕರ್ತರ ಉಚಿತ ಬಸ್‌ಪಾಸ್ ಯೋಜನೆಗೆ 2025ರ ಜುಲೈ 1ರಂದು ನಡೆದ ಪತ್ರಿಕಾ ದಿನಾಚರಣೆಯಲ್ಲಿ ಮುಖ್ಯಮಂತ್ರಿ ಚಾಲನೆ ನೀಡಿದ್ದರು. ಯೋಜನೆಯಡಿ ನೂರಾರು ಗ್ರಾಮೀಣ ಪತ್ರಕರ್ತರು ಅರ್ಜಿ ಸಲ್ಲಿಸಿದ್ದರೂ ಇದುವರೆಗೆ ಬಸ್‌ಪಾಸ್ ಮಂಜೂರು ಮಾಡುವ ಸಮಿತಿ ಸಭೆ ನಡೆದಿಲ್ಲ. ಆದ್ದರಿಂದ ಕೂಡಲೇ ಸಭೆ ಕರೆದು ಅರ್ಜಿಗಳ ಪರಿಶೀಲನೆ ನಡೆಸಿ ಅರ್ಹರಿಗೆ ಬಸ್‌ಪಾಸ್ ವಿತರಿಸಬೇಕು ಎಂದು ಒತ್ತಾಯಿಸಲಾಗಿದೆ. ಅದೇ ರೀತಿ, ರಾಜ್ಯ ಬಜೆಟ್‌ನಲ್ಲಿ ಘೋಷಿಸಲಾದ ಮುಖ್ಯಮಂತ್ರಿ ಮಾಧ್ಯಮ ಆರೋಗ್ಯ ಸಂಜೀವಿನಿ ಯೋಜನೆ ಕೂಡ ಇನ್ನೂ ಜಾರಿಯಾಗಿಲ್ಲ. ಪತ್ರಕರ್ತರ ಆರೋಗ್ಯ ಭದ್ರತೆಗೆ ಅತ್ಯಂತ ಅಗತ್ಯವಾದ ಈ ಯೋಜನೆಯನ್ನು ವಿಳಂಬವಿಲ್ಲದೆ ಅನುಷ್ಠಾನಗೊಳಿಸಬೇಕೆಂದು ಸಂಘ ಮನವಿ ಮಾಡಿದೆ.

ಇದಕ್ಕೆ ಪ್ರತಿಕ್ರಿಯಿಸಿದ ಆಯುಕ್ತ ಎಂ.ಎನ್.ಅನುಚೇತ ಅವರು, ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಯೋಜನೆ ಹಾಗೂ ಮುಖ್ಯಮಂತ್ರಿ ಮಾಧ್ಯಮ ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದ್ದು, ಶೀಘ್ರದಲ್ಲೇ ಸಮಿತಿ ಸಭೆಕರೆಯಲಾಗುವುದು ಎಂದು ಭರವಸೆ ನೀಡಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಅಹವಾಲು ಆಲಿಸಲು ಅಧಿಕಾರಿಗಳು, ಸಿಬ್ಬಂದಿ ಜತೆ ನೇರ ಸಂಪರ್ಕಕ್ಕೆ ಮುಂದಾದ ಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು, ಜು.30:** ತಳಮಟ್ಟದಿಂದ ಆಡಳಿತ ಯಂತ್ರ ಚುರುಕುಗೊಳಿಸಲು ಹಾಗೂ ಸರ್ಕಾರಿ ಅಧಿಕಾರಿ, ಸಿಬ್ಬಂದಿ ಜತೆಗೆ ನೇರ ಸಂಪರ್ಕ ಸಾಧಿಸಿ ಅಹವಾಲು ಆಲಿಸಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುಂದಾಗಿದ್ದಾರೆ.

ಇದೇ ಮೊದಲ ಬಾರಿಗೆ ಹೋಬಳಿ ಮಟ್ಟದಿಂದ ಜಿಲ್ಲಾಧಿಕಾರಿ ಕಚೇರಿವರೆಗಿನ ನೌಕರರೊಂದಿಗೆ ಸಂವಾದ ನಡೆಸಲು ವೇದಿಕೆ ಸಜ್ಜು ಮಾಡುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಸೂಚಿಸಿದ್ದಾರೆ.

ಜಿಲ್ಲಾ ಕೇಂದ್ರದಲ್ಲಿ 500–1000 ನೌಕರರು ಭಾಗವಹಿಸಬಹುದಾದ ಸೂಕ್ತ ಸ್ಥಳ ಗುರುತಿಸಬೇಕು. ಅದೇ ರೀತಿ ಪ್ರತಿ ತಾಲೂಕು ಕೇಂದ್ರದಲ್ಲಿ 200–500 ನೌಕರರು ಹಾಗೂ ಪ್ರತಿ ಹೋಬಳಿ ಕೇಂದ್ರಗಳಲ್ಲಿ 100–200 ನೌಕರರು ಭಾಗವಹಿಸಬಹುದಾದ ಸೂಕ್ತ ಸ್ಥಳ ಗುರುತಿಸಬೇಕು. ಪ್ರತಿ ಜಿಲ್ಲೆಯಲ್ಲಿ ಒಂದು ತಾಲೂಕು ಮತ್ತು ಹೋಬಳಿ ಕೇಂದ್ರ ಗುರುತಿಸಿ ಆ ಸ್ಥಳಗಳಲ್ಲಿ ಸಂವಾದಕ್ಕೆ ವ್ಯವಸ್ಥೆ ಮಾಡುವಂತೆ ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಅದಕ್ಕಾಗಿ ಸೂಕ್ತ ಡಿಸ್‌ಪ್ಲೇ ಪರದೆಗಳು, ವಿಡಿಯೋ ಕ್ಯಾಮರಾ (ಆಡಿಯೋ, ವಿಡಿಯೋ ಕ್ಯಾಪ್ಚರ್ ಕಾರ್ಡ್ ಸೇರಿ), ಅಗತ್ಯ ತಾಂತ್ರಿಕ ಪರಿಕರಗಳು, ಲ್ಯಾಪ್‌ಟಾಪ್, ಧ್ವನಿವರ್ಧಕಗಳು ಇರಬೇಕು. ಜತೆಗೆ ಕನಿಷ್ಠ 10 ಎಂಬಿಪಿಎಸ್ ವೇಗದ ಸ್ಥಿರ ಇಂಟರ್ನೆಟ್ ಸಂಪರ್ಕ ಕಲ್ಪಿಸಿರಬೇಕು ಎಂದು ಸೂಚಿಸಲಾಗಿದೆ.

ಕಾರ್ಯಕ್ರಮಕ್ಕೆ ಸಂಬಂಧಿಸಿದ ವ್ಯವಸ್ಥೆಗಳ ಸಮನ್ವಯ ಹಾಗೂ ಸುಗಮ ಸಂವಾದ ಖಚಿತಪಡಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಒಬ್ಬ ನೋಡಲ್ ಅಧಿಕಾರಿಯನ್ನು ಹಾಗೂ ದ್ವಿಮುಖ ಸಂವಾದಕ್ಕಾಗಿ ಗುರುತಿಸಲಾದ ತಾಲೂಕು ಮತ್ತು ಹೋಬಳಿ ಕೇಂದ್ರಗಳಿಗೆ ಪ್ರತ್ಯೇಕ ನೋಡಲ್ ಅಧಿಕಾರಿಗಳನ್ನು ನಾಮನಿರ್ದೇಶನ ಮಾಡುವಂತೆ ಪ್ರಧಾನ ಕಾರ್ಯದರ್ಶಿ ಆದೇಶಿಸಿದ್ದಾರೆ.

# ನಾಳೆಯಿಂದ ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನ: ಸಚಿವ ಕೃಷ್ಣ ಬೈರೇಗೌಡ

**ಸಾರ್ವಜನಿಕರ ಸ್ಥಳಗಳಲ್ಲಿ ಸಂಗ್ರಹವಾಗಿರುವ ಪಾರಂಪರಿಕ ತ್ಯಾಜ್ಯ ತೆರವು**

**ಮುಂದಿನ ದಿನಗಳಲ್ಲಿ ಬ್ಲ್ಯಾಕ್‌ಸ್ಪಾಟ್ ತೆರವಿಗೆ ಕ್ರಮ**



**ಬೆಂಗಳೂರು, ಜು.30:** ಬೆಂಗಳೂರಿನಾದ್ಯಂತ ಆಗಸ್ಟ್ 1ರಿಂದ ಹಮ್ಮಿಕೊಳ್ಳಲಾಗುತ್ತಿರುವ ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನದಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಸಂಗ್ರಹವಾಗಿರುವ ಪಾರಂಪರಿಕ ತ್ಯಾಜ್ಯವನ್ನು ಮಾತ್ರ ತೆರವುಗೊಳಿಸಲಾಗುತ್ತದೆ. ಗೃಹ ತ್ಯಾಜ್ಯದಿಂದ ಉಂಟಾಗಿರುವ ಬ್ಲಾಕ್‌ಸ್ಪಾಟ್‌ಗಳನ್ನು ಮುಂದಿನ ದಿನಗಳಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ತಿಳಿಸಿದರು.

ಜಿಬಿಎ ವ್ಯಾಪ್ತಿಯಲ್ಲಿ ಆಗಸ್ಟ್ 1ರಿಂದ ಆರಂಭವಾಗಲಿರುವ ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನಕ್ಕೆ ಸಂಬಂಧಿಸಿದಂತೆ ಇಂದು ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರದಾದ್ಯಂತ ಹಲವು ವರ್ಷಗಳಿಂದ ರಸ್ತೆ ಬದಿ, ಸಾರ್ವಜನಿಕ ಸ್ಥಳಗಳು ಹಾಗೂ ಖಾಲಿ ಜಾಗಗಳಲ್ಲಿ ಸಂಗ್ರಹವಾಗಿರುವ ಮಣ್ಣು, ಕಟ್ಟಡ ಭಗ್ನಾವಶೇಷಗಳು, ಪೈಪ್‌ಗಳು, ವಿದ್ಯುತ್ ಕಂಬಗಳು ಸೇರಿದಂತೆ ವಿವಿಧ ಪಾರಂಪರಿಕ ತ್ಯಾಜ್ಯವನ್ನು ಈ ಅಭಿಯಾನದಡಿ ತೆರವುಗೊಳಿಸಲಾಗುತ್ತದೆ. ಗೃಹಬಳಕೆಯ ತ್ಯಾಜ್ಯದಿಂದ ಉಂಟಾಗಿರುವ ಬ್ಲಾಕ್‌ಸ್ಪಾಟ್‌ಗಳ ತೆರವು ಕಾರ್ಯವನ್ನು ಮುಂದಿನ ದಿನಗಳಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ನಗರದ ರಸ್ತೆ ಬದಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ತ್ಯಾಜ್ಯ ಮತ್ತು ವಿವಿಧ ಸಾಮಗ್ರಿಗಳನ್ನು ಸುರಿಯುತ್ತಿರುವುದರಿಂದ ಅವುಗಳ ಮೇಲೆ ಗಿಡಗಂಟಿಗಳು ಬೆಳೆದು, ಇಲಿ, ಹಾವು ಹಾಗೂ ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗುತ್ತಿದೆ. ಇದರಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುವುದರ ಜೊತೆಗೆ, ನಗರದ ಸೌಂದರ್ಯಕ್ಕೂ ಧಕ್ಕೆ ಉಂಟಾಗುತ್ತಿದೆ. ಅನೇಕ ಖಾಲಿ ನಿವೇಶನಗಳನ್ನು ಸ್ವಚ್ಛವಾಗಿಟ್ಟುಕೊಳ್ಳದೇ ಮಣ್ಣು, ತ್ಯಾಜ್ಯ ಹಾಗೂ ಕಳೆ–ಗಿಡಗಳು ಬೆಳೆದು ಸುತ್ತಮುತ್ತಲಿನ ನಿವಾಸಿಗಳಿಗೆ ತೊಂದರೆಯಾಗುತ್ತಿದೆ. ಈ ಕುರಿತು ನಾಗರಿಕರಿಂದ ನೂರಾರು ದೂರುಗಳು ಬಂದಿವೆ ಎಂದು ತಿಳಿಸಿದರು.

ಬೆಂಗಳೂರನ್ನು ಇನ್ನಷ್ಟು ಸ್ವಚ್ಛ ಹಾಗೂ ಸುಂದರ ನಗರವನ್ನಾಗಿ ರೂಪಿಸಲು ಜಸ್ಟ್ ಕ್ಲೀನ್ ಬೆಂಗಳೂರು (ಜೆಸಿಬಿ) ಗೆ ನಾಗರಿಕರು ಕೈಜೋಡಿಸಬೇಕು. ಬೃಹತ್ ಸ್ವಚ್ಛತಾ ಕಾರ್ಯದಲ್ಲಿ ಅಧಿಕಾರಿಗಳಷ್ಟೇ ಅಲ್ಲದೆ ಸಾರ್ವಜನಿಕರ ಸಹಭಾಗಿತ್ವವೂ ಅತ್ಯಂತ ಅಗತ್ಯವಾಗಿದೆ. ಭಗ್ನಾವಶೇಷಗಳನ್ನು ಸಾಗಿಸುವ ಎಲ್ಲಾ ವಾಹನಗಳಿಗೆ ಜಿಪಿಎಸ್ ಕಡ್ಡಾಯವಾಗಿ ಅಳವಡಿಸಬೇಕು. ಅಲ್ಲದೆ, ಸಿ ಮತ್ತು ಡಿ ವೇಸ್ಟ್ ಸಾಗಿಸುವ ವಾಹನಗಳು ಕಡ್ಡಾಯವಾಗಿ ನೋಂದಣಿಯಾಗಿರಬೇಕು. ಇದರಿಂದ ಸಾರ್ವಜನಿಕ ಸ್ಥಳಗಳಲ್ಲಿ ಕಟ್ಟಡ ತ್ಯಾಜ್ಯವನ್ನು ಅಕ್ರಮವಾಗಿ ಸುರಿಯುವುದನ್ನು ತಡೆಯಲು ಸಾಧ್ಯವಾಗಲಿದೆ. ಈ ಸಂಬಂಧ ಜಿಬಿಎ, ಪೊಲೀಸ್ ಹಾಗೂ ಸಾರಿಗೆ ಇಲಾಖೆಗಳೊಂದಿಗೆ ಜಂಟಿ ಸಭೆ ನಡೆಸಿ, ಶೀಘ್ರದಲ್ಲಿ ಈ ವ್ಯವಸ್ಥೆಯನ್ನು ಜಾರಿಗೆ ತರಲು ಸೂಚಿಸಲಾಗಿದೆ. ನಗರದಲ್ಲಿ ಕಟ್ಟಡ ಭಗ್ನಾವಶೇಷಗಳನ್ನು ನಿಯಮಾನುಸಾರ ವಿಲೇವಾರಿ ಮಾಡಲು ಅಧಿಕೃತ ಸಂಸ್ಥೆಯನ್ನು ನಿಯೋಜಿಸಲಾಗಿದೆ. ಪ್ರತಿ ಟನ್‌ಗೆ 760 ರೂ. ದರ ನಿಗದಿಪಡಿಸಲಾಗಿದ್ದು, ಇನ್ನು ಮುಂದೆ ಕಟ್ಟಡ ತ್ಯಾಜ್ಯವನ್ನು ನೋಂದಾಯಿತ ಸಂಸ್ಥೆಗಳಿಗೆ ಮಾತ್ರ ನೀಡಬೇಕು. ಸಂಬಂಧಿಸಿದ ಸಂಸ್ಥೆಗಳ ಸಂಪರ್ಕ ವಿವರಗಳನ್ನು ಸಹ ಸಾರ್ವಜನಿಕರಿಗೆ ಒದಗಿಸಲಾಗುವುದು ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಜಲಮಂಡಳಿ ಅಧ್ಯಕ್ಷೆ ಮಂಜುಳಾ, ವಿಶೇಷ ಆಯುಕ್ತ ನಿತೀಶ್, ನಗರ ಪಾಲಿಕೆ ಆಯುಕ್ತರಾದ ರಮೇಶ್ ಡಿ.ಎಸ್., ಪೊಮ್ಮಲ ಸುನೀಲ್‌ಕುಮಾರ್, ರಮೇಶ್ ಕೆ.ಎನ್., ಜಿ. ಜಗದೀಶ್, ಡಾ. ರಾಜೇಂದ್ರ ಕೆ.ವಿ., ಬೆಂಗಳೂರು ಘನತ್ಯಾಜ್ಯ ನಿರ್ವಹಣೆ ನಿಯಮಿತದ ಸಿಇಒ ಕರೀಗೌಡ, ಅಪರ ಆಯುಕ್ತರು, ಮುಖ್ಯ ಅಭಿಯಂತರರು ಹಾಗೂ ಬೆಸ್ಕಾಂ, ಸಂಚಾರ ಪೊಲೀಸ್, ರೈಲ್ವೆ, ಕೆ–ರೈಡ್, ಕೆ.ಐ.ಎ.ಡಿ.ಬಿ., ಬಿಡಿಎ, ಎನ್.ಎಚ್.ಎ.ಐ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### 22 ಸಾವಿರ ಟನ್ ಪಾರಂಪರಿಕ ತ್ಯಾಜ್ಯ ಗುರುತು

ರಸ್ತೆ ಬದಿ, ಪಾದಚಾರಿ ಮಾರ್ಗ, ಸಾರ್ವಜನಿಕ ಸ್ಥಳಗಳು, ಖಾಲಿ ನಿವೇಶನಗಳು ಮಾತ್ರವಲ್ಲದೆ ವಿವಿಧ ಇಲಾಖೆಗಳ ಖಾಲಿ ಜಾಗಗಳಲ್ಲಿಯೂ ಪಾರಂಪರಿಕ ತ್ಯಾಜ್ಯ ಸಂಗ್ರಹವಾಗಿದ್ದು, ಇದರಿಂದ ಸಂಚಾರಕ್ಕೂ ಅಡಚಣೆ ಉಂಟಾಗಿದೆ. ಪ್ರಸ್ತುತ 1,616 ಸ್ಥಳಗಳಲ್ಲಿ ಸುಮಾರು 22,000 ಟನ್ ಪಾರಂಪರಿಕ ತ್ಯಾಜ್ಯವನ್ನು ಗುರುತಿಸಲಾಗಿದೆ. ನಗರದಾದ್ಯಂತ ಒಟ್ಟು 1 ಲಕ್ಷ ಟನ್‌ಗಿಂತ ಹೆಚ್ಚು ತ್ಯಾಜ್ಯ ಇರಬಹುದೆಂದು ಅಂದಾಜಿಸಲಾಗಿದೆ. ಈ ಸಂಬಂಧ ಜಿಬಿಎ, ಐದು ನಗರ ಪಾಲಿಕೆಗಳು, ರೈಲ್ವೆ, ಬಿಡಿಎ, ಜಲಮಂಡಳಿ, ಬೆಸ್ಕಾಂ, ಕೆ–ರೈಡ್, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಪಾರಂಪರಿಕ ತ್ಯಾಜ್ಯ ತೆರವು ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ ಎಂದು ಸಚಿವ ಕೃಷ್ಣಬೈರೇಗೌಡ ಹೇಳಿದರು.

### ಆ.15ರೊಳಗೆ ನಿವೇಶನ ಸ್ವಚ್ಛತೆಗೆ ಮಾಲೀಕರಿಗೆ ಸೂಚನೆ

ಅಭಿಯಾನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗಳು ಚಾಲನೆ ನೀಡಲಿದ್ದಾರೆ. ಆಗಸ್ಟ್ ತಿಂಗಳ ಪೂರ್ತಿ ಅಭಿಯಾನ ನಡೆಯಲಿದ್ದು, ಸಾರ್ವಜನಿಕ ಸ್ಥಳಗಳಲ್ಲಿರುವ ಬೃಹತ್ ತ್ಯಾಜ್ಯವನ್ನು ಸಂಬಂಧಿಸಿದ ಇಲಾಖೆಗಳು ಹಾಗೂ ಸಂಸ್ಥೆಗಳು ತೆರವುಗೊಳಿಸುವಂತೆ ನಿರ್ದೇಶನ ನೀಡಲಾಗಿದೆ. ಖಾಲಿ ನಿವೇಶನಗಳ ಮಾಲೀಕರು ಆ.15ರೊಳಗೆ ತಮ್ಮ ನಿವೇಶನಗಳನ್ನು ಸ್ವಯಂ ಸ್ವಚ್ಛಗೊಳಿಸಬೇಕು ಎಂದು ಮನವಿ ಮಾಡಿದರು. ಸ್ವಚ್ಛತಾ ಕಾರ್ಯ ನಡೆಸುವ ಸಂಸ್ಥೆಗಳು ಹಾಗೂ ಗುತ್ತಿಗೆದಾರರ ಸಂಪರ್ಕ ವಿವರಗಳನ್ನು ಆಯಾ ನಗರ ಪಾಲಿಕೆಗಳಲ್ಲಿ ಲಭ್ಯವಾಗುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಆಗಸ್ಟ್ 15ರ ನಂತರವೂ ಸ್ವಚ್ಛಗೊಳಿಸದ ನಿವೇಶನಗಳನ್ನು ಸಂಬಂಧಿಸಿದ ನಗರ ಪಾಲಿಕೆ ಸ್ವಚ್ಛಗೊಳಿಸಿ, ಅದಕ್ಕೆ ತಗಲುವ ವೆಚ್ಚವನ್ನು ಆಸ್ತಿ ತೆರಿಗೆಯೊಂದಿಗೆ ವಸೂಲಿ ಮಾಡಲಾಗುವುದು. ಇದಕ್ಕೆ ಸಂಬಂಧಿಸಿದ ವೆಚ್ಚದ ವಿವರಗಳನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಹೇಳಿದರು.

# ಕೃಷಿಯಲ್ಲಿ ಸೌರವಿದ್ಯುತ್ ಬಳಕೆಗೆ ಉತ್ತೇಜನ ವಿದ್ಯುತ್ ಬೇಡಿಕೆ ಕುಸಿತ: ಸಚಿವ ಕೆ.ಜೆ. ಜಾರ್ಜ್



**ಬೆಂಗಳೂರು, ಜು.30:** ರಾಜ್ಯ ಸರ್ಕಾರ ಕೃಷಿಯಲ್ಲಿ ಸೌರವಿದ್ಯುತ್ ಬಳಕೆಗೆ ಉತ್ತೇಜನ ಹೆಚ್ಚಿಸಿದ್ದು, ಒಂದು ಲಕ್ಷಕ್ಕೂ ಹೆಚ್ಚು ರೈತರು ಅರ್ಜಿ ಸಲ್ಲಿಸಿದ್ದಾರೆ. ಪ್ರಸ್ತುತ ರಾಜ್ಯದಲ್ಲಿ 27,700 ಕ್ಕೂ ಹೆಚ್ಚು ಸೌರ ಕೃಷಿಪಂಪ್‌ಸೆಟ್‌ಗಳು ಕಾರ್ಯಾರಂಭ ಮಾಡಿದ್ದು, ಈ ಸೌರ ಕೃಷಿಪಂಪ್‌ಸೆಟ್‌ಗಳಿಂದ ರಾಜ್ಯದಲ್ಲಿ ಸುಮಾರು 144 ಮೆಗಾವ್ಯಾಟ್ ಗ್ರಿಡ್ ವಿದ್ಯುತ್ ಬೇಡಿಕೆ ಕಡಿಮೆಯಾಗಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದ್ದಾರೆ.

ಕರ್ನಾಟಕದ ಸೌರ ಕೃಷಿ ಕ್ರಾಂತಿ ಸುಸ್ಥಿರ ಕೃಷಿ ಹಾಗೂ ಉತ್ತಮ ಆಡಳಿತಕ್ಕೆ ಹೊಸ ಮಾದರಿಯಾಗಿದೆ. ಯೋಜನೆಯ ಅನುಷ್ಠಾನದಲ್ಲಿದ್ದ ಅಡೆತಡೆಗಳನ್ನು ನಿವಾರಿಸಿ, ಪ್ರಕ್ರಿಯೆಯನ್ನು ಸರಳಗೊಳಿಸಿ ಹೊಸ ವೇಗ ನೀಡಿದ್ದೇವೆ. ಪ್ರತಿಯೊಂದು ಸೌರ ಕೃಷಿ ಪಂಪ್‌ಸೆಟ್ ಕರ್ನಾಟಕದ ಭವಿಷ್ಯಕ್ಕೆ ಮಾಡುವ ಶಾಶ್ವತ ಹೂಡಿಕೆಯಾಗಿದೆ. ಇದು ರಾಜ್ಯದ ವಿದ್ಯುತ್ ಖರೀದಿ ವೆಚ್ಚವನ್ನು ಕಡಿಮೆ ಮಾಡುತ್ತದೆ, ವಿದ್ಯುತ್ ಸಹಾಯಧನದ ಹೊರೆ ತಗ್ಗಿಸುತ್ತದೆ, ಇಂಧನ ಭದ್ರತೆಯನ್ನು ಬಲಪಡಿಸುತ್ತದೆ ಮತ್ತು ರೈತರ ಜೀವನಮಟ್ಟವನ್ನು ಸುಧಾರಿಸುತ್ತದೆ. ಇದು ಕೇವಲ ನವೀಕರಿಸಬಹುದಾದ ಇಂಧನ ಯೋಜನೆಯಲ್ಲ; ರಾಜ್ಯದ ಆರ್ಥಿಕ ಹಾಗೂ ಸಾಮಾಜಿಕ ಪರಿವರ್ತನೆಗೆ ದಾರಿಯಾಗಿರುವ ಮಹತ್ವದ ಕಾರ್ಯಕ್ರಮವಾಗಿದೆ." ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವರಾದ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ನಿರಂತರ ಮೇಲ್ವಿಚಾರಣೆ ಹಾಗೂ ಆಡಳಿತಾತ್ಮಕ ಹಸ್ತಕ್ಷೇಪದಿಂದ ಹೊಸ ಚೈತನ್ಯ ದೊರೆತಿದೆ. ಇಂಧನ ಇಲಾಖೆ, ಎಸ್ಕಾಂಗಳು, ಅನುಷ್ಠಾನ ಸಂಸ್ಥೆಗಳು ಹಾಗೂ ಪೂರೈಕೆದಾರರ ಸಮನ್ವಯದಿಂದ ಅನುಷ್ಠಾನದಲ್ಲಿದ್ದ ಸಮಸ್ಯೆಗಳನ್ನು ಪರಿಹರಿಸಿದ ಬಳಿಕ ರೈತರ ಸ್ಪಂದನೆ ಗಣನೀಯವಾಗಿ ಹೆಚ್ಚಾಗಿದೆ ಎಂದು ಇಲಾಖೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಒಂದು ಲಕ್ಷಕ್ಕೂ ಹೆಚ್ಚು ರೈತರು ಅರ್ಜಿ ಸಲ್ಲಿಸಿದ್ದು, ಇದು ಸೌರ ಕೃಷಿ ಪಂಪ್‌ಸೆಟ್‌ಗಳತ್ತ ರೈತರ ವಿಶ್ವಾಸ ಹೆಚ್ಚುತ್ತಿರುವುದಕ್ಕೆ ಇದು ಸಾಕ್ಷಿಯಾಗಿದೆ. ಪ್ರಸ್ತುತ ರಾಜ್ಯದಲ್ಲಿ 27,700 ಕ್ಕೂ ಹೆಚ್ಚು ಸೌರ ಕೃಷಿಪಂಪ್‌ಸೆಟ್‌ಗಳು ಅಳವಡಿಕೆಯಾಗಿ ಕಾರ್ಯಾರಂಭ ಮಾಡಿದ್ದು, 40 ಸಾವಿರ ಪಂಪ್‌ಸೆಟ್‌ಗಳ ಗುರಿಯನ್ನು ಮುಟ್ಟುವತ್ತ ವೇಗವಾಗಿ ಮುನ್ನಡೆಯುತ್ತಿದೆ ಎಂದಿದ್ದಾರೆ. ಸೌರ ಕೃಷಿ ಪಂಪ್‌ಸೆಟ್‌ಗಳನ್ನು ಅಳವಡಿಸಿಕೊಳ್ಳಲು ರೈತರಿಗೆ ಉತ್ತೇಜನ ನೀಡುವ ಉದ್ದೇಶದಿಂದ ಕರ್ನಾಟಕ ಸರ್ಕಾರವೇ ಶೇ.50ರಷ್ಟು ಆರ್ಥಿಕ ಸಹಾಯಧನ ನೀಡುತ್ತಿದೆ. ಇದರಿಂದ ಸಾವಿರಾರು ರೈತರು ಕಡಿಮೆ ವೆಚ್ಚದಲ್ಲಿ ಸೌರ ವಿದ್ಯುತ್ ಬಳಸಲು ಸಾಧ್ಯವಾಗಿದೆ. ಇದರಿಂದ ಸಾಂಪ್ರದಾಯಿಕ ವಿದ್ಯುತ್ ಮೇಲಿನ ಅವಲಂಬನೆಯೂ ಕಡಿಮೆಯಾಗಿದೆ.

ಬಿ ಯೋಜನೆ ಅಡಿಯಲ್ಲಿ ಅಳವಡಿಸಿರುವ ಸೌರ ಪಂಪ್‌ಸೆಟ್‌ಗಳು ರೈತರ ಬದುಕಿನಲ್ಲಿ ಮಹತ್ವದ ಬದಲಾವಣೆಯನ್ನು ತಂದಿದೆ. ರಾತ್ರಿ ವೇಳೆ ಹೊಲಗಳಿಗೆ ತೆರಳಿ ಪಂಪ್‌ಗಳನ್ನು ಚಾಲನೆ ಮಾಡುವುದು, ನೀರಾವರಿಗಾಗಿ ಇಡೀ ರಾತ್ರಿ ಜಾಗರಣೆ ಮಾಡುವುದು ಮೊದಲಾದ ಸಮಸ್ಯೆಗಳಿಂದ ರೈತರಿಗೆ ಮುಕ್ತಿ ದೊರಕುತ್ತಿದೆ. ಕಾರ್ಯಾರಂಭ ಮಾಡಿರುವ ಈ ಸೌರ ಕೃಷಿ ಪಂಪ್‌ಸೆಟ್‌ಗಳಿಂದ ರಾಜ್ಯದಲ್ಲಿ ಸುಮಾರು 144 ಮೆಗಾವ್ಯಾಟ್ ಗ್ರಿಡ್ ವಿದ್ಯುತ್ ಬೇಡಿಕೆ ಕಡಿಮೆಯಾಗಿದೆ.

ಇದರೊಂದಿಗೆ ವರ್ಷಕ್ಕೆ 240 ದಶಲಕ್ಷ ಯೂನಿಟ್ ವಿದ್ಯುತ್ ಖರೀದಿಯನ್ನು ತಪ್ಪಿಸುವ ಮೂಲಕ ಎಸ್ಕಾಂಗಳಿಗೆ ಸುಮಾರು 146 ಕೋಟಿ ರೂ. ವಿದ್ಯುತ್ ಖರೀದಿ ವೆಚ್ಚ ಉಳಿತಾಯವಾಗಲಿದೆ. ಜೊತೆಗೆ, ಕೃಷಿ ಪಂಪ್‌ಸೆಟ್‌ಗಳಿಗೆ ನೀಡುವ ವಿದ್ಯುತ್ ಸಹಾಯಧನದಲ್ಲಿ ರಾಜ್ಯ ಸರ್ಕಾರಕ್ಕೆ ವರ್ಷಕ್ಕೆ ಸುಮಾರು 200 ಕೋಟಿ ರೂ. ಉಳಿತಾಯ ಆಗಲಿದೆ.

# ದೆಹಲಿಯಲ್ಲಿ ಆಸ್ತಿ ಆಧಾರ್ ಕಾರ್ಡ್ ಪರಿಚಯ: ಸಿಎಂ

**ನವದೆಹಲಿ, ಜು. 30:** ರಾಜಧಾನಿಯಲ್ಲಿ ಆಧುನಿಕ, ಪಾರದರ್ಶಕ ಮತ್ತು ವಿವಾದ–ಮುಕ್ತ ಭೂಮಿ ಮತ್ತು ಆಸ್ತಿ ನಿರ್ವಹಣಾ ವ್ಯವಸ್ಥೆಯನ್ನು ರಚಿಸುವತ್ತ ದೆಹಲಿ ಸರ್ಕಾರವು ಒಂದು ಮಹತ್ವದ ಹೆಜ್ಜೆ ಇಡಲು ಸಜ್ಜಾಗಿದೆ. ಇದನ್ನು ಸಾಧಿಸಲು, ದೆಹಲಿ ಸರ್ಕಾರ ಶೀಘ್ರದಲ್ಲೇ ದೆಹಲಿ ಭೂದಾಖಲೆ ಮಸೂದೆ, 2026 ಅನ್ನು ಪರಿಚಯಿಸಲಿದೆ. "ಕಾನೂನು ಜಾರಿಗೆ ಬಂದ ನಂತರ, ದೆಹಲಿಯಲ್ಲಿರುವ ಪ್ರತಿಯೊಂದು ಆಸ್ತಿಯನ್ನು ವೈಜ್ಞಾನಿಕ ಸಮೀಕ್ಷೆಗೆ ಒಳಪಡಿಸಲಾಗುತ್ತದೆ ಮತ್ತು ಸಮಗ್ರ ಡಿಜಿಟಲ್ ದಾಖಲೆಯನ್ನು ರಚಿಸಲಾಗುತ್ತದೆ. ನಂತರ ಪ್ರತಿಯೊಂದು ಆಸ್ತಿಗೂ ವಿಶಿಷ್ಟವಾದ 'ಆಸ್ತಿ ಆಧಾರ್ ಕಾರ್ಡ್' ನೀಡಲಾಗುವುದು" ಎಂದು ಮುಖ್ಯಮಂತ್ರಿ ಕಚೇರಿ ಗುರುವಾರ ತಿಳಿಸಿದೆ. ಆಧಾರ್ ಕಾರ್ಡ್ ಪ್ರತಿಯೊಬ್ಬ ನಾಗರಿಕರಿಗೂ ವಿಶ್ವಾಸಾರ್ಹ ಗುರುತಿನ ರೂಪವನ್ನು ಒದಗಿಸಿದಂತೆ, ದೆಹಲಿಯಲ್ಲಿರುವ ಪ್ರತಿಯೊಂದು ಆಸ್ತಿಗೂ ಈಗ ಸುರಕ್ಷಿತ ಮತ್ತು ಅಧಿಕೃತ ಡಿಜಿಟಲ್ ಗುರುತನ್ನು ನೀಡಲಾಗುವುದು ಎಂದು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಹೇಳಿದರು. "ಇದು ರಾಜಧಾನಿಯಾದ್ಯಂತ ಆಸ್ತಿ ದಾಖಲೆಗಳನ್ನು ಹೆಚ್ಚು ಪಾರದರ್ಶಕ, ಸುಸಂಘಟಿತ ಮತ್ತು ತಾಂತ್ರಿಕವಾಗಿ ಸುರಕ್ಷಿತವಾಗಿಸುತ್ತದೆ" ಎಂದು ದೆಹಲಿ ಮುಖ್ಯಮಂತ್ರಿ ಹೇಳಿದರು. ದೆಹಲಿ ಭೂದಾಖಲೆ ಮಸೂದೆ, 2026, ಸಚಿವರ ಗುಂಪಿನ ವ್ಯಾಪಕ ಪರಿಶೀಲನೆಯ ನಂತರ ಪ್ರಸ್ತುತ ಅನುಮೋದನೆ ಪ್ರಕ್ರಿಯೆಯಲ್ಲಿದೆ ಎಂದು ಅವರು ಹೇಳಿದರು. ಈ ಶಾಸನದ ಮೂಲಕ, ದೆಹಲಿಯಲ್ಲಿರುವ ಪ್ರತಿಯೊಂದು ಆಸ್ತಿಗೂ ಅದರ ಆಸ್ತಿ ಆಧಾರ್ ಕಾರ್ಡ್ ಮೂಲಕ ವಿಶಿಷ್ಟ ಆಸ್ತಿ ಐಡಿಯನ್ನು ನೀಡಲಾಗುತ್ತದೆ.

# ಬರಗಾಲ ಘೋಷಿಸದಿದ್ದರೆ ಆ.30ರಿಂದ ಚಲೋ ಹೊಲ–ಗದ್ದೆ ಪ್ರತಿಭಟನೆ

## ರಾಜ್ಯ ಸರ್ಕಾರಕ್ಕೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಎಚ್ಚರಿಕೆ



**ಬಳ್ಳಾರಿ ಜಿಲ್ಲೆಯ ಶಿಡಗಿನಮೋಳ ಗ್ರಾಮದಲ್ಲಿ ಗುರುವಾರ ಪ್ರತಿಪಕ್ಷದ ನಾಯಕ ಆರ್. ಅಶೋಕ್. ರೈತರು ನಡಸುತ್ತಿರುವ ಪ್ರತಿಭಟನೆಯಲ್ಲಿ ಪಾಲ್ಗೊಂಡರು. ಶಾಸಕ ಜನಾರ್ದನರೆಡ್ಡಿ ಜೊತೆಯಲ್ಲಿದ್ದರು.**

**ಬಳ್ಳಾರಿ, ಜು.30:** ರಾಜ್ಯ ಸರ್ಕಾರ ಕೂಡಲೇ ಬರಗಾಲ ಘೋಷಣೆ ಮಾಡದಿದ್ದರೆ ಆಗಸ್ಟ್ 30ರಿಂದ ಚಲೋ ಹೊಲ ಗದ್ದೆ ಪ್ರತಿಭಟನೆ ಮಾಡುತ್ತೇವೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಎಚ್ಚರಿಸಿದರು.

ಜಿಲ್ಲೆಯ ಕರೇಕಲ್ ಗ್ರಾಮಕ್ಕೆ ಭೇಟಿ ನೀಡಿ ಬೆಳೆ ಹಾನಿ ಪರಿಶೀಲಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಎಲ್ಲಾ ಜಿಲ್ಲೆಗಳಲ್ಲಿ ಬರ ಇದ್ದರೂ ರಾಜ್ಯ ಸರ್ಕಾರ ಬರ ಘೋಷಣೆ ಮಾಡಿಲ್ಲ. ಕೂಡಲೇ ಬರ ಘೋಷಿಸದಿದ್ದರೆ ನಾವೆಲ್ಲರೂ ರೈತರ ಹೊಲದಲ್ಲಿ ಕುಳಿತು ಧರಣಿ ಮಾಡುತ್ತೇವೆ. ರೈತರು ಕಂಗಾಲಾಗಿ ಬೀದಿಗಿಳಿದು ಹೋರಾಟ ಮಾಡುತ್ತಿದ್ದಾರೆ. ಎಲ್ಲೂ ಸಣ್ಣ ಮೊಳಕೆ ಕೂಡ ಬಂದಿಲ್ಲ ಎಂದರು.

ಬಳ್ಳಾರಿಯ ಕಾಂಗ್ರೆಸ್ ಶಾಸಕರು ಫೈವ್ ಸ್ಟಾರ್ ಹೋಟೆಲ್‌ಗಳಲ್ಲಿರುವಾಗ ಇಡೀ ಜಿಲ್ಲೆಯಲ್ಲಿ ರೈತರು ಬಿತ್ತನೆ ಮಾಡಲಾಗದ ಪರಿಸ್ಥಿತಿಯಲ್ಲಿದ್ದಾರೆ. ಶೇ.18 ರಷ್ಟು ಬಿತ್ತನೆ ನಡೆದು 50 ದಿನಗಳು ಕಳೆದಿವೆ. ಮೆಕ್ಕೆಜೋಳ, ಹತ್ತಿ ಮೊದಲಾದ ಬೆಳೆಗಳ ಬಿತ್ತನೆ ನಡೆದಿದ್ದರೂ ಸಸಿಗಳು ನೆಲದಿಂದ ಮೇಲಕ್ಕೂ ಬಂದಿಲ್ಲ. ಇನ್ನು ಮಳೆ ಬಂದರೂ ಪ್ರಯೋಜನವಿಲ್ಲ. ಆದರೆ ಕಾಂಗ್ರೆಸ್ ಸರ್ಕಾರ ಬರಗಾಲ ಘೋಷಣೆ ಮಾಡದೆ ತಡ ಮಾಡುತ್ತಿದೆ. ಆದಾಯ ಕಡಿಮೆ ಇರುವುದರಿಂದ ಬರ ಘೋಷಣೆ ಮಾಡಿದರೆ ಕೂಡಲೇ ಪರಿಹಾರ ನೀಡಬೇಕಾಗುತ್ತದೆ ಎಂದು ಆರ್ಥಿಕ ಇಲಾಖೆ ಎಚ್ಚರಿಕೆ ನೀಡಿದೆ. ಬಳ್ಳಾರಿ ತಾಲೂಕಿನಲ್ಲಿ 14.56%, ಕುರುಗೋಡುವಿನಲ್ಲಿ 5.32%, ಸಿರಗುಪ್ಪದಲ್ಲಿ 52.79%, ಸಂಡೂರಿನಲ್ಲಿ 67.33%, ಕಂಪ್ಲಿಯಲ್ಲಿ 34.91% ರಷ್ಟು ಬಿತ್ತನೆಯಾಗಿದೆ. ಒಟ್ಟಾಗಿ ಬಳ್ಳಾರಿಯಲ್ಲಿ 38% ಬಿತ್ತನೆ ನಡೆದಿದೆ ಎಂದು ಹೇಳಿದರು.

ನಾನು ಇಲ್ಲಿಗೆ ಭೇಟಿ ನೀಡಿದ ಬಳಿಕ ಅಧಿಕಾರಿಗಳು ಬಂದಿದ್ದಾರೆ ಎಂದು ರೈತರು ದೂರಿದ್ದಾರೆ. ತುಂಗಭದ್ರಾ ಜಲಾಶಯದಲ್ಲಿ ಈಗ 36 ಟಿಎಂಸಿ ನೀರಿದ್ದರೂ ಅದನ್ನು ಹರಿಸಿಲ್ಲ. ಬಿಜೆಪಿ ಅವಧಿಯಲ್ಲಿ 26 ಟಿಎಂಸಿ ನೀರಿದ್ದಾಗಲೇ ಬೆಳೆಗಾಗಿ ನೀರು ಹರಿಸಲಾಗಿತ್ತು. ಆದ್ದರಿಂದ ಬಿಜೆಪಿಯ ಎಲ್ಲ ಮುಖಂಡರು ಆಂಜನೇಯ ದೇವಾಲಯದಿಂದ ಜಲಾಶಯಕ್ಕೆ ಪಾದಯಾತ್ರೆ ಹೋಗಲಿದ್ದೇವೆ ಎಂದರು.

ಡಿ.ಕೆ.ಶಿವಕುಮಾರ್ ಸಿಎಂ ಆದ ಬಳಿಕ ಹೊಲಗಳು, ಖಜಾನೆ ಹಾಗೂ ಜಲಾಶಯಗಳು ಖಾಲಿಯಾಗಿವೆ. ಆದರೆ ಇವರು ಮಾತ್ರ ದೆಹಲಿಯಲ್ಲಿ ಮೋಜು–ಮಸ್ತಿ ಮಾಡುತ್ತಿದ್ದಾರೆ. ಸಿದ್ದರಾಮಯ್ಯನವರ ನಂತರ ಅವರು ಬಂದಾಗ ಹೊಸ ಸುಧಾರಣೆಯಾಗಲಿದೆ ಎಂದುಕೊಂಡಿದ್ದೆವು. ಆದರೆ ಇನ್ನೂ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಯಾವುದಕ್ಕೂ ಸಚಿವರು ಬಂದಿಲ್ಲ. ಬರ ಘೋಷಣೆ ಮಾಡದೆ ಕೇಂದ್ರ ಸರ್ಕಾರಕ್ಕೆ 10,000 ಕೋಟಿ ರೂ. ಗೆ ಬೇಡಿಕೆ ಇಡಲಾಗಿದೆ. ಮೊದಲು ಬರ ಅಧ್ಯಯನ ಮಾಡಿ ವರದಿ ರೂಪಿಸಿ, ಕೇಂದ್ರಕ್ಕೆ ಕಳುಹಿಸಬೇಕು. ನಂತರ ಅಧಿಕಾರಿಗಳನ್ನು ಕಳುಹಿಸಿ ಅಧ್ಯಯನ ಮಾಡಿ ಎಲ್ಲ ರಾಜ್ಯಗಳಿಗೆ ಒಟ್ಟಾಗಿ ಪರಿಹಾರ ನೀಡಲಾಗುತ್ತದೆ. ಈ ಪ್ರಕ್ರಿಯೆಯ ಬಗ್ಗೆ ಅರಿವಿದ್ದರೂ ಕಾಂಗ್ರೆಸ್ ಸರ್ಕಾರ ಕ್ರಮ ಕೈಗೊಂಡಿಲ್ಲ. ಬರ ಘೋಷಣೆ ಮಾಡಿದರೆ ಮಾತ್ರ ವಿಮಾಕಂಪನಿಗಳು ಮುಂದೆ ಬರುತ್ತವೆ ಎಂದರು.

# ತಾಲೂಕು ಆಸ್ಪತ್ರೆ, ಸಮುದಾಯ ಕೇಂದ್ರಗಳ ಸಂಪೂರ್ಣ ಡಿಜಿಟಲೀಕರಣ

## ಆರೋಗ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆಗೆ ಮಹತ್ವದ ಹೆಜ್ಜೆ: ಸಚಿವ ಯು.ಟಿ. ಖಾದರ್



**ಮಂಗಳೂರು, ಜು.30:** ರಾಜ್ಯದ ಆರೋಗ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆ ತರುವ ನಿಟ್ಟಿನಲ್ಲಿ ರಾಜ್ಯದ 183 ತಾಲೂಕು ಆಸ್ಪತ್ರೆಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳನ್ನು ಸಂಪೂರ್ಣವಾಗಿ ಡಿಜಿಟಲೀಕರಣ ಗೊಳಿಸಲಾಗುವುದು. ಹಾಗೂ ಹೋಟೆಲ್‌ಗಳಲ್ಲಿ ಗ್ರಾಹಕರಿಗೆ ಬಿಸಿ ನೀರು ಕೊಡುವಂತೆ ಆದೇಶಿಸಲಾಗುವುದು ಎಂದು ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಪ್ರಕಟಿಸಿದ್ದಾರೆ.

ಇಂದಿನ ಆಧುನಿಕ ಹಾಗೂ ತಂತ್ರಜ್ಞಾನದ ಯುಗದಲ್ಲಿ ಆರೋಗ್ಯ ಇಲಾಖೆಯನ್ನು ಕಾಗದರಹಿತ ಹಾಗೂ ಡಿಜಿಟಲ್ ವ್ಯವಸ್ಥೆಗೆ ಒಳಪಡಿಸುವುದು ಸರ್ಕಾರದ ಮುಖ್ಯ ಉದ್ದೇಶವಾಗಿದೆ. ರಾಜ್ಯದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ತಾಲೂಕು ಆಸ್ಪತ್ರೆಗಳಿಗೆ ಹೈ–ಸ್ಪೀಡ್ ಬ್ರಾಡ್‌ಬ್ಯಾಂಡ್ ಇಂಟರ್ನೆಟ್ ಸಂಪರ್ಕ ಕಲ್ಪಿಸಲಾಗುತ್ತಿದೆ. ಇಂಟರ್ನೆಟ್ ಸಂಪರ್ಕವಿಲ್ಲದೆ ಆಸ್ಪತ್ರೆಗಳ ಡಿಜಿಟಲೀಕರಣ ಸಾಧ್ಯವಿಲ್ಲದಿರುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದರು. ಪ್ರಾಯೋಗಿಕವಾಗಿ 40 ಆಸ್ಪತ್ರೆಗಳಲ್ಲಿ ಸಾಫ್ಟ್‌ವೇರ್ ಅಳವಡಿಸಲಾಗಿದ್ದು, ಇದನ್ನು ಸದ್ಯದಲ್ಲೇ 183 ತಾಲೂಕು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ವಿಸ್ತರಿಸಲಾಗುವುದು. ನಾಲ್ಕು ವಿಭಿನ್ನ ಕಂಪನಿಗಳಿಗೆ ಪ್ರಾಯೋಗಿಕ ಚಾಲನೆಗೆ ಅವಕಾಶ ನೀಡಲಾಗಿದ್ದು, ಇದರಲ್ಲಿ ಅತ್ಯುತ್ತಮವಾದ ಮಾದರಿಯನ್ನು ಮುಕ್ತ ಟೆಂಡರ್ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.

### ರೋಗಿಗಳ ಹೆಲ್ತ್ ಟ್ರ್ಯಾಕಿಂಗ್

ರೋಗಿ ಒಮ್ಮೆ ಆಸ್ಪತ್ರೆಗೆ ಬಂದರೆ ಅವರ ಬಿಪಿ, ಶುಗರ್, ವೈದ್ಯಕೀಯ ಇತಿಹಾಸ, ಲ್ಯಾಬ್ ವರದಿಗಳು ಹಾಗೂ ಔಷಧಿಗಳ ವಿವರ ಡಿಜಿಟಲ್ ರೂಪದಲ್ಲಿ ಶೇಖರಣೆಯಾಗುತ್ತದೆ. ಮುಂದೆ ರೋಗಿ ಯಾವುದೇ ಆಸ್ಪತ್ರೆಗೆ ಹೋದರೂ ಅವರ ಸಂಪೂರ್ಣ ವೈದ್ಯಕೀಯ ಇತಿಹಾಸ ವೈದ್ಯರಿಗೆ ಲಭ್ಯವಾಗಲಿದೆ ಎಂದು ಯು.ಟಿ. ಖಾದರ್ ತಿಳಿಸಿದರು. ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸೆ ಪಡೆದು ಡಿಸ್ಚಾರ್ಜ್ ಆಗುವಾಗ ರೋಗಿಗಳಿಗೆ ಝೀರೋ ಬಿಲ್' ನೀಡಲಾಗುವುದು.

ಇದರಿಂದ ಸರ್ಕಾರ ತಮ್ಮ ಚಿಕಿತ್ಸೆಗೆ ಎಷ್ಟು ವೆಚ್ಚ ಮಾಡಿದೆ ಎಂಬ ಅರಿವು ರೋಗಿಗಳಿಗೆ ಸಿಗುತ್ತದೆ ಹಾಗೂ ವ್ಯವಸ್ಥೆಯಲ್ಲಿ ಪಾರದರ್ಶಕತೆ ಬರಲಿದೆ ಎಂದು ಹೇಳಿದರು.

ವೈದ್ಯರ ಅಭಾವವಿರುವ ತಾಲೂಕು ಮತ್ತು ಸಿಎಚ್‌ಸಿ ಮಟ್ಟದ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಉತ್ತಮ ತುರ್ತು ಚಿಕಿತ್ಸೆ ಸಿಗಲು ನೂತನ ವ್ಯವಸ್ಥೆಗಳನ್ನು ಜಾರಿಗೆ ತರಲಾಗುತ್ತಿದೆ. ಗ್ರಾಮೀಣ ಆಸ್ಪತ್ರೆಗಳಲ್ಲಿರುವ ನರ್ಸ್‌ಗಳಿಗೆ ಸೂಕ್ತ ತರಬೇತಿ ನೀಡಿ, ಉನ್ನತ ಮಟ್ಟದ ತಜ್ಞ ವೈದ್ಯರೊಂದಿಗೆ ಟೆಲಿ–ಸಂಪರ್ಕ ಏರ್ಪಡಿಸಿ ಐಸಿಯು ಚಿಕಿತ್ಸೆ ನೀಡುವ ವ್ಯವಸ್ಥೆ ಮಾಡಲಾಗುವುದು ಎಂದರು.

### ಆಯುಷ್ ಚಿಕಿತ್ಸೆಗಾಗಿ ಉಳ್ಳಾಲ ಮಾದರಿ

ಆಲೋಪತಿ ಚಿಕಿತ್ಸೆ ಜೊತೆಗೆ ಸಾರ್ವಜನಿಕರಿಗೆ ಆಯುರ್ವೇದ, ಯೋಗ, ಯುನಾನಿ, ಸಿದ್ಧ ಹಾಗೂ ಹೋಮಿಯೋಪತಿ (ಆಯುಷ್) ಚಿಕಿತ್ಸೆ ಸಿಗುವಂತೆ 'ಉಳ್ಳಾಲ ಮಾದರಿ'ಯನ್ನು ರಾಜ್ಯಾದ್ಯಂತ ಜಾರಿಗೆ ತರಲಾಗುವುದು. ಇನ್ಮುಂದೆ ಹೊಸದಾಗಿ ನಿರ್ಮಿಸುವ ಎಲ್ಲಾ ತಾಲೂಕು ಆಸ್ಪತ್ರೆಗಳ ಕಟ್ಟಡ ಅಂದಾಜು ಪಟ್ಟಿಯಲ್ಲೇ ಆಯುಷ್ ಆಸ್ಪತ್ರೆ ಕಟ್ಟಡವನ್ನು ಕೂಡ ಸೇರಿಸಿ ಒಂದೇ ಕ್ಯಾಂಪಸ್ನಲ್ಲಿ ನಿರ್ಮಿಸಲಾಗುವುದು ಎಂದು ಯು.ಟಿ. ಖಾದರ್ ಹೇಳಿದರು. ಚಿಕಿತ್ಸೆ ಪಡೆಯುವುದು ರೋಗಿಯ ಹಕ್ಕು, ಅವರಿಗೆ ಬೇಕಾದ ವೈದ್ಯಕೀಯ ಪದ್ಧತಿಯನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶ ಇರಬೇಕು ಎಂಬುದು ಸರ್ಕಾರದ ಧೋರಣೆಯಾಗಿದೆ ಎಂದರು.

ಹೋಟೆಲ್‌ಗಳಲ್ಲಿ ಕಡ್ಡಾಯವಾಗಿ ಬಿಸಿ ನೀರು ಪೂರೈಸಲು ಶೀಘ್ರ ಆದೇಶ

ಮಳೆಗಾಲ ಹಾಗೂ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಹೋಟೆಲ್‌ಗಳು, ರೆಸ್ಟೋರೆಂಟ್ಗಳಲ್ಲಿ ಕಡ್ಡಾಯವಾಗಿ ಕುಡಿಯಲು ಬಿಸಿ ನೀರು ಪೂರೈಸುವಂತೆ ಶೀಘ್ರವೇ ಅಧಿಕೃತ ಆದೇಶ ಹೊರಡಿಸಲಾಗುವುದು. ಆಹಾರ ಪದಾರ್ಥಗಳಲ್ಲಿ ಅಜಿನೊಮೋಟೊ ಹಾಗೂ ಅಪಾಯಕಾರಿ ಕೆಮಿಕಲ್ ಕೃತಕ ಬಣ್ಣ ಬಳಕೆಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಯು.ಟಿ. ಖಾದರ್ ತಿಳಿಸಿದರು.

### ವಾಷಿಂಗ್ಟನ್‌ನಲ್ಲಿ ಮಿಲ್ಲೆಟ್ ಕಾನ್‌ಕ್ಲೇವ್

ಶಿಕಾಗೋದ ಕೌನ್ಸಿಲ್ ಜನರಲ್ ಅವರೊಂದಿಗೆ ಸಭೆ ನಡೆಸಲಾಗಿದ್ದು, ಭಾರತೀಯ ರೈತರು ಬೆಳೆಯುವ 'ಸಿರಿಧಾನ್ಯ'ಗಳಿಗೆ ವಿದೇಶಿ ಮಾರುಕಟ್ಟೆ ಕಲ್ಪಿಸುವ ಕುರಿತು ಚರ್ಚಿಸಲಾಗಿದೆ. ವಾಷಿಂಗ್ಟನ್ನಲ್ಲಿ ನಡೆಯಲಿರುವ ಮಿಲೆಟ್ ಕಾನ್‌ಕ್ಲೇವ್‌ನಲ್ಲಿ ನಮ್ಮ ರೈತರಿಗೆ ಮಾರುಕಟ್ಟೆ ಅವಕಾಶ ಸಿಗಲಿದೆ ಎಂದರು.ಅಮೆರಿಕದಲ್ಲಿ ಹೆಲ್ತ್ ಕೇರ್ ವ್ಯವಸ್ಥೆ ವೆಚ್ಚದಾಯಕವಾಗಿದೆ, ಆದರೆ ಭಾರತದಲ್ಲಿ ಅತ್ಯಂತ ಕಡಿಮೆ ವೆಚ್ಚದಲ್ಲಿ ವಿಶ್ವದರ್ಜೆಯ ವೈದ್ಯಕೀಯ ಚಿಕಿತ್ಸೆ ಸಿಗುತ್ತಿರುವುದರಿಂದ ಮೆಡಿಕಲ್ ಟೂರಿಸಂಗೆ ಭಾರಿ ಅವಕಾಶವಿದೆ: ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಕಡ್ಡಾಯವಾಗಿ ಎಚ್‌ಐವಿ ಪರೀಕ್ಷೆ ಮಾಡಿಸಬೇಕು ಎನ್ನುವ ಯಾವುದೇ ಕಡ್ಡಾಯ ನಿಯಮವಿಲ್ಲ ಎಂದು ಯು.ಟಿ. ಖಾದರ್ ಸ್ಪಷ್ಟಪಡಿಸಿದರು.

# ಗುರುವಂದನಾ ಕಾರ್ಯಕ್ರಮ ರಾಜೇಶ್ವರಿ ಭಟ್‌ಗೆ ಸನ್ಮಾನ



**ನವದೆಹಲಿ, ಜು.30:** ಶಿಕ್ಷಕಿ, ನೃತ್ಯಗಾರ್ತಿ, ನೃತ್ಯ ಸಂಯೋಜಕಿ, ಸಂಗೀತಗಾರ್ತಿ ಹೀಗೆ ಬಹುಮುಖ ಕಲಾವಿದೆಯಾಗಿ ಜನಮನ್ನಣೆ ಪಡೆದ ಗುರುವರ್ಯರಾದ ರಾಜೇಶ್ವರಿ ಭಟ್ ಅವರಿಗೆ ಗುರುವಂದನಾ ಕಾರ್ಯಕ್ರಮವನ್ನು ಅರ್ಪಿಸಲಾಯಿತು.

ನವದೆಹಲಿಯ ಮಯೂರ್ ವಿಹಾರ್‌ನಲ್ಲಿರುವ ರಾಜೇಶ್ವರಿ ಭಟ್ ಸ್ವಗೃಹದಲ್ಲಿ ಹಮ್ಮಿಕೊಂಡಿದ್ದ ಈ ಕಾರ್ಯಕ್ರಮದಲ್ಲಿ ಗುರುವಂದನೆಯನ್ನು ಸ್ವೀಕರಿಸಿ ಮಾತನಾಡಿದ ಅವರು ವಿದ್ಯೆಯ ಜೊತೆಗೆ ಬದುಕಿಗೆ ಮೌಲ್ಯಗಳನ್ನು ಧಾರೆಯೆರುವ ಗುರುವಿಗೆ ಭಾರತೀಯ ಸಂಸ್ಕೃತಿಯಲ್ಲಿ ಮಹತ್ವದ ಸ್ಥಾನವಿದೆ.

ಜೀವನದಲ್ಲಿ ಹೊಸ ಪರಿವರ್ತನೆಗೆ, ಅಂತರಂಗ ಶುದ್ಧಿಗೆ ಗುರುವಿನ ಚಿಂತನೆ ಅತ್ಯಗತ್ಯವಾಗಿದೆ. ಗುರು ಎಂಬುವುದು ಕೇವಲ ಪದವಿಯಲ್ಲ, ಅದೊಂದು ಸಿದ್ಧಿ. ಗುರುವಿನ ಆಶೀರ್ವಾದವಿದ್ದರೆ ವ್ಯಕ್ತಿಯು ಉನ್ನತಿಯ ಕಡೆಗೆ ಸಾಗುತ್ತಾನೆ ಎಂದರು.

ಮೂಲತಃ ಕಾಸರಗೋಡಿನವರಾದ ಇವರು ಕನ್ನಡ, ತುಳು, ಮಲಯಾಳಂ, ಮರಾಠಿ, ತಮಿಳು, ತೆಲುಗು, ಹಿಂದಿ, ಇಂಗ್ಲಿಷ್ ಭಾಷೆಗಳನ್ನು ಬಲ್ಲ ಬಹುಭಾಷಾ ಪ್ರವೀಣೆ. ಕೆಎಸ್‌ಎಸ್‌ಇಬಿ ಯಿಂದ ಕರ್ನಾಟಕ ಸಂಗೀತದಲ್ಲಿ ಹಾಗೂ ಭರತನಾಟ್ಯದಲ್ಲಿ ವಿದ್ವತ್ ಪದವಿಗಳನ್ನು ಪಡೆದಿದ್ದಾರೆ. ಭಟ್ ಅವರು ಯಕ್ಷಗಾನದಲ್ಲಿ ಅಭಿನಯ ಮತ್ತು ಭರತನಾಟ್ಯ ಪ್ರದರ್ಶನ ನೀಡಿರುವುದಲ್ಲದೆ ಉತ್ತಮ ನೃತ್ಯ ಶಿಕ್ಷಕಿಯಾಗಿ ಸಾಧನೆ ಮಾಡಿದ್ದಾರೆ. ಹರಿಕಥೆಯಲ್ಲಿ ತಮ್ಮ ಅಸಾಧಾರಣ ಕೌಶಲ್ಯವನ್ನು ಪ್ರದರ್ಶಿಸುತ್ತಾ ಸುಮಾರು 200ಕ್ಕೂ ಹೆಚ್ಚು ಹರಿಕಥೆಗಳನ್ನು ನಡೆಸಿಕೊಟ್ಟ ಅಪೂರ್ವ ಸಾಧಕರು. ಇವರು ದೇಶದಾದ್ಯಂತ ಹಲವಾರು ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದಾರೆ. ಕಳೆದ 30 ವರ್ಷಗಳಿಂದ ದೆಹಲಿಯಲ್ಲಿ ವಾಸವಾಗಿರುವ ಇವರು ಪ್ರಸ್ತುತ ಮಯೂರ್ ವಿಹಾರ್‌ನಲ್ಲಿರುವ ತಮ್ಮ ತರಬೇತಿ ಸಂಸ್ಥೆಯನ್ನು ನಡೆಸುತ್ತಿದ್ದಾರೆ. ಈ ತರಬೇತಿ ಕೇಂದ್ರದಲ್ಲಿ 75 ವಿದ್ಯಾರ್ಥಿಗಳು ಭರತನಾಟ್ಯ ಮತ್ತು ಕರ್ನಾಟಕ ಶಾಸ್ತ್ರೀಯ ಸಂಗೀತ ಅಭ್ಯಾಸ ಮಾಡುತ್ತಿದ್ದಾರೆ.

ಈವರೆಗೆ 3000ಕ್ಕೂ ಹೆಚ್ಚು ವಿದ್ಯಾರ್ಥಿಗಳು ಇವರಿಂದ ತರಬೇತಿ ಪಡೆದಿದ್ದಾರೆ. ತಮ್ಮ ಕಲಾಸೇವೆಗೆ ಕರ್ನಾಟಕ ಶಿರೋಮಣಿ, ಗಾನ ಸರಸ್ವತಿ, ಕಲಾರತ್ನ, ನೃತ್ಯ ಸೇವಾಮಣಿ, ಕಲಾ ತಿಲಕ, ಕಲಾ ಭೂಷಣ, ವಿಶಿಷ್ಟ ಕನ್ನಡಿಗ ಮುಂತಾದ ಪ್ರಶಸ್ತಿಗಳನ್ನು ಪಡೆದಿದ್ದಾರೆ.

ನೃತ್ಯ ಶಿಕ್ಷಕಿ ಹರ್ಷಿತಾ ಕುಶಾಲಪ್ಪ ಗುರುಪೂಜೆ ನಡೆಸಿಕೊಟ್ಟರು.

ಶಿಕ್ಷಕ ನಾಗರಾಜ್ ಎಂ. ಸ್ವಾಗತಿಸಿದರು. ರಂಜಿತಾ ಆರ್. ಸನ್ಮಾನಪತ್ರ ವಾಚಿಸಿದರು., ಎಚ್.ಎಸ್. ತೇಲಿ ವಂದಿಸಿದರು. ಜ್ಯೋತಿ ಎಸ್. ಪೊದ್ದಾರ್, ಲಾವಣ್ಯ ಬಸವರಾಜ್, ಶೋಭಾ ಎಚ್. ತೇಲಿ, ಶೇಖರ್ ಎಂ. ಸಹಕರಿಸಿದರು. ಅರವಿಂದ ಬಿಜೈ ಕಾರ್ಯಕ್ರಮ ನಿರೂಪಿಸಿದರು.

# ಇ20 ಪೆಟ್ರೋಲ್ ಬಳಕೆಯಿಂದ ಹಳೇ ವಾಹನಗಳಿಗೆ ಹಾನಿ ಸಾಧ್ಯತೆ: ಗಡ್ಕರಿ

**ನವದೆಹಲಿ, ಜು. 30:** 2005 ರಿಂದ 2016ರ ನಡುವೆ ತಯಾರಾದ ಬಿಎಸ್–3 ವಾಹನಗಳಲ್ಲಿ ಇ20 (ಎಥೆನಾಲ್ 20) ಪೆಟ್ರೋಲ್ ಬಳಸಿದಾಗ, ಆ ವಾಹನಗಳ ಕೆಲವು ರಬ್ಬರ್ ಬಿಡಿಭಾಗಗಳು ಹಾಗೂ ಗ್ಯಾಸ್ಕೆಟ್‌ಗಳನ್ನು ಬದಲಾಯಿಸುವ ಅಗತ್ಯ ಉಂಟಾಗಬಹುದು. ಆದರೆ, ಈ ಮಿಶ್ರಿತ ಇಂಧನ ಬಳಕೆಯಿಂದ ವಾಹನದ ಒಟ್ಟಾರೆ ಕಾರ್ಯಕ್ಷಮತೆಯ ಮೇಲೆ ಯಾವುದೇ ದೊಡ್ಡ ಹಾನಿಕಾರಕ ಪರಿಣಾಮ ಬೀರುವುದಿಲ್ಲ ಎಂದು ಅಧ್ಯಯನಗಳಿಂದ ತಿಳಿದುಬಂದಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಸಚಿವ ನಿತಿನ್ ಗಡ್ಕರಿ ಬುಧವಾರ ರಾಜ್ಯಸಭೆಗೆ ಮಾಹಿತಿ ನೀಡಿದ್ದಾರೆ.



ಪ್ರಶ್ನೆಯೊಂದಕ್ಕೆ ಉತ್ತರಿಸಿದ ಗಡ್ಕರಿ, ಇಂಡಿಯನ್ ಆಯಿಲ್ ಕಾರ್ಪೊರೇಷನ್ , ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಪೆಟ್ರೋಲಿಯಂ, ಸೊಸೈಟಿ ಆಫ್ ಇಂಡಿಯನ್ ಆಟೋಮೊಬೈಲ್ ಮ್ಯಾನುಫ್ಯಾಕ್ಚರರ್ಸ್ ಮತ್ತು ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ ನಡೆಸಿದ ಅಧ್ಯಯನಗಳ ಪ್ರಕಾರ, ಬಿಎಸ್–6 ವಾಹನಗಳಲ್ಲಿ ಇ20 ಇಂಧನ ಬಳಸಿ ಪರೀಕ್ಷಿಸಿದಾಗಲೂ ಅವು ಹೊರಸೂಸುವಿಕೆ ಮಾನದಂಡಗಳನ್ನು ಪೂರೈಸುತ್ತಿರುವುದು ಕಂಡುಬಂದಿದೆ ಎಂದು ತಿಳಿಸಿದರು.

ಕಾರು ಹಾಗೂ ದ್ವಿಚಕ್ರ ವಾಹನಗಳ ಎಂಜಿನ್‌ಗಳನ್ನು ಮಾರ್ಪಡಿಸುವ ಯಾವುದೇ ಅಗತ್ಯವಿಲ್ಲ ಎಂಬುದನ್ನು ಅಧ್ಯಯನಗಳು ದೃಢಪಡಿಸಿವೆ ಎಂದು ಗಡ್ಕರಿ ಸ್ಪಷ್ಟಪಡಿಸಿದರು. ಹಳೆಯ ವಾಹನಗಳಲ್ಲಿ ಇ20 ಇಂಧನ ಬಳಸಿದಾಗಲೂ ಅವುಗಳ ಕಾರ್ಯಕ್ಷಮತೆಯಲ್ಲಿ ಗಮನಾರ್ಹ ವ್ಯತ್ಯಾಸಗಳೇನೂ ಕಂಡುಬಂದಿಲ್ಲ. ಅಲ್ಲದೆ, ಅವುಗಳಲ್ಲಿ ಅಸಹಜ ಸವೆತಗಳಾಗಲೀ ಆಗಿಲ್ಲ. ವಾಹನ ಚಾಲನೆ, ಸ್ಟಾರ್ಟ್ ಮಾಡುವ ಪ್ರಕ್ರಿಯೆ, ಲೋಹ ಹಾಗೂ ಪ್ಲಾಸ್ಟಿಕ್ ಹೊಂದಾಣಿಕೆಯಂತಹ ನಿಯತಾಂಕಗಳಲ್ಲಿ ಯಾವುದೇ ಸಮಸ್ಯೆಗಳು ವರದಿಯಾಗಿಲ್ಲ, ಎಂದು ಅವರು ಹೇಳಿದರು.

ಆದಾಗ್ಯೂ, 2016ಕ್ಕೂ ಮೊದಲು ತಯಾರಾದ ಬಿಎಸ್–3 ವಾಹನಗಳ ಮೇಲಿನ ಪರೀಕ್ಷೆಗಳು, ಅವುಗಳ ಕೆಲವು ರಬ್ಬರ್ ಬಿಡಿಭಾಗಗಳು ಹಾಗೂ ಗ್ಯಾಸ್ಕೆಟ್ಗಳಿಗೆ ಬದಲಾವಣೆಯ ಅಗತ್ಯವಿರಬಹುದು ಎಂಬುದನ್ನು ಸೂಚಿಸಿವೆ ಎಂದು ಸಚಿವರು ವಿವರಿಸಿದರು.

ಇದೇ ವೇಳೆ ಮೈಲೇಜ್ ಕಡಿತದ ಕುರಿತು ಪ್ರತಿಕ್ರಿಯಿಸಿರುವ ಸರ್ಕಾರ, ವಾಹನದ ಮೈಲೇಜ್ ಇಳಿಕೆಯು ವಾಹನ ಚಲಾಯಿಸುವ ಶೈಲಿ, ಆಯಿಲ್ ಮತ್ತು ಏರ್–ಫಿಲ್ಟರ್ ಬದಲಾವಣೆಯಂತಹ ನಿರ್ವಹಣಾ ಕ್ರಮಗಳು, ಟೈರ್ ಒತ್ತಡ, ವೀಲ್ ಅಲೈನ್ಮೆಂಟ್ ಮತ್ತು ಹವಾನಿಯಂತ್ರಣದ (ಎಸಿ) ಬಳಕೆಯನ್ನು ಅವಲಂಬಿಸಿರುತ್ತದೆ ಎಂದು ಸ್ಪಷ್ಟಪಡಿಸಿದೆ.

# ದೇಶೀಯ ರಫ್ತುದಾರರಿಗೆ ಸ್ಪಷ್ಟ ಪ್ರಯೋಜನ ದೊರೆತ ನಂತರ ಅಮೆರಿಕ ಜೊತೆ ವ್ಯಾಪಾರ ಒಪ್ಪಂದ ಅಂತಿಮ: ಕೇಂದ್ರ ಸಚಿವ ಗೋಯಲ್ ಸ್ಪಷ್ಟನೆ

ನವದೆಹಲಿ, ಜುಲೈ 30 : ಸ್ಪರ್ಧಾತ್ಮಕ ರಾಷ್ಟ್ರಗಳಿಗಿಂತ ದೇಶೀಯ ರಫ್ತುದಾರರಿಗೆ ಸ್ಪಷ್ಟ ಪ್ರಯೋಜನವನ್ನು ಪಡೆದರೆ ಮಾತ್ರ ಭಾರತ ಅಮೆರಿಕದೊಂದಿಗೆ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುತ್ತದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಬುಧವಾರ ಹೇಳಿದ್ದಾರೆ. ನವದೆಹಲಿ ಯಾವುದೇ ಗಡುವಿನ ವಿರುದ್ಧ ಕೆಲಸ ಮಾಡುತ್ತಿಲ್ಲ ಮತ್ತು ಭಾರತದ ದೀರ್ಘಕಾಲೀನ ಆರ್ಥಿಕ ಹಿತಾಸಕ್ತಿಗಳನ್ನು ಪೂರೈಸದ ಹೊರತು ಒಪ್ಪಂದಕ್ಕೆ ಪ್ರವೇಶಿಸುವುದಿಲ್ಲ ಎಂದು ಅವರು ಒತ್ತಿ ಹೇಳಿದರು. ಪ್ರತಿಯೊಂದು ಮುಕ್ತ ವ್ಯಾಪಾರ ಒಪ್ಪಂದವು ಭಾರತೀಯ ವ್ಯವಹಾರಗಳಿಗೆ ಅರ್ಥಪೂರ್ಣ ಅವಕಾಶಗಳನ್ನು ಸೃಷ್ಟಿಸಬೇಕು, ಮಾರುಕಟ್ಟೆ ಪ್ರವೇಶವನ್ನು ಸುಧಾರಿಸಬೇಕು



ಮತ್ತು ವಿದೇಶಿ ಮಾರುಕಟ್ಟೆಗಳಲ್ಲಿ ದೇಶದ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಬೇಕು ಎಂದು ಅವರು ಹೇಳಿದರು. ಸಚಿವರ ಪ್ರಕಾರ, ವ್ಯಾಪಾರ ಮಾತುಕತೆಗಳು ಸಮಯಸೂಚಿಗಳಿಗಿಂತ ರಾಷ್ಟ್ರೀಯ ಹಿತಾಸಕ್ತಿಯಿಂದ ಮಾರ್ಗದರ್ಶಿಸಲ್ಪಡುತ್ತವೆ. ಒಂದು ಕಾರ್ಯಕ್ರಮದ ಹೊರತಾಗಿ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಅವರು, ಪ್ರಸ್ತಾವಿತ ಭಾರತ–ಯುಎಸ್ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ (ಬಿಟಿಎ) ಮೊದಲ ಕಂತು ಜಾರಿಗೆ ಬರಲು ಸಿದ್ಧವಾಗಿದೆ ಎಂದು ಹೇಳಿದರು. ಯುಎಸ್ ಸೆನೆಟ್ ರಷ್ಯಾದ ಇಂಧನ ಆದಾಯವನ್ನು ಗುರಿಯಾಗಿಸಿಕೊಂಡು ದ್ವಿಪಕ್ಷೀಯ ನಿರ್ಬಂಧಗಳ ಮಸೂದೆಯನ್ನು ಮಂಡಿಸಿದಾಗ ಅವರ ಹೇಳಿಕೆಗಳು ಬಂದವು. ಪ್ರಸ್ತಾವಿತ ಶಾಸನದಲ್ಲಿನ ಒಂದು ನಿಬಂಧನೆಯು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಭಾರತ ಸೇರಿದಂತೆ ರಷ್ಯಾದ ತೈಲ ಮತ್ತು ಅನಿಲವನ್ನು ಖರೀದಿಸುವುದನ್ನು ಮುಂದುವರಿಸುವ ದೇಶಗಳಿಂದ ಆಮದು ಮಾಡಿಕೊಳ್ಳುವ ಮೇಲೆ ಶೇ.100 ರಷ್ಟು ಸುಂಕ ವಿಧಿಸಲು ಅವಕಾಶ ನೀಡುತ್ತದೆ.

# ಪ್ರಶ್ನೆಪತ್ರಿಕೆ ಸೋರಿಕೆ ವಿರೋಧಿ ಮಸೂದೆ ಸಂಸತ್ತಿನ ಪರೀಕ್ಷೆಯಲ್ಲಿ ಉತ್ತೀರ್ಣ, ರಾಜ್ಯಸಭೆಯಲ್ಲಿ ಅಂಗೀಕಾರ

ನವದೆಹಲಿ, ಜುಲೈ 30: ಸಂಸತ್ತು ಗುರುವಾರ ಸಾರ್ವಜನಿಕ ಪರೀಕ್ಷೆಗಳು (ಅನ್ಯಾಯಯುತ ವಿಧಾನಗಳ ತಡೆಗಟ್ಟುವಿಕೆ) ತಿದ್ದುಪಡಿ ಮಸೂದೆ, 2026 ಅನ್ನು ಅಂಗೀಕರಿಸಿತು, ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಚರ್ಚೆಗೆ ಉತ್ತರಿಸಲು ಎದ್ದ ತಕ್ಷಣ ಕಾಂಗ್ರೆಸ್ ಸೇರಿದಂತೆ ಕೆಲವು ವಿರೋಧ ಪಕ್ಷಗಳ ಸಭಾತ್ಯಾಗದ ನಡುವೆಯೂ ರಾಜ್ಯಸಭೆಯು ಧ್ವನಿ ಮತದ ಮೂಲಕ ಶಾಸನವನ್ನು ಅಂಗೀಕರಿಸಿತು.



ಕೇಂದ್ರ ಸಚಿವ ಜೆ.ಪಿ. ನಡ್ಡಾ ಅವರು ವಿರೋಧ ಪಕ್ಷದ ಅತ್ಯಂತ ಬೇಜವಾಬ್ದಾರಿಯುತ ವರ್ತನೆಯನ್ನು ಕರೆದರು, ಇದು "ಸಮಸ್ಯಾತ್ಮಕವಲ್ಲ" ಎಂದು ಅವರು ಹೇಳಿದರು. ಚರ್ಚೆಗೆ ಉತ್ತರಿಸಿದ ಜಿತೇಂದ್ರ ಸಿಂಗ್, ವಿರೋಧ ಪಕ್ಷವು 2014 ರಿಂದ ನಡೆದಿದೆ ಎಂದು ಹೇಳಲಾದ ಪ್ರಶ್ನೆ ಪತ್ರಿಕೆ ಸೋರಿಕೆಯ ಸಂಖ್ಯೆಯನ್ನು ದೃಢೀಕರಿಸಲು ಸಾಧ್ಯವಾಗಿಲ್ಲ ಎಂದು ಹೇಳಿದರು ಮತ್ತು ಅಂತಹ ಘಟನೆಗಳನ್ನು ತಡೆಗಟ್ಟಲು ಮತ್ತು ದೇಶದಲ್ಲಿ ಶಿಕ್ಷಣ ವ್ಯವಸ್ಥೆಯನ್ನು ಸುಧಾರಿಸಲು ಬಿಜೆಪಿ ನೇತೃತ್ವದ ಎನ್ಡಿಎ ಮಾಡಿದ ಪ್ರಯತ್ನಗಳನ್ನು ಪಟ್ಟಿ ಮಾಡಿದರು. "ವಾಸ್ತವವೆಂದರೆ, ಇದು ಪ್ರತಿಯೊಬ್ಬ ಪೋಷಕರು, ಪ್ರತಿಯೊಬ್ಬ ಕುಟುಂಬ ಮತ್ತು ಈ ದೇಶದ ಪ್ರತಿಯೊಬ್ಬ ನಾಗರಿಕರ ಪಾಲು ಹೊಂದಿರುವ ವಿಷಯವಾಗಿದೆ, ಏಕೆಂದರೆ ಈ ಚಿಕ್ಕಮಕ್ಕಳು ಪ್ರಧಾನಿ ಮೋದಿ ಅವರು ವಿಕಸಿತ ಭಾರತ 2047 ಎಂದು ವಿವರಿಸುವಲ್ಲಿ ನಮ್ಮ ದೊಡ್ಡ ಹೂಡಿಕೆಯಾಗಿದ್ದಾರೆ" ಎಂದು ಅವರು ಶಾಸನದ ಅರ್ಹತೆಯ ಕುರಿತು ಮಾತನಾಡುತ್ತಾ ಹೇಳಿದರು. ಆದರೆ, ಸದನದ ನಾಯಕ ಜೆ.ಪಿ. ನಡ್ಡಾ ಜಿ ಈಗಾಗಲೇ ಹೇಳಿದಂತೆ, ಆಕ್ಷೇಪಣೆಗಳನ್ನು ಎತ್ತುವಲ್ಲಿ ಹೆಚ್ಚು ದನಿಯೆತ್ತಿದ ಅನೇಕ ಗೌರವಾನ್ವಿತ ಸದಸ್ಯರು ತಮ್ಮ ಸಮಸ್ಯೆಗಳು ಮತ್ತು ಅಂಶಗಳಿಗೆ ಪ್ರತಿಕ್ರಿಯಿಸುವ ಸಮಯ ಬಂದಾಗ ಹೊರನಡೆಯಲು ಆಯ್ಕೆ ಮಾಡಿಕೊಂಡಿರುವುದು ದುರದೃಷ್ಟಕರ," ಎಂದು ಅವರು ಹೇಳಿದರು.

# ಬಿಜೆಪಿ ವಿರುದ್ಧ ಪ್ರಶಾಂತ್ ಕಿಶೋರ್ ಗಂಭೀರ ಆರೋಪ

**ಪಟನಾ,ಜು.30:** ಬಿಹಾರದ ಬಾಂಕಿಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತದಾನ ಆರಂಭಕ್ಕೆ ಕೆಲವೇ ಗಂಟೆಗಳಿರುವಾಗ ತೀವ್ರ ರಾಜಕೀಯ ಹೈಡ್ರಾಮಾ ಸೃಷ್ಟಿಯಾಗಿದೆ. ಜನ ಸುರಾಜ್ ಪಕ್ಷದ (ಜೆಎಸ್ಪಿ) ಸಂಸ್ಥಾಪಕ ಹಾಗೂ ಈ ಚುನಾವಣೆಯ ಬಾಂಕಿಪುರ ಅಭ್ಯರ್ಥಿಯೂ ಆಗಿರುವ ಪ್ರಶಾಂತ್ ಕಿಶೋರ್, ಆಡಳಿತಾರೂಢ ಬಿಜೆಪಿ ಸೂಚನೆಯಂತೆ ಬಿಹಾರ ಪೊಲೀಸರು ತಮ್ಮ 16ಕ್ಕೂ ಹೆಚ್ಚು ಬೆಂಬಲಿಗರನ್ನು ಕಾನೂನುಬಾಹಿರವಾಗಿ ವಶಕ್ಕೆ ಪಡೆದಿದ್ದಾರೆ ಎಂದು ಆರೋಪಿಸಿದ್ದಾರೆ.



ಬುಧವಾರ ತಡರಾತ್ರಿ ಪಟನಾದ ಜಕ್ಕನ್ಪುರ ಪೊಲೀಸ್ ಠಾಣೆಗೆ ತಮ್ಮ ಬೆಂಬಲಿಗರೊಂದಿಗೆ ಆಗಮಿಸಿದ ಪ್ರಶಾಂತ್ ಕಿಶೋರ್, ಠಾಣಾಧಿಕಾರಿ ಋತುರಾಜ್ ಕುಮಾರ್ ಸಿಂಗ್ ಅವರೊಂದಿಗೆ ತೀವ್ರ ವಾಗ್ವಾದ ನಡೆಸಿದ್ದಾರೆ. ನಮ್ಮ ಪಕ್ಷದ ಕಾರ್ಯಕರ್ತರನ್ನು ಅಕ್ರಮವಾಗಿ ವಶಕ್ಕೆ ಪಡೆದು, ಬೇರೆ ಬೇರೆ ಠಾಣೆಗಳಿಗೆ ಸ್ಥಳಾಂತರಿಸಲಾಗಿದೆ. ಅವರ ಬಗ್ಗೆ ಪೊಲೀಸರ ಬಳಿ ಯಾವುದೇ ದಾಖಲೆ ಅಥವಾ ಮಾಹಿತಿ ಇಲ್ಲ. ಒಂದು ವೇಳೆ ನಮ್ಮ ಕಾರ್ಯಕರ್ತರಿಗೆ ಏನಾದರೂ ಅನಾಹುತವಾದರೆ ಸಂಬಂಧಪಟ್ಟ ಅಧಿಕಾರಿಗಳೇ ನೇರ ಹೊಣೆಯಾಗಲಿದ್ದಾರೆ ಎಂದು ಕಿಶೋರ್ ಎಚ್ಚರಿಕೆ ಕೊಟ್ಟಿದ್ದರೆ. ಮತದಾನ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ತಮ್ಮ ಬೆಂಬಲಿಗರನ್ನು ಬಂಧನದಲ್ಲಿಟ್ಟುಕೊಳ್ಳಲು ಸರ್ಕಾರಿ ಯಂತ್ರವನ್ನು ದುರ್ಬಳಕೆ ಮಾಡಿ ಕೊಳ್ಳಲಾಗುತ್ತಿದೆ. ಉಪಚುನಾವಣೆಯಲ್ಲಿ ಸೋಲಿನ ಭೀತಿಯಿಂದ ಬಿಜೆಪಿ ಈ ತಂತ್ರ ಅನುಸರಿಸುತ್ತಿದೆ ಎಂದು ಆರೋಪಿಸಿದ್ದಾರೆ. ಇದೇ ವೇಳೆ, ಮಾಜಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಪ್ರಚಾರದ ವಿಡಿಯೋ ಎಐ–ನಿರ್ಮಿತ ನಕಲಿ ವಿಡಿಯೋ ಎಂದು ಕಿಶೋರ್ ನೀಡಿದ್ದ ಹೇಳಿಕೆಗೆ ಸಂಬಂಧಿಸಿದಂತೆ ಜೆಡಿಯು ನಾಯಕರು ಪ್ರಶಾಂತ್ ಕಿಶೋರ್ ವಿರುದ್ಧ ಪ್ರತ್ಯೇಕ ಪೊಲೀಸ್ ದೂರು ದಾಖಲಿಸಿದ್ದಾರೆ.

ಬಿಹಾರದ ಪಟನಾ ಜಿಲ್ಲೆಯ ಬಾಂಕಿಪುರ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿ ಶಾಸಕರಾಗಿದ್ದ ನಿತಿನ್ ನವೀನ್ ರಾಜೀನಾಮೆ ನೀಡಿ ರಾಜ್ಯಸಭೆಗೆ ಆಯ್ಕೆಯಾದ ಹಿನ್ನೆಲೆಯಲ್ಲಿ ತೆರವಾದ ಸ್ಥಾನಕ್ಕೆ ಉಪಚುನಾವಣೆ ನಡೆಯುತ್ತಿದೆ. ಜನ ಸುರಾಜ್ ಪಾರ್ಟಿಯಿಂದ ಪ್ರಶಾಂತ್ ಕಿಶೋರ್, ಬಿಜೆಪಿಯಿಂದ ನೀರಜ್ ಕುಮಾರ್ ಸಿನ್ಹಾ ಕಣದಲ್ಲಿದ್ದಾರೆ. ಸುಮಾರು 3.80 ಲಕ್ಷ ಮತದಾರರು ಇರುವ ಈ ಕ್ಷೇತ್ರದಲ್ಲಿ ಒಟ್ಟಾಗಿ 26 ಅಭ್ಯರ್ಥಿಗಳು ಕಣದಲ್ಲಿದ್ದಾರೆ. 1995ರಿಂದಲೂ ಬಿಜೆಪಿ ಹಿಡಿತದಲ್ಲಿರುವ ಈ ಕ್ಷೇತ್ರ, ಚುನಾವಣಾ ತಂತ್ರಜ್ಞ ಪ್ರಶಾಂತ್ ಕಿಶೋರ್ ಅವರ ಪ್ರತ್ಯಕ್ಷ ಸ್ಪರ್ಧೆಯಿಂದಾಗಿ ದೇಶದ ಗಮನ ಸೆಳೆದಿದೆ.

# ವಿರೋಧ ಪಕ್ಷದ ಪ್ರತಿಭಟನೆಯ ನಡುವೆಯೇ ಲೋಕಸಭೆಯಲ್ಲಿ ವಂದೇ ಮಾತರಂ ಮಸೂದೆ ಅಂಗೀಕಾರ, ಸದನ ಶುಕ್ರವಾರದವರೆಗೆ ಮುಂದೂಡಿಕೆ

**ನವದೆಹಲಿ, ಜು.30:** ರಾಷ್ಟ್ರೀಯ ಗೀತೆ ವಂದೇ ಮಾತರಂಗೆ ಅವಮಾನ ಮಾಡುವುದನ್ನು ಅಪರಾಧೀಕರಿಸುವ ಉದ್ದೇಶದಿಂದ 2026 ರ ರಾಷ್ಟ್ರೀಯ ಗೌರವಕ್ಕೆ ಅವಮಾನ ತಡೆ (ತಿದ್ದುಪಡಿ) ಮಸೂದೆಯನ್ನು ಲೋಕಸಭೆ ಗುರುವಾರ ಅಂಗೀಕರಿಸಿತು. ವಿರೋಧ ಪಕ್ಷದ ಸದಸ್ಯರು ದಿನವಿಡೀ ಪದೇ ಪದೇ ಕಲಾಪಗಳಿಗೆ ಅಡ್ಡಿಪಡಿಸಿದ ನಡುವೆಯೂ, ವಿರೋಧ ಪಕ್ಷದ ಸದಸ್ಯರು ನಿರಂತರವಾಗಿ ಘೋಷಣೆಗಳನ್ನು ಕೂಗುತ್ತಿದ್ದರೂ ಮಸೂದೆಯನ್ನು ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ಶಾಸನ ಅಂಗೀಕಾರವಾದ ಕೂಡಲೇ, ಶುಕ್ರವಾರ ಬೆಳಿಗ್ಗೆ 11 ಗಂಟೆಯವರೆಗೆ ಸದನವನ್ನು ಮುಂದೂಡಲಾಯಿತು. ಲೋಕಸಭೆಯು ಪ್ರಕ್ಷುಬ್ಧ ದಿನವನ್ನು ಕಂಡಿತು, ವಿರೋಧ ಪಕ್ಷದ ಸದಸ್ಯರು ತಮ್ಮ ಪ್ರತಿಭಟನೆಗಳನ್ನು ಮುಂದುವರಿಸಿದ್ದರಿಂದ ಮೂರು ಬಾರಿ ಕಲಾಪಗಳನ್ನು ಮುಂದೂಡಲಾಯಿತು. ಅಡ್ಡಿ ಆತಂಕಗಳ ನಡುವೆಯೂ, ಸರ್ಕಾರವು ತನ್ನ ಶಾಸಕಾಂಗ ವ್ಯವಹಾರವನ್ನು ಮುಂದುವರೆಸಿತು, ರಾಷ್ಟ್ರೀಯ ಗೌರವಕ್ಕೆ ಅವಮಾನ ತಡೆ (ತಿದ್ದುಪಡಿ) ಮಸೂದೆ, 2026 ಅನ್ನು ಕೈಗೆತ್ತಿಕೊಂಡಿತು. ಪ್ರತಿಭಟನಾ ನಿರತ ಸದಸ್ಯರು ಸೃಷ್ಟಿಸಿದ ಗದ್ದಲದ ನಡುವೆಯೇ ಮಸೂದೆಯನ್ನು ಧ್ವನಿ ಮತದ ಮೂಲಕಅಂಗೀಕರಿಸಲಾಯಿತು.

# ಡಿಎಂಕೆ ಪನ್ನೀರ್ ಸೆಲ್ವಂ ವಿದಾಯ?

**ಚೆನ್ನೈ, ಜು. 30:** ತಮಿಳುನಾಡು ರಾಜಕೀಯದಲ್ಲಿ ಮತ್ತೊಮ್ಮೆ ತಲ್ಲಣ ಸೃಷ್ಟಿಯಾಗಿದ್ದು, ಮಾಜಿ ಮುಖ್ಯಮಂತ್ರಿ ಓ. ಪನ್ನೀರ್ ಸೆಲ್ವಂ, ಡಿಎಂಕೆ ತೊರೆಯಲಿದ್ದಾರೆ ಎಂಬ ವದಂತಿಗಳು ದಟ್ಟವಾಗಿವೆ. ಕೆಲವೇ ವಾರಗಳ ಹಿಂದೆ ತಾವು ಪಕ್ಷ ಬಿಡುವ ಸುದ್ದಿಗಳನ್ನು ಓಪಿಎಸ್ ತಳ್ಳಿಹಾಕಿದ್ದರು. ಇದೀಗ ಅವರ ಆಪ್ತ ವಲಯದಿಂದ ಹೊರಬಿದ್ದಿರುವ ಮಾಹಿತಿ ಬೇರೆಯದೇ ಕಥೆ ಹೇಳುತ್ತಿದೆ. ಡಿಎಂಕೆ ಸೇರಿ ಆರು ತಿಂಗಳು ಕಳೆದರೂ ತಮಗಾಗಲಿ ಅಥವಾ ತಮ್ಮ ಮಗ ಓ.ಪಿ. ರವೀಂದ್ರನಾಥ್ ಅವರಿಗಾಗಲಿ ಯಾವುದೇ ಪ್ರಮುಖ ಜವಾಬ್ದಾರಿ ನೀಡದಿರುವ ಬಗ್ಗೆ ಓಪಿಎಸ್ ತೀವ್ರ ಅಸಮಾಧಾನಗೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸದ್ಯ ಡಿಎಂಕೆ ಶಾಸಕರಾಗಿರುವ ಓ. ಪನ್ನೀರ್ ಸೆಲ್ವಂಗೆ ತೇಣಿ ಲೋಕಸಭಾ ಕ್ಷೇತ್ರದಲ್ಲಿ ಯಾವುದೇ ಪ್ರಮುಖ ಜವಾಬ್ದಾರಿ ನೀಡಿಲ್ಲ. ಅಲ್ಲಿ ಹಾಲಿ ಡಿಎಂಕೆ ಸಂಸದ ತಂಗ ತಮಿಳುಸೆಲ್ವನ್ ಅವರದ್ದೇ ಪೂರ್ಣ ಪ್ರಮಾಣದ ಪ್ರಾಬಲ್ಯ ಮುಂದುವರಿದಿದ್ದು, ಓಪಿಎಸ್ ಅವರನ್ನು ಮೂಲೆಗುಂಪು ಮಾಡಲಾಗಿದೆ ಎಂಬ ಭಾವನೆ ಅವರ ಬೆಂಬಲಿಗರಲ್ಲಿದೆ. ಈ ನಿರ್ಲಕ್ಷ್ಯದಿಂದ ಬೇಸತ್ತಿರುವ ಓಪಿಎಸ್ ಮತ್ತು ಅವರ ಪುತ್ರ ರವೀಂದ್ರನಾಥ್, ಇದೀಗ ಡಿಎಂಕೆ ತೊರೆದು ಆಡಳಿತರೂಢ ಟಿವಿಕೆ ಪಕ್ಷವನ್ನು ಸೇರಲು ಚಿಂತನೆ ನಡೆಸುತ್ತಿದ್ದಾರೆ ಎನ್ನಲಾಗಿದೆ.

ತಿಂಗಳ ಆರಂಭದಲ್ಲಷ್ಟೇ ತಮ್ಮ ಪಕ್ಷಾಂತರದ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದ ಸುದ್ದಿಗಳನ್ನು ಖಂಡಿಸಿದ್ದ ಓಪಿಎಸ್, ಇವೆಲ್ಲವೂ ರಾಜಕೀಯ ವಿರೋಧಿಗಳು ಹರಡುತ್ತಿರುವ ವದಂತಿ ಎಂದು ಹೇಳಿದ್ದರು. ಡಿಎಂಕೆ ಪಕ್ಷವನ್ನು ತಮಿಳುನಾಡಿನ ದ್ರಾವಿಡ ರಾಜಕೀಯ ಚಳವಳಿಯ ಮಾತೃಪಕ್ಷ ಮತ್ತು ಮೂಲಸೆಲೆ ಎಂದು ಬಣ್ಣಿಸಿದ್ದ ಅವರು, ತಾವು ದ್ರಾವಿಡ ಸಿದ್ಧಾಂತಕ್ಕೆ ಬದ್ಧರಾಗಿರುವುದಾಗಿ ತಿಳಿಸಿದ್ದರು.

ನಾಯಕರು ಪಕ್ಷ ಬದಲಾಯಿಸುವ ಬಗ್ಗೆ ನಡೆಯುತ್ತಿರುವ ಚರ್ಚೆಗಳು ಜನರ ನಂಬಿಕೆಗೆ ಬಗೆಯುವ ದ್ರೋಹ ಎಂದು ಕರೆದಿದ್ದ ಅವರು, ಇಂತಹ ಸುಳ್ಳು ಸುದ್ದಿಗಳನ್ನು ಯಾರೂ ನಂಬಬಾರದು ಎಂದು ಮನವಿ ಮಾಡಿದ್ದರು.

ಮೂರು ಬಾರಿ ತಮಿಳುನಾಡಿನ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ ಓ. ಪನ್ನೀರ್ ಸೆಲ್ವಂ ಅವರನ್ನು 2022ರಲ್ಲಿ ಎಐಎಡಿಎಂಕೆಯಿಂದ ಉಚ್ಚಾಟಿಸಲಾಗಿತ್ತು. ತದನಂತರ ಅವರು 2026ರ ಫೆಬ್ರವರಿ 27 ರಂದು ಅಂದಿನ ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್ ಸಮ್ಮುಖದಲ್ಲಿ ಅಧಿಕೃತವಾಗಿ ಡಿಎಂಕೆ ಸೇರ್ಪಡೆಯಾಗಿದ್ದರು. ಆದರೆ ಇದೀಗ ಅರ್ಧ ವರ್ಷ ಕಳೆದರೂ ಪಕ್ಷದಲ್ಲಿ ನಿರೀಕ್ಷಿತ ಸ್ಥಾನಮಾನ ಸಿಗದ ಕಾರಣ, ಅವರು ಟಿವಿಕೆ ಕಡೆ ಮುಖ ಮಾಡಿದ್ದಾರೆ ಎಂಬ ವರದಿಗಳು ರಾಜಕೀಯ ವಲಯದಲ್ಲಿ ಹೊಸ ಚರ್ಚೆಯನ್ನು ಹುಟ್ಟುಹಾಕಿವೆ.

# ಕಂಗನಾ ನಿರುದ್ಯೋಗಿ ವ್ಯಂಗ್ಯಕ್ಕೆ ಸೌರವ್ ದಾಸ್ ತಿರುಗೇಟು

ನವದೆಹಲಿ, ಜು. 30: ಬಿಜೆಪಿ ಸಂಸದೆ ಕಂಗನಾ ರನೌತ್ ಮತ್ತು ಕಾಕ್ರೋಚ್ ಜನತಾ ಪಾರ್ಟಿ ವಕ್ತಾರ ಸೌರವ್ ದಾಸ್ ನಡುವಿನ ವಾಕ್ಸಮರ ಈಗ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಸೌರವ್ ದಾಸ್ ಅವರನ್ನು ಕಂಗನಾ "ನಿಷ್ಪ್ರಯೋಜಕ" ಮತ್ತು "ನಿರುದ್ಯೋಗಿ" ಎಂದು ಕರೆದ ಬೆನ್ನಲ್ಲೇ, ಸೌರವ್ ದಾಸ್ ನೀಡಿರುವ ತಮಾಷೆಯ ಉತ್ತರವೊಂದು ಇದೀಗ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.



ಪತ್ರಕರ್ತೆ ಬರ್ಖಾ ದತ್ ಅವರೊಂದಿಗಿನ ಸಂದರ್ಶನದಲ್ಲಿ ಮಾತನಾಡಿದ ಸೌರವ್ ದಾಸ್, "ಕಂಗನಾ ಅವರು ನನ್ನನ್ನೇ ಯಾಕೆ ಪ್ರತ್ಯೇಕವಾಗಿ ಗುರಿ ಮಾಡುತ್ತಿದ್ದಾರೆ ಎಂಬುದು ಆಶ್ಚರ್ಯ ತಂದಿದೆ. ನನ್ನ ಸ್ನೇಹಿತರೊಬ್ಬರು ಮೆಸೇಜ್ ಮಾಡಿ, 'ನೀನು ಯುವ ದಿನಗಳ ಹೃತಿಕ್ ರೋಷನ್ ತರ ಕಾಣಿಸುತ್ತೀಯಾ, ಬಹುಶಃ ಅದಕ್ಕೆ ಕಂಗನಾ ನಿನ್ನ ಬೆನ್ನಿಗೆ ಬಿದ್ದಿರಬಹುದು ಎಂದು ರೇಗಿಸಿದರು. ಸ್ನೇಹಿತರ ಈ ಮಾತು ಕೇಳಿ ನನಗೆ ನಗು ಬಂತು ಎಂದು ತಮಾಷೆಯಾಗಿ ಹೇಳಿದ್ದಾರೆ. ಈ ಹಿಂದೆ ಬಾಲಿವುಡ್‌ನ ಲ್ಲಿ ಹೃತಿಕ್ ಮತ್ತು ಕಂಗನಾ ಅವರ ನಡುವೆ ಇದ್ದಂತಹ ಹಳೆಯ ವಿವಾದವನ್ನು ಪರೋಕ್ಷವಾಗಿ ನೆನಪಿಸುವಂತೆ ದಾಸ್ ಮಾತನಾಡಿದ್ದಾರೆ. ಕಂಗನಾ ವಿರುದ್ಧ ತಮಗೆ ಯಾವುದೇ ವೈಯಕ್ತಿಕ ದ್ವೇಷವಿಲ್ಲ ಎಂದು ಸ್ಪಷ್ಟಪಡಿಸಿರುವ ಸೌರವ್ ಪ್ರಜಾಪ್ರಭುತ್ವದಲ್ಲಿ ಭಿನ್ನಾಭಿಪ್ರಾಯಗಳನ್ನು ವೈಯಕ್ತಕ ನಿಂದನೆಗಳ ಮೂಲಕ ಅಲ್ಲ, ಬದಲಿಗೆ ಮಾತುಕತೆ ಮತ್ತು ಚರ್ಚೆಗಳ ಮೂಲಕ ಬಗೆಹರಿಸಿಕೊಳ್ಳಬೇಕು ಎಂದಿದ್ದಾರೆ.

ತಮ್ಮ ಇನ್ಸ್ಟಾಗ್ರಾಮ್ ಸ್ಟೋರಿಯನ್ನು ಉಲ್ಲೇಖಿಸಿದ ಅವರು, "ಯೋ ಕಂಗನಾ, ಸ್ವಲ್ಪ ಶಾಂತ ಮಾತ್ರೆ ತೆಗೆದುಕೊಳ್ಳಿ, ಕುಳಿತು ಮಾತನಾಡೋಣ. ನಮ್ಮ ದೇಶದಲ್ಲಿ ಸಂವಾದ ಮತ್ತು ಗೌರವಯುತ ಚರ್ಚೆಗಳು ಕಡಿಮೆಯಾಗುತ್ತಿರುವುದೇ ದೊಡ್ಡ ಸಮಸ್ಯೆಯಾಗಿದೆ ಎಂದು ಹೇಳಿದ್ದಾರೆ.

ಜೊತೆಗೆ, ಸಾರ್ವಜನಿಕ ಪ್ರತಿನಿಧಿಯಾಗಿರುವ ಕಂಗನಾ ಅವರು ದೇಶದ ಯುವಜನತೆ ಮತ್ತು ಪ್ರತಿಭಟನಾಕಾರರ ವಿರುದ್ಧ ಮಾತನಾಡುವಾಗ ಜವಾಬ್ದಾರಿಯಿಂದ ವರ್ತಿಸಬೇಕು. ಹತಾಶೆಯಿಂದ ಮಾತನಾಡುವುದನ್ನು ಬಿಟ್ಟು, ಬಯಸಿದರೆ ನೇರವಾಗಿ ಕರೆ ಮಾಡಿ ಚರ್ಚಿಸಲು ತಾನು ಸದಾ ಸಿದ್ಧ ಎಂದಿದ್ದಾರೆ.ಸಿಜೆಪಿ ನೇತೃತ್ವದಲ್ಲಿ ನಡೆದ ನೀಟ್–ಯುಜಿ ಪರೀಕ್ಷಾ ಅಕ್ರಮಗಳ ವಿರುದ್ಧದ ಪ್ರತಿಭಟನೆಯನ್ನು ಕಂಗನಾ ಟೀಕಿಸಿದ್ದರು. ಅಲ್ಲದೆ 28 ವರ್ಷದ ಸೌರವ್ ದಾಸ್ ಇನ್ನು ಎಷ್ಟು ವರ್ಷ ವಿದ್ಯಾರ್ಥಿ ಎನ್ನಿಸಿಕೊಳ್ಳುತ್ತಾರೆ ಎಂದು ಪ್ರಶ್ನಿಸಿ, ನನ್ನ 28ನೇ ವಯಸ್ಸಿನಲ್ಲಿ ನಾನು ಎರಡು ರಾಷ್ಟ್ರ ಪ್ರಶಸ್ತಿ ಗೆದ್ದಿದ್ದೆ. ಈತನಿಗೆ ಯಾವುದೇ ಕೆಲಸವಿಲ್ಲ, ಸಂಪೂರ್ಣ ನಿರುದ್ಯೋಗಿ" ಎಂದು ಪೋಸ್ಟ್ ಮಾಡಿದ್ದರು. ಈ ವಾಗ್ದಾಳಿಗೆ ರಾಖಿ ಸಾವಂತ್ ಮತ್ತು ನಟ ಸೋನು ಸೂದ್ ಸೇರಿದಂತೆ ಹಲವು ಚಿತ್ರರಂಗದ ಪ್ರಮುಖರು ಕೂಡ ಪ್ರತಿಕ್ರಿಯಿಸಿದ್ದು, ಯುವಜನತೆಯ ಕುರಿತು ಜನಪ್ರತಿನಿಧಿಗಳು ಇಂತಹ ಪದಗಳನ್ನು ಬಳಸುವುದು ಶೋಭೆಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

# ಶೈಕ್ಷಣಿಕ ಶ್ರೇಷ್ಠತೆಗೆ ರಾಯನ್ ಇಂಟರ್‌ನ್ಯಾಷನಲ್ ಶಾಲೆಗೆ ರಾಷ್ಟ್ರೀಯ ಗೌರವ

**ಮುಂಬಯಿ, ಜು.30:** ದೇಶದ ಪ್ರತಿಷ್ಠಿತ "ಎಜ್ಯುಕೇಶನ್ ಎಕ್ಸಲೆನ್ಸ್ ಎಂಪವರಿಂಗ್ ಇಂಡಿಯಾ ಅವಾರ್ಡ್ಸ್ 2026" ಪ್ರಶಸ್ತಿಯ ನಾಲ್ಕನೇ ಆವೃತ್ತಿಯ ಪುರಸ್ಕಾರ ಪ್ರದಾನ ಕಾರ್ಯಕ್ರಮ ಇತ್ತೀಚೆಗೆ ಮಹಾರಾಷ್ಟ್ರ ರಾಜ್ಯದ ವಿಜೇತ ಶಾಲೆಯಾಗಿ ಮಲಾಡ್‌ನ ರಾಯನ್ ಇಂಟರ್‌ನ್ಯಾಷನಲ್ ಸ್ಕೂಲ್ (ಐಸಿಎಸ್‌ಇ / ಐಎಸ್‌ಸಿ) ಆಯ್ಕೆಯಾಗಿದ್ದು, ರಾಷ್ಟ್ರೀಯ ಮಟ್ಟದಲ್ಲಿ ಮತ್ತೊಂದು ಹೆಮ್ಮೆಯ ಸಾಧನೆಯನ್ನು ದಾಖಲಿಸಿದೆ.




ನವದೆಹಲಿದಲ್ಲಿ ಕಳೆದ ಮಂಗಳವಾರ ನಡೆದ ಭವ್ಯ ಸಮಾರಂಭದಲ್ಲಿ ಭಾರತದ ಕೇಂದ್ರ ಶಿಕ್ಷಣ ಸಚಿವಾಲಯದ ರಾಜ್ಯ ಸಚಿವ ಡಾ। ಸುಕಾಂತ ಮಜುಂದಾರ್ ಅವರು ರಾಯನ್ ಅಂತರಾಷ್ಟ್ರೀಯ ಶೈಕ್ಷಣಿಕ ಸಮೂಹದ ನಿರ್ದೇಶಕಿ ಡಾ। ಸ್ನೇಹಲ್ ಪಿಂಟೊ ಅವರಿಗೆ ಪ್ರಶಸ್ತಿ ಫಲಕ ಪ್ರದಾನಿಸಿ ಅಭಿನಂದಿಸಿದರು. ಶಿಕ್ಷಣ ಕ್ಷೇತ್ರದಲ್ಲಿ ಅತ್ಯುನ್ನತ ಗುಣಮಟ್ಟದ ಸಾಧನೆ, ನವೀನ ಶೈಕ್ಷಣಿಕ ವಿಧಾನಗಳು, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ನೀಡಿದ ವಿಶೇಷ ಒತ್ತು ಹಾಗೂ ಶೈಕ್ಷಣಿಕ ನಾಯಕತ್ವದಲ್ಲಿ ಸಲ್ಲಿಸಿರುವ ಅತ್ಯುತ್ತಮ ಕೊಡುಗೆಯನ್ನು ಪರಿಗಣಿಸಿ ಈ ಪ್ರತಿಷ್ಠಿತ ರಾಷ್ಟ್ರೀಯ ಪ್ರಶಸ್ತಿಯನ್ನು ರಯಾನ್ ಇಂಟರ್‌ನ್ಯಾಷನಲ್ ಶಾಲೆಗೆ ನೀಡಲಾಗಿದೆ.

ಈ ಗೌರವವು ಶಾಲೆಯ ನಿರಂತರ ಶೈಕ್ಷಣಿಕ ಉತ್ಕೃಷ್ಟತೆ, ಮೌಲ್ಯಾಧಾರಿತ ಶಿಕ್ಷಣ ಹಾಗೂ ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ನೀಡುತ್ತಿರುವ ಬದ್ಧತೆಗೆ ಸಂದ ರಾಷ್ಟ್ರೀಯ ಮನ್ನಣೆಯಾಗಿದೆ ಎಂದು ಡಾ। ಸ್ನೇಹಲ್ ಪಿಂಟೊ ತಿಳಿಸಿದರು.

# ದೆಹಲಿ ಸರ್ಕಾರ ನೀಟ್ ಪ್ರತಿಭಟನಾ ಪ್ರಕರಣ ಕೈಬಿಟ್ಟಿದೆ ಕ್ರಿಮಿನಲ್ ಹಿನ್ನೆಲೆ ಹೊಂದಿರುವವರನ್ನು ಹೊರಗಿಟ್ಟಿದೆ

**ನವದೆಹಲಿ, ಜು. 30:** ರಾಷ್ಟ್ರ ರಾಜಧಾನಿಯಲ್ಲಿ ನಡೆದ ಪರೀಕ್ಷಾ ಅಕ್ರಮಗಳ ಕುರಿತು ಪ್ರತಿಭಟನೆಯಲ್ಲಿ ಭಾಗವಹಿಸಿದವರ ವಿರುದ್ಧ ದೆಹಲಿ ಸರ್ಕಾರ ಕಾನೂನು ಕ್ರಮ ಕೈಗೊಳ್ಳುವುದಿಲ್ಲ, ಪ್ರತಿಭಟನೆಯ ಸಮಯದಲ್ಲಿ ಕ್ರಿಮಿನಲ್ ಹಿನ್ನೆಲೆ ಅಥವಾ ದುಷ್ಕರ್ಮಿ ಚಟುವಟಿಕೆಗಳನ್ನು ಹೊಂದಿರುವವರ ವಿರುದ್ಧ ಮಾತ್ರ ಎಂದು ಗೃಹ ಸಚಿವ ಆಶಿಶ್ ಸೂದ್ ಗುರುವಾರ ಹೇಳಿದ್ದಾರೆ. ಕೇಂದ್ರ ಮತ್ತು ಸಿಜೆಪಿ ನಿಯೋಗದ ನಡುವಿನ ಮಾತುಕತೆಯ ನಂತರ ಜಂತರ್ ಮಂತರ್‌ನಲ್ಲಿ ಜಿರಳೆ ಜನತಾ ಪಕ್ಷ (ಸಿಜೆಪಿ) ನೇತೃತ್ವದಲ್ಲಿ ಒಂದು ತಿಂಗಳ ಕಾಲ ನಡೆದ ಪ್ರತಿಭಟನೆಯನ್ನು ರದ್ದುಗೊಳಿಸಿದ ಐದು ದಿನಗಳ ನಂತರ ಈ ನಿರ್ಧಾರ ಬಂದಿದೆ. ಜುಲೈ 25 ರಂದು, ಕೇಂದ್ರ ಆರೋಗ್ಯ ಸಚಿವ ಜಗತ್ ಪ್ರಕಾಶ್ ನಡ್ಡಾ ಮತ್ತು ಪ್ರಧಾನಿ ಕಚೇರಿಯಲ್ಲಿ ರಾಜ್ಯ ಸಚಿವ ಜಿತೇಂದ್ರ ಸಿಂಗ್ ಅವರು ಪಕ್ಷದ ಪ್ರಮುಖ ಬೇಡಿಕೆಗಳನ್ನು ಒಪ್ಪಿಕೊಂಡರು, ಇದರಲ್ಲಿ ಎಫ್‌ಐಆರ್‌ಗಳನ್ನು ಹಿಂತೆಗೆದುಕೊಳ್ಳುವುದು ಮತ್ತು ದೆಹಲಿ ಮತ್ತು ಬಿಜೆಪಿ ಆಡಳಿತ ಅಥವಾ ಎನ್ಡಿಎ–ಮಿತ್ರ ರಾಜ್ಯಗಳಲ್ಲಿ ಪ್ರತಿಭಟನಾಕಾರರ ವಿರುದ್ಧ ಯಾವುದೇ ಮುಂದಿನ ಕ್ರಮ ಕೈಗೊಳ್ಳಲಾಗುವುದಿಲ್ಲ ಎಂಬ ಭರವಸೆ ಸೇರಿದೆ. ಶೈಲೇಂದ್ರ ಮಣಿ ತ್ರಿಪಾಠಿ ವಿರುದ್ಧ ಭಾರತ ಮತ್ತು ಇತರರ ಒಕ್ಕೂಟ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಜುಲೈ 28 ರಂದು ನೀಡಿದ ಆದೇಶವನ್ನು ಅನುಸರಿಸುತ್ತದೆ.



ಜುಲೈ 30 ರಂದು ಹೊರಡಿಸಲಾದ ಆದೇಶದಲ್ಲಿ, ದೆಹಲಿ ಗೃಹ ಇಲಾಖೆ, "ಈ ಪ್ರತಿಭಟನೆಗಳಲ್ಲಿ ಭಾಗಿಯಾಗಿರುವ ವ್ಯಕ್ತಿಗಳ ವಿರುದ್ಧ ದೆಹಲಿಯ ಓಅಖಿಯೊಳಗಿನ ಯಾವುದೇ ಪೊಲೀಸ್ ಅಧಿಕಾರಿಗಳು ಯಾವುದೇ ಪ್ರತಿಕೂಲ ಕಾನೂನು ಕ್ರಮ ಕೈಗೊಳ್ಳುವುದಿಲ್ಲ" ಎಂದು ಹೇಳಿದೆ. "ಕ್ರಿಮಿನಲ್ ಹಿನ್ನೆಲೆಯುಳ್ಳ ವ್ಯಕ್ತಿಗಳು ಅಥವಾ ಪ್ರತಿಭಟನೆಯ ಸಮಯದಲ್ಲಿ ಹಿಂಸಾಚಾರದಲ್ಲಿ ತೊಡಗುವ ಮೂಲಕ ಕಾನೂನನ್ನು ತಮ್ಮ ಕೈಗೆತ್ತಿಕೊಳ್ಳಲು ಪ್ರಯತ್ನಿಸಿದವರು ಕಾನೂನಿನ ನಿಬಂಧನೆಗಳಿಗೆ ಅನುಗುಣವಾಗಿ ಕಾನೂನು ಕ್ರಮವನ್ನು ಎದುರಿಸಬೇಕಾಗುತ್ತದೆ" ಎಂದು ಸೂದ್ ಮಾಧ್ಯಮಗಳನ್ನುದ್ದೇಶಿಸಿ ಹೇಳಿದರು. 'ಚಲೋ ಸಂಸದ್' ಮೆರವಣಿಗೆಯ ಸಮಯದಲ್ಲಿ ಅಥವಾ ನಂತರ ಬಂಧಿಸಲ್ಪಟ್ಟವರ ಪ್ರಕರಣಗಳನ್ನು ಅಧಿಕಾರಿಗಳು ಪರಿಶೀಲಿಸುತ್ತಾರೆ ಮತ್ತು ಅನ್ವಯವಾಗುವಲ್ಲೆಲ್ಲಾ ಅವರ ಬಿಡುಗಡೆಗೆ ಅನುಕೂಲ ಮಾಡಿಕೊಡುತ್ತಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದೇಶದ ಪ್ರಕಾರ, ದೆಹಲಿ ಪೊಲೀಸರು ಬುಧವಾರ (ಜುಲೈ 29) ಸಂಜೆ 6 ಗಂಟೆಯ ಹೊತ್ತಿಗೆ ಪ್ರತಿಭಟನೆಗಳಿಗೆ ಸಂಬಂಧಿಸಿದಂತೆ 13 ಪ್ರಕರಣಗಳನ್ನು ದಾಖಲಿಸಿದ್ದಾರೆ.

**ಮುಖ್ಯ ಕಾರ್ಯದರ್ಶಿ ಅಧ್ಯಕ್ಷತೆಯ ರಾಜ್ಯಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಪರಿಗಣನೆ**

# ಪಿಪಿಪಿ ಅಡಿಯಲ್ಲಿ 12,936 ಕೋಟಿ ರೂ. ಮೌಲ್ಯದ 7 ಯೋಜನೆಗಳ ಅನುಷ್ಠಾನ



**ಬೆಂಗಳೂರು, ಜು. 30:** ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರ ಅಧ್ಯಕ್ಷತೆಯಲ್ಲಿಂದು ನಡೆದ ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಯೋಜನೆಗಳ ರಾಜ್ಯಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಒಟ್ಟು ಅಂದಾಜು 12,936.86 ಕೋಟಿ ರೂ. ವೆಚ್ಚದ ಏಳು ಪ್ರಮುಖ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳನ್ನು ಪಿಪಿಪಿ ಅಡಿಯಲ್ಲಿ ಅನುಷ್ಠಾನಗೊಳಿಸಲು ಪರಿಗಣಿಸಲಾಯಿತು.

ಈ ಯೋಜನೆಗಳು ಪ್ರವಾಸೋದ್ಯಮ, ಆತಿಥ್ಯ, ಜಲಸಾರಿಗೆ ಮೂಲಸೌಕರ್ಯ, ತೋಟಗಾರಿಕೆ, ಚಲನಚಿತ್ರ ಹಾಗೂ ನಗರ ಸಾರಿಗೆ ಕ್ಷೇತ್ರಗಳನ್ನು ಒಳಗೊಂಡಿದ್ದು, ಸಾರ್ವಜನಿಕ-ಖಾಸಗಿ ಸಹಭಾಗಿತ್ವಮಾದರಿಯಲ್ಲಿ ಅಭಿವೃದ್ಧಿಪಡಿಸುವುದಾಗಿ ಪ್ರಸ್ತಾಪಿಸಲಾಗಿದೆ. ಕರ್ನಾಟಕ ಸರ್ಕಾರವು ಪಿಪಿಪಿ ಯೋಜನೆಗಳಿಗಾಗಿ ರೂಪಿಸಿರುವ ಸಾಂಸ್ಥಿಕ ವ್ಯವಸ್ಥೆಯಡಿ, 500 ಕೋಟಿ ವರೆಗಿನ ಯೋಜನೆಗಳನ್ನು ಪರಿಶೀಲಿಸಿ ಅನುಮೋದಿಸುವ ಅಧಿಕಾರ ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿಗೆ ಇದೆ. 500 ಕೋಟಿಗಿಂತ ಹೆಚ್ಚಿನ ವೆಚ್ಚದ ಯೋಜನೆಗಳನ್ನು ಈ ಸಮಿತಿಯು ಪರಿಶೀಲಿಸಿ, ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿರುವ ರಾಜ್ಯ ಉನ್ನತಮಟ್ಟದ ಅನುಮೋದನಾ ಸಮಿತಿ ಗೆ ಪರಿಗಣನೆ ಮತ್ತು ಅನುಮೋದನೆಗಾಗಿ ಶಿಫಾರಸು ಮಾಡುತ್ತದೆ.

**ಸಮಿತಿಯ ನಿರ್ಧಾರಗಳು**

500 ಕೋಟಿ ರೂ.ವರೆಗಿನ ಅಂದಾಜು ವೆಚ್ಚ ಹೊಂದಿರುವ ನಾಲ್ಕು ಯೋಜನೆಗಳಿಗೆ ಅನುಮೋದನೆ ನೀಡಿದೆ. ಈ ಯೋಜನೆಗಳ ಒಟ್ಟು ಅಂದಾಜು ವೆಚ್ಚ 285.43 ಕೋಟಿ ರೂ. ಆಗಿದೆ. ಉದಕಮಂಡಲದ ಫರ್ನ್ ಹಿಲ್‌ನಲ್ಲಿರುವ ಕರ್ನಾಟಕ ಸಿರಿ ತೋಟಗಾರಿಕಾ ಉದ್ಯಾನದಲ್ಲಿ ಸಂದರ್ಶಕರ ಸೌಲಭ್ಯಗಳ ಅಭಿವೃದ್ಧಿ, 100 ಕೋಟಿ ರೂ. ವೆಚ್ಚದಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅನುಷ್ಠಾನಗೊಳ್ಳಲಿವೆ.

500 ಕೋಟಿ ರೂ.ಗಿಂತ ಹೆಚ್ಚಿನ ವೆಚ್ಚದ ಕೆಳಕಂಡ ಮೂರು ಯೋಜನೆಗಳನ್ನು ಈ ಸಮಿತಿಯು ಪರಿಶೀಲಿಸಿ, ಮುಖ್ಯಮಂತ್ರಿಯವರ ನೇತೃತ್ವದ ಉನ್ನತ ಮಟ್ಟದ ಸಮಿತಿಯ ಪರಿಗಣನೆ ಮತ್ತು ಅನುಮೋದನೆಗಾಗಿ ಶಿಫಾರಸು ಮಾಡಿದೆ.

ಮೈಸೂರಿನಲ್ಲಿ ಅಂತಾ ರಾಷ್ಟ್ರೀಯ ಚಲನಚಿತ್ರ ನಗರಿ ಅಭಿವೃದ್ಧಿ, 729.43 ಕೋಟಿ ರೂ. ಉತ್ತರ ಕನ್ನಡ ಜಿಲ್ಲೆಯ ಮಂಕಿ ಬಂದರಿನಲ್ಲಿ ಬಹುಉದ್ದೇಶ ಬಂದರು ಮತ್ತು ಹಡಗು ನಿರ್ಮಾಣ ಘಟಕದ ಅಭಿವೃದ್ಧಿ-6,925 ಕೋಟಿ ರೂ., ಬೆಂಗಳೂರು ಮೆಜೆಸ್ಟಿಕ್ ಬಸ್ ನಿಲ್ದಾಣದ ಪುನರ್‌ಅಭಿವೃದ್ಧಿ – 4,997 ಕೋಟಿ ರೂ.ಪ್ರಸ್ತಾವಿತ ಪಿಪಿಪಿ ಯೋಜನೆಗಳು ಆಧುನಿಕ ಸಾರ್ವಜನಿಕ ಮೂಲಸೌಕರ್ಯ ನಿರ್ಮಾಣ, ಖಾಸಗಿ ವಲಯದ ಹೂಡಿಕೆ ಆಕರ್ಷಣೆ, ಪ್ರವಾಸೋದ್ಯಮ ಮತ್ತು ನಗರ ಸೇವೆಗಳ ಸುಧಾರಣೆ, ಕರ್ನಾಟಕದ ಸಾಗರ ಮತ್ತು ಸಾಗಣೆ ಸಾಮರ್ಥ್ಯ ಬಲವರ್ಧನೆ ಹಾಗೂ ರಾಜ್ಯಾದ್ಯಂತ ನೇರ ಮತ್ತು ಪರೋಕ್ಷ ಉದ್ಯೋಗಾವಕಾಶಗಳ ಸೃಷ್ಟಿಗೆ ನೆರವಾಗಲಿವೆ.

ಸಾರ್ವಜನಿಕ-ಖಾಸಗಿ ಸಹಭಾಗಿತ್ವ ಮಾದರಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು, ಪಾರದರ್ಶಕ, ಸ್ಪರ್ಧಾತ್ಮಕ ಹಾಗೂ ಫಲಿತಾಂಶಾಧಾರಿತ ಯೋಜನಾ ಅನುಷ್ಠಾನದ ಮೂಲಕ ಮೂಲಸೌಕರ್ಯ ಅಭಿವೃದ್ಧಿಯನ್ನು ವೇಗಗೊಳಿಸಿ, ಗುಣಮಟ್ಟದ ಸಾರ್ವಜನಿಕ ಸೇವೆಗಳನ್ನು ಒದಗಿಸುವ ಬದ್ಧತೆಯನ್ನು ರಾಜ್ಯ ಸರ್ಕಾರ ಹೊಂದಿದೆ.

# ಭರ್ತಿ ಮಾಡಿದ ಗಣತಿ ನಮೂನೆಗಳನ್ನು ಕೂಡಲೇ ಹಿಂದಿರುಗಿಸಿ: ಮುಖ್ಯ ಆಯುಕ್ತ ಮಹೇಶ್ವರ್‌ರಾವ್ ಮನವಿ

**ಬೆಂಗಳೂರು, ಜು.30:** ಜಿಬಿಎ ವ್ಯಾಪ್ತಿಯಲ್ಲಿ ಮತದಾರರು ಭರ್ತಿ ಮಾಡಿದ ಗಣತಿ ನಮೂನೆಗಳನ್ನು ಕೂಡಲೇ ಹಿಂತಿರುಗಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತರಾದ ಮಹೇಶ್ವರ್‌ರಾವ್ ಅವರು ನಾಗರಿಕರಲ್ಲಿ ಮನವಿ ಮಾಡಿದರು.

ಜಿಬಿಎ ವ್ಯಾಪ್ತಿಯಲ್ಲಿ ನಡೆಯು ತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್.) ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಜಧಾನಿಯ 1,03,88,363 ಮತದಾರರಿಗೆ ಬೂತ್ ಮಟ್ಟದ ಅಧಿಕಾರಿಗಳು ಮನೆ-ಮನೆಗೆ ತೆರಳಿ ಶೇ.100ರಷ್ಟು ಗಣತಿ ನಮೂನೆಗಳನ್ನು ವಿತರಿಸಿದ್ದಾರೆ. ಈ ಪೈಕಿ ಇದುವರೆಗೆ 50,19,442 (48.32%) ಮತದಾರರ ವಿವರಗಳನ್ನು ಡಿಜಿಟಲೀಕರಣ ಮಾಡಲಾಗಿದೆ. ಉಳಿದ ಮತದಾರರು ಸಹ ಭರ್ತಿ ಮಾಡಿದ ನಮೂನೆಗಳನ್ನು ಕೂಡಲೇ ಬಿಎಲ್ಒ ಅಥವಾ ಸೌಲಭ್ಯ ಕೇಂದ್ರಗಳಿಗೆ ಸಲ್ಲಿಸುವಂತೆ ಮನವಿ ಮಾಡಿದರು.

ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಮತದಾರರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸಾರ್ವಜನಿಕರು ತಮ್ಮ ಹಾಗೂ ತಮ್ಮ ಕುಟುಂಬದ ಸದಸ್ಯರ ವಿವರಗಳನ್ನು ಸರಿಯಾಗಿ ಭರ್ತಿ ಮಾಡಿ, ಸಹಿ ಮಾಡಿದ ಗಣತಿ ನಮೂನೆಗಳನ್ನು ಯಾವುದೇ ವಿಳಂಬವಿಲ್ಲದೆ ಹಿಂತಿರುಗಿಸಬೇಕು. ಗಣತಿ ನಮೂನೆಗಳನ್ನು ಸಲ್ಲಿಸಲು ಆಗಸ್ಟ್ 8 ರವರೆಗೆ ಅವಕಾಶವಿದ್ದು, ಡಿಜಿಟಲೀಕರಣ ಕಾರ್ಯವನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕಿರುವುದರಿಂದ ಸಾರ್ವಜನಿಕರು ತುರ್ತಾಗಿ ನಮೂನೆಗಳನ್ನು ಬಿಎಲ್‌ಒಗಳಿಗೆ ಸಲ್ಲಿಸಬೇಕು ಎಂದು ಕೋರಿದರು.

ಗಣತಿ ನಮೂನೆಗಳನ್ನು ಹಿಂತಿರುಗಿಸದಿದ್ದಲ್ಲಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಕೈಬಿಡುವ ಸಾಧ್ಯತೆಯೂ ಇದೆ. ಮತದಾರರ ಅನುಕೂಲಕ್ಕಾಗಿ ಬೂತ್ ಮಟ್ಟದ ಕೇಂದ್ರಗಳು ಹಾಗೂ ಮತದಾರರ ಸೌಲಭ್ಯ ಕೇಂದ್ರಗಳನ್ನು ತೆರೆಯಲಾಗಿದ್ದು, ಅಲ್ಲಿಯೂ ನಮೂನೆಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಸಾರ್ವಜನಿಕರು ಸಹಕರಿಸಬೇಕೆಂದು ಮನವಿ ಮಾಡಿದರು.

ಒಂದು ಗಣತಿ ನಮೂನೆಯನ್ನು ಆನ್‌ಲೈನ್ ಮೂಲಕ ಡಿಜಿಟಲೀಕರಣ ಮಾಡಲು 4 ರಿಂದ 5 ನಿಮಿಷಗಳ ಕಾಲಾವಕಾಶ ಬೇಕಾಗುತ್ತದೆ. ಕೆಲವು ಮತಗಟ್ಟೆಗಳಲ್ಲಿ ಕಡಿಮೆ ಸಂಖ್ಯೆಯ



ಗಣತಿ ನಮೂನೆಗಳು ಹಿಂದಿರುಗಿರುವುದನ್ನು ಗುರುತಿಸಿ, ಆ ಪ್ರದೇಶಗಳಿಗೆ ಬೂತ್ ಮಟ್ಟದ ಅಧಿಕಾರಿಗಳು ಮತ್ತೊಮ್ಮೆ ಭೇಟಿನೀಡಿ, ಮತದಾರರು ಗೈರುಹಾಜರಾಗಿರುವುದು, ಸ್ಥಳಾಂತರಗೊಂಡಿರುವುದು, ಮೃತಪಟ್ಟಿರುವುದು ಅಥವಾ ನಕಲು ದಾಖಲೆಗಳಿರುವ (ASDDO) ಕುರಿತು ಪರಿಶೀಲನೆ ನಡೆಸಲಿದ್ದಾರೆ ಎಂದರು.

ವಿಶೇಷ ಸಮಗ್ರ ಪರಿಷ್ಕರಣೆಯ ಕರಡು ಮತದಾರರ ಪಟ್ಟಿ ಪ್ರಕಟವಾದ ನಂತರ, ತಮ್ಮ ಹೆಸರು ಕರಡು ಪಟ್ಟಿಯಲ್ಲಿ ಸೇರಿರುವುದನ್ನು ಮತದಾರರು ಖಚಿತಪಡಿಸಿಕೊಳ್ಳಬೇಕು. ಸ್ಥಳಾಂತರಗೊಂಡಿರುವ ಅಥವಾ ಕರಡು ಪಟ್ಟಿಯಲ್ಲಿ ಹೆಸರು ಇಲ್ಲದ ಮತದಾರರು ನಮೂನೆ-6 ರ ಮೂಲಕ ಆನ್‌ಲೈನ್ ಅಥವಾ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಹೊಸ ವಿಳಾಸದಲ್ಲಿ ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಿಸಿಕೊಳ್ಳಬಹುದು ಎಂದು ಮಾಹಿತಿ ನೀಡಿದರು.

ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಎಲ್ಲ ಮತದಾರರು ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಹಾಗೂ ಭರ್ತಿ ಮಾಡಿದ ಗಣತಿ ನಮೂನೆಗಳನ್ನು ಕೂಡಲೇ ಹಿಂತಿರುಗಿಸುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು, ಎಲ್ಲಾ ನಗರ ಪಾಲಿಕೆಗಳಲ್ಲಿ ಧ್ವನಿವರ್ಧಕ ಹೊಂದಿದ ಆಟೋಗಳ ಮೂಲಕ ಜಾಗೃತಿ ಅಭಿಯಾನ ನಡೆಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಎಸ್.ಐ.ಆರ್. ಪ್ರಕ್ರಿಯೆಯ ವೇಳಾಪಟ್ಟಿ:**

* ಆಗಸ್ಟ್ 8, 2026 – ಬಿಎಲ್‌ಒಗಳ ಮನೆ-ಮನೆ ಭೇಟಿ ಹಾಗೂ ಗಣತಿ ನಮೂನೆ ಸಲ್ಲಿಸಲು ಕೊನೆಯ ದಿನ.
* ಆಗಸ್ಟ್ 17, 2026 – ಕರಡು ಮತದಾರರ ಪಟ್ಟಿ ಪ್ರಕಟ.
* ಆಗಸ್ಟ್ 17, 2026 ರಿಂದ ಸೆಪ್ಟೆಂಬರ್ 16, 2026 – ಆಕ್ಷೇಪಣೆ ಮತ್ತು ಹಕ್ಕು-ದಾವೆ ಸಲ್ಲಿಸಲು ಅವಕಾಶ.
* ಅಕ್ಟೋಬರ್ 19, 2026 – ಅಂತಿಮ ಮತದಾರರ ಪಟ್ಟಿ ಪ್ರಕಟ.

**ಪರೀಕ್ಷಾ ಕೊಠಡಿಗೆ ವಾಚ್ ಸೇರಿ ಎಲೆಕ್ಟ್ರಾನಿಕ್ಸ್ ಸಾಧನಗಳು, ಕಿವಿಯೋಲೆ ನಿಷೇಧ**

# ಸ್ಪರ್ಧಾತ್ಮಕ ಪರೀಕ್ಷೆ ಅಕ್ರಮ ತಡೆಗೆ ರಾಜ್ಯ ಸರ್ಕಾರದಿಂದ ಹೊಸ ಕ್ರಮ

**ಮಾಂಗಲ್ಯ, ಮೂಗುತಿ, ಜನಿವಾರ, ಶಿವದಾರಕ್ಕೆ ಅವಕಾಶ**

**ಬೆಂಗಳೂರು, ಜು.30** ಪೊಲೀಸ್ ಸೇರಿ ಇತರ ಇಲಾಖೆಗಳ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ನಡೆಯುವ ಅಕ್ರಮಗಳನ್ನು ತಡೆಯಲು ರಾಜ್ಯ ಸರ್ಕಾರ ಹೊಸ ಕ್ರಮ ಜಾರಿಗೆ ತಂದಿದೆ. ಪರೀಕ್ಷಾ ಕೊಠಡಿಯೊಳಗೆ ಕಿವಿ ಯೋಲೆ, ವಾಚ್ ಅಥವಾ ಯಾವುದೇ ಎಲೆಕ್ಟ್ರಾನಿಕ್ ಸಾಧನಗಳಿಗೆ ಕಡ್ಡಾಯ ವಾಗಿ ಅವಕಾಶವಿಲ್ಲ. ಧಾರ್ಮಿಕ ಮತ್ತು ಸಾಂಸ್ಕೃತಿಕ ನಂಬಿಕೆಗಳಿಗೆ ಗೌರವ ನೀಡಿ ಮಾಂಗಲ್ಯಸರ, ಮೂಗುತಿ, ಜನಿವಾರ ಮತ್ತು ಶಿವದಾರಕ್ಕೆ ಅವಕಾಶ ನೀಡಲಾಗಿದೆ. ಕೆಪಿಎಸ್ ಸಿ ನೇಮಕಾತಿ ಅಕ್ರಮ ಆರೋಪಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ಮುಂಬರುವ 3,991 ಪೊಲೀಸ್ ಸಿವಿಲ್ ಕಾನ್ಸ್‌ಟೇಬಲ್ ಹುದ್ದೆಗಳ ಲಿಖಿತ ಪರೀಕ್ಷೆಯನ್ನು ಅತ್ಯಂತ ಪಾರದರ್ಶಕವಾಗಿ ನಡೆಸಲು ಸಕಲ ಸಿದ್ಧತೆ ಮಾಡಿಕೊಂಡಿದೆ.

ಆ.2ರಂದು ರಾಜ್ಯದ 800ಕ್ಕೂ ಹೆಚ್ಚು ಕೇಂದ್ರಗಳಲ್ಲಿ ಈ ಪರೀಕ್ಷೆ ನಡೆಯಲಿದ್ದು, ಒಟ್ಟು 4.54 ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಯಾವುದೇ ಗೋಲ್‌ಮಾಲ್ ನಡೆಯದಂತೆ ತಡೆಯಲು ಕೆಇಎ ಬಿಗಿ ನಿಯಮಗಳನ್ನು ಜಾರಿಗೆ ತಂದಿದೆ. ಪರೀಕ್ಷಾ ಕೇಂದ್ರಕ್ಕೆ ಪ್ರಶ್ನೆಪತ್ರಿಕೆ ಬಂದ ತಕ್ಷಣ, ಪ್ರಿನ್ಸಿಪಾಲ್ ನೇತೃತ್ವದಲ್ಲಿ ಕೇಂದ್ರದ ಐದು ವಿದ್ಯಾರ್ಥಿಗಳ ಸಮಕ್ಷಮದಲ್ಲೇ ಪ್ರಶ್ನೆಪತ್ರಿಕೆಯ ಮೊಹರಾದ ಬಾಕ್ಸ್ ತೆರೆಯಲಾಗುತ್ತದೆ. ಪ್ರಶ್ನೆಪತ್ರಿಕೆ ಬಾಕ್ಸ್ ತೆರೆಯುವುದರಿಂದ ಹಿಡಿದು ಪರೀಕ್ಷಾ ಕೊಠಡಿಗೆ ತಲುಪುವವರೆಗೆ ಅಭ್ಯರ್ಥಿಗಳ ಹಾಜರಾತಿಗೆ ಅವಕಾಶ ಕಲ್ಪಿಸಲಾಗಿದೆ.

ಯಾವುದೇ ಕೇಂದ್ರದಲ್ಲಿ ಇವುಗಳನ್ನು ತೆಗೆಸುವಂತಿಲ್ಲ ಎಂದು ಸೂಚಿಸಲಾಗಿದೆ. ಕಿವಿಭಾಗದಲ್ಲಿ ಬ್ಲೂಟೂತ್ ಅಥವಾ ಇಯರ್‌ಫೋನ್ ಸಾಧನ ಬಳಸಿ ಅಕ್ರಮ ಎಸಗುವುದನ್ನು ತಡೆಯಲು ಸೂಕ್ಷ್ಮ ಕೇಂದ್ರಗಳಲ್ಲಿ ಇಎನ್‌ಟಿ (ಕಿವಿ, ಮೂಗು, ಗಂಟಲು) ವೈದ್ಯರನ್ನು ತಪಾಸಣೆಗೆ ನೇಮಿಸಲಾಗಿದೆ.

**5ನೇ ಕಾಲಂ ಕಡ್ಡಾಯ:**

ಪರೀಕ್ಷೆ ಮುಗಿದ ಅರ್ಧ ಗಂಟೆಯ ಒಳಗಾಗಿ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು (ಓಎಂಆರ್ ಶೀಟ್) ಕೆಇಎ ಅಧಿಕೃತ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲಾಗುತ್ತದೆ. ವಿದ್ಯಾರ್ಥಿಗಳು ಪ್ರಶ್ನೆಗೆ ಉತ್ತರ ಗೊತ್ತಿಲ್ಲ ಎಂದು ಓಎಂಆರ್ ಶೀಟ್‌ನಲ್ಲಿ ಖಾಲಿ ಬಿಡುವ ಹಾಗಿಲ್ಲ. ಉತ್ತರ ಗೊತ್ತಿಲ್ಲದಿದ್ದರೆ 5ನೇ ಕಾಲಂ ಅನ್ನು ಫಿಲ್ ಮಾಡಬೇಕು. ಹಾಗೂ ಓಎಂಆರ್ ಶೀಟ್‌ನಲ್ಲಿ ಯಾವುದೇ ಉತ್ತರ ಅಥವಾ



5ನೇ ಕಾಲಂ ಭರ್ತಿ ಮಾಡದೇ ಖಾಲಿ ಬಿಟ್ಟರೆ 1/4 (0.25) ಅಂಕ ಕಡಿತಗೊಳಿಸಲಾಗುತ್ತದೆ.

**ಸಿಸಿಟಿವಿ ಕಣ್ಗಾವಲು:**

ಪ್ರತಿಯೊಂದು ಪರೀಕ್ಷಾ ಕೊಠಡಿಯಲ್ಲೂ ಲೈವ್ ವೆಬ್‌ಕಾಸ್ಟಿಂಗ್ ಇರಲಿದ್ದು, ನೆಟ್‌ವರ್ಕ್ ಜಾಮರ್ ಗಳನ್ನು ಅಳವಡಿಸಲಾಗಿದೆ. ಬಯೋ ಮೆಟ್ರಿಕ್ ಹಾಜರಾತಿಗಾಗಿ ಫಿಂಗರ್ ಪ್ರಿಂಟ್ ಮತ್ತು ಮುಖ ಗುರುತಿಸುವ ತಂತ್ರಜ್ಞಾನ ಬಳಸಲಾಗುತ್ತಿದೆ.

ಪರೀಕ್ಷೆ ಪ್ರಾರಂಭವಾಗುವ 1 ಗಂಟೆ ಮುಂಚಿತವಾಗಿಯೇ ಅಭ್ಯರ್ಥಿಗಳು ಪರೀಕ್ಷಾ ಕೇಂದ್ರದ ಒಳಗಿರಬೇಕು. ಪರೀಕ್ಷಾ ಮೇಲ್ವಿಚಾರಣೆಗೆ ಸರ್ಕಾರಿ ಪಿಯು ಕಾಲೇಜುಗಳ ಉಪನ್ಯಾಸಕರನ್ನು ನಿಯೋಜಿಸಲು ಕೆಇಎ ಕ್ರಮ ಕೈಗೊಂಡಿದೆ.

**216 ಮಂದಿಗೆ ಶಾಶ್ವತ ನಿಷೇಧ:**

ಪೊಲೀಸ್ ಇಲಾಖೆಯ ವಿವಿಧ ಹುದ್ದೆಗಳ ನೇಮಕಾತಿ ಪರೀಕ್ಷೆಗಳಲ್ಲಿ ಅವ್ಯವಹಾರ ಮತ್ತು ಅಕ್ರಮ ಎಸಗಿ ಸಿಕ್ಕಿಬಿದ್ದಿರುವ ಅಭ್ಯರ್ಥಿಗಳಿಗೆ ರಾಜ್ಯ ಪೊಲೀಸ್ ಇಲಾಖೆಯು ಭವಿಷ್ಯದಲ್ಲಿ ಸರ್ಕಾರಿ ಹುದ್ದೆಯ ಯಾವುದೇ ನೇಮಕಾತಿ ಪರೀಕ್ಷೆಗಳಲ್ಲಿ ಪಾಲ್ಗೊಳ್ಳದಂತೆ ಶಾಶ್ವತ ನಿಷೇಧ ಹೇರಿ ಕಟ್ಟುನಿಟ್ಟಿನ ಕ್ರಮ ಜರುಗಿಸಿದೆ.

ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಿವಿಲ್, ಸಶಸ್ತ್ರ, ಕೆಎಸ್‌ಆರ್‌ಪಿ ಹಾಗೂ ಕೆಎಸ್ಐ ಎಸ್‌ಎಫ್ ಘಟಕಗಳ ಒಟ್ಟು 7,905 ಕಾನ್‌ಸ್ಟೇಬಲ್ ಹುದ್ದೆಗಳ ಭರ್ತಿಗೆ ಆಯೋಜಿಸಲಾಗಿರುವ ಪರೀಕ್ಷೆಗಳಿಗೆ ಕಳಂಕಿತರು ಮತ್ತೆ ಅರ್ಜಿ ಸಲ್ಲಿಸುವುದನ್ನು ತಡೆಯಲು ಪೊಲೀಸ್ ನೇಮಕಾತಿ ವಿಭಾಗವು ಮುಂಜಾಗ್ರತಾ ಕ್ರಮವಾಗಿ 216 ಆರೋಪಿ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ (ಕೆಇಎ) ಹಸ್ತಾಂತರಿಸಿದೆ.

# ಗೃಹಜ್ಯೋತಿ ಫಲಾನುಭವಿಗಳ ಪರಿಶೀಲನೆಗೆ ಜು.31 ಕಡೇ ದಿನವಲ್ಲ: ಬೆಸ್ಕಾಂ ಸ್ಪಷ್ಟನೆ

**ಬೆಂಗಳೂರು, ಜು.30:** ಗೃಹಜ್ಯೋತಿ ಯೋಜನೆ ಫಲಾನುಭವಿಗಳ ಪರಿಶೀಲನೆ ನಡೆಯುತ್ತಿದ್ದು, ಈ ಪ್ರಕ್ರಿಯೆಗೆ ಜುಲೈ 31 ಕೊನೆಯ ದಿನಾಂಕ ಅಲ್ಲ. ಈ ಬಗ್ಗೆ ಬೆಸ್ಕಾಂ ಸ್ಪಷ್ಟನೆ ನೀಡಿದೆ. ಇನ್ನೂ ಆಗಸ್ಟ್ ಪೂರ್ತಿ ಪರಿಶೀಲನೆ ನಡೆಸಲಾಗುತ್ತದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ ಜಾರಿಗೆ ತಂದ ಪಂಚ ಗ್ಯಾರಂಟಿಗಳಲ್ಲಿ ಗೃಹಜ್ಯೋತಿ ಯೋಜನೆ ಪ್ರಮುಖ. ಇದರಡಿ ನೋಂದಾಯಿತ ಫಲಾನುಭವಿ ಗಳಿಗೆ ಮಾಸಿಕ 200 ಯುನಿಟ್ವರೆಗೂ ಉಚಿತ ವಿದ್ಯುತ್ ನೀಡಲಾಗುತ್ತಿದೆ.

ಸದ್ಯ ಯೋಜನೆಯ ದುರ್ಬಳಕ್ಕೆ ತಪ್ಪಿಸಲು ಹಾಗೂ ಅನ್ಯರಾಜ್ಯದ ಫಲಾನುಭವಿಗಳನ್ನು ಕೈಬಿಡುವ ಉದ್ದೇಶದಿಂದ ದಾಖಲಾತಿ ಪರಿಶೀಲನೆಗೆ ಸರ್ಕಾರ ನಿರ್ಧಾರ ತೆಗೆದುಕೊಂಡಿತು.

ಸರ್ಕಾರದ ಸೂಚನೆಯಂತೆ ಜುಲೈ ಆರಂಭದಿಂದಲೇ ಬೆಸ್ಕಾಂ ಸೇರಿದಂತೆ ಆಯಾ ಎಸ್ಕಾಗಳ ಸಿಬ್ಬಂದಿಯು ಗೃಹಜ್ಯೋತಿ ಫಲಾನುಭವಿಗಳ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಈ ನಡುವೆ ಪರಿಶೀಲನೆಗೆ ಜುಲೈ 31 ಅಂತಿಮ ಗಡುವು ಎಂಬ ವದಂತಿಗಳು ಹರಿದಾಡುತ್ತಿವೆ. ಈ ಬೆನ್ನಲ್ಲೆ ಬೆಸ್ಕಾಂ ಸ್ಪಷ್ಟನೆ ನೀಡಿದೆ. ಗೃಹಜ್ಯೋತಿ ಪರಿಶೀಲನೆ ಕೊನೆಯ ದಿನಾಂಕ ಉಲ್ಲೇಖಿಸಿಲ್ಲ. ಆಗಸ್ಟ್ ಪೂರ್ತಿ ತಿಂಗಳು ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತೇವೆ. ಆ ಬಳಿಕ ಸರ್ಕಾರ ಅಥವಾ ಎಸ್ಕಾಂ ಸೂಚನೆ ನೀಡಿದರೆ ಪರಿಶೀಲನೆ ನಿಲ್ಲಿಸಲಾಗುತ್ತದೆ ಎಂದು ಬೆಸ್ಕಾಂ ಹಿರಿಯ ಅಧಿಕಾರಿ ತಿಳಿಸಿದ್ದಾರೆ.

ಬೆಸ್ಕಾಂ ವ್ಯಾಪ್ತಿಯಲ್ಲಿ ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳು ಬರುತ್ತವೆ. 68.86 ಲಕ್ಷ ಮಂದಿ ಗೃಹ ಜ್ಯೋತಿ ಯೋಜನೆ ಫಲಾನುಭವಿಗಳಿದ್ದಾರೆ. ಜುಲೈ 28ವರೆಗೂ ಶೇಕಡಾ 50 ರಷ್ಟು ಫಲಾನುವಿಗಳ ದಾಖಲೆ ಪರಿಶೀನೆಯಾಗಿದೆಯಷ್ಟೇ. ಇನ್ನೂ ಅರ್ಧದಷ್ಟು ಬಾಕಿ ಇದೆ ಎಂದು ಮೂಲಗಳು ತಿಳಿಸಿವೆ. ಬೆಸ್ಕಾಂ ಮೀಟರ್ ರೀಡರ್‌ಗಳು ಪರಿಶೀಲನೆಗಾಗಿ ಮನೆಗೆ ಹೋದಾಗ ಫಲಾನುಭವಿಗಳು ಲಭ್ಯ ಇರುವುದಿಲ್ಲ. ಇದರಿಂದ ಸಮಸ್ಯೆಯಾಗುತ್ತಿದೆ. "ಒಂದೇ ಮನೆಗೆ ಮೂರ್ನಾಲ್ಕು ಬಾರಿ ಮನೆಗಳಿಗೆ ಭೇಟಿ ಕೊಟ್ಟಿದ್ದೇವೆ. ಮಾಹಿತಿ ಕೊರತೆ ಇರಬಹುದು. ಮುಂದಿನ ತಿಂಗಳಲ್ಲಿ ಬಾಕಿ ಉಳಿದ ಮನೆಗಳಿಗೆ ಮತ್ತೊಮ್ಮೆ ಭೇಟಿ ಕೊಡುತ್ತೇವೆ" ಎಂದು ಸಿಬ್ಬಂದಿಯೊಬ್ಬರು ಹೇಳಿದರು.

ಬೆಂಗಳೂರಿನಲ್ಲಿ ಮನೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಫಲಾನುಭವಿಗಳು ಲಭ್ಯವಿರುವುದಿಲ್ಲ ಎಂಬ ಕಾರಣಕ್ಕೆ ಆಯಾ ಬಡಾವಣೆ, ಏರಿಯಾದ ಸಮೀಪದ ಪ್ರಮುಖ ಸ್ಥಳಗಳು ಅಂದರೆ, ದೇವಸ್ಥಾನ, ಪಾರ್ಕ್, ಜಿಬಿಎ (ಪಾಲಿಕೆ ಕಚೇರಿ), ಗ್ರಾಮ ಪಂಚಾಯತಿ, ಸರ್ಕಾರಿ ಕಚೇರಿಗಳ ಬಳಿ ಬೆಸ್ಕಾಂ ಸಿಬ್ಬಂದಿ ಕ್ಯಾಂಪ್ ಹಾಕಿರುತ್ತಾರೆ. ದಾಖಲಾತಿ ಜತೆ ಅಲ್ಲಿಗೆ ತೆರಳಿದರೆ 2 ನಿಮಿಷದಲ್ಲಿ ಅರ್ಜಿ ತುಂಬಿ ಪರಿಶೀಲನೆ ಪ್ರತಿಕ್ರಿಯೆ ಮುಗಿಸಿಕೊಂಡು ಬರಬಹುದು.

# ಇಂದು ಹೈಕೋರ್ಟ್ ತೀರ್ಪಿನ ಮೇಲೆ ವಿನಯ್ ಕುಲಕರ್ಣಿ ಭವಿಷ್ಯ ನಿರ್ಧಾರ



**ಬೆಂಗಳೂರು, ಜು.30:** ಧಾರವಾಡ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಮಾಜಿ ಶಾಸಕ ವಿನಯ್ ಕುಲಕರ್ಣಿ ಅವರು ತಮಗೆ ವಿಧಿಸಿರುವ ಶಿಕ್ಷೆಗೆ ತಡೆ ಕೋರಿ ಮತ್ತು ಜಾಮೀನು ನೀಡುವಂತೆ ಕೋರಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ತೀರ್ಪನ್ನು ಕಾಯ್ದಿರಿಸಿದ್ದು, ಶುಕ್ರವಾರ ಕುಲಕರ್ಣಿ ಭವಿಷ್ಯ ನಿರ್ಣಯವಾಗಲಿದೆ. ಧಾರವಾಡದ ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಕೇಸ್ ಪ್ರಕರಣದಲ್ಲಿ ನಾಳೆ ವಿನಯ್ ಕುಲಕರ್ಣಿ ಜಾಮೀನು ಅರ್ಜಿ ಸಂಬಂಧ ಹೈಕೋರ್ಟ್ ಆದೇಶ ಪ್ರಕಟಿಸಲಿದೆ. ನ್ಯಾ. ಮೊಹಮ್ಮದ್ ನವಾಜ್ ಮತ್ತು ನ್ಯಾ. ಜಿ. ಬಸವರಾಜ ಅವರ ಪೀಠದಿಂದ ಆದೇಶ ಹೊರಡಿಸಲಿದೆ. ಶಿಕ್ಷೆಗೆ ತಡೆಯಾಜ್ಞೆ ಹಾಗೂ ಜಾಮೀನು ವಿನಯ್ ಕುಲಕರ್ಣಿ ಅವರು ಅರ್ಜಿ ಸಲ್ಲಿಸಿದ್ದು, ಹೈಕೋರ್ಟ್ ಆದೇಶದ ಮೇಲೆ ವಿನಯ್ ಕುಲಕರ್ಣಿ ಅವರ ಭವಿಷ್ಯ ನಿಂತಿದೆ.



ಬೆಂಗಳೂರಿನ ಕೆಪಿಎಸ್‌ಸಿ ಕಚೇರಿಯಲ್ಲಿ ಭ್ರಷ್ಟಾಚಾರದ ವಿರುದ್ಧ ಎಬಿವಿಪಿ ಕಾರ್ಯಕರ್ತರು ಗುರುವಾರ ಕೆಪಿಎಸ್‌ಸಿ ಕಚೇರಿ ಬಳಿ ಪ್ರತಿಭಟನೆ ನಡೆಸಿದರು.

# ಆ.15ರಿಂದ ಸ್ವಿಗ್ಗಿ ಸೇವೆ ಬಹಿಷ್ಕರಿಸಲು ಬೆಂಗಳೂರು ಹೋಟೆಲ್‌ಗಳ ಸಂಘ ತೀರ್ಮಾನ

**ಬೆಂಗಳೂರು, ಜು.30:** ಆಹಾರ ವಿತರಣೆ ಸರಪಳಿಯಲ್ಲಿ ಪ್ರತಿಷ್ಠಿತ ಸಂಸ್ಥೆಯಾಗಿರುವ ಸ್ವಿಗ್ಗಿಯನ್ನು ಆ.15ರಿಂದ ಸ್ಥಗಿತಗೊಳಿಸಲು ಬೆಂಗಳೂರು ಹೋಟೆಲ್‌ಗಳ ಸಂಘ ತೀರ್ಮಾನಿಸಿದೆ.

ಚರ್ಚೆಗಳ ಮೂಲಕ ಸಮಸ್ಯೆಗಳನ್ನು ಸರಿಪಡಿಸಲು ಅಂತಿಮ ಅವಕಾಶವನ್ನು ಸ್ವಿಗ್ಗಿಗೆ ನೀಡಿರುವುದಾಗಿ ಸಂಘವು ತಿಳಿಸಿದೆ. ಸರಿಪಡಿಸುವ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ ಸ್ವಾತಂತ್ರ್ಯ ದಿನಾಚರಣೆಯಿಂದ ಎಲ್ಲಾ ಅಂಗಸಂಸ್ಥೆ ಸಂಸ್ಥೆಗಳು ವೇದಿಕೆಯೊಂದಿಗೆ ವ್ಯವಹಾರವನ್ನು ಸ್ಥಗಿತಗೊಳಿಸುತ್ತವೆ ಎಂದು ಸಂಘ ಎಚ್ಚರಿಸಿದೆ.




ಸಂಧಾನ ವಿಫಲವಾದರೆ, ಬೆಂಗಳೂರಿನಲ್ಲಿರುವ ನಮ್ಮ ಎಲ್ಲಾ ಸಂಘಗಳು ಆಗಸ್ಟ್ 15 ರಿಂದ ಸ್ವಿಗ್ಗಿಯೊಂದಿಗಿನ ಎಲ್ಲಾ ವ್ಯವಹಾರವನ್ನು ಸ್ಥಗಿತಗೊಳಿಸಲು ಸರ್ವಾನುಮತದಿಂದ ನಿರ್ಧರಿಸಿವೆ ಎಂದು ಸಂಘ ತಿಳಿಸಿದೆ.

ಪ್ರಚಾರದ ಜಾಹೀರಾತುಗಳನ್ನು ಪ್ರಾರಂಭಿಸುವ ಮೊದಲು ಹೋಟೆಲ್ ಮಾಲೀಕರಿಂದ ಲಿಖಿತ ಅಥವಾ ಡಿಜಿಟಲ್ ಒಪ್ಪಿಗೆಯನ್ನು ಪಡೆಯದೆ ಸ್ವಿಗ್ಗಿ ಜಾಹೀರಾತು ಮತ್ತು ಪ್ರಚಾರ ಶುಲ್ಕಗಳನ್ನು ಕಡಿತಗೊಳಿಸುತ್ತಿದೆ ಎಂದು ಸಂಘವು ಆರೋಪಿಸಿದೆ.

ಯಾವುದೇ ನಂತರದ ಶುಲ್ಕಗಳಿಲ್ಲದೆ ಜಾಹೀರಾತುಗಳಿಗಾಗಿ ಒಂದು ಕ್ಲಿಕ್ ಆಯ್ಕೆಯ ಕಾರ್ಯವಿಧಾನವನ್ನು ಸಹ ಅದು ಕೋರಿದೆ. ಪಾವತಿ ಹೇಳಿಕೆಗಳಲ್ಲಿ ಹೆಚ್ಚಿನ ಪಾರದರ್ಶಕತೆಯನ್ನು ಕೋರಿದ್ದು, ಕಮಿಷನ್, ಜಿಎಸ್‌ಟಿ, ಸಿಪಿಸಿ ಜಾಹೀರಾತುಗಳು, ಕೊಡುಗೆಗಳು ಮತ್ತು ಪ್ರಚಾರ ಶುಲ್ಕಗಳು ಸೇರಿದಂತೆ ಎಲ್ಲಾ ಶುಲ್ಕಗಳನ್ನು ಪ್ರತ್ಯೇಕವಾಗಿ ಬಹಿರಂಗ ಪಡಿಸಬೇಕು ಎಂದು ಅದು ಹೇಳಿದೆ.

ಸರ್ಕಾರಕ್ಕೆ ರವಾನೆ ಮಾಡಲು ಗ್ರಾಹಕರಿಂದ ಸಂಗ್ರಹಿಸಲಾದ ಜಿಎಸ್‌ಟಿ ಮೊತ್ತದ ಮೇಲೆ ಸೇವಾಶುಲ್ಕವನ್ನು ವಿಧಿಸುವುದನ್ನು ಸಂಘವು ಆಕ್ಷೇಪಿಸಿದೆ. ಸಂಘಟನೆಯ ಪ್ರಕಾರ, ಅನಗತ್ಯ ಕಡಿತಗಳು ಮತ್ತು ಲೆಕ್ಕಪತ್ರ ವ್ಯವಸ್ಥೆಯಲ್ಲಿನ ವ್ಯತ್ಯಾಸಗಳು ಹೋಟೆಲ್ ಮಾಲೀಕರು ಬಿಲ್ ಮಾಡಿದ ಆರ್ಡರ್ ಮೌಲ್ಯದ ಶೇಕಡಾ 50 ಕ್ಕಿಂತ ಕಡಿಮೆ ಪಡೆದಿದ್ದಾರೆ, ಇದು ತೀವ್ರ ಆರ್ಥಿಕ ಸಂಕಷ್ಟಕ್ಕೆ ಕಾರಣವಾಗಿದೆ ಎಂದು ಸಂಘದ ಗೌರವ ಅಧ್ಯಕ್ಷ ಪಿ.ಸಿ ರಾವ್ ತಿಳಿಸಿದ್ದಾರೆ.

ಮುಖ್ಯ ಸಮಸ್ಯೆ ಎಂದರೆ ಪಾವತಿ ಮತ್ತು ಪಾವತಿ ವ್ಯವಸ್ಥೆಯು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ. ಹಲವಾರು ಕಡಿತಗಳಿವೆ ಎಂದು ಅವರು ಹೇಳಿದರು.ಸ್ವಿಗ್ಗಿಯ ಸೇವಾಶುಲ್ಕವನ್ನು ಸಂಘವು ವಿರೋಧಿಸಲ್ಲಿಲ್ಲ ಆದರೆ ಹೆಚ್ಚುವರಿ ಕಡಿತಗಳನ್ನು ಆಕ್ಷೇಪಿಸಿದೆ ಎಂದು ಅವರು ಸ್ಪಷ್ಟಪಡಿಸಿದರು.

ಸೇವಾಶುಲ್ಕಕ್ಕೆ ನಮಗೆ ಯಾವುದೇ ಆಕ್ಷೇಪವಿಲ್ಲ. ಸೇವಾಶುಲ್ಕ ಏನೇ ಇರಲಿ, ಅವರು ಅದನ್ನು ತೆಗೆದುಕೊಳ್ಳಬಹುದು. ಆದರೆ ಅದರ ಹೊರತಾಗಿ, ಅವರು ಹೆಚ್ಚುವರಿ ಸೇವಾ ಶುಲ್ಕಗಳು, ಪಾವತಿ ಶುಲ್ಕಗಳು, ಜಾಹೀರಾತು ಶುಲ್ಕಗಳು, ಮ್ಯಾಪ್-ಅಪ್ ಶುಲ್ಕಗಳು ಮತ್ತು ನಮ್ಮ ಅನುಮತಿಯಿಲ್ಲದೆ ಹಲವಾರು ಇತರ ಶುಲ್ಕಗಳನ್ನು ವಿಧಿಸುತ್ತಾರೆ ಮತ್ತು ಅವುಗಳನ್ನು ಕಡಿತಗೊಳಿಸುತ್ತಾರೆ ಎಂದು ಅವರು ಹೇಳಿದರು.

**ದೇವರಜೀವನಹಳ್ಳಿ ಠಾಣೆ ವ್ಯಾಪ್ತಿಯಲ್ಲಿ ಕೃತ್ಯ, ಇಬ್ಬರನ್ನು ಬಂಧಿಸಿದ ಪೊಲೀಸರು**

# ಎಸ್‌ಐಆರ್ ಸಮೀಕ್ಷಾ ಕಾರ್ಯಕ್ಕೆ ತೆರಳಿದ್ದ ಅಧಿಕಾರಿ ಮೇಲೆ ಹಲ್ಲೆ

**ಬೆಂಗಳೂರು, ಜು.30:** ನಗರದ ದೇವರಜೀವನಹಳ್ಳಿ (ಡಿ.ಜೆ.ಹಳ್ಳಿ) ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಸಮೀಕ್ಷಾ ಕಾರ್ಯಕ್ಕೆ ತೆರಳಿದ್ದ ಸರ್ಕಾರಿ ಅಧಿಕಾರಿಯೊಬ್ಬರ ಮೇಲೆ ಭೀಕರವಾಗಿ ಹಲ್ಲೆ ನಡೆಸಿದ ಆಘಾತಕಾರಿ ಘಟನೆ ನಡೆದಿದೆ. ಕರ್ತವ್ಯನಿರತ ಅಧಿಕಾರಿಯ ಮೇಲೆ ಹಲ್ಲೆ ನಡೆಸಿದ ಆರೋಪದ ಮೇರೆಗೆ ಪೊಲೀಸರು ಕಾರ್ಯಾಚರಣೆ ನಡೆಸಿ ಯಾರಬ್ ಮತ್ತು ದಸ್ತಗೀರ್ ಎಂಬಿಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು ಬಂಧಿಸಿದ್ದಾರೆ.



ಘಟನೆಯ ವಿವರಗಳ ಪ್ರಕಾರ, ಬುಧವಾರ ಮಧ್ಯಾಹ್ನ ಸುಮಾರು 1:30 ರ ವೇಳೆಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹಾಗೂ ಸ್ಲಂ ಡೆವಲಪ್‌ಮೆಂಟ್ ಬೋರ್ಡ್‌ನ ಅಧಿಕಾರಿಗಳ ಜಂಟಿ ತಂಡವು ಡಿ.ಜೆ. ಹಳ್ಳಿಯ ರೋಶನ್ ನಗರದಲ್ಲಿರುವ ಕೌಸರ್ ಮಸೀದಿ ಬಳಿ ಮತದಾರರ ಪಟ್ಟಿ ಪರಿಷ್ಕರಣೆ ಸಮೀಕ್ಷೆಗಾಗಿ ತೆರಳಿತ್ತು. ಈ ಸಂದರ್ಭದಲ್ಲಿ ಸ್ಥಳಕ್ಕೆ ಬಂದ ಆರೋಪಿ ದಸ್ತಗೀರ್, ನನಗೂ ಸಹ ಸಮೀಕ್ಷಾ ಫಾರ್ಮ್ ನೀಡುವಂತೆ ಅಧಿಕಾರಿಗಳ ಬಳಿ ಪಟ್ಟು ಹಿಡಿದು ವಾದಕ್ಕಿಳಿದಿದ್ದಾನೆ.

ಅಧಿಕಾರಿಗಳು ಪರಿಶೀಲಿಸಿದಾಗ, ದಸ್ತಗೀರ್ ಈಗಾಗಲೇ ತನ್ನ ವಾಸ್ತವ್ಯವನ್ನು ಜಯನಗರಕ್ಕೆ ಬದಲಾಯಿಸಿರುವುದು ಕಂಡುಬಂದಿದೆ. ಈ ಹಿನ್ನೆಲೆಯಲ್ಲಿ ನಿಯಮಾನುಸಾರ ಈ ವ್ಯಾಪ್ತಿಯಲ್ಲಿ ಆತನಿಗೆ ಫಾರ್ಮ್ ನೀಡಲು ಸಾಧ್ಯವಿಲ್ಲ ಎಂದು ಅಧಿಕಾರಿಗಳು ಸ್ಪಷ್ಟವಾಗಿ ತಿಳಿಸಿದ್ದಾರೆ. ಇದರಿಂದ ತೀವ್ರ ಆಕ್ರೋಶಗೊಂಡ ದಸ್ತಗೀರ್ ಹಾಗೂ ಆತನಿಗೆ ಸಾಥ್ ನೀಡಿದ ಯಾರಬ್, ಸ್ಥಳದಲ್ಲೇ ಅಧಿಕಾರಿಗಳ ಜೊತೆ ಗಲಾಟೆ ತೆಗೆದು ಕರ್ತವ್ಯಕ್ಕೆ ಅಡ್ಡಿಪಡಿಸಿದ್ದಾರೆ.

ವಾದ-ವಿವಾದ ವಿಕೋಪಕ್ಕೆ ತಿರುಗಿ, ಆರೋಪಿಗಳಿಬ್ಬರೂ ಸ್ಲಂ ಡೆವಲಪ್‌ಮೆಂಟ್ ಬೋರ್ಡ್ ಸೂಪರಿಂಟೆಂಡೆಂಟ್ ಆಗಿ ಕಾರ್ಯನಿರ್ವಹಿಸುತ್ತಿರುವ ಫಕೀರಪ್ಪ ಎಂಬುವರ ಮೇಲೆ ಏಕಾಏಕಿ ಭೀಕರ ದಾಳಿ ನಡೆಸಿದ್ದಾರೆ. ಅಧಿಕಾರಿಯ ಮುಖ, ಕಟಿ ಭಾಗಕ್ಕೆ ಮುಷ್ಟಿಯಿಂದ ಪಂಚ್ ಮಾಡಿ, ಬೆನ್ನಿಗೆ ಹಿಗ್ಗಾಮುಗ್ಗಾ ಹೊಡೆದು ಹಲ್ಲೆ ನಡೆಸಿದ್ದಾರೆ. ಆರೋಪಿಗಳ ಹಲ್ಲೆಯಿಂದಾಗಿ ಫಕೀರಪ್ಪ ಅವರ ತುಟಿಯಿಂದ ತೀವ್ರ ರಕ್ತಸ್ರಾವವಾಗಿ, ಅವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಕೂಡಲೇ ಸ್ಥಳದಲ್ಲಿದ್ದ ಸಾರ್ವಜನಿಕರು ಮಧ್ಯ ಪ್ರವೇಶಿಸಿ ಗಲಾಟೆಯನ್ನು ಬಿಡಿಸಿ, ಗಾಯಾಳು ಅಧಿಕಾರಿಯನ್ನು ರಕ್ಷಿಸಿದ್ದಾರೆ. ತಕ್ಷಣವೇ ಫಕೀರಪ್ಪ ಅವರನ್ನು ಡಾ. ಬಿ.ಆರ್. ಅಂಬೇಡ್ಕರ್ ಆಸ್ಪತ್ರೆಗೆ ದಾಖಲಿಸಿ ತುರ್ತು ಚಿಕಿತ್ಸೆಕೊಡಿಸಲಾಗಿದೆ. ಚಿಕಿತ್ಸೆಯ ನಂತರ ಗಾಯಾಳು ಅಧಿಕಾರಿ ಡಿ.ಜೆ. ಹಳ್ಳಿ ಪೊಲೀಸ್ ಠಾಣೆಗೆ ತೆರಳಿ ನೀಡಿದ ದೂರಿನನ್ವಯ ಪ್ರಕರಣ ದಾಖಲಿಸಿ ಕೊಂಡ ಪೊಲೀಸರು, ತಕ್ಷಣವೇ ಕಾರ್ಯಪ್ರವೃತ್ತರಾಗಿ ಹಲ್ಲೆ ನಡೆಸಿದ ಇಬ್ಬರೂ ಆರೋಪಿಗಳನ್ನು ಬಂಧಿಸಿ ಜೈಲಿಗಟ್ಟಿದ್ದಾರೆ.

# ಹಣಕ್ಕಾಗಿ ಪ್ರಾಧ್ಯಾಪಕಿ ಪುತ್ರಿಯ ಕುತ್ತಿಗೆ ಇರಿದ ತಂದೆ

**ಬೆಂಗಳೂರು, ಜು.30:** ಬೆಂಗಳೂರಿನ ರಾಜಾನುಕುಂಟೆಯಲ್ಲಿ ಹಣಕ್ಕಾಗಿ ತಂದೆಯೇ ಮಗಳನ್ನು ಚಾಕುವಿನಿಂದ ಇರಿದ ಘಟನೆ ನಡೆದಿದೆ. ಖಾಸಗಿ ಎಂಜಿನಿಯರ್ ಕಾಲೇಜೊಂದರಲ್ಲಿ ಸಹಾಯಕ ಪ್ರಾಧ್ಯಾಪಕಿಯಾಗಿದ್ದ ಮಗಳ ಬಳಿ 40 ಲಕ್ಷ ಹಣ ಕೊಡುವಂತೆ ದುಂಬಾಲು ಬಿದ್ದಿದ್ದ ತಂದೆ, ಆಕೆಯ ಚೇಂಬರ್‌ಗೆ ನುಗ್ಗಿ ಹಲ್ಲೆ ನಡೆಸಿದ್ದಾನೆ.

ಪ್ರಕರಣದ ಆರೋಪಿ 52 ವರ್ಷದ ನಾಗೇಂದ್ರ, ಜುಲೈ 25ರಂದು ಮಗಳು ಪ್ರಾಧ್ಯಾಪಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಕಾಲೇಜಿಗೆ ಭೇಟಿ ನೀಡಿದ್ದಾನೆ. ಮೀಟಿಂಗ್ ಮುಗಿಸಿ ಮಗಳು ಹೊರಬರುವುದನ್ನೇ ಕಾದಿದ್ದ ಪಾಪಿ ತಂದೆ, ಆಕೆ ಚೇಂಬರ್‌ಗೆ ಬಂದ ಕೂಡಲೇ ಕೈಯಲ್ಲಿದ್ದ ಚಾಕುವಿನಿಂದ ಮನಬಂದಂತೆ ಇರಿದಿದ್ದಾನೆ. ಕಿಬ್ಬೊಟ್ಟೆ, ಎದೆ ಹಾಗೂ ಕುತ್ತಿಗೆಗೆ ಹಲವು ಬಾರಿ ಇರಿದದ್ದರಿಂದ ಯುವತಿ ತೀವ್ರ ರಕ್ತಸ್ರಾವಕ್ಕೆ ಒಳಗಾಗಿದ್ದಾಳೆ.



ಘಟನೆ ನಡೆಯುತ್ತಿದ್ದಂತೆ ಸಂತ್ರಸ್ತೆಯ ಬಳಿ ಧಾವಿಸಿದ ಕಾಲೇಜು ಸಿಬ್ಬಂದಿ ಆಕೆಯನ್ನು ಹತ್ತಿರದ ಖಾಸಗಿ ಆಸ್ಪತ್ರೆಗೆ ಕೊಂಡೊಯ್ದಿದ್ದು, ದುರದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ನಿನ್ನ ವಿದ್ಯಾಭ್ಯಾಸಕ್ಕೆ ನಾನು ಸಾಕಷ್ಟು ಹಣ ವ್ಯಯಿಸಿದ್ದು, ನೀನು ಮದುವೆಯಾದ ನಂತರವೂ ನನಗೆ ಹಣ ನೀಡುತ್ತಿರಬೇಕು ಎಂದು ಸದಾ ಜಗಳ ಕಾಯುತ್ತಿದ್ದ ತಂದೆಯಿಂದ ಬೇಸತ್ತ ಪ್ರಾಧ್ಯಾಪಕಿ, ತಾಯಿಯೊಂದಿಗೆ ಬೇರೆ ಮನೆಯಲ್ಲಿ ವಾಸವಿದ್ದರು ಎನ್ನಲಾಗಿದೆ. ಆರೋಪಿ ನಾಗೇಂದ್ರ ಪೊಲೀಸ್ ಕಸ್ಟಡಿಯಲ್ಲಿದ್ದು, ರಾಜಾನುಕುಂಟೆ ಪೊಲೀಸರು ವಿಚಾರಣೆ ಮುಂದುವರೆಸಿದ್ದಾರೆ.



ಅಲ್ಪಸಂಖ್ಯಾತರ ನಿರ್ದೇಶನಾಲಯದ ಕಚೇರಿಯಲ್ಲಿ ನಡೆದ ಭ್ರಷ್ಟಾಚಾರದ ಬಗ್ಗೆ ಸಿಬಿಐ ತನಿಖೆಗೆ ಒತ್ತಾಯಿಸಿ ಸಮತಾ ಸ್ವಾಭಿಮಾನಿ ದಳ (ಎಸ್‌ಎಸ್‌ಡಿ) ಸದಸ್ಯರು ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ಮಹಾನಗರ ಪಾಲಿಕೆ ಮೇಯರ್ ಚುನಾವಣೆ: ಕಾಂಗ್ರೆಸ್‌ನಲ್ಲಿ ಹೆಚ್ಚಿದ ಆಕಾಂಕ್ಷಿಗಳ ಪೈಪೋಟಿ

**ಕಲಬುರಗಿ, ಜು. 30:** ಮಹಾನಗರ ಪಾಲಿಕೆ ಮೇಯರ್ ಮತ್ತು ಉಪ ಮೇಯರ್ ಸ್ಥಾನದ ಚುನಾವಣೆ ಆ.7ರಂದು ಮುಹೂರ್ತ ಫಿಕ್ಸ್ ಆಗಿದೆ. ಮೇಯರ್ ಸ್ಥಾನ ಬಿಸಿಎ ಮತ್ತು ಉಪ ಮೇಯರ್ ಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಾಗಿದ್ದು, ಕಾಂಗ್ರೆಸ್ ಮತ್ತು ಬಿಜೆಪಿ ಪಾಳಯದಲ್ಲಿ ಲೆಕ್ಕಾಚಾರಗಳು ಗರಿಗೆದರಿವೆ. ಆಡಳಿತಾರೂಢ ಕಾಂಗ್ರೆಸ್ ಬಹುಮತದ ಸಂಖ್ಯಾಬಲ ಹೊಂದಿದ್ದರಿಂದ ತಲೆಬಿಸಿ ಹೆಚ್ಚಾಗಿದ್ದು, ಸ್ಥಳೀಯ ಶಾಸಕರ ಬೆನ್ನು ಬಿದ್ದಿದ್ದಾರೆ.

ನಿಗದಿಯಾದ ಮೀಸಲಾತಿ ಪ್ರಕಾರ ಎರಡೂ ಸ್ಥಾನಗಳಿಗೆ ನಾ ಮುಂದು, ತಾ ಮುಂದು ಎಂದು ಆಕಾಂಕ್ಷಿಗಳು ನಾಯಕರ ದುಂಬಾಲು ಬಿದ್ದಿದ್ದಾರೆ. ಮೇಯರ್ ಮತ್ತು ಉಪ ಮೇಯರ್ ಜತೆ ಆರೋಗ್ಯ, ಶಿಕ್ಷಣ, ಹಣಕಾಸು ಮತ್ತು ಲೆಕ್ಕಪತ್ರ ಸ್ಥಾಯಿ ಸಮಿತಿಗಳಿಗೂ ನಗರದ ಇಂದಿರಾ ಸ್ಮಾರಕ ಭವನದಲ್ಲಿ ಆ.7ರಂದು ಮಧ್ಯಾಹ್ನ 3.30ಕ್ಕೆ ಚುನಾವಣಾ ಪ್ರಕ್ರಿಯೆ ನಡೆಯಲಿದೆ. ಅಂದು ಬೆಳಗ್ಗೆ 10ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಶುರುವಾಗಲಿದ್ದು, ಸಂಬಂಧಿತ ಮತದಾರರಿಗೆ ಈಗಾಗಲೆ ಚುನಾವಣೆಯ ನೋಟಿಸ್ ನೀಡಲಾಗಿದೆ. ಕಾಂಗ್ರೆಸ್ ಬಲಾಬಲ : ರಾಜ್ಯದಲ್ಲಿ ಆಡಳಿತ ಚುಕ್ಕಾಣಿ ಹಿಡಿದಿರುವ ಕಾಂಗ್ರೆಸ್, ಪಾಲಿಕೆಯಲ್ಲೂ ಬಹುಮತಕ್ಕೆ ಬೇಕಾಗುವ ಸಂಖ್ಯಾಬಲ ಹೊಂದಿದೆ. 28 ಪಕ್ಷದ ಸದಸ್ಯರಿದ್ದಾರೆ. ಜತೆಗೆ ಸಂಸದ ರಾಧಾಕೃಷ್ಣ ದೊಡ್ಡಮನಿ, ರಾಜ್ಯಸಭಾ ಸದಸ್ಯ ಮಲ್ಲಿಕಾರ್ಜುನ ಖರ್ಗೆ, ಶಾಸಕರಾದ ಅಲ್ಲಮಪ್ರಭು ಪಾಟೀಲ್, ಕನೀಜ್ ಫಾತಿಮಾ, ವಿಧಾನ ಪರಿಷತ್ ಸದಸ್ಯರಾದ ಜಗದೇವ ಗುತ್ತೇದಾರ್, ತಿಪ್ಪಣ್ಣಪ್ಪ ಕಮಕನೂರ, ಡಾ.ಚಂದ್ರಶೇಖರ ಪಾಟೀಲ್ ಹುಮನಾಬಾದ್ ಅವರು ಮತ ಚಲಾಯಿಸುವ ಹಕ್ಕು ಹೊಂದಿದ್ದಾರೆ.

> **ಕಲಬುರಗಿ ಪಾಲಿಕೆ ಮೇಯರ್, ಉಪ ಮೇಯರ್ ಸ್ಥಾನಗಳಿಗೆ ಮೀಸಲು ಅಧಿಸೂಚನೆ ಹೊರಡಿಸಲಾಗಿದೆ. ಆ.7ರಂದು ಚುನಾವಣೆ ನಿಗದಿಯಾಗಿದ್ದು, ಅಗತ್ಯ ಸಿದ್ಧತೆಯೂ ನಡೆದಿದೆ. ಆದರೆ ಸಂಸತ್ ಅಧಿವೇಶನ ಹಿನ್ನೆಲೆಯಲ್ಲಿ ಚುನಾವಣಾ ಪ್ರಕ್ರಿಯೆ ಕೆಲದಿನ ಮುಂದೂಡುವ ಸಾಧ್ಯತೆ ಇದೆ. ಆದರೆ ಇನ್ನೂ ಯಾವುದೇ ನಿರ್ಧಾರ ಆಗಿಲ್ಲ.**
> **– ಜಹೀರಾ ನಸೀಮ್, ಪ್ರಾದೇಶಿಕ ಆಯುಕ್ತರು ಮತ್ತು ಚುನಾವಣಾಧಿಕಾರಿ.**

ಹೀಗಾಗಿ ಕಾಂಗ್ರೆಸ್ ಸಂಖ್ಯಾಬಲ 35ಕ್ಕೆ ಏರಿಕೆಯಾಗಲಿದೆ.

ಮೇಯರ್ ಸ್ಥಾನ ಬಿಸಿಎಗೆ ಮೀಸಲಾಗಿರುವ ಹಿನ್ನೆಲೆಯಲ್ಲಿ ಸದಸ್ಯರಾದ ಗೋಳಾ, ಅಲಿಖಾನ್, ಸೈಯದ್ ಅಹ್ಮದ್, ಅನುಪಮಾ ಕಮಕನೂರ, ರಾಗಮ್ಮ ಇನಾಮದಾರ್, ಇಮ್ರಾನ್, ಹಮೀದ್, ರಿಯಾಜ್ ಪಟ್ಕೋ, ನಜ್ಮಾ ತಯಾರ್ ಅಲಿ ರೇಸ್‌ನಲ್ಲಿದ್ದಾರೆ. ಉಪ ಮೇಯರ್ ಸ್ಥಾನಕ್ಕೆ ಲತಾ ರವಿ ರಾಠೋಡ್, ರೇಣುಕಾ ಹೋಳ್ಕರ್, ನಿಂಗಮ್ಮ ಕಟ್ಟಿಮನಿ ಇತರರು ರೇಸ್‌ನಲ್ಲಿದ್ದಾರೆ.

ಈ ಮಧ್ಯೆ ಜೆಡಿಎಸ್‌ನ ನಾಲ್ವರು ಸದಸ್ಯರಲ್ಲಿ ಯಾರು ಯಾವ ಕಡೆ ವಾಲುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ. ಮೇಲಿನ ಹಂತದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಒಟ್ಟಾಗಿ ಹೋಗುತ್ತಿದ್ದರೂ ಸ್ಥಳಿಯ ಸಂಸ್ಥೆ ಚುನಾವಣೆಯಲ್ಲಿ ಸದಸ್ಯರು ಕೊನೆಯ ಹಂತದಲ್ಲಿ ಕೈಗೊಳ್ಳುವ ನಿರ್ಧಾರ ಮೇಲೆ ಎಲ್ಲವೂ ಅವಲಂಬಿಸಿದೆ. ಮುಂದೂಡಿಕೆ ಸಾಧ್ಯತೆ: ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಆ.8ರಂದು ಪೂರ್ಣಗೊಳ್ಳಲಿದೆ. ಸಂಸತ್ ಅಧಿವೇಶನವೂ ಶುರುವಾಗಿದೆ. ಮಲ್ಲಿಕಾರ್ಜುನ ಖರ್ಗೆ ಮತ್ತು ಸಂಸದ ರಾದಾಕೃಷ್ಣ ದೊಡಮನಿ ಅವರು ದೆಹಲಿಯಲ್ಲಿರುವುದರಿಂದ ಪಾಲಿಕೆ ಚುನಾವಣೆ ಪ್ರಕ್ರಿಯೆಗೆ ತೊಡಕಾಗಬಹುದು ಎಂಬ ಕಾರಣಕ್ಕೆ ಚುನಾವಣೆಯ ದಿನವನ್ನು ಮುಂದೂಡುವ ಸಾಧ್ಯತೆ ದಟ್ಟವಾಗಿದೆ.

ಈ ನಿಟ್ಟಿನಲ್ಲಿ ಕಾಂಗ್ರೆಸ್ ಹಿರಿಯ ನಾಯಕರು, ಪಾಲಿಕೆ ಕೆಲ ಸದಸ್ಯರು ಚುನಾವಣಾ ಪ್ರಕ್ರಿಯೆ ಮುಂದೂಡು ವಂತೆ ಚುನಾವಣಾಧಿಕಾರಿಯೂ ಆಗಿರುವ ಪ್ರಾದೇಶಿಕ ಆಯುಕ್ತರಿಗೆ ಈಗಾಗಲೇ ಮನವಿ ಮಾಡಿದ್ದಾರೆ ಎನ್ನಲಾಗಿದೆ.

ಮೀಸಲು ಪ್ರಶ್ನಿಸಿ ಮೇಯರ್ ಸ್ಥಾನದ ಆಕಾಂಕ್ಷಿ ಲತಾ ರವಿ ರಾಠೋಡ್ ಅವರು, ಕಲಬುರಗಿ ಹೈಕೋರ್ಟ್ ಪೀಠದ ಮೊರೆ ಹೋಗಿದ್ದಾರೆ. ಮೇಯರ್ ಸ್ಥಾನ ಬಿಸಿಎಗೆ ಮೀಸಲಾಗಿದೆ. 2022ರಲ್ಲಿ 24ನೇ ಅವಧಿಗೆ ಮೇಯರ್ ಸ್ಥಾನ ಎಸ್‌ಸಿ ಮೀಸಲು ನಿಗದಿಯಾಗಿತ್ತು. ಆದರೆ ಕಾರಣಾಂತರಗಳಿಂದ ಬಂದದ್ದು ಕೈತಪ್ಪಿ ಹೋಗಿದೆ. ಪ್ರತಿ 10 ವರ್ಷಕ್ಕೊಮ್ಮೆ ಮೀಸಲು ಬದಲಾವಣೆ ಆಗಬೇಕು. ಸುಮಾರು 16 ವರ್ಷಗಳಿಂದ ಎಸ್‌ಸಿ ಮೀಸಲು ಬಂದಿಲ್ಲ. ಹೀಗಾಗಿ ಈ ಬಾರಿಯಾದರೂ ನ್ಯಾಯ ಕೊಡಿಸುವಂತೆ ಮನವಿ ಮಾಡಿದ್ದಾರೆ. ಮೇಯರ್ ಸ್ಥಾನ ಎಸ್‌ಸಿ (ಮಹಿಳೆ)ಗೂ ಮೀಸಲಾತಿ ದೊರೆತಿಲ್ಲ ಎಂದು ಲತಾ ರಾಠೋಡ್ ಪ್ರಶ್ನಿಸಿದ್ದು, ಅವರ ಅರ್ಜಿ ವಿಚಾರಣೆಗೆ ಬರಲಿದೆ.

> **ಕಲಬುರಗಿ ಮಹಾನಗರ ಪಾಲಿಕೆಗೆ ಈ ಮೊದಲು ಮೇಯರ್ ಸ್ಥಾನ ಎಸ್‌ಸಿ ಮೀಸಲು ನಿಗದಿಯಾಗಿತ್ತು. ಕಾರಣಾಂತರಗಳಿಂದ ಕೈಬಿಟ್ಟು ಹೋಗಿದೆ. ಈ ಬಾರಿಯಾದರೂ ಮೀಸಲು ನಿಗದಿ ಮಾಡಿ ಅನುಕೂಲ ಮಾಡಿಕೊಡುವಂತೆ ಕೋರಿ ಕೋರ್ಟ್ ಮೊರೆ ಹೋಗಲಾಗಿದೆ. ಜತೆಗೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಿಗೂ ಮನವಿ ಸಲ್ಲಿಸಲಾಗಿದೆ.**
> **– ಲತಾ ರವಿ ರಾಠೋಡ್ ಸದಸ್ಯೆ, ಮಹಾನಗರ ಪಾಲಿಕೆ ಕಲಬುರಗಿ**

## ಶಾಲೆ ಆರಂಭವಾಗಿ ಎರಡು ತಿಂಗಳಾದರೂ ವಿದ್ಯಾರ್ಥಿಗಳಿಗಿಲ್ಲ ಶೂ ಭಾಗ್ಯ: ಬರಿಗಾಲಲ್ಲೇ ಶಾಲೆಗೆ ಬರುತ್ತಿರುವ ಮಕ್ಕಳು



**ಕಲಬುರಗಿ, ಜು. 30:** ಬಡ ಮಕ್ಕಳಿಗಾಗಿ ರಾಜ್ಯ ಸರ್ಕಾರ ಪ್ರತಿವರ್ಷ ಸರ್ಕಾರಿ ಹಾಗೂ ಅನುದಾನಿತ ಶಾಲಾ ಮಕ್ಕಳಿಗೆ ಉಚಿತ ಶೂ ಹಾಗೂ ಸಾಕ್ಸ್ ನೀಡುತ್ತದೆ. ಆದರೆ ಪ್ರಸಕ್ತ ವರ್ಷ ಶಾಲೆ ಆರಂಭವಾಗಿ ಎರಡು ತಿಂಗಳು ಕಳೆದರೂ ಸಹ ಜಿಲ್ಲೆಯ ಶಾಲಾ ಮಕ್ಕಳಿಗೆ ಶೂ ಭಾಗ್ಯ ಸಿಕ್ಕಿಲ್ಲ. ಹೀಗಾಗಿ ಕೆಲ ವಿದ್ಯಾರ್ಥಿಗಳು ಚಪ್ಪಲಿ ಹಾಕಿಕೊಂಡು ಬಂದರೆ, ಇನ್ನು ಕೆಲ ವಿದ್ಯಾರ್ಥಿಗಳು ಬರಿಗಾಲಿನಲ್ಲಿ ಶಾಲೆಗೆ ಬರುತ್ತಿದ್ದಾರೆ. ಶೂ ಖರೀದಿಗೆ ಹಣವಿಲ್ಲ, ಇನ್ನಾದರೂ ನಮಗೆ ಶೂ ನೀಡಿ ಎಂದು ಮಕ್ಕಳು ಟಿವಿ9 ಎದುರು ಅಳಲು ತೋಡಿಕೊಂಡಿದ್ದಾರೆ. ಮಳೆಗಾಲದ ಈ ದಿನಗಳಲ್ಲಿ ಜಿಲ್ಲೆಯಲ್ಲಿ ವಿದ್ಯಾರ್ಥಿಗಳು ಬರಿಗಾಲಿನಲ್ಲಿ ಶಾಲೆಗೆ ಬರುವ ಪ್ರಸ್ಥಿತಿ ನಿರ್ಮಾಣವಾಗಿದೆ.

ಹಿಂದೆ ಸಿಎಂ ಸಿದ್ದರಾಮಯ್ಯ ಸಿಎಂ ಆಗಿದ್ದ ಅವಧಿಯಲ್ಲಿ ಬಡ ವಿದ್ಯಾರ್ಥಿಗಳಿಗಾಗಿ ಶೂ ಭಾಗ್ಯ ಯೋಜನೆ ಜಾರಿಗೆ ತಂದಿದ್ದರು. ಆ ಮೂಲಕ 1 ರಿಂದ 10ನೇ ತರಗತಿ ವರೆಗಿನ ಸರ್ಕಾರಿ ಹಾಗೂ ಅನುದಾನಿತ ಶಾಲಾ ಮಕ್ಕಳಿಗೆ ಸರ್ಕಾರ ಉಚಿತವಾಗಿ 2 ಜೊತೆ ಶೂ ಮತ್ತು ಸಾಕ್ಸ್‌ಗಳನ್ನು ನೀಡಲಾಗುತ್ತಿತ್ತು. ಆದರೆ ಪ್ರಸಕ್ತ ವರ್ಷ ಶಾಲೆಗಳು ಆರಂಭವಾಗಿ ಇದೀಗ ಎರಡು ತಿಂಗಳು ಕಳೆದರೂ ಇಲ್ಲಿಯ ವರೆಗೆ ಜಿಲ್ಲೆಯ ಒಂದೇ ಒಂದು ವಿದ್ಯಾರ್ಥಿಗೆ ಶೂ ಮತ್ತು ಸಾಕ್ಸ್ ವಿತರಿಸಿಲ್ಲ. ಹೀಗಾಗಿ ವಿದ್ಯಾರ್ಥಿಗಳು ಬರಿಗಾಲಿನಲ್ಲಿ ಶಾಲೆಗೆ ಬರುವ ಪ್ರಸ್ಥಿತಿ ನಿರ್ಮಾಣವಾಗಿದೆ. ಲಕ್ಷಾಂತರ ಬಡ ಮಕ್ಕಳಿಗೆ ಅನುಕೂಲವಾಗಬೇಕಿದ್ದ ಯೋಜನೆ ಹಳ್ಳ ಹಿಡಿಯಿತಾ ಎಂಬ ಅನುಮಾನ ಶುರುವಾಗಿದೆ.

ಇನ್ನು ಈ ಬಗ್ಗೆ ರಿಯಾಲಿಟಿ ಚೆಕ್‌ನಲ್ಲಿ ಶೂ ಭಾಗ್ಯ ಯೋಜನೆಯಡಿ ಇನ್ನು ಶೂ ಖರೀದಿ ಮತ್ತು ವಿತರಣೆಯಾಗಿಲ್ಲ ಎನ್ನುವುದು ಬಯಲಾಗಿದೆ. ಶೂ ಸಾಕ್ಸ್ ಖರೀದಿ ಮಾಡುವುದಕ್ಕೆ ನಮ್ಮ ಬಳಿ ಹಣವಿಲ್ಲ, ಹೀಗಾಗಿ ಸರ್ಕಾರ ಕೂಡಲೇ ಶೂ ವಿತರಿಸಬೇಕು ಎನ್ನುತ್ತಿದ್ದಾರೆ ವಿದ್ಯಾರ್ಥಿಗಳು.

ಇನ್ನು ಕಳೆದ ವರ್ಷ ಇಷ್ಟೊತ್ತಿಗಾಗಲೇ ಎಲ್ಲಾ ಶಾಲೆಗಳಿಗೆ ಶೂ ಮತ್ತು ಸಾಕ್ಸ್ ವಿತರಿಸಲಾಗಿತ್ತು. ಆಯಾ ಶಾಲೆಯ ಮಕ್ಕಳ ಶಾಲಾ ದಾಖಲಾತಿ ಅನುಸಾರ ಮುಖ್ಯೋಪಾಧ್ಯಾಯರ ಖಾತೆಗಳಿಗೆ ಸರ್ಕಾರ ಹಣ ಹಾಕುತ್ತಿದ್ದರು. ಆ ಹಣದಿಂದ ಆಯಾ ತಾಲ್ಲೂಕು ಹಾಗೂ ಜಿಲ್ಲೆಯ ಸ್ಥಳೀಯ ಅಂಗಡಿಗಳಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು ಶೂ ಮತ್ತು ಸಾಕ್ಸ್ ಖರೀದಿಸಿ ವಿತರಣೆ ಮಾಡುತ್ತಿದ್ದರು. ಆದರೆ ಪ್ರಸಕ್ತ ವರ್ಷ ಆ ಯೋಜನೆ ಕೈಬಿಟ್ಟ ರಾಜ್ಯ ಸರ್ಕಾರವೇ ಟೆಂಡರ್ ಕರೆದು ವಿತರಿಸಲು ಮುಂದಾಗಿರುವುದರಿಂದ ಇಲ್ಲಿಯವರೆಗೆ ಶೂ ಮತ್ತು ಸಾಕ್ಸ್ ವಿತರಣೆಯಾಗಿಲ್ಲ.

ಸದ್ಯ ಕಲಬುರಗಿ ಜಿಲ್ಲೆಯಲ್ಲಿ 1 ಲಕ್ಷ 94 ಸಾವಿರ 850 ಮಕ್ಕಳು ಶೂ ಮತ್ತು ಸಾಕ್ಸ್‌ಗಾಗಿ ಈಗಾಗಲೇ ನೋಂದಣಿ ಮಾಡಿಕೊಳ್ಳಲಾಗಿದ್ದು, ಶೀಘ್ರದಲ್ಲಿ ಎಲ್ಲಾ ಶಾಲಾ ಮಕ್ಕಳಿಗೆ ವಿತರಣೆ ಮಾಡುವುದಾಗಿ ಡಿಡಿಪಿಐ ಶಂಕ್ರಮ್ಮ ಢವಳಗಿ ತಿಳಿಸಿದರು.

## ೩೦ ವರ್ಷಗಳ ನಂತರ, ಮಾಂಜ್ರಾ ನದಿಯಲ್ಲಿ ನೀರಿಲ್ಲದೇ ಖಾಲಿ ಖಾಲಿ



**ಬೀದರ್, ಜು. 30:** ಜಿಲ್ಲೆಯ ಜೀವನಾಡಿಯಾಗಿರುವ ಮಾಂಜ್ರಾ ನದಿ ಬರದ ಹೊಡೆತಕ್ಕೆ ಸಿಲುಕಿದ್ದು, ಕಳೆದ 30ಕ್ಕೂ ಹೆಚ್ಚು ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಸಂಪೂರ್ಣವಾಗಿ ಬರಿದಾಗುವ ಸ್ಥಿತಿಗೆ ತಲುಪಿದೆ.

ಜಿಲ್ಲೆಯಲ್ಲಿ ಎರಡು ತಿಂಗಳಿಂದ ಮಳೆಯಾಗದ ಪರಿಣಾಮ ಮಾಂಜ್ರಾ ನದಿಯ ನೀರಿನ ಪ್ರಮಾಣ ಶೇ.95ರಷ್ಟು ಕುಸಿದಿದ್ದು, ರೈತರು, ಜನರು, ಜಾನುವಾರುಗಳು ಹಾಗೂ ಪಕ್ಷಿಗಳಿಗೆ ನೀರಿನ ಸಮಸ್ಯೆ ಎದುರಾಗಿದೆ. ಬರಗಾಲದಲ್ಲೂ ಕೂಡ ಹಿಂದೆಂದೂ ಮಾಂಜ್ರಾ ನದಿ ಬತ್ತಿರಲಿಲ್ಲ. ಬೇಸಿಗೆಯಲ್ಲಿ ಜನ ಜಾನುವಾರುಗಳಿಗೆ ಆಸರೆಯಗಿ ಜನರ ಜೀವನಾಡಿಯಾಗಿದ್ದ ನದಿ ಇಂದು ಸಂಪೂರ್ಣ ಬತ್ತಿರುವುದು ತೀವ್ರ ಆತಂಕ ಉಂಟು ಮಾಡಿದೆ.

ಜಿಲ್ಲೆಯ ಹೂಲಸೂರು, ಭಾಲ್ಕಿ, ಔರಾದ್ ಹಾಗೂ ಬೀದರ್ ತಾಲೂಕು ಸೇರಿದಂತೆ ಹಲವು ಭಾಗಗಳಿಗೆ ಮಾಂಜ್ರಾ ನದಿ ಪ್ರಮುಖ ಜಲ ಮೂಲವಾಗಿತ್ತು. ಸುಮಾರು 48 ಗ್ರಾಮಗಳು ಮಾಂಜ್ರಾ ನದಿಯನ್ನು ಕುಡಿಯುವ ನೀರೂ ಸೇರಿದಂತೆ ಪ್ರತಿಯೊಂದಕ್ಕೂ ಅವಲಂಬಿಸಿದ್ದರು. ಜಿಲ್ಲೆಯ ಇತರೆ ಜಲ ಮೂಲಗಳು ಬತ್ತಿದ ಸಂದರ್ಭದಲ್ಲೂ ಮಾಂಜ್ರಾ ನದಿ ಜನರ ನಿರಂತರ ನೀರಿನ ಸೆಲೆಯಿಂದ ಜನರ ಜೀವನಾಡಿಯಾಗಿ ಉಳಿದಿತ್ತು. ಆದರೆ ಇದೀಗ ಈ ನದಿಯಲ್ಲೂ ನೀರಿನ ಕೊರತೆ ಉಂಟಾಗಿರುವುದು ತೀವ್ರ ಆತಂಕಕ್ಕೆ ಕಾರಣವಾಗಿದೆ.

ಮಾಂಜ್ರಾ ನದಿ ತೀರದ ಜಮೀನುಗಳ ರೈತರ ಬದುಕು ನೀರಿಲ್ಲದೆ ಸಂಕಷ್ಟಕ್ಕೆ ಸಿಲುಕಿದೆ. ಮಳೆ ಇನ್ನೂ 15 ದಿನಗಳೊಳಗೆ ಸುರಿಯದಿದ್ದರೆ ನದಿ ಸಂಪೂರ್ಣ ಬತ್ತಿ ಮೈದಾನವಾಗುವ ಸಾಧ್ಯತೆ ಇದ್ದು, ಕೃಷಿ ಹಾಗೂ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಗಂಭೀರವಾಗುವ ಆತಂಕ ಎದುರಾಗಿದೆ.

ಜಿಲ್ಲೆಯ ಜನರು ಇದೀಗ ವರುಣನ ಕೃಪೆಯ ನಿರೀಕ್ಷೆಯಲ್ಲಿದ್ದು, ಮಳೆಯೊಂದೇ ಜಲ ಸಂಕಷ್ಟಕ್ಕೆ ಪರಿಹಾರ ಎಂಬಂತಾಗಿದೆ.

## ಪತ್ರಕರ್ತರಿಗೆ ಸಾಮಾಜಿಕ ಕಳಕಳಿ ಮುಖ್ಯ: ಬೋಸರಾಜು

**ರಾಯಚೂರು, ಜು. 30:** ಪರ್ತಕರ್ತರು ಸಮಾಜದ ಬಗ್ಗೆ ಪ್ರಾಮಾಣಿಕ ಕಳಕಳಿ ಹೊಂದಿದಲ್ಲಿ ಮಾತ್ರ ಪತ್ರಿಕಾ ವೃತ್ತಿಗೆ ಗೌರವ ದೊರೆಯಲು ಸಾಧ್ಯ ಎಂದು ವಿಧಾನ ಪರಿಷತ್ ಸದಸ್ಯ ಎನ್.ಎಸ್.ಭೋಸರಾಜು ಹೇಳಿದರು.

ಹರಿಸಲಾಗುವುದು. ಈ ಭಾಗವು ಅತ್ಯಂತ ಹಿಂದುಳಿದ ಪ್ರದೇಶವಾಗಿದ್ದು, ಇಲ್ಲಿನ ಸಮಸ್ಯೆಗಳ ಬಗ್ಗೆ ಬೆಳಕು ಚೆಲ್ಲಲು ಪತ್ರಿಕೋದ್ಯಮ ಕ್ಷೇತ್ರವು ಅತ್ಯವಶ್ಯವಾಗಿದೆ. ಪತ್ರಕರ್ತರ ಸಂಘದಿಂದ ಮಾಡುವ ಕೆಲಸ

ಸ್ವ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳ ಬಾರದು. ಅಂದಿನಿಂದ ಇಂದಿನವರೆಗೂ ಮಾಧ್ಯಮ ಕ್ಷೇತ್ರದ ಮೇಲೆ ಜನರ ಅಪಾರ ನಂಬಿಕೆ ಇದೆ. ಆ ನಂಬಿಕೆಯನ್ನು ಮುಂದುವರಿಸಬೇಕು ಎಂದು ಸಲಹೆ ನೀಡಿದರು.



ಸಮಾಜದಲ್ಲಿನ ನ್ಯೂನತೆಯನ್ನು ತಿದ್ದಲು ಸುದ್ದಿ ಮಾಧ್ಯಮ ಪ್ರಬಲ ಅಸ್ತ್ರವಾಗಿದ್ದು, ಸಮಾಜದ ಬಗ್ಗೆ ಕಳಕಳಿ ಇಲ್ಲದ ಪರ್ತಕರ್ತರ ವೃತ್ತಿಗೆ ಜನಮನ್ನಣೆ ದೊರೆಯಲು ಸಾಧ್ಯವಿಲ್ಲ. ಸ್ವಾತಂತ್ರ್ಯ ಹೋರಾಟದಲ್ಲಿ ಮಹಾತ್ಮ ಗಾಂಧೀಜಿ, ಅಂಬೇಡ್ಕರ್, ಡಿ.ವಿ ಗುಂಡಪ್ಪ ಮತ್ತಿತರ ಹೋರಾಟಗಾರರು ಪತ್ರಿಕೆಯನ್ನು ಸಮಾಜಕ್ಕೆ ಪೂರಕವಾಗಿ ಬಳಸಿಕೊಂಡು ಪತ್ರಿಕಾ ಕ್ಷೇತ್ರದ ಮೌಲ್ಯ ಹೆಚ್ಚಿಸಿದ್ದಾರೆ ಎಂದು ತಿಳಿಸಿದರು.

ಈ ಭಾಗದ ಸಮಸ್ಯೆಗಳನ್ನು ಬಗೆಹರಿಸಲು ಪತ್ರಕರ್ತರು ನಮಗೆ ಮಾರ್ಗದರ್ಶಕರು ಆಗಿದ್ದಾರೆ. ರಾಯಚೂರಿನಲ್ಲಿ ಬರುವ ದಿನಗಳಲ್ಲಿ ನಡೆಯುವ ರಾಜ್ಯ ಮಟ್ಟದ ಸಮ್ಮೇಳನದ ಯಶಸ್ವಿಗೆ ನಾವೆಲ್ಲ ಕೂಡಿ ಶ್ರಮಿಸೋಣ. ಪತ್ರಕರ್ತರ ಸಮಸ್ಯೆಗಳನ್ನು ಹಂತಹಂತವಾಗಿ ಸರ್ಕಾರದ ಮಟ್ಟದಲ್ಲಿ ಬಗೆ ಕಾರ್ಯಗಳಿಗೆ ನಾವು ಬೆಂಬಲವಾಗಿ ನಿಲ್ಲುವುದಾಗಿ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಘಟಕದ ಅಧ್ಯಕ್ಷ ಶಿವಾನಂದ ತಗಡೂರು, ರಾಯಚೂರಿನಲ್ಲಿ ರಾಜ್ಯ ಮಟ್ಟದ ಸಮ್ಮೇಳನ ಆಯೋಜನೆ ಕುರಿತು ನಿರಂತರವಾಗಿ ದಾವಣಗೆರೆ, ತುಮಕೂರು ಹಾಗೂ ಬೀದರ್ ಜಿಲ್ಲೆಯಲ್ಲಿ ನಡೆದ ಸಮ್ಮೇಳನದಲ್ಲಿ ರಾಯಚೂರಿನ ಜಿಲ್ಲಾಧ್ಯಕ್ಷರು ಹಕ್ಕೊತ್ತಾಯ ಮಾಡಿದರು. ಪತ್ರಕರ್ತರ ವೃತ್ತಿ ಎದುರಿಗಿರುವ ಸಮಸ್ಯೆಗಳ ಕುರಿತು ಬೆಳಕು ಚೆಲ್ಲಬೇಕಾಗಿದೆ. ಬ್ಲಾಕ್ ಮೇಲೆ ಮಾಡುವ ಪತ್ರಕರ್ತರ ಅಗತ್ಯ ನಮಗೆ ಇಲ್ಲ. ಜನರ ಸಮಸ್ಯೆಗೆ ಧ್ವನಿಯಾಗುವ ಪತ್ರಕರ್ತರ ನಮಗೆ ಬೇಕು. ಅಭಿವೃದ್ಧಿಗೆ ಶ್ರಮಿಸಬೇಕು. ನೀವು ಬರೆದ ವರದಿಗಳು, ವಿಧಾನಸೌಧ, ಜಿಲ್ಲಾ ಪಂಚಾಯಿತಿಗಳಲ್ಲಿ ಚರ್ಚೆಯಾಗಬೇಕು. ವೃತ್ತಿಯನ್ನು

ಜಿಲ್ಲೆಯ ಅಭಿವೃದ್ಧಿಗೆ ಪತ್ರಿಕೋದ್ಯಮ ಕ್ಷೇತ್ರದ ಕೊಡುಗೆ ಇರಬೇಕು. ಇಂದಿನ ದಿನಗಳಲ್ಲಿ ಸೋಷಿಯಲ್ ಮೀಡಿಯಾ ಪ್ರಭಾವ ಹೆಚ್ಚಾಗಿದೆ. ಇದು ಮಾಧ್ಯಮ ಕ್ಷೇತ್ರಕ್ಕೆ ಎಚ್ಚರಿಕೆ ಘಂಟೆಯಾಗಿದೆ. ಎಪ್ಪತ್ತರ ಕಾಲಘಟ್ಟದ ಪತ್ರಕರ್ತರು ಇಂದಿಗೂ ಬದ್ಧತೆ ಇಟ್ಟುಕೊಂಡಿದ್ದಾರೆ. ತಾವು ವೃತ್ತಿಯ ಘನತೆ ಕಾಪಾಡಿಕೊಳ್ಳಬೇಕು. ನಮ್ಮ ಮನೆಯನ್ನು ನಾವೇ ಸ್ವಚ್ಛತೆಗೊಳಿಸಬೇಕು. ಕ್ರಿಮಿನಲ್ ಪತ್ರಕರ್ತರನ್ನು ಸಂಘದ ಹೊರಹಾಕಿ, ವೈಯಕ್ತಿಕ ಚಟುವಟಿಕೆಗಳನ್ನು ವೃತ್ತಿಯಲ್ಲಿ ಮಾಡಿಬಾರದು. ಸಮಾಜ ಸುಧಾರಣೆಗೆ ನಮ್ಮ ಶ್ರಮವಿದೆ. ಗಾಂಧೀಜಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಆದರ್ಶಗಳನ್ನು ಪಾಲಿಸಬೇಕು. ಸಮಾಜವನ್ನು ಕೂಡಿಸುವ ಕೆಲಸ ಪತ್ರಕರ್ತರಿಂದ ಆಗಬೇಕಾಗಿದೆ ಎಂದರು.

## ಗುಣಮಟ್ಟದ ಕಾಮಗಾರಿ ಕೈಗೆತ್ತಿಕೊಳ್ಳಿ: ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಸೂಚನೆ

### ಹಂಚಿನಾಳ ತಾಂಡಾದಲ್ಲಿ 1.50 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ



**ವಿಜಯಪುರ,** ಹಂಚಿನಾಳ ತಾಂಡಾದಲ್ಲಿ ಸುಸಜ್ಜಿತ ರಸ್ತೆ ನಿರ್ಮಿಸಿ, ಇಲ್ಲಿ ಗುಣಮಟ್ಟದ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಗುಣಮಟ್ಟದ ಕೆಲಸ ಇಲ್ಲಿ ನಡೆಯಬೇಕು ಎಂದು ಬೃಹತ್ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದಡಾ. ಎಂ.ಬಿ. ಪಾಟೀಲ ಅವರು ಸೂಚಿಸಿದರು. ಹಂಚಿನಾಳ ತಾಂಡದಲ್ಲಿ ಒಂದು ಕೋಟಿ ಐವತ್ತು ಲಕ್ಷ ರೂ. ಗಳ ವೆಚ್ಚದಲ್ಲಿ ಈ ಕಾಮಗಾರಿಗೆ ಇಂದು ಭೂಮಿ ಪೂಜೆ ನಡೆದಿದೆ. ಆದರೆ ಈ ಕಾಮಗಾರಿಗೆ ಅನುದಾನದ ಕೊರತೆಯಾದರು ಅನುದಾನ ಒದಗಿಸಲಾಗುವುದು. ಆದರೆ ತಾಂಡಾ ಜನತೆಯ ಆಸೆಯಂತೆ ಗುಣಮಟ್ಟದ ಕೆಲಸ ನಿರ್ವಹಿಸಬೇಕು. ಅನೇಕ ವರ್ಷಗಳಿಂದ ಹಂಚಿನಾಳ ತಾಂಡಾ–1 ಮತ್ತು 2ರಸ್ತೆ ಅಭಿವೃದ್ಧಿಯಾಗಿ ಇಲ್ಲಿನ ನಿವಾಸಿಗಳಿಗೆ ಇದರಿಂದ ಅನುಕೂಲ ವಾಗಲಿದೆ. ತಾಂಡಾ ಜನತೆಯ ಸಹನೆ ಹಾಗೂ ತಾಳ್ಮೆ ಮೆಚ್ಚುವಂಥದ್ದಾಗಿದೆ. ಉತ್ತಮ ರಸ್ತೆ ಇಲ್ಲಿ ನಿರ್ಮಾಣವಾಗಲಿದೆ ಎಂದರು. ಜೊತೆಗೆ ಹಂಚಿನಾಳ ಕೆರೆ ಅಭಿವೃದ್ಧಿಗೆ 10 ಕೋಟಿ ರೂ. ಒದಗಿಸಲಾಗಿದೆ. ಈ ಮೊತ್ತದಲ್ಲಿ 61 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಕಾಮಗಾರಿಗಳಲ್ಲಿ ಮಳೆ ನೀರು ಚರಂಡಿ, ಒಳಚರಂಡಿ ಜಾಲ, ಯುಟಿಲಿಟಿ ಡಕ್ಟ್ ಸೇರಿದಂತೆ ರಸ್ತೆ ಅಭಿವೃದ್ಧಿ ಕಾಮಗಾರಿಗಳಿವೆ. ಒಟ್ಟಾರೆ ನಗರದ ಮೂಲ ಸೌಕರ್ಯವನ್ನು ಬಲಪಡಿಸುವುದು, ಈ ಕಾಮಗಾರಿ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

## ಸಿಡಬ್ಲ್ಯುಆರ್‌ಸಿ ಆದೇಶ ವಿರೋಧಿಸಿ ಮಂಡ್ಯದಲ್ಲಿ ತೀವ್ರಗೊಂಡ ಹೋರಾಟ

# ತಮಿಳುನಾಡಿಗೆ ನೀರು ಹರಿಸದಂತೆ ಜಿಲ್ಲಾಧಿಕಾರಿ ಮೂಲಕ ಸರ್ಕಾರಕ್ಕೆ ಮನವಿ



**ಮಂಡ್ಯ, ಜು.30:** ತಮಿಳುನಾಡಿಗೆ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ಕಾವೇರಿ ನೀರು ಬಿಡುಗಡೆ ಮಾಡುವಂತೆ ಕರ್ನಾಟಕಕ್ಕೆ ಸಿಡಬ್ಲ್ಯು ಆರ್‌ಸಿ ನಿರ್ದೇಶನ ನೀಡಿರುವುದನ್ನು ವಿರೋಧಿಸಿ ಕನ್ನಡ ಪರ ಕಾರ್ಯಕರ್ತರು ಇಂದು ಮಂಡ್ಯದಲ್ಲಿ ಪ್ರತಿಭಟನೆ ತೀವ್ರಗೊಳಿಸಿದರು.

ಪ್ರತಿಭಟನೆಯ ಸಂದರ್ಭದಲ್ಲಿ, ತಮಿಳುನಾಡು ಮುಖ್ಯಮಂತ್ರಿ ಸಿ ಜೋಸೆಫ್ ವಿಜಯ್ ಅವರ 'ಜನ ನಾಯಗನ್' ಚಿತ್ರದ ಪೋಸ್ಟರ್‌ಗಳನ್ನು ಹರಿದು ಹಾಕಿದರು. ಒತ್ತಡಕ್ಕೆ ಮಣಿದು ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡದಂತೆ ಪ್ರತಿಭಟನಾಕಾರರು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ಜನ ನಾಯಗನ್ ಪ್ರದರ್ಶನ 'ಗೊಳ್ಳುತ್ತಿದ್ದ ಗುರುಶ್ರೀ ಚಿತ್ರಮಂದಿರಕ್ಕೆ ಕಾರ್ಯಕರ್ತರು ಮುತ್ತಿಗೆ ಹಾಕಿ, ಸಿಬ್ಬಂದಿ ಜೊತೆ ಮಾತುಕತೆ ನಡೆಸಿ ಪ್ರದರ್ಶನವನ್ನು ನಿಲ್ಲಿಸುವಂತೆ ಒತ್ತಾಯಿಸಿದರು. ನಂತರ ಚಿತ್ರ ಮಂದಿರದ ಸಿಬ್ಬಂದಿ ಪ್ರದರ್ಶನ ರದ್ದುಗೊಳಿಸಲು ಒಪ್ಪಿ ಕೊಂಡರು. ಬಳಿಕ ಪ್ರತಿಭಟನಾಕಾರರು ಚಿತ್ರ ಮಂದಿರದ ಹೊರಗೆ ಚಿತ್ರದ ಪೋಸ್ಟರ್‌ಗಳನ್ನು ಹರಿದು ಕಾವೇರಿ ನೀರು ನಿಯಂತ್ರಣ ಸಮಿತಿಯ ನಿರ್ದೇಶನದ ವಿರುದ್ಧ ಘೋಷಣೆಗಳನ್ನು ಕೂಗಿದರು.ನೆರೆಯ ರಾಜ್ಯಕ್ಕೆ ಕಾವೇರಿ ನೀರು ಬಿಡದಂತೆ ಒತ್ತಾಯಿಸಿ ಮತ್ತು ಮಂಡ್ಯದಲ್ಲಿ ರೈತರ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿ ಅವರು ಜಿಲ್ಲಾಧಿಕಾರಿ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

## ಆರೋಗ್ಯ ರಕ್ಷಣೆಗೆ ಮುನ್ನೆಚ್ಚರಿಕೆ ಅಗತ್ಯ

# ಪೌರಕಾರ್ಮಿಕರ ಆರೋಗ್ಯ ತಪಾಸಣಾ ಶಿಬಿರದಲ್ಲಿ ಬಳ್ಳಾರಿ ಮೇಯರ್ ಗಾದೆಪ್ಪ



**ಬಳ್ಳಾರಿ,ಜು.30.**ನಮ್ಮ ಪ್ರತಿಯೊಬ್ಬರ ಜೀವನದಲ್ಲಿ ಆರೋಗ್ಯ ಅತ್ಯಂತ ಪ್ರಮುಖವಾಗಿದ್ದು, ಪ್ರತಿ ಯೊಬ್ಬರೂ ತಮ್ಮ ಮತ್ತು ತಮ್ಮ ಕುಟುಂಬದ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದು ಅಗತ್ಯ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರಾದ ಪಿ. ಗಾದೆಪ್ಪ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ಮತ್ತು ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ಬಿಡಿಎಎ ಮೈದಾನದ ಸಭಾಂಗಣದಲ್ಲಿ ಪೌರಕಾರ್ಮಿಕರಿಗೆ ಗುರುವಾರ ಆಯೋಜಿಸಿದ್ದ ಬೃಹತ್ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾಯಿಲೆಗಳು ಬಂದ ನಂತರ ಚಿಕಿತ್ಸೆ ಪಡೆಯುವುದಕ್ಕಿಂತ, ರೋಗಗಳು ಬರುವ ಮುನ್ನವೇ ಸೂಕ್ತ ಮುನ್ನೆಚ್ಚರಿಕೆ ವಹಿಸುವುದು ಅತ್ಯಂತ ಮುಖ್ಯ. ಸರ್ಕಾರದಿಂದ ಸಾರ್ವಜನಿಕರ ಆರೋಗ್ಯಕ್ಕಾಗಿ ಉಚಿತವಾಗಿ ಮತ್ತು ರಿಯಾಯಿತಿ ದರದಲ್ಲಿ ಲಭ್ಯವಿರುವ ಹತ್ತಾರು ಯೋಜನೆಗಳು ಮತ್ತು ಸೌಲಭ್ಯಗಳನ್ನು ಸಾರ್ವಜನಿಕರು ಸರಿಯಾಗಿ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಆರೋಗ್ಯ ಕಾಪಾಡಿಕೊಳ್ಳುವ ಕುರಿತು ಸಾರ್ವಜನಿಕರಲ್ಲಿ ಸಂಪೂರ್ಣ ಅರಿವು ಮೂಡಿಸಲು ಪ್ರತಿದಿನ ಕನಿಷ್ಠ ಒಂದು ಗ್ರಾಮಕ್ಕಾದರೂ ಭೇಟಿ ನೀಡಿ ನಿರಂತರ ತರಬೇತಿ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಶಿಕಾಂತ್ ಶಿವಪುರೆ ಅವರು ಮಾತನಾಡಿ, ಬೆಳಿಗ್ಗೆಯಿಂದ ಸಾಯಂಕಾಲದವರೆಗೆ ನಗರದ ನೈರ್ಮಲ್ಯಕ್ಕಾಗಿ ಶ್ರಮಿಸುವ ಪೌರ 'ಕಾರ್ಮಿಕರು ತಮ್ಮ ಆರೋಗ್ಯದ ಕುರಿತು ನಿರ್ಲಕ್ಷ ?ಯ ವಹಿಸಬಾರದು. ಸರ್ಕಾರ ನೀಡುವ ಭದ್ರತಾ ಪರಿಕರಗಳನ್ನು ಕಡ್ಡಾಯವಾಗಿ ಬಳಸಬೇಕು. ಸರ್ಕಾರ ಹಾಗೂ ಜಿಲ್ಲಾಡಳಿತದ ಮಾರ್ಗದರ್ಶನದಂತೆ ಪ್ರತಿಯೊಬ್ಬ ಪೌರಕಾರ್ಮಿಕರು ಉಚಿತ ಆರೋಗ್ಯ ತಪಾಸಣಾ ಶಿಬಿರದ ಸೌಲಭ್ಯವನ್ನು ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

***ವಿಶೇಷ ಸಮಗ್ರ ಪರಿಷ್ಕರಣೆ ಜಾಗೃತಿ:** ಭಾರತೀಯ ಪ್ರಜೆಯಾಗಿ ಚುನಾವಣೆಯಲ್ಲಿ ಮತದಾನ ಮಾಡುವುದು ಪ್ರತಿಯೊಬ್ಬರ ಕಡ್ಡಾಯ ಕರ್ತವ್ಯ. ಈ ನಿಟ್ಟಿನಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿದ್ದು, ಬಿಎಲ್‌ಒ ವಿತರಿಸಿರುವ ಅರ್ಜಿ ಫಾರ್ಮ್‌ಗಳನ್ನು ಭರ್ತಿ ಮಾಡಿ ತಕ್ಷಣ ಸಲ್ಲಿಸಬೇಕು. ಹಿಂದೆ ಅರ್ಜಿ ಸಲ್ಲಿಕೆಗೆ ನೀಡಲಾಗಿದ್ದ ಅಂತಿಮ ಗಡುವನ್ನು ವಿಸ್ತರಿಸಲಾಗಿದ್ದು, ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು. ಅರ್ಜಿ ಸಲ್ಲಿಕೆಯಲ್ಲಿ ತೊಂದರೆಗಳಿದ್ದರೆ ಸಮೀಪದ ತಹಶೀಲ್ದಾರ್ ಕಚೇರಿ, ಗ್ರಾಮ ಪಂಚಾಯತಿ ಅಥವಾ ಸ್ಥಳೀಯ ಮಹಾನಗರಪಾಲಿಕೆ ಕಚೇರಿಗೆ ಭೇಟಿ ನೀಡಿ ನೆರವು ಪಡೆಯಬಹುದು ಎಂದು ತಿಳಿಸಿದರು.

ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್. ಮಂಜುನಾಥ್ ಅವರು ಮಾತನಾಡಿ, ನಗರದ ನೈರ್ಮಲ್ಯ ಹಾಗೂ ಸ್ವಚ್ಛತೆಯನ್ನು ಕಾಪಾಡಲು ಹಗಲಿರುಳು ಶ್ರಮಿಸುವ ಪೌರಕಾರ್ಮಿಕರ ದೈಹಿಕ ಮತ್ತು ಮಾನಸಿಕ ಆರೋಗ್ಯ ಬಹಳ ಮುಖ್ಯ. ಈ ನಿಟ್ಟಿನಲ್ಲಿ ಆಯುಷ್ ಇಲಾಖೆಯ ವತಿಯಿಂದ ಪ್ರತಿಯೊಬ್ಬ ಪೌರಕಾರ್ಮಿಕರ ಆರೋಗ್ಯ ತಪಾಸಣೆ ನಡೆಸಲಾಗುತ್ತಿದೆ. ಕರ್ನಾಟಕ ಹಾಗೂ ಭಾರತ ಸರ್ಕಾರದ ನೂತನ ನಿಯಮಗಳಂತೆ ಇನ್ಮುಂದೆ ತ್ಯಾಜ್ಯವನ್ನು 4 ಭಾಗಗಳಾಗಿ ಬೇರ್ಪಡಿಸಿ ಸಂಗ್ರಹಿಸಬೇಕು. ಹಸಿರು ಡಬ್ಬಿ (ಹಸಿ ತ್ಯಾಜ್ಯ), ನೀಲಿ ಡಬ್ಬಿ (ಒಣ ತ್ಯಾಜ್ಯ), ಕಂದು/ಕಪ್ಪು ಡಬ್ಬಿ (ವಿಶೇಷ ಕಾಳಜಿಯ ತ್ಯಾಜ್ಯ), ಕೆಂಪು ಡಬ್ಬಿ (ಸಾನಿಟರಿ ತ್ಯಾಜ್ಯ) ಎಂದು ವಿಂಗಡಿಸಲಾಗಿದ್ದು, ಮನೆ ಮನೆಗೆ ತೆರಳುವಾಗ ಸಾರ್ವಜನಿಕರಿಗೆ ಈ 4 ಪ್ರಕಾರಗಳ ವಿಂಗಡಣೆ ಬಗ್ಗೆ ಅರಿವು ಮೂಡಿಸುವಂತೆ ಪೌರಕಾರ್ಮಿಕರಿಗೆ ಹಾಗೂ ಜಾಗೃತಿ ಸಿಬ್ಬಂದಿಗೆ ಸೂಚಿಸಿದರು.

ಅದೇರೀತಿಯಾಗಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಪ್ರತಿಯೊಬ್ಬ ಪೌರಕಾರ್ಮಿಕರು ಕಡ್ಡಾಯವಾಗಿ ಅರ್ಜಿ ನಮೂನೆ ಭರ್ತಿ ಮಾಡಿ ಸಲ್ಲಿಸಬೇಕು. ಭರ್ತಿ ಮಾಡದಿದ್ದಲ್ಲಿ ಮತದಾರರ ಪಟ್ಟಿಯಿಂದ ಹೆಸರು ಕೈಬಿಡುವ ಸಾಧ್ಯತೆ ಇರುತ್ತದೆ. ಪೌರಕಾರ್ಮಿಕರು ಬೆಳಿಗ್ಗೆ ಮನೆ ಮನೆಗೆ ಕಸ ಸಂಗ್ರಹಣೆಗೆ ತೆರಳಿದಾಗ, ಸಾರ್ವಜನಿಕರು ಮತದಾರರ ಪಟ್ಟಿ ಪರಿಷ್ಕರಣೆಯ ಫಾರ್ಮ್‌ಗಳನ್ನು ಭರ್ತಿ ಮಾಡಿ ವಾಪಸ್ ನೀಡಿದ್ದಾರೆಯೇ ಎಂಬುದನ್ನು ವಿಚಾರಿಸಬೇಕು. ಒಂದು ವೇಳೆ ನೀಡದಿದ್ದರೆ ತಕ್ಷಣವೇ ಹೆಲ್ತ್ ಇನ್ಸ್ಪೆಕ್ಟರ್ ಅಥವಾ ಸೂಪರ್‌ವೈಸರ್‌ಗಳ ಗಮನಕ್ಕೆ ತರಬೇಕು ಎಂದು ತಿಳಿಸಿದರು.

# ಅಂತರರಾಜ್ಯ ಕಳ್ಳರ ಬಂಧನ: 42.75 ಲಕ್ಷ ಚಿನ್ನಾಭರಣ ಜಪ್ತಿ



**ಬೀದರ್, ಜು. 30:** ಜಿಲ್ಲಾ ಪೊಲೀಸರು ಕಾರ್ಯಾಚರಣೆ ನಡೆಸಿ, ಇಬ್ಬರು ಅಂತರರಾಜ್ಯ ಕಳ್ಳರನ್ನು ಬಂಧಿಸಿ, 42.75 ಲಕ್ಷ ಮೌಲ್ಯದ ಚಿನ್ನಾಭರಣಗಳನ್ನು ಜಪ್ತಿ ಮಾಡಿದ್ದಾರೆ. ಮಹಾರಾಷ್ಟ್ರದ ಸೊಲ್ಲಾಪುರದ ಹುಸೇನ್ ಶಿವಾಜಿ ಗಾಯಕವಾಡ್ (45) ಹಾಗೂ ವಿಜಯಪುರದ ಇಂಡಿ ತಾಲ್ಲೂಕಿನ ಬರಗುಡಿ ಗ್ರಾಮದ ಉಮೇಶ ವಿಠ್ಠಲ್ ಕ್ಷತ್ರಿ (40) ಬಂಧಿತರು.

ಹುಮನಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ಕಳವು ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರ ವಿರುದ್ಧ ಪ್ರಕರಣ ದಾಖಲಾಗಿತ್ತು. ಹಲವು ಅಪರಾಧಿಕ ಪ್ರಕರಣಗಳಲ್ಲಿ ಶಾಮಿಲಾಗಿರುವ ಇವರ ವಿರುದ್ಧ ಹಲವು ಠಾಣೆಗಳಲ್ಲಿ ಅನೇಕ ಪ್ರಕರಣ ದಾಖಲಾಗಿವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ಹಂಚಿಕೊಂಡರು.

ಬಂಧಿತರಿಂದ 42.75 ಲಕ್ಷ ಮೌಲ್ಯದ 28.5 ತೊಲೆ ಬಂಗಾರದ ಆಭರಣ, 44 ಸಾವಿರ ಮೌಲ್ಯದ ಬೆಳ್ಳಿಯ ಆಭರಣಗಳು, 5.80 ಲಕ್ಷ ನಗದು, 5.75 ಲಕ್ಷ ಬೆಲೆಬಾಳುವ ವಿಟಾರಾ ಬ್ರೀಜಾ ಕಾರು ಸೇರಿದಂತೆ ಒಟ್ಟು 54.74 ಲಕ್ಷ ಮೌಲ್ಯದ ಸ್ವತ್ತು ಜಪ್ತಿ ಮಾಡಲಾಗಿದೆ ಎಂದು ವಿವರಿಸಿದರು.

ಇದೇ ವರ್ಷದ ಮೇ ತಿಂಗಳಲ್ಲಿ ಹುಮನಾಬಾದ್ ಪಟ್ಟಣದ ಶಿವನಗರ ಕಾಲೊನಿಯಲ್ಲಿರುವ ನಾಲ್ಕು ಮನೆಗಳಿಗೆ ಇಬ್ಬರು ಆರೋಪಿಗಳು ಕನ್ನ ಹಾಕಿದ್ದರು. ಆರೋಪಿ ಹುಸೇನ್ ಎಂಬಾತ ಬೆಳಗಾವಿ, ವಿಜಯಪುರ, ಕೊಪ್ಪಳ ಮತ್ತು ಸೊಲ್ಲಾಪುರದಲ್ಲಿ ಸುಮಾರು 30ಕ್ಕೂ ಅಧಿಕ ದರೋಡೆ, ಸುಲಿಗೆ, ಕೊಲೆ ಯತ್ನ ಹಾಗೂ ಕಳ್ಳತನದಂಥ ಘೋರ ಪ್ರಕರಣಗಳಲ್ಲಿ ಭಾಗಿಯಾಗಿದ್ದಾನೆ. ಇನ್ನೊಬ್ಬ ಆರೋಪಿ ಉಮೇಶ್‌ನ ವಿರುದ್ಧ ಕಲಬುರಗಿ, ಪುಣೆ, ಮೆಹಬೂಬ್ ನಗರ, ಸೊಲ್ಲಾಪುರ ನಗರಗಳಲ್ಲಿ ಸುಮಾರು 25ಕ್ಕೂ ಹೆಚ್ಚು ಕಳ್ಳತನ ಪ್ರಕರಣಗಳು ದಾಖಲಾಗಿವೆ. ಇಬ್ಬರೂ ಕುಖ್ಯಾತ ಅಂತರರಾಜ್ಯ ಕಳ್ಳರಾಗಿದ್ದು, ತಮ್ಮ ಕೃತ್ಯಗಳನ್ನು ವಿಚಾರಣೆ ವೇಳೆ ಒಪ್ಪಿಕೊಂಡಿದ್ದು, ನ್ಯಾಯಾಂಗ ಬಂಧನಕ್ಕೆ ಕಳಿಸಲಾಗಿದೆ ಎಂದರು.

ಈ ಯಶಸ್ವಿ ಕಾರ್ಯಾಚರಣೆ ಮಾಡಿದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗವು ಹುಮನಾಬಾದ್ ಪಟ್ಟಣದ ಪ್ರಕರಣದೊಂದಿಗೆ ಬೀದರ್, ಬಸವಕಲ್ಯಾಣ ನಗರಗಳಲ್ಲಿ ದಾಖಲಾಗಿದ್ದ 6 ಪ್ರಕರಣಗಳನ್ನು ಪತ್ತೆ ಹಚ್ಚಿದ್ದಾರೆ. ಇಬ್ಬರು ಆರೋಪಿಗಳ ವಿರುದ್ಧ ಕರ್ನಾಟಕ ಹಾಗೂ ಮಹಾರಾಷ್ಟ್ರದ ವಿವಿಧ ಜಿಲ್ಲೆಗಳಲ್ಲಿ ಒಟ್ಟು 55 ಪ್ರಕರಣಗಳಿವೆ ಎಂದು ಹೇಳಿದರು.

## 28.92 ಕೋಟಿ ಮಾದಕವಸ್ತು ವಶ

ಬೀದರ್ ಜಿಲ್ಲೆಯಲ್ಲಿ 2023ರಿಂದ 2026ರ ಜುಲೈ ವರೆಗೆ 145 ಮಾದಕ ವಸ್ತುಗಳ ಸಾಗಣೆ ಹಾಗೂ ಮಾರಾಟಕ್ಕೆ ಸಂಬಂಧಿಸಿದ ಪ್ರಕರಣಗಳು ದಾಖಲಾಗಿದ್ದು, 28.92 ಕೋಟಿ ಮೌಲ್ಯದ ಮಾದಕ ಪದಾರ್ಥಗಳನ್ನು ಜಪ್ತಿ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ತಿಳಿಸಿದರು.

202 ಆರೋಪಿಗಳನ್ನು ಬಂಧಿಸಿ, 3,524.647 ಕೆಜಿ ಗಾಂಜಾ, 66,655 ಮಾದಕ ಗುಳಿಗೆ, 1,991 ಸಿರಪ್ ಬಾಟಲಿ, 366 ಗ್ರಾಂ ಕೊಕೆನ್, 5 ಎಮ್.ಡಿ.ಎಮ್.ಎ. ಗುಳಿಗೆಗಳು, 499 ಗ್ರಾಂ ಎಮ್.ಡಿ.ಎಮ್.ಎಮ್. ಗುಳಿಗೆಗಳನ್ನು ಜಪ್ತಿ ಮಾಡಲಾಗಿದೆ. ಮಾದಕ ಸಾಗಣೆ, ಮಾರಾಟದ ಜಾಲವನ್ನು ಸಂಪೂರ್ಣ ಭೇದಿಸಿ, ಮಾದಕವಸ್ತು ಮುಕ್ತ ಜಿಲ್ಲೆ ಮಾಡುವ ಗುರಿಯೊಂದಿಗೆ ಬೀದರ್ ಜಿಲ್ಲಾ ಪೊಲೀಸ್ ಇಲಾಖೆ ಕೆಲಸ ನಿರ್ವಹಿಸುತ್ತಿದೆ ಎಂದರು.

# ಕಲ್ಯಾಣ ಕರ್ನಾಟಕ ಅಭಿವೃದ್ಧಿಯಾಗದಿದ್ದರೆ ಮತ್ತೆ ಪ್ರತ್ಯೇಕ ರಾಜ್ಯಕ್ಕಾಗಿ ಹೋರಾಟ: ಚಿಂತನ ಸಭೆಯಲ್ಲಿ ಒತ್ತಾಯ

**ಕಲಬುರಗಿ, ಜು. 20:** ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳದಿದ್ದರೆ, ಮತ್ತೆ ಪ್ರತ್ಯೇಕ ಕಲ್ಯಾಣ ಕರ್ನಾಟಕ ರಾಜ್ಯಕ್ಕಾಗಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಬೇಕು ಎಂದು ವಿವಿಧ ಮುಖಂಡರು, ಹೋರಾಟಗಾರರು, ಚಿಂತಕರು, ಉದ್ಯಮಿಗಳು ಹಾಗೂ ಸಾರ್ವಜನಿಕರು ಒತ್ತಾಯಿಸಿದರು.



ಮಾಜಿ ಸಚಿವ ಹಾಗೂ ಹೈದರಾಬಾದ ಕರ್ನಾಟಕಕ್ಕೆ 371–ಜೆ ತರಲು ಹೋರಾಟ ನಡೆಸಿದ ದಿ. ವೈಜನಾಥ ಪಾಟೀಲ್ ಅವರ ಜನ್ಮದಿನದ ಅಂಗವಾಗಿ ನಗರದ ಕಲ್ಯಾಣ ಕರ್ನಾಟಕ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಹೈದ್ರಾಬಾದ್ ಕರ್ನಾಟಕ ಹೋರಾಟ ಸಮಿತಿ ವತಿಯಿಂದ ಆಯೋಜಿಸಿದ್ದ 371(ಜೆ) ಪೂರ್ಣಾನುಷ್ಠಾನ ಕುರಿತ ಚಿಂತನಾ ಸಭೆಯಲ್ಲಿ ಮಾತನಾಡಿದ ಹಲವು ಗಣ್ಯರು, ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಸರ್ಕಾರದ ನಿರ್ಲಕ್ಷ್ಯವನ್ನು ಖಂಡಿಸಿದರು.

ಕೆಕೆಸಿಸಿಐ ಮಾಜಿ ಅಧ್ಯಕ್ಷ ಉಮಾಕಾಂತ ನಿಗ್ಗುಡಗಿ ಮಾತನಾಡಿ, ಕಲ್ಯಾಣ ಕರ್ನಾಟಕಕ್ಕೆ ಬರಬೇಕಾದ ಅನುದಾನ ಸಮರ್ಪಕವಾಗಿ ದೊರೆಯುತ್ತಿಲ್ಲ. ಈ ಭಾಗಕ್ಕೆ ವಿಶೇಷ ಕೈಗಾರಿಕಾ ನೀತಿ ರೂಪಿಸುವ ಅಗತ್ಯವಿದ್ದು, ಸೆಮಿಕಂಡಕ್ಟರ್ ಘಟಕದಂತಹ ದೊಡ್ಡ ಕೈಗಾರಿಕೆಗಳನ್ನು ಕಲಬುರಗಿಯಲ್ಲಿ ಸ್ಥಾಪಿಸಬೇಕಾಗಿತ್ತು. 371(ಜೆ) ಜಾರಿಯಾದ ಬಳಿಕ ವೈದ್ಯಕೀಯ ಶಿಕ್ಷಣದಲ್ಲಿ ಅವಕಾಶಗಳು ಹೆಚ್ಚಾಗಿರುವುದು ಸಕಾರಾತ್ಮಕ ಬೆಳವಣಿಗೆಯಾದರೂ, ಸಮಗ್ರ ಅಭಿವೃದ್ಧಿಗೆ ಇನ್ನೂ ಹೆಚ್ಚಿನ ಕ್ರಮಗಳು ಅಗತ್ಯವಿವೆ. ಉದ್ಯಮಿ ಜಗನ್ನಾಥ ಶೆಗಜಿ ಮಾತನಾಡಿ, ಅಭಿವೃದ್ಧಿ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬವಾಗುತ್ತಿದ್ದು, ಹೋರಾಟಗಾರ ದಿ. ವೈಜನಾಥ ಪಾಟೀಲ್ ಅವರ ಸೇವೆಯನ್ನು ಸ್ಮರಿಸಿ ಏಳು ಜಿಲ್ಲೆಗಳಲ್ಲೂ ಅವರ ಪ್ರತಿಮೆ ಸ್ಥಾಪಿಸಬೇಕು ಎಂದು ಆಗ್ರಹಿಸಿದರು.

ಹೋರಾಟಗಾರ ಅನಿಲ್ ಬೆಳ್ದಾಳೆ ಮಾತನಾಡಿ, ಹಲವು ಹೋರಾಟಗಳ ಫಲವಾಗಿ ಅನುದಾನ ದೊರೆಯುತ್ತಿದ್ದರೂ ನಿರೀಕ್ಷಿತ ಅಭಿವೃದ್ಧಿ ಕಂಡುಬಂದಿಲ್ಲ. ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದಲ್ಲಿ ಪಾರದರ್ಶಕತೆ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಅರ್ಥಶಾಸ್ತ್ರಜ್ಞ ಡಾ.ಬಸವರಾಜ ಕುಮನೂರ ಮಾತನಾಡಿ, ಕಲ್ಯಾಣ ಕರ್ನಾಟಕದಲ್ಲಿ ಶಿಶು ಮರಣ ಪ್ರಮಾಣ, ರಕ್ತಹೀನತೆ ಮತ್ತು ಬಡತನದಂತಹ ಸಮಸ್ಯೆಗಳು ಇನ್ನೂ ಗಂಭೀರವಾಗಿವೆ. ನೀರಾವರಿ ಯೋಜನೆಗಳನ್ನು ವೇಗಗೊಳಿಸಿ ರೈತರ ಆದಾಯ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಕಾರ್ಯಪ್ರವೃತ್ತವಾಗಬೇಕು ಎಂದು ಒತ್ತಾಯಿಸಿದರು.

ಯುವ ಹೋರಾಟಗಾರ ಸಾಯಿಬಣ್ಣ ಜಮಾದಾರ್, ಖಾಸಗಿ ಕಂಪನಿಗಳಲ್ಲಿ ಕಲ್ಯಾಣ ಕರ್ನಾಟಕದ ಯುವಕರಿಗೆ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸಬೇಕು ಹಾಗೂ 371(ಜೆ) ಅನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು. ಹೈದ್ರಾಬಾದ್ ಕರ್ನಾಟಕ ಹೋರಾಟ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ಗಂಗಾಧರ ಕುಷ್ಟಗಿ, 371(ಜೆ) ಜಾರಿಯಾದ ಬಳಿಕವೂ ಪ್ರದೇಶದ ಅಭಿವೃದ್ಧಿಗೆ ಅಗತ್ಯ ವೇಗ ಸಿಕ್ಕಿಲ್ಲ. ನೀರಾವರಿ, ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಕೆಕೆಸಿಸಿಐ ಅಧ್ಯಕ್ಷ ಶರಣಬಸಪ್ಪ ಪಪ್ಪಾ, ಚಂದ್ರಶೇಖರ್ ಆವಂಟಿ, ನಿವೃತ್ತ ಪ್ರಾಧ್ಯಾಪಕ ಡಾ.ವಾಸುದೇವ ಸೇಡಂ, ಶರಣಪ್ಪ ಜಡಿ, ನಬಿಸಾಬ್ ಕುಷ್ಟಗಿ, ಮಹೇಶ್ ರೆಡ್ಡಿ ಸೇರಿದಂತೆ ಹಲವರು ಭಾಗವಹಿಸಿ ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಸಮಗ್ರ ಕಾರ್ಯಯೋಜನೆ ರೂಪಿಸುವಂತೆ ಸರ್ಕಾರವನ್ನು ಆಗ್ರಹಿಸಿದರು.

### ರಾಮಲಲ್ಲಾ ಶಿಲ್ಪಿ ಅರುಣ್ ಯೋಗಿರಾಜ್ ಸಜ್ಜು

# ನಾಳೆ ಪ್ರಧಾನಿ ನರೇಂದ್ರ ಮೋದಿಗೆ ಸ್ವಾಮಿ ವಿವೇಕಾನಂದ ಪ್ರತಿಮೆ ಉಡುಗೊರೆ

**ಮೈಸೂರು, ಜು.30:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಆಗಸ್ಟ್ 1ರಂದು ಮೈಸೂರಿಗೆ ಆಗಮಿಸುತ್ತಿದ್ದಾರೆ. ಈ ಸಂದರ್ಭದಲ್ಲಿ ಅಯೋಧ್ಯೆ ರಾಮಲಲ್ಲಾ ಮೂರ್ತಿಯ ಶಿಲ್ಪಿ ಅರುಣ್ ಯೋಗಿರಾಜ್‌ನಿಂದ ಪ್ರಧಾನಿ ಮೋದಿಗೆ 8.5 ಕೆಜಿ ಸ್ವಾಮಿ ವಿವೇಕಾನಂದರ ಪ್ರತಿಮೆ ಉಡುಗೊರೆಯಾಗಿ ಸಿಗಲಿದೆ.ಅಯೋಧ್ಯೆಯ ರಾಮಮಂದಿರದಲ್ಲಿರುವ ರಾಮಲಲ್ಲಾ ಮೂರ್ತಿಯನ್ನು ಕೆತ್ತಿದ ಖ್ಯಾತ ಶಿಲ್ಪಿ ಅರುಣ್ ಯೋಗಿರಾಜ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿಶೇಷ ಉಡುಗೊರೆಯಾಗಿ 8.5 ಕೆಜಿ ತೂಕದ ಏಕಶಿಲೆಯ ಅಮೃತಶಿಲೆಯ ಸ್ವಾಮಿ ವಿವೇಕಾನಂದರ ಪ್ರತಿಮೆಯನ್ನು ನಿರ್ಮಿಸಿದ್ದಾರೆ.



ಈ ಪ್ರತಿಮೆಯನ್ನು ಮೈಸೂರಿನ ಶ್ರೀ ರಾಮಕೃಷ್ಣ ಆಶ್ರಮದಲ್ಲಿ ಪ್ರಧಾನಿ ಮೋದಿ ಅವರಿಗೆ ಸಮರ್ಪಿಸಲಾಗುತ್ತದೆ.

ಈ ಪ್ರತಿಮೆಯನ್ನು ಮೈಸೂರು ರಾಮಕೃಷ್ಣ ಆಶ್ರಮದ ಅಧ್ಯಕ್ಷ ಸ್ವಾಮಿ ಮುಕ್ತಿದಾನಂದ ಮಹಾರಾಜ್ ಅವರ ಮನವಿಯ ಮೇರೆಗೆ ಅರುಣ್ ಯೋಗಿರಾಜ್ ಕೇವಲ 15 ದಿನಗಳಲ್ಲಿ ಪೂರ್ಣಗೊಳಿಸಿದ್ದಾರೆ.

ಈ ಅವಕಾಶ ಪ್ರಧಾನಿ ಮೋದಿ ಅವರ ಮೈಸೂರು ಭೇಟಿ ಖಚಿತಗೊಂಡ ಬಳಿಕ ದೊರೆಯಿತು ಎಂದು ಯೋಗಿರಾಜ್ ತಿಳಿಸಿದ್ದಾರೆ. ಪ್ರಧಾನ ಮಂತ್ರಿ ಮೋದಿ ಅವರು ಆಗಸ್ಟ್ 1ರಂದು ಮೈಸೂರಿನ ವಿವೇಕ ಸ್ಮಾರಕವನ್ನು ಉದ್ಘಾಟಿಸಲಿದ್ದು, ಈ ಸಂದರ್ಭದಲ್ಲಿ ಸ್ವಾಮಿ ವಿವೇಕಾನಂದರ ಪ್ರತಿಮೆಯನ್ನು ಅವರಿಗೆ ಉಡುಗೊರೆಯಾಗಿ ನೀಡಲಾಗುತ್ತದೆ.

### ಕೊಟ್ಪಾ ಕಾಯ್ದೆ ಪರಿಣಾಮಕಾರಿ ಜಾರಿಗೊಳಿಸಿ,

# ಶಾಲಾವರಣದಲ್ಲಿ ತಂಬಾಕು ಉತ್ಪನ್ನ ನಿಷೇಧ: ಬಿಗಿ ಕ್ರಮ ಕೈಗೊಳ್ಳಲು ಡಿಸಿ ಡಾ.ಆನಂದ ಕೆ. ಅಧಿಕಾರಿಗಳಿಗೆ ಸೂಚನೆ

**ವಿಜಯಪುರ,ಜು.30:** ಮಕ್ಕಳ ಭವಿಷ್ಯದ ದೃಷ್ಟಿಯಿಂದ ಪ್ರತಿ ಶಾಲಾ ಆವರಣದಿಂದ ಒಂದು ನೂರು ಮೀಟರ್ ಒಳಗಡೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವಂತಿಲ್ಲ. ಹಾಗಾಗಿ ಶಾಲಾ ಶಿಕ್ಷಣ ಇಲಾಖೆ ಕೋಟ್ಪ ಕಾಯ್ದೆ ಪರಿಣಾಮಕಾರಿ ಜಾರಿಗೆ ಕ್ರಮವಹಿಸಬೇಕು. ಈ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸಮಿತಿ ಕಾಲ–ಕಾಲಕ್ಕೆ ದಿಢೀರ್ ದಾಳಿ ನಡೆಸಿ ಬಿಗಿ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಸೂಚಿಸಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಮಾದಕ ವಸ್ತು ನಿಯಂತ್ರಣ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋಟ್ಪಾ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಶಾಲಾ ಆವರಣದ ತಾಲೂಕು ಸಮಿತಿಗೆ ದೂರು ಬಂದ ತಕ್ಷಣ ಕ್ರಮವಹಿಸಿ, ಶಾಲಾ ಅಭಿವೃದ್ಧಿ ಸಮಿತಿ ಒಳಗೊಂಡಂತೆ ಶಾಲಾ ಶಿಕ್ಷಕರಿಗೆ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರ ಈ ಮಾಹಿತಿ ನೀಡಬೇಕು. ಸಾಧ್ಯವಿದ್ದರೆ ಪೊಲೀಸ್ ಇಲಾಖೆಯ ಸಹಾಯ ಪಡೆದುಕೊಂಡರೆ, ಈ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದರು.

ಜಾಗೃತಿ ಮೂಡಿಸಿ: ವ್ಯಸನ ಮುಕ್ತ ಜೀವನ ನಡೆಸಲು ಶಾಲಾ–ಕಾಲೇಜ್ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಬೇಕು. ಯುವಕರು ವ್ಯಸನದಿಂದ ಮುಕ್ತರಾಗಿ ಉತ್ತಮ ಜೀವನ ನಡೆಸಬೇಕು. ಈ ನಿಟ್ಟಿನಲ್ಲಿ ಮಾದಕ ವ್ಯಸನಕ್ಕೆ ಒಳಗಾಗದಂತೆ ಮಾದಕ ವಸ್ತು ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಈ ಕುರಿತು ಸಂಬಂಧಿಸಿದ ಇಲಾಖಾಧಿಕಾರಿಗಳು ಪರಸ್ಪರ ಸಮನ್ವಯ ಹಾಗೂ ಸಹಕಾರದಿಂದ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಬೀದರ್ ಉತ್ತರ ಕ್ಷೇತ್ರದಲ್ಲಿ 21 ಸಾವಿರ ನಕಲಿ ಮತದಾರರು: ಜೆಡಿಎಸ್ ಆರೋಪ

**ಬೀದರ್, ಜು. 30:** ಬೀದರ್ ಉತ್ತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 21 ಸಾವಿರ ಮತದಾರರ ಹೆಸರುಗಳು ಎರಡು ಕಡೆಗಳಲ್ಲಿ ಇದ್ದು, ಈ ನಕಲಿ ಮತದಾರರೇ ಕಾಂಗ್ರೆಸ್ಸಿನ ಬಂಡವಾಳವಾಗಿದ್ದು, ಈ ನಕಲಿ ಹೆಸರುಗಳನ್ನು ರದ್ದುಪಡಿಸಿ, ಮತದಾರರ ಪಟ್ಟಿ ಶುದ್ಧೀಕರಣಗೊಳಿಸಬೇಕು ಎಂದು ಜೆಡಿಎಸ್ ಮುಖಂಡರೂ ಆದ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ ಆಗ್ರಹಿಸಿದರು.

ನಾನೂ ಸೇರಿದಂತೆ ಜೆಡಿಎಸ್ ಕಾರ್ಯಕರ್ತರು ಕಳೆದ ಹಲವು ದಿನಗಳಿಂದ ಕ್ಷೇತ್ರಾದ್ಯಂತ ಮತದಾರರ ಪಟ್ಟಿ ಹಿಡಿದುಕೊಂಡು ಮತದಾರರನ್ನು ಹುಡುಕುತ್ತ ಸಂಚರಿಸಿ, ಮತದಾರರ ಪಟ್ಟಿ ಪರಿಶೀಲಿಸಿದಾಗ ಸುಮಾರು 21 ಸಾವಿರಕ್ಕೂ ಹೆಚ್ಚು ಮತದಾರರ ಹೆಸರುಗಳು ಎರಡು–ಮೂರು ಕಡೆಗಳಲ್ಲಿರುವುದು ಪತ್ತೆಯಾಗಿದೆ. ಒಂದು ಅಂದಾಜಿನ ಪ್ರಕಾರ ಕ್ಷೇತ್ರದಲ್ಲಿ ಒಟ್ಟು 40 ಸಾವಿರಕ್ಕೂ ಅಧಿಕ ಮತದಾರರ ಹೆಸರುಗಳು ಎರಡು ಕಡೆಗಳಲ್ಲಿ ಇವೆ. ಇವೆಲ್ಲವೂ ನಕಲಿ ಮತದಾನ ಮಾಡುವ ಉದ್ದೇಶದಿಂದಲೇ ಸೇರ್ಪಡೆಯಾದವುಗಳಾಗಿವೆ ಎಂದು ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದರು.



ಈ ಸಂಬಂಧ ದಾಖಲೆಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಸಂಗ್ರಹಿಸಿದ ಮಾಹಿತಿಯೊಂದಿಗೆ ಚುನಾವಣಾ ಆಯೋಗ ಹಾಗೂ ಜಿಲ್ಲಾಡಳಿತಕ್ಕೆ ದೂರು ಸಲ್ಲಿಸಿರುವೆ. ಇದರಲ್ಲಿ ಕೆಲ ಮುಖಂಡರು, ಅಧಿಕಾರಿಗಳು ಕೂಡ ಶಾಮೀಲಾಗಿದ್ದಾರೆ. ಹೀಗಾಗಿಯೇ ಅಷ್ಟೊಂದು ದೊಡ್ಡ ಸಂಖ್ಯೆಯಲ್ಲಿ ಮತದಾರರ ಹೆಸರುಗಳು ಎರಡು ಕಡೆಗಳಲ್ಲಿ ಸೇರಿವೆ. ಸೇರಿವೆ ಎನ್ನುವುದಕ್ಕಿಂತಲೂ ಸೇರಿಸಲಾಗಿದೆ ಎಂದು ಆರೋಪ ಮಾಡಿದರು.

ಇಷ್ಟೊಂದು ದೊಡ್ಡ ಸಂಖ್ಯೆಯಲ್ಲಿ ಎರಡೆರಡು ಕಡೆ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಗೆ ಸೇರಿಸಿದರೆ ಪ್ರಜಾಪ್ರಭುತ್ವ ಹೇಗೆ ಉಳಿಯುತ್ತದೆ? ಮತದಾರರ ಪಟ್ಟಿಯಲ್ಲಿ ನೆರೆ ದೇಶ ಹಾಗೂ ದೇಶದ ಇತರೆ ರಾಜ್ಯಗಳವರ ಹೆಸರುಗಳು ಕೂಡ ಸೇರ್ಪಡೆಯಾಗಿವೆ. ಬೀದರ್‌ನ ಕೆಲ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳ ಹೆಸರಿರುವುದು ಕೂಡ ಗೊತ್ತಾಗಿದೆ. ಅವರೆಲ್ಲ ಚುನಾವಣೆಯಲ್ಲಿ ಮತ ಚಲಾಯಿಸುತ್ತಿದ್ದಾರೆ. ಈ ಕಾರಣಕ್ಕಾಗಿಯೇ ಭ್ರಷ್ಟರು ಚುನಾವಣೆಯಲ್ಲಿ ಆಯ್ಕೆಯಾಗುತ್ತಿದ್ದಾರೆ. ಶುದ್ಧ ಚುನಾವಣೆ ನಡೆದರೆ ಗೆಲ್ಲುವ ಯೋಗ್ಯತೆ ಅವರಿಗಿಲ್ಲ ಎಂದು ಟೀಕಿಸಿದರು.

ಆಹಾರ, ನೀರು, ಗಾಳಿ ಯಾವ ರೀತಿ ಶುದ್ಧ ಇರಬೇಕೆಂದು ಬಯಸುತ್ತೇವೆಯೋ ಅದೇ ರೀತಿ ಪ್ರಜಾಪ್ರಭುತ್ವದ ಬೆನ್ನೆಲುಬಾಗಿರುವ ಮತದಾರರ ಪಟ್ಟಿ ಕೂಡ ಶುದ್ಧವಾಗಿರಬೇಕು. ಅನರ್ಹರ ಹೆಸರುಗಳು ಮತದಾರರ ಪಟ್ಟಿಗೆ ಸೇರಬಾರದು. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಕೈಗೆತ್ತಿಕೊಂಡಿರುವ ಚುನಾವಣಾ ಆಯೋಗದ ಕ್ರಮ ಸ್ವಾಗತಾರ್ಹವಾದುದು. ಇದರ ಮೂಲಕ ಅನರ್ಹರ ಹೆಸರು ತೆಗೆದು ಹಾಕಬೇಕು ಎಂದು ಒತ್ತಾಯಿಸಿದರು.

ಎಸ್‌ಐಆರ್ ನಡೆಯುತ್ತಿರುವಾಗಲೇ ಅನೇಕ ಕಡೆಗಳಲ್ಲಿ ಮರಣ ಹೊಂದಿದವರ ವಿವರಗಳನ್ನು ದಾಖಲಿಸಲಾಗುತ್ತಿದೆ. ಅದನ್ನು ಪರಿಶೀಲಿಸುವ ಗೋಜಿಗೆ ಹೋಗುತ್ತಿಲ್ಲ. ಪಂಚನಾಮೆ ಮಾಡುತ್ತಿಲ್ಲ. ಆದಕಾರಣ ಆಧಾರ್ ಸಂಖ್ಯೆ ಜೋಡಣೆ, ಬಯೋ ಮೆಟ್ರಿಕ್ ಹಾಗೂ ಮುಖಚಹರೆ ದಾಖಲಿಸುವ ಪ್ರಕ್ರಿಯೆ ಕಡ್ಡಾಯಗೊಳಿಸ ಬೇಕು. ಆಗ ಶುದ್ಧವಾದ ಮತದಾರರ ಪಟ್ಟಿ ಸಿದ್ಧಪಡಿಸಲು ಸಾಧ್ಯ. ಕೇಂದ್ರ ಚುನಾವಣಾ ಆಯೋಗಕ್ಕೂ ಈ ವಿಷಯ ತಿಳಿಸಲಾಗಿದ್ದು, ಉತ್ತಮ ಸ್ಪಂದನೆ ದೊರೆತಿದೆ ಎಂದರು.

**ಸತ್ತವರ ಹೆಸರು:** ಬೀದರ್ ಉತ್ತರ ವಿಧಾನಸಭಾ ಕ್ಷೇತ್ರದಲ್ಲಿ ನಾಲ್ಕುವರೆ ಸಾವಿರ ಸತ್ತವರ ಹೆಸರುಗಳು ಮತದಾರರ ಪಟ್ಟಿಯಲ್ಲಿವೆ. ಮತದಾರರ ಗುರುತಿನ ಚೀಟಿಯಲ್ಲಿ ಪುರುಷನ ಭಾವಚಿತ್ರವಿದ್ದರೆ, ಮಹಿಳೆಯ ಹೆಸರಿದೆ. ಇವರೆಲ್ಲ ಚುನಾವಣೆಯಲ್ಲಿ ಮತದಾನ ಮಾಡಿದ್ದಾರೆ. ಸತ್ತು ಹೋದ ಹಲವರು ಸರ್ಕಾರಿ ಸೌಲಭ್ಯ ಪಡೆಯುತ್ತಿದ್ದಾರೆ. ಇಂಥವರ ಹೆಸರುಗಳೆಲ್ಲ ಮತದಾರರ ಪಟ್ಟಿಯಿಂದ ತೆಗೆದು ಹಾಕಬೇಕು ಎಂದು ಜೆಡಿಎಸ್ ಮುಖಂಡ ಸೂರ್ಯಕಾಂತ ನಾಗಮಾರಪಳ್ಳಿ ಆಗ್ರಹಿಸಿದರು. ಬೀದರ್ ನಗರದಿಂದ 3 ಕಿ.ಮೀ ಅಂತರದಲ್ಲಿ ತೆಲಂಗಾಣದ ಗಡಿ ಇದೆ. ಹೈದರಾಬಾದ್, ಕಲಬುರಗಿ ಸೇರಿದಂತೆ ಇತರೆ ಭಾಗಗಳ ಜನರ ಹೆಸರುಗಳು ಸ್ಥಳೀಯ ಮತದಾರರ ಪಟ್ಟಿಯಲ್ಲಿವೆ. ಎಸ್‌ಐಆರ್ ಮ್ಯಾಪಿಂಗ್ ಮಾಡಿದರೂ ಇಂಥವರ ಹೆಸರುಗಳು ಅಳಿಸಿ ಹೋಗುವ ಸಾಧ್ಯತೆ ಕಡಿಮೆ. ಆದಕಾರಣ ಆಧಾರ್ ಕಡ್ಡಾಯಗೊಳಿಸಬೇಕು ಎಂದು ಒತ್ತಾಯಿಸಿದರು.

### ಮೂರು ತಿಂಗಳಲ್ಲಿ 120 ಹೊಸ ಬಸ್ ಸೇರ್ಪಡೆ: ಅರುಣಕುಮಾರ ಪಾಟೀಲ

# ಕಲಬುರಗಿಯಿಂದ ಮೈಸೂರು, ಶಿವಮೊಗ್ಗ ಬಸ್ ಸಂಚಾರಕ್ಕೆ ಚಾಲನೆ

**ಕಲಬುರಗಿ, ಜು. 30:** ಕಲ್ಯಾಣ ಕರ್ನಾಟಕ ಭಾಗದಲ್ಲಿ ಉತ್ತಮ ಸಾರಿಗೆ ಸಂಪರ್ಕ ಕಲ್ಪಿಸಲು ಸಂಸ್ಥೆಗೆ ಇನ್ನು 750 ಬಸ್‌ಗಳ ಅವಶ್ಯಕತೆ ಇದ್ದು, ಈ ಕೊರತೆ ನೀಗಿಸಲು ಪ್ರಸ್ತುತ ಕೆ.ಕೆ. ಆರ್.ಡಿ.ಬಿ. ಮಂಡಳಿಯ 45 ಕೋಟಿ ರೂ. ಅನುದಾನದಲ್ಲಿ 120 ಬಸ್ ಖರೀದಿಸಲಾಗುತ್ತಿದೆ ಎಂದು ಕೆ.ಕೆ.ಆರ್.ಟಿ.ಸಿ. ಅಧ್ಯಕ್ಷ ಅರುಣಕುಮಾರ ಪಾಟೀಲ ಹೇಳಿದರು.




ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಕಲಬುರಗಿ–ಮೈಸೂರು ನಾನ್ ಎಸಿ ಸ್ಲೀಪರ್ ಹಾಗೂ ಕಲಬುರಗಿ–ಶಿವಮೊಗ್ಗ ಎಸಿ ಸ್ಲೀಪರ್ ಬಸ್ ಕಾರ್ಯಾಚರಣೆಗೆ ಚಾಲನೆ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 120 ಬಸ್‌ಗಳ ಖರೀದಿಗೆ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ. ಮುಂದಿನ 3 ತಿಂಗಳಲ್ಲಿ ಈ ಬಸ್‌ಗಳು ಸಂಸ್ಥೆಗೆ ಸೇರ್ಪಡೆಯಾಗಿ ಸಾರಿಗೆ ಸಂಪರ್ಕಕ್ಕೆ ಬಲ ನೀಡಲಿದೆ. ಸಂಸ್ಥೆಗೆ ಕೊರತೆ ಇರುವ ಬಸ್‌ಗಳನ್ನು ಪೂರೈಸಲು ಸಿ.ಎಂ. ಅವರು ಸಹ ಅಭಯ ನೀಡಿದ್ದು, ಮುಂದಿನ ದಿನಗಳಲ್ಲಿ ಪ್ರಯಾಣಿಕರಿಗೆ ಮತ್ತಷ್ಟು ಗುಣಮಟ್ಟದ ಸೇವೆ ನೀಡಲು ಸಾಧ್ಯವಾಗಲಿದೆ ಎಂದರು.

ಈಗಾಗಲೇ ಸಂಸ್ಥೆಯ ಅನುದಾನದಲ್ಲಿ ಖರೀದಿಸಿದ 56 ಬಸ್‌ಗಳ ಪೈಕಿ ಕಲಬುರಗಿ, ಬಳ್ಳಾರಿ, ವಿಜಯಪುರದಲ್ಲಿ 12 ಬಸ್‌ಗಳ ಟ್ರಯಲ್ ರನ್ ಮಾಡಲಾಗುತ್ತಿದೆ. ಅದರಂತೆ ಪ್ರಸ್ತುತ ಮಾರ್ಗದ ಕಲಬುರಗಿ–ಮೈಸೂರು ನಡುವೆ 2 ನಾನ್ ಎಸಿ ಸ್ಲೀಪರ್ ಬಸ್ ಹಾಗೂ ಕಲಬುರಗಿ–ಶಿವಮೊಗ್ಗ ನಡುವೆ 2 ಎಸಿ ಸ್ಲೀಪರ್ ಹೊಸ ಬಸ್‌ಗಳ ಕಾರ್ಯಾಚರಣೆಗೆ ಚಾಲನೆ ನೀಡಲಾಗಿದೆ. ಈ ನೂತನ ವಾಹನಗಳು ಅತ್ಯಾಧುನಿಕ ಸೌಲಭ್ಯಗಳನ್ನು ಹೊಂದಿದ್ದು, ದೂರ ಪ್ರಯಾಣದ ಪ್ರಯಾಣಿಕರಿಗೆ ಇನ್ನಷ್ಟು ಸುರಕ್ಷಿತ, ಸುಗಮ ಹಾಗೂ ಆರಾಮದಾಯಕ ಅನುಭವವನ್ನು ಒದಗಿಸಲಿವೆ ಎಂದರು.

ಕಲಬುರಗಿ ನಗರದಲ್ಲಿ ಬಸ್ ಶೆಲ್ಟರ್ ನಿರ್ಮಾಣ ಸಂಬಂಧ ಡಿ.ಪಿ.ಆರ್ ತಯಾರಿಸಲಾಗುತ್ತಿದೆ. ಬಸ್‌ನಲ್ಲಿ ಚಿಲ್ಲರೆ ಸಮಸ್ಯೆ ಪರಿಹಾರಕ್ಕೆ ಈಗಾಗಲೇ ಕ್ಯೂರ್ ಕೋಡ್ ವ್ಯವಸ್ಥೆ ಜಾರಿಗೆ ತರಲಾಗಿದೆ. ಮುಂದಿನ ದಿನದಲ್ಲಿ ಕಲಬುರಗಿಯಲ್ಲಿ 100 ಮತ್ತು ವಿಜಯಪುರ–ಬಳ್ಳಾರಿ ವಿಭಾಗದಲ್ಲಿ 100 ಎಲೆಕ್ಟ್ರಿಕ್ ಬಸ್ ಕಾರ್ಯಾಚರಣೆಗೂ ಚಿಂತನೆ ನಡೆದಿದೆ ಎಂದು ತಿಳಿಸಿದರು.

ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಾಣ: ಕಲಬುರಗಿ ನಗರದಲ್ಲಿ ಸಂಚಾರ ದಟ್ಟಣೆ ನಿಯಂತ್ರಿಸಲು ನಗರದ ನಾಲ್ಕು ದಿಕ್ಕಿನಲ್ಲಿ ಸ್ಯಾಟಲೈಟ್ ಬಸ್ ನಿಲ್ದಾಣಗಳ ನಿರ್ಮಾಣ ಮಾಡಲಾಗುತ್ತಿದೆ ಎಂದರು.

ಇಂದು ಚಾಲನೆ ನೀಡಲಾದ ಕಲಬುರಗಿ–ಮೈಸೂರು ನಡುವೆ ನಾನ್ ಎಸಿ ಸ್ಲೀಪರ್ 667 ಕಿ.ಮೀ. ದೂರದ ಪ್ರಯಾಣಕ್ಕೆ 1,262 ರೂ. ಹಾಗೂ ಕಲಬುರಗಿ–ಶಿವಮೊಗ್ಗ ನಡುವೆ ಎಸಿ ಸ್ಲೀಪರ್ 547 ಕಿ.ಮೀ ದೂರದ ಪ್ರಯಾಣಕ್ಕೆ ಕೇವಲ 1,195 ರೂ. ಕೈಗೆಟಕುವ ದರ ನಿಗದಿ ಮಾಡಿದ್ದು, ಪ್ರಯಾಣಿಕರು ಅರಾಮದಾಯಕವಾಗಿ ಪ್ರಯಾಣಿಸಬಹುದಾಗಿದೆ ಎಂದು ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ತಿಳಿಸಿದರು.

ಕಲಬುರಗಿ–ಮೈಸೂರು ಬಸ್ ಕಲಬುರಗಿ ಕೇಂದ್ರ ಬಸ್ ನಿಲ್ದಾಣದಿಂದ ಸಂಜೆ 06.00 ಗಂಟೆಗೆ ಹೊರಟು ಶಹಾಪುರ–ಲಿಂಗಸೂರು–ಸಿಂಧನೂರು–ಬಳ್ಳಾರಿ–ಚಳ್ಳಕೆರೆ– ಹಿರಿಯೂರು–ತುರುವೆಕೇರೆ ಮಾರ್ಗವಾಗಿ ಮೈಸೂರಿಗೆ ಮರುದಿನ ಬೆಳಗ್ಗೆ 08:00 ಗಂಟೆಗೆ ತಲುಪಲಿದೆ. ಇದೇ ಮಾರ್ಗದಲ್ಲಿ ಮೈಸೂರು–ಕಲಬುರಗಿ ಬಸ್ ಮೈಸೂರಿನಿಂದ ಸಂಜೆ 07.00 ಗಂಟೆಗೆ ಹೊರಟು ಕಲಬುರಗಿ ಕೇಂದ್ರ ಬಸ್ ನಿಲ್ದಾಣಕ್ಕೆ ಮರು ದಿನ ಬೆಳಗ್ಗೆ 09:00 ಗಂಟೆಗೆ ತಲುಪಲಿದೆ. ಅದೇ ರೀತಿ ಕಲಬುರಗಿ–ಶಿವಮೊಗ್ಗ ಬಸ್ ಕಲಬುರಗಿಯಿಂದ ರಾತ್ರಿ 08:30 ಗಂಟೆಗೆ ಹೊರಟು ಶಹಾಪುರ– ಲಿಂಗಸೂರು–ಸಿಂಧನೂರು– ಗಂಗಾವತಿ ಹೊಸಪೇಟೆ–ಕೂಡ್ಲಗಿ– ಚಿತ್ರದುರ್ಗ–ಚನ್ನಗಿರಿ ಮಾರ್ಗವಾಗಿ ಮರುದಿನ ಶಿವಮೊಗ್ಗಕ್ಕೆ ಬೆಳಗ್ಗೆ 07:15 ಗಂಟೆಗೆ ತಲುಪಲಿದೆ. ಇದೇ ಮಾರ್ಗದಲ್ಲಿ ಶಿವಮೊಗ್ಗ–ಕಲಬುರಗಿ ಬಸ್ ಶಿವಮೊಗ್ಗದಿಂದ ಸಂಜೆ 07.00 ಗಂಟೆಗೆ ಹೊರಟು ಮರುದಿನ ಕಲಬುರಗಿ ಕೇಂದ್ರ ಬಸ್ ನಿಲ್ದಾಣಕ್ಕೆ ಬೆಳಗ್ಗೆ 05:45 ಗಂಟೆಗೆ ಬಂದು ತಲುಪಲಿದೆ.

# ಕೊಳಗೇರಿ ನಿವಾಸಿಗಳಿಗೆ ಹಕ್ಕುಪತ್ರ ನೀಡಲು ಒತ್ತಾಯ



**ರಾಯಚೂರು, ಜು. 30:** ಖಾಸಗಿ ಜಮೀನಿನಲ್ಲಿ ನೆಲೆಗೊಂಡಿರುವ ದಾಖಲೆರಹಿತ ಸ್ಲಂ ಪ್ರದೇಶಗಳನ್ನು ಸರ್ಕಾರದ ಸುತ್ತೋಲೆಯಂತೆ ಕಂದಾಯ ಗ್ರಾಮಗಳಾಗಿ ಪರಿವರ್ತಿಸಿ, ಅಲ್ಲಿನ ನಿವಾಸಿಗಳಿಗೆ ಹಕ್ಕುಪತ್ರಗಳನ್ನು ವಿತರಿಸಬೇಕು ಎಂದು ಒತ್ತಾಯಿಸಿ ಸ್ಲಂ ನಿವಾಸಿಗಳ ಕ್ರಿಯಾ ವೇದಿಕೆಯ ಪದಾಧಿಕಾರಿಗಳು ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ನಗರದ ವಾರ್ಡ್ ಸಂಖ್ಯೆ 6ರ ಎಂ.ಎಂ. ಕಾಲೊನಿ, ಹೊಸೂರು ಜನತಾ ಕಾಲೊನಿ, ವಾರ್ಡ್ ಸಂಖ್ಯೆ 23ರ ಕಾಕನಕೆರೆ, ವಾರ್ಡ್ ಸಂಖ್ಯೆ 19ರ ನವಾಬ್ ಗಡ್ಡಾ ಸೇರಿದಂತೆ ವಿವಿಧ ಖಾಸಗಿ ಜಮೀನಿನಲ್ಲಿರುವ ಸ್ಲಂ ಪ್ರದೇಶಗಳಲ್ಲಿ ಸಾವಿರಾರು ಕುಟುಂಬಗಳು 40ರಿಂದ 50 ವರ್ಷಗಳಿಂದ ವಾಸಿಸುತ್ತಿವೆ. ಆದರೆ, ಮನೆಗಳ ಹಕ್ಕುಪತ್ರ ಹಾಗೂ ಅಗತ್ಯ ದಾಖಲೆಗಳ ಕೊರತೆಯಿಂದಾಗಿ ಮೂಲಭೂತ ಸೌಲಭ್ಯಗಳು ಮತ್ತು ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನಗಳಿಂದ ವಂಚಿತರಾಗಿದ್ದಾರೆ ಎಂದು ಅಸಮಾಧಾನ ಹೊರಹಾಕಿದರು.

ಈ ಪ್ರದೇಶಗಳಲ್ಲಿ ದಲಿತರು, ಅಲ್ಪಸಂಖ್ಯಾತರು, ಹಿಂದುಳಿದ ವರ್ಗದವರು ಹಾಗೂ ಬಡ ಕೂಲಿ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ವಾಸವಾಗಿದ್ದು, ದಿನಗೂಲಿ ಕೆಲಸದ ಮೂಲಕ ಜೀವನ ಸಾಗಿಸುತ್ತಿದ್ದಾರೆ. ದಾಖಲೆಗಳಿಲ್ಲದ ಕಾರಣ ಸರ್ಕಾರದ ಜನಪರ ಯೋಜನೆಗಳ ಸೌಲಭ್ಯ ಪಡೆಯಲು ಸಮಸ್ಯೆಯಾಗುತ್ತಿದೆ ಎಂದರು.

ಕರ್ನಾಟಕ ಭೂಸುಧಾರಣಾ ಕಾಯ್ದೆಯ ಕಲಂ 38(ಎ) ಹಾಗೂ ನಿಯಮ 9(ಸಿ) ಅನ್ವಯ ಖಾಸಗಿ ಜಮೀನಿನಲ್ಲಿರುವ ದಾಖಲೆರಹಿತ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಿ ನಿವಾಸಿಗಳಿಗೆ ಹಕ್ಕುಪತ್ರ ನೀಡುವ ಕುರಿತು ಸರ್ಕಾರ ನಾಲ್ಕು ವರ್ಷಗಳ ಹಿಂದೆಯೇ ಸುತ್ತೋಲೆ ಹೊರಡಿಸಿದೆ. ಆದರೂ ಜಿಲ್ಲಾಡಳಿತ ಹಾಗೂ ಕಂದಾಯ ಇಲಾಖೆ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಬೇಸರ ಹೊರಹಾಕಿದರು.

ಹೀಗಾಗಿ ಸರ್ಕಾರದ ಸುತ್ತೋಲೆಯಂತೆ ಎಂ.ಎಂ. ಕಾಲೊನಿ, ಹೊಸೂರು ಜನತಾ ಕಾಲೊನಿ, ಕಾಕನಕೆರೆ, ನವಾಬ್ ಗಡ್ಡಾ ಸೇರಿದಂತೆ ಇತರ ಖಾಸಗಿ ಸ್ಲಂ ಪ್ರದೇಶಗಳನ್ನು ಕಂದಾಯ ಗ್ರಾಮಗಳಾಗಿ ಘೋಷಿಸಿ, ಅಲ್ಲಿನ ನಿವಾಸಿಗಳಿಗೆ ಶೀಘ್ರವಾಗಿ ಹಕ್ಕುಪತ್ರ ವಿತರಿಸಬೇಕು ಎಂದು ಆಗ್ರಹಿಸಿದರು.

# ರಸ್ತೆ ಅಪಘಾತ ತಡೆಗೆ ಸುರಕ್ಷತಾ ಕ್ರಮ ವಹಿಸಲು ಅಧಿಕಾರಿಗಳಿಗೆ ಡಿ.ಸಿ ಡಾ.ಆನಂದ ಸೂಚನೆ

**ವಿಜಯಪುರ, ಜು.30–**ಜೀವ ಬಹು ಅಮೂಲ್ಯವಾಗಿದ್ದು, ವಾಹನ ಚಾಲಕರು ನಿರ್ಲಕ್ಷ್ಯ ವಹಿಸದೇ ಜಾಗರೂಕತೆಯಿಂದ ವಾಹನ ಚಲಾಯಿಸುವಂತೆ ಹಾಗೂ ರಸ್ತೆ ನಿಯಮ ಪಾಲಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸಾರ್ವಜನಿಕರಲ್ಲಿ ಜಾಗೃತಿ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಸೂಚಿಸಿದರು



ಜಿಲ್ಲೆಯಲ್ಲಿರುವ ಅಪಘಾತ ವಲಯಗಳನ್ನು ಗುರುತಿಸಿ ರಸ್ತೆ ಅಪಘಾತ ತಡೆಗೆ ಕ್ರಮ ವಹಿಸಬೇಕು.

ಜೊತೆಗೆ ನಿಯಮಿತವಾಗಿ ಸಭೆ ನಡೆಸುವ ಮೂಲಕ ಅಪಘಾತ ತಡೆಗೆ ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಗುರುತಿಸಲಾದ ಅಪಘಾತ ವಲಯದ ಅಂಬುಲೆನ್ಸ್ ಇರಬೇಕು. ಅಪಘಾತಕ್ಕೊಳಗಾದ ವ್ಯಕ್ತಿಗೆ ಗೋಲ್ಡನ್ ಅವರ್ಸ್ ಇದ್ದಂತೆ. ಹಾಗಾಗಿ ಪ್ರತಿ ಅಪಘಾತ ವಲಯದಲ್ಲಿ ಅಂಬ್ಯುಲೆನ್ಸ್ ಸದಾ ಸನ್ನದ್ಧವಾಗಿರಬೇಕು. ತನ್ಮೂಲಕ ವ್ಯಕ್ತಿಯ ಅಮೂಲ್ಯ ಜೀವನ ಉಳಿಸಲು ಸಾಧ್ಯವಿದೆ ಎಂದ ಅವರು, ರಸ್ತೆ ಫಲಕ ಅಳವಡಿಸಿ, ತುರ್ತು ಸಂದರ್ಭದ ಅಗತ್ಯ ಮಾಹಿತಿ ವಿವರ ಹೊಂದಿರಬೇಕು. ಅಪಘಾತ ವಲಯಗಳಲ್ಲಿ ಅಪಘಾತ ಪ್ರಮಾಣ ತಗ್ಗಿಸಲು ಇ ಮಾಹಿತಿ ಫಲಕಗಳನ್ನು ಪ್ರದರ್ಶಿಸಬೇಕು ಎಂದು ಸೂಚಿಸಿದ ಜಿಲ್ಲಾಧಿಕಾರಿಗಳು,

ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸಿ ಅಪಘಾತಗಳು ನಡೆಯದಂತೆ ನೋಡಿಕೊಳ್ಳುವ ನಿಟ್ಟಿನಲ್ಲಿ ಎಲ್ಲ ಅಧಿಕಾರಿಗಳು ತೀವ್ರ ವಹಿಸಬೇಕು ಎಂದವರು ಸೂಚಿಸಿದರು.

ಅಪಘಾತ ವಲಯಗಳಲ್ಲಿ ಪ್ಯಾರಾ ಮೆಡಿಕಲ್ ಸಿಬ್ಬಂದಿ ನಿಯೋಜಿಸಬೇಕು. ಜಿಲ್ಲೆಯಲ್ಲಿರುವ ಅಪಘಾತ ವಲಯಗಳಲ್ಲಿ ಅಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಂಡು, ಪರಿಶೀಲಿಸಿ, ಅಪಘಾತ ತಡೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ ಅವರು, ಅಧಿಕಾರಿಗಳು ಅತ್ಯಂತ ಜವಾಬ್ದಾರಿಯುತ ವಾಗಿ ಕಾರ್ಯ ನಿರ್ವಹಿಸಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಎಲ್ಲ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಿ ಅಪಘಾತ ತಡೆಗೆ ಕ್ರಮವಹಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

# ನಗರ ಮತಕ್ಷೇತ್ರದಲ್ಲಿ 2,00,109 ಗಣತಿ ನಮೂನೆ ಡಿಜಿಟೈಜ್: ವಿಜಯ ಮೆಕ್ಕಳಕಿ ಹೇಳಿಕೆ

**ವಿಜಯಪುರ, ಜು.30–** ನಗರ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಗುರುವಾರ ಮಧ್ಯಾಹ್ನದವರೆಗೆ 2,90,184 ಗಣತಿ ನಮೂನೆ ವಿತರಿಸಲಾಗಿದ್ದು,2,00,109 ನಮೂನೆಗಳನ್ನು ಡಿಜಿಟೈಜ್ ಮಾಡಲಾಗಿದೆ ಎಂದು ಮತದಾರರ ನೋಂದಣಾಧಿಕಾರಿಯೂ ಆಗಿರುವ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಹೇಳಿದರು.



32,851 ಗೈರು ಹಾಜರಾದ ಮತದಾರರು, 21,158 ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ ಎಂದವರು ವಿವರಿಸಿದರು.7,523 ಮತದಾರರು: ಮರಣ ಹೊಂದಿದ್ದಾರೆ. ಈಗಾಗಲೇ 7,264 ಮತದಾರರು ಹಾಗೂ 315 ನೋಂದಾಯಿಸಿಕೊಂಡಿದ್ದಾರೆ. ಈ ಪ್ರಕ್ರಿಯೆಗೆ ಆಗಸ್ಟ್ 08 ಅರ್ಜಿ ಸಲ್ಲಿಕೆಗೆ ಅಂತಿಮ ಗಡುವು. ಬಿಎಲ್‌ಒಗಳು ಮತದಾರರ ಮನೆ ಮನೆಗೆ ತೆರಳಿ 2–3 ಬಾರಿ ಭೇಟಿ ನೀಡಿದರೂ ಸಹ ಇನ್ನು ಸುಮಾರು 21,259 ಮತದಾರರ ಗಣತಿ ನಮೂನೆಗಳು ಮರಳಿ ಸಿಗದೆ ಬಾಕಿ ಉಳಿದಿವೆ. ಸಾರ್ವಜನಿಕರು ಹಾಗೂ ಮತದಾರರು ಭರ್ತಿ ಮಾಡಿದ ಗಣತಿ ನಮೂನೆಗಳನ್ನು ಆ. 8 ರೊಳಗಾಗಿ ಸಂಬಂಧಿಸಿದ ಬಿಎಲ್‌ಒಗಳಿಗೆ ಕಡ್ಡಾಯವಾಗಿ ಸಲ್ಲಿಸಬೇಕು ಎಂದರು.

ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಂತಹ ಮತದಾರರ ಹೆಸರುಗಳನ್ನು ಮತದಾರರ ಕರಡು ಪಟ್ಟಿಯಿಂದ ಹೊರಗಿಡಲಾಗುವುದು ಎಂದು

# ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡದಂತೆ ಕರ್ನಾಟಕ ರಕ್ಷಣಾ ವೇದಿಕೆ ಆಗ್ರಹ

**ಬಳ್ಳಾರಿ, ಜು. 30:** ಕಾವೇರಿ ನದಿ ನೀರು ನಿಯಂತ್ರಣ ಸಮಿತಿ ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡುವಂತೆ ನೀಡಿರುವ ಆದೇಶವನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ)ಯಿಂದ ನಗರದ ಗಡಿಗೆ ಚೆನ್ನಪ್ಪ ವೃತ್ತದಲ್ಲಿ ವೇದಿಕೆಯ ಜಿಲ್ಲಾ ಅಧ್ಯಕ್ಷ ವಿ.ಎಚ್. ಹುಲುಗಪ್ಪ ಹಾಗೂ ರಾಜ್ಯ ಕಾರ್ಯಕಾರಿಣಿ ಸದಸ್ಯ ಅದ್ದಿಗೇರಿ ರಾಮಣ್ಣ ಅವರ ನೇತೃತ್ವದಲ್ಲಿ ಪಂಜಿನ ಮೆರವಣಿಗೆ ಹಾಗೂ ಪ್ರತಿಭಟನೆ ನಡೆಸಲಾಯಿತು.




ಪ್ರತಿಭಟನೆಯಲ್ಲಿ ಕರವೇ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಕನ್ನಡಪರ ಹೋರಾಟಗಾರರು ಭಾಗವಹಿಸಿ ರಾಜ್ಯ ಸರ್ಕಾರ ಹಾಗೂ ಕಾವೇರಿ ನೀರು ಬಿಡುಗಡೆ ನಿರ್ಧಾರದ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಮುಖಂಡರು, ರಾಜ್ಯದಲ್ಲಿ ಈ ವೇಳೆಗೆ ಶೇ.70ರಷ್ಟು ಮಳೆಯಾಗಬೇಕಿದ್ದರೂ ಕೇವಲ ಶೇ.20ರಷ್ಟು ಮಾತ್ರ ಮಳೆಯಾಗಿದ್ದು, ತೀವ್ರ ಮಳೆ ಕೊರತೆಯಿಂದ ಕಾವೇರಿ ಜಲಾಶಯದಲ್ಲಿ ನೀರಿನ ಸಂಗ್ರಹ ಗಣನೀಯವಾಗಿ ಕುಸಿದಿದೆ. ಇಂತಹ ಪರಿಸ್ಥಿತಿಯಲ್ಲಿ ಕರ್ನಾಟಕದ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ ಇರುವುದರಿಂದ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ಮಾಡಬಾರದು ಎಂದು ಆಗ್ರಹಿಸಿದರು.

ರಾಜ್ಯದ ರೈತರ ಹಿತಾಸಕ್ತಿ, ಕುಡಿಯುವ ನೀರಿನ ಅಗತ್ಯ ಹಾಗೂ ಜನರ ಬದುಕಿಗೆ ಮೊದಲ ಆದ್ಯತೆ ನೀಡಬೇಕು.

ರಾಜ್ಯದ ಅವಶ್ಯಕತೆಗಳನ್ನು ಪೂರೈಸಿದ ಬಳಿಕವೇ ಇತರ ರಾಜ್ಯಗಳಿಗೆ ನೀರು ಹರಿಸುವ ಬಗ್ಗೆ ತೀರ್ಮಾನ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

# ಅಮೆರಿಕದ ಬೆಂಬಲ: ಹಾರ್ಮುಜ್ ಜಲಸಂಧಿ ಮೂಲಕ ಸಾಗಿಸಲು ಯತ್ನಿಸಿದ 2 ತೈಲ ಟ್ಯಾಂಕರ್ ಹಿಂದಕ್ಕೆ ಕಳುಹಿಸಿದ ಐಆರ್‌ಜಿಸಿ

**ಟೆಹ್ರಾನ್, ಜುಲೈ 30:** ಅಮೆರಿಕದ ಬೆಂಬಲದೊಂದಿಗೆ ಹಾರ್ಮುಜ್ ಜಲಸಂಧಿಯನ್ನು ಸಾಗಿಸಲು ಯತ್ನಿಸಿದ ಎರಡು ತೈಲ ಟ್ಯಾಂಕರ್‌ಗಳಲ್ಲಿ ಒಂದಕ್ಕೆ ಬೆಂಕಿ ಹೊತ್ತಿಕೊಂಡ ನಂತರ, ಅವುಗಳನ್ನು ಹಿಂದಕ್ಕೆ ಕಳುಹಿಸಿರುವುದಾಗಿ ಇರಾನ್‌ನ ಐಆರ್‌ಜಿಸಿ ಗುರುವಾರ ತಿಳಿಸಿದೆ. ಈ ವಿಷಯದ ಕುರಿತು ಹೇಳಿಕೆ ನೀಡಿರುವ ದೇವಪ್ರಭುತ್ವ ಸಿಬ್ಬಂದಿ, ರಾತ್ರಿಯಿಡೀ ಹಡಗುಗಳು ಆಯಕಟ್ಟಿನ ಜಲಮಾರ್ಗದ ಮೂಲಕ "ಅಸುರಕ್ಷಿತ ದಕ್ಷಿಣ ಮಾರ್ಗ" ಎಂದು ವಿವರಿಸಿದ ಮೂಲಕ ಹೊರಡಲು ಪ್ರಯತ್ನಿಸಿದಾಗ ಈ ಘಟನೆ ಸಂಭವಿಸಿದೆ ಎಂದು ಹೇಳಿದ್ದಾರೆ. "ನಿನ್ನೆ ರಾತ್ರಿ, ಅಮೆರಿಕನ್ ವಿಮಾನಗಳಿಂದ ಪ್ರೋತ್ಸಾಹಿಸಲ್ಪಟ್ಟ ಎರಡು ತೈಲ ಟ್ಯಾಂಕರ್‌ಗಳು ಹಾರ್ಮುಜ್ ಜಲಸಂಧಿಯ ಅಸುರಕ್ಷಿತ ದಕ್ಷಿಣ ಮಾರ್ಗದ ಮೂಲಕ ಹೊರಡಲು ಪ್ರಯತ್ನಿಸಿದವು" ಎಂದು ಸೈನಿಕರು ಹೇಳಿದರು, "ಅವುಗಳಲ್ಲಿ ಒಂದರಲ್ಲಿ ದೊಡ್ಡ ಬೆಂಕಿ ಕಾಣಿಸಿಕೊಂಡ ನಂತರ, ಎರಡೂ ಹಡಗುಗಳು ಬೇಗನೆ ಹಿಂತಿರುಗಿದವು." ಐಆರ್‌ಜಿಸಿ ಹಡಗುಗಳನ್ನು ಗುರುತಿಸಲಿಲ್ಲ ಅಥವಾ ಅದರ ಖಾತೆಗೆ ಪುರಾವೆಗಳನ್ನು ಒದಗಿಸಲಿಲ್ಲ. ಹಕ್ಕುಗಳನ್ನು ಸ್ವತಂತ್ರವಾಗಿ ಪರಿಶೀಲಿಸಲಾಗಿಲ್ಲ. ಫೆಬ್ರವರಿ 28 ರಂದು



ಪಶ್ಚಿಮ ಏಷ್ಯಾದಲ್ಲಿ ಯುದ್ಧ ಪ್ರಾರಂಭವಾದಾಗಿನಿಂದ ಇರಾನ್ ಈ ಪ್ರಮುಖ ಹಡಗು ಮಾರ್ಗದ ಮೇಲೆ ನಿಯಂತ್ರಣವನ್ನು ಕಾಯ್ದುಕೊಂಡಿದೆ. ಯುದ್ಧ ಪ್ರಾರಂಭವಾದ ನಂತರ, ಟೆಹ್ರಾನ್ ಜಲಸಂಧಿಯ ಮೂಲಕ ಸಾಗಲು ಬಯಸುವ ಎಲ್ಲಾ ವಾಣಿಜ್ಯ ಹಡಗುಗಳು ಇರಾನಿನ ಅಧಿಕಾರಿಗಳಿಂದ ಅನುಮತಿ ಪಡೆಯುವುದು, ಸುಪ್ರೀಂ ರಾಷ್ಟ್ರೀಯ ಭದ್ರತಾ ಮಂಡಳಿಯ ಅಂಗವಾದ ಪರ್ಷಿಯನ್ ಗಲ್ಫ್ ಜಲಸಂಧಿ ಪ್ರಾಧಿಕಾರ ಗೊತ್ತುಪಡಿಸಿದ ಮಾರ್ಗಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವುದು ಮತ್ತು ಜಲಮಾರ್ಗವನ್ನು ಸಾಗಿಸುವ ಮೊದಲು ಸೇವಾ ಶುಲ್ಕವನ್ನು ಪಾವತಿಸುವುದು ಕಡ್ಡಾಯಗೊಳಿಸಿದೆ. ತನ್ನ ನಿಲುವನ್ನು ಪುನರುಚ್ಚರಿಸುತ್ತಾ, ಐಆರ್‌ಜಿಸಿ ಹಾರ್ಮುಜ್ ಜಲಸಂಧಿಯು "ನಮ್ಮ ಪ್ರದೇಶ" ಎಂದು ಹೇಳಿದೆ ಮತ್ತು "ಅಮೆರಿಕನ್ ಅಧಿಕಾರಿಗಳ ಅತಿಯಾದ ವಾಕ್ಚಾತುರ್ಯ ಮತ್ತು ಬೆದರಿಕೆಗಳು ಮತ್ತು ಈ ಪ್ರದೇಶದಲ್ಲಿನ ಸಮುದ್ರ ಚಲನೆಗಳಲ್ಲಿ ಅವರ ಹಸ್ತಕ್ಷೇಪ ಮುಂದುವರಿಯುವವರೆಗೆ ಅದನ್ನು ಮತ್ತೆ ತೆರೆಯಲಾಗುವುದಿಲ್ಲ" ಎಂದು ಎಚ್ಚರಿಸಿದೆ.

ಜೋರ್ಡಾನ್‌ನಲ್ಲಿರುವ ಅಮೆರಿಕ ಮಿಲಿಟರಿ ನೆಲೆಯ ಮೇಲೆ ಇರಾನ್ ಕ್ಷಿಪಣಿ ದಾಳಿಯನ್ನು ಪ್ರಾರಂಭಿಸಿದಾಗ ನಾಲ್ಕು ದಿನಗಳ ಯುದ್ಧ ವಿರಾಮ ಕೊನೆಗೊಂಡ ಕೆಲವೇ ಗಂಟೆಗಳ ನಂತರ ಈ ಹೇಳಿಕೆ ಬಂದಿದೆ. ದಾಳಿಗೆ ಪ್ರತಿಕ್ರಿಯೆಯಾಗಿ, ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಿದರು ಮತ್ತು ವಾಷಿಂಗ್ಟನ್ ಇರಾನ್ ಅನ್ನು "ತುಂಬಾ ಕಠಿಣವಾಗಿ" ಹೊಡೆಯುವುದಾಗಿ ಘೋಷಿಸಿದರು, ನಂತರ CENTCOM ಅಮೆರಿಕ ಪಡೆಗಳು ಮಿಲಿಟರಿ ಕಮಾಂಡ್ ಕೇಂದ್ರಗಳು, ಕ್ಷಿಪಣಿ ಮತ್ತು ಡ್ರೋನ್ ಸೌಲಭ್ಯಗಳು, ಕರಾವಳಿ ಕಣ್ಗಾವಲು ಮತ್ತು ವಾಯು ರಕ್ಷಣಾ ತಾಣಗಳು ಮತ್ತು ಸಮುದ್ರ ಸಾಮರ್ಥ್ಯಗಳ ಮೇಲೆ ವಾಯುದಾಳಿಗಳನ್ನು ಒಳಗೊಂಡ "ಪ್ರಬಲ ಪ್ರತಿಕ್ರಿಯೆ"ಯನ್ನು ನಡೆಸಿವೆ ಎಂದು ಘೋಷಿಸಿತು. ಹಾರ್ಮುಜ್ ಜಲಸಂಧಿಯಲ್ಲಿರುವ ಕೆಶ್ಮ್ ದ್ವೀಪದ ಮೇಲೆ ಅಮೆರಿಕ ನಡೆಸಿದ ದಾಳಿಯಲ್ಲಿ ಒಂದೇ ಕುಟುಂಬದ ಮೂವರು ಸದಸ್ಯರು ಸಾವನ್ನಪ್ಪಿದ್ದಾರೆ ಮತ್ತು ಇಬ್ಬರು ಗಾಯಗೊಂಡಿದ್ದಾರೆ ಎಂದು ಇರಾನ್ ರಾಜ್ಯ ಮಾಧ್ಯಮ ವರದಿ ಮಾಡಿದೆ.

ಏತನ್ಮಧ್ಯೆ, ಜೋರ್ಡಾನ್ ಗುರುವಾರ ಹೆಚ್ಚುವರಿ ಇರಾನಿನ ಕ್ಷಿಪಣಿಗಳನ್ನು ತಡೆಹಿಡಿದಿದೆ ಎಂದು ಹೇಳಿದರೆ, ಕುವೈತ್ ಅಧಿಕಾರಿಗಳು ದಾಳಿಯ ನಂತರ ದೇಶದ ಉತ್ತರದಲ್ಲಿ ಒಬ್ಬ ವ್ಯಕ್ತಿ ಸಾವನ್ನಪ್ಪಿದ್ದಾರೆ ಎಂದು ವರದಿ ಮಾಡಿದ್ದಾರೆ.

# ಚೀನಾ ಕಚ್ಚಾತೈಲ ಆಮದಿನಲ್ಲಿ ತೀವ್ರ ಕಡಿತ



**ಬೀಜಿಂಗ್, ಜುಲೈ 30:** ಇರಾನ್ ಸಂಘರ್ಷದ ಸಮಯದಲ್ಲಿ ಚೀನಾ ಕಚ್ಚಾತೈಲ ಆಮದುಗಳಲ್ಲಿ ತೀವ್ರ ಕಡಿತವು ಜಾಗತಿಕ ತೈಲ ಬೆಲೆಗಳ ಏರಿಕೆಯನ್ನು ಮಿತಿಗೊಳಿಸುವಲ್ಲಿ ಪ್ರಮುಖ ಅಂಶವಾಗಿದೆ ಎಂದು ವರದಿಯಾಗಿದೆ, ಏಕೆಂದರೆ ಬೀಜಿಂಗ್ ವಿಶ್ವದ ಅತಿದೊಡ್ಡ ತೈಲ ಖರೀದಿದಾರರಲ್ಲಿ ಒಂದಾಗಿದೆ. ಫೆಬ್ರವರಿ 28 ರಂದು ಯುಎಸ್ ಮತ್ತು ಇಸ್ರೇಲ್ ಜಂಟಿಯಾಗಿ ಇರಾನ್ ಯುದ್ಧವನ್ನು ಪ್ರಾರಂಭಿಸಿದ ನಂತರ, ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಗೆ ಅಡ್ಡಿಯು ದೀರ್ಘಕಾಲದ ಪೂರೈಕೆ ಆಘಾತವನ್ನು ಉಂಟುಮಾಡುತ್ತದೆ ಎಂಬ ಭಯದ ನಡುವೆ ಕಚ್ಚಾತೈಲ ಬೆಲೆಗಳು ತೀವ್ರವಾಗಿ ಏರಿದವು. ಬೆಲೆಗಳು ಹೆಚ್ಚಾದಂತೆ ಚೀನಾದ ಕಚ್ಚಾ ತೈಲ ಆಮದು ತೀವ್ರವಾಗಿ ಕುಸಿಯಿತು. ಆರಂಭದಲ್ಲಿ ಈ ಕುಸಿತವು ಬೀಜಿಂಗ್ನ ಹೆಚ್ಚಿನ ತೈಲ ಬೆಲೆಗಳಿಗೆ ದೀರ್ಘಕಾಲದ ಸಂವೇದನೆಗೆ ಅನುಗುಣವಾಗಿದೆ ಎಂದು ಪರಿಗಣಿಸಲಾಗಿದ್ದರೂ, ದೇಶೀಯ ಆರ್ಥಿಕ ಚಟುವಟಿಕೆಯ ಮೇಲೆ ಗಮನಾರ್ಹವಾಗಿ ಪರಿಣಾಮ ಬೀರದೆ ಬೀಜಿಂಗ್ ಅಂತಹ ಕಡಿಮೆ ಖರೀದಿಗಳನ್ನು ಉಳಿಸಿಕೊಳ್ಳುತ್ತದೆ ಎಂದು ಕೆಲವರು ನಿರೀಕ್ಷಿಸಿದ್ದರು ಎಂದು ಆಕ್ಸಿಯೋಸ್ ವರದಿ ಮಾಡಿದೆ. ಬದಲಾಗಿ, ಚೀನಾದ ತೈಲ ಆಮದುಗಳು ಜೂನ್ನಲ್ಲಿ ಒಂದು ವರ್ಷದ ಹಿಂದಿನ ವರ್ಷಕ್ಕೆ ಹೋಲಿಸಿದರೆ 40% ಕ್ಕಿಂತ ಹೆಚ್ಚು

> **"ಜಾಗತಿಕ ಆರ್ಥಿಕತೆಯು ಈ ಬಿಕ್ಕಟ್ಟಿನಲ್ಲಿ ನ್ಯಾವಿಗೇಟ್ ಮಾಡಲು ಸಹಾಯ ಮಾಡುವಲ್ಲಿ ಚೀನಾ ಪ್ರಮುಖ ಪಾತ್ರ ವಹಿಸಿದೆ," "ಚೀನಾದ ಬೇಡಿಕೆ ಎಷ್ಟು ಕಡಿಮೆಯಾಗಬಹುದು ಎಂಬುದು ಆಶ್ಚರ್ಯಕರವಾಗಿದೆ" ಎಂದು ಸರಕು ವಿಶ್ಲೇಷಣಾ ಸಂಸ್ಥೆ ಕೆಪ್ಲರ್ನ ಅರ್ಥಶಾಸ್ತ್ರಜ್ಞ ರೀಡ್ ಐ'ಆನ್ಸನ್ ಹೇಳಿದ್ದಾರೆ.**

ಕಡಿಮೆಯಾಗಿದೆ, ಆದರೆ ಅದರ ಆರ್ಥಿಕತೆಯು ಪ್ರಮುಖ ಅಡಚಣೆ ಯಿಲ್ಲದೆ ಕಾರ್ಯನಿರ್ವಹಿಸುತ್ತಲೇ ಇತ್ತು. ಚೀನಾದ ನೀತಿ ನಿರೂಪಕರು ಕಲ್ಲಿದ್ದಲು, ಕಚ್ಚಾತೈಲ ಮತ್ತು ನೈಸರ್ಗಿಕ ಅನಿಲದ ದೇಶೀಯ ನಿಕ್ಷೇಪಗಳನ್ನು ಬಳಸಿಕೊಂಡು ಪರಿಣಾಮವನ್ನು ತಗ್ಗಿಸಿದ್ದಾರೆ ಎಂದು ಗೋಲ್ಡ್ಮನ್ ಸ್ಯಾಚ್ಸ್‌ಬ ವಿಶ್ಲೇಷಕರು ಹೇಳಿದ್ದಾರೆ, ಆದರೆ ಕಲ್ಲಿದ್ದಲು ಆಧಾರಿತ ವಿದ್ಯುತ್ ಉತ್ಪಾದನೆ ಮತ್ತು ನವೀಕರಿಸಬಹುದಾದ ಇಂಧನ ಮೂಲಗಳ ಮೇಲಿನ ಅವಲಂಬನೆಯನ್ನು ಹೆಚ್ಚಿಸಿದ್ದಾರೆ, ಈ ವಲಯಗಳಲ್ಲಿ ಚೀನಾ ಆಮದುಗಳ ಮೇಲೆ ಕಡಿಮೆ ಅವಲಂಬಿತವಾಗಿದೆ. ಕಳೆದ ವಾರ ಪ್ರಕಟವಾದ ವರದಿಯಲ್ಲಿ, ಗೋಲ್ಡ್ಮನ್ ಸ್ಯಾಚ್ಸ್, ಚೀನಾ "ತನ್ನ ಪಳೆಯುಳಿಕೆ ಇಂಧನಗಳ ನಿವ್ವಳ ಆಮದನ್ನು ತೀವ್ರವಾಗಿ ಕಡಿಮೆ ಮಾಡಿದೆ, ಕಡಿಮೆ ಬೇಡಿಕೆಯ ಮೂಲಕ ಜಾಗತಿಕ ಇಂಧನ ಬೆಲೆಗಳಿಗೆ ಆಘಾತ ಅಬ್ಸಾರ್ಬರ್ ಆಗಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದೆ" ಎಂದು ಹೇಳಿದರು. ದೇಶದ ಬೆಳೆಯುತ್ತಿರುವ ವಿದ್ಯುತ್ ವಾಹನಗಳ ಫ್ಲೀಟ್ ಇಂಧನ ಬೇಡಿಕೆಯನ್ನು ಕಡಿಮೆ ಮಾಡಿದೆ. ಪೆಟ್ರೋಲ್ ಬಳಕೆ ಗಣನೀಯವಾಗಿ ಕಡಿಮೆಯಾದರೂ, ಸಂಚಾರ ದಟ್ಟಣೆ ವಿಶಾಲವಾಗಿ ಸ್ಥಿರವಾಗಿದೆ ಎಂದು ಗೋಲ್ಡ್ಮನ್ ಸ್ಯಾಚ್ಸ್ ಗಮನಿಸಿದರು. ಚೀನಾದ ಬೇಡಿಕೆಯಲ್ಲಿನ ಕಡಿತವು ಜಾಗತಿಕ ಇಂಧನ ಮಾರುಕಟ್ಟೆಗಳಿಗೆ ವಿಶಾಲ ಪರಿಣಾಮಗಳನ್ನು ಬೀರಿದೆ.

# ಅಮೆರಿಕದ ದಾಳಿಯಲ್ಲಿ 3 ಐಆರ್‌ಜಿಸಿ ಸೈನಿಕರ ಸಾವು ಅಮೆರಿಕ ಬೆಂಬಲಿಸುವ ದೇಶಗಳಿಗೆ ಇರಾನ್ ಕಠಿಣ ಎಚ್ಚರಿಕೆ

ಟೆಹ್ರಾನ್, ಜುಲೈ 30: ವಾಯುವ್ಯ ಪ್ರಾಂತ್ಯದ ಜಂಜನ್ ಅನ್ನು ಗುರಿಯಾಗಿಸಿಕೊಂಡು ಗುರುವಾರ ಮುಂಜಾನೆ ಅಮೆರಿಕ ನಡೆಸಿದ ದಾಳಿಯಲ್ಲಿ ಇರಾನ್ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ (ಐಆರ್‌ಜಿಸಿ) ನ ಮೂವರು ಸದಸ್ಯರು ಸಾವನ್ನಪ್ಪಿದ್ದಾರೆ ಎಂದು ಇರಾನ್‌ನ ಫಾರ್ಸ್ ಸುದ್ದಿ ಸಂಸ್ಥೆ ತಿಳಿಸಿದೆ. ಅಮೆರಿಕದ "ಬೆದರಿಕೆಗಳು" ಮತ್ತು ಈ ಪ್ರದೇಶದಲ್ಲಿ ಹಡಗು ಸಾಗಣೆಯಲ್ಲಿ "ಹಸ್ತಕ್ಷೇಪ" ಮುಂದುವರಿಯುವವರೆಗೆ ಹಾರ್ಮುಜ್ ಜಲಸಂಧಿಯನ್ನು ಮುಚ್ಚಲಾಗುವುದು ಎಂದು ಈಗಾಗಲೇ ಘೋಷಿಸಿರುವ ಐಆರ್‌ಜಿಸಿ, ಈ ದಾಳಿಯನ್ನು "ಕ್ರೂರ" ಎಂದು ಬಣ್ಣಿಸಿದೆ, ಆದರೆ ಮಧ್ಯಪ್ರಾಚ್ಯದಲ್ಲಿ ಅಮೆರಿಕದ ಪಡೆಗಳ ಮೇಲೆ ಇರಾನಿನ ಕ್ಷಿಪಣಿ ದಾಳಿಯ ಪ್ರಯತ್ನ ಎಂದು ವಿವರಿಸಿದ್ದಕ್ಕೆ ಪ್ರತಿಕ್ರಿಯೆಯಾಗಿ "ಭಾರೀ ಅಲೆಯ" ದಾಳಿಗಳನ್ನು ಪ್ರಾರಂಭಿಸಿದೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ (ಸೆಂಟ್ಕಾಮ್) ಹೇಳಿದೆ. ಬಂದರ್ ಅಬ್ಬಾಸ್ ಮತ್ತು ಪರ್ಷಿಯನ್ ಗಲ್ಫ್ ದ್ವೀಪ ಕಿಶ್ ಸೇರಿದಂತೆ ದಕ್ಷಿಣ ಇರಾನ್ನಾದ್ಯಂತ ಸ್ಫೋಟಗಳ ಶಬ್ದಗಳು



ಕೇಳಿಬಂದಿವೆ ಎಂದು ಇರಾನ್ ರಾಜ್ಯ ಮಾಧ್ಯಮ ವರದಿ ಮಾಡಿದೆ. ಇತ್ತೀಚಿನ ದಾಳಿಗಳು ಒಂದು ದಿನದ ಹಿಂದೆ ಅಮೆರಿಕದ ಮಿಲಿಟರಿ ಸ್ಥಾನಗಳ ಮೇಲೆ ಇರಾನ್ ನಡೆಸಿದ ದಾಳಿಗೆ ಪ್ರತೀಕಾರದ ಪ್ರತಿಕ್ರಿಯೆಯಾಗಿತ್ತು ಮತ್ತು ಹಲವಾರು ದಿನಗಳಲ್ಲಿ ದೇಶವನ್ನು ನೇರವಾಗಿ ಗುರಿಯಾಗಿಸಿಕೊಂಡ ಮೊದಲನೆಯದು. ಇರಾನ್ ವಿರುದ್ಧ ಅಮೆರಿಕದ ಮಿಲಿಟರಿ ಕ್ರಮಗಳಿಗೆ ಸಹಾಯ ಮಾಡುವ ಅಥವಾ ಬೆಂಬಲಿಸುವ ಯಾವುದೇ ದೇಶವು ತನ್ನ ನಡವಳಿಕೆಯನ್ನು ಬದಲಾಯಿಸದಿದ್ದರೆ "ದೃಢ ಮತ್ತು ಕಠಿಣ" ಪ್ರತಿಕ್ರಿಯೆಯನ್ನು ಎದುರಿಸಬೇಕಾಗುತ್ತದೆ ಎಂದು ಐಆರ್‌ಜಿಸಿ ಹೇಳಿಕೆಯಲ್ಲಿ ಎಚ್ಚರಿಸಿದೆ. ಇರಾನ್ನ ಸಶಸ್ತ್ರ ಪಡೆಗಳು ಪ್ರತೀಕಾರ ತೀರಿಸಿಕೊಳ್ಳಲು ಸಿದ್ಧವಾಗಿವೆ ಮತ್ತು "ಆಕ್ರಮಣಕಾರ" ವನ್ನು ಶಿಕ್ಷಿಸಲಾಗುವುದು ಎಂದು ಪಡೆ ಹೇಳಿದೆ.

ಹಾರ್ಮುಜ್ ಜಲಸಂಧಿಯ ದಕ್ಷಿಣಕ್ಕೆ ಹಾದುಹೋಗಲು ಪ್ರಯತ್ನಿಸುತ್ತಿದ್ದ ಎರಡು ತೈಲ ಟ್ಯಾಂಕರ್ಗಳು ಬೆಂಕಿಗೆ ಆಹುತಿಯಾದ ನಂತರ ಹಿಂತಿರುಗಿದವು ಎಂದು ಖಖಉಅ ಮತ್ತಷ್ಟು ಹೇಳಿದೆ. ಕಾರ್ಯತಂತ್ರದ ಜಲಮಾರ್ಗವು ಇರಾನ್ನ ನಿಯಂತ್ರಣದಲ್ಲಿದೆ ಎಂದು ಪುನರುಚ್ಚರಿಸುತ್ತಾ, ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲಾಗುವುದಿಲ್ಲ ಎಂದು ಅದು ಹೇಳಿದೆ, ಆದರೆ ಯುಎಸ್ ಈ ಪ್ರದೇಶದ ಸಮುದ್ರ ವ್ಯವಹಾರಗಳಲ್ಲಿ ಬೆದರಿಕೆ ಮತ್ತು ಹಸ್ತಕ್ಷೇಪ ಎಂದು ಕರೆಯುವುದನ್ನು ಮುಂದುವರಿಸಿದೆ.

# ಅಮೆರಿಕ–ಇರಾನ್ ನಡುವೆ ಮಾತುಕತೆ ಮತ್ತೆ ಆರಂಭಿಸಲು ಪಾಕಿಸ್ತಾನ ಒತ್ತಾಯ

**ಇಸ್ಲಾಮಾಬಾದ್, ಜುಲೈ 30:** ಅಮೆರಿಕ ಮತ್ತು ಇರಾನ್ ಅನ್ನು ಮತ್ತೆ ಮಾತುಕತೆಯ ಮೇಜಿಗೆ ತರಲು ಪಾಕಿಸ್ತಾನವು ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಗುರುವಾರ ಹೇಳಿದೆ, "ನಡೆಯುತ್ತಿರುವ ಸಂಘರ್ಷವನ್ನು ಪರಿಹರಿಸಲು ರಾಜತಾಂತ್ರಿಕತೆಯು ಏಕೈಕ ಕಾರ್ಯಸಾಧ್ಯವಾದ ಮಾರ್ಗವಾಗಿದೆ" ಎಂದು ಒತ್ತಿ ಹೇಳಿದರು. ಪಾಕಿಸ್ತಾನದ ವಿದೇಶಾಂಗ ಸಚಿವಾಲಯದ ವಕ್ತಾರ ತಾಹಿರ್ ಅಂದ್ರಾಬಿ, ಇಸ್ಲಾಮಾಬಾದ್ ಸಂವಾದವನ್ನು ಬೆಂಬಲಿಸುವುದನ್ನು ಮುಂದುವರಿಸಿದೆ ಮತ್ತು ಭಾಗಿಯಾಗಿರುವ ಪಕ್ಷಗಳು ಸಹಿ ಮಾಡಿದ ತಿಳುವಳಿಕೆ ಒಪ್ಪಂದದ ಅಡಿಯಲ್ಲಿ ಮಾತುಕತೆಗಳನ್ನು ಪುನಃಸ್ಥಾಪಿಸಲು ಕೆಲಸ ಮಾಡುತ್ತಿದೆ ಎಂದು ಹೇಳಿದರು. "ಚಾಲ್ತಿಯಲ್ಲಿರುವ ಉದ್ವಿಗ್ನತೆ ಮತ್ತು ಹಗೆತನದ ನಡುವೆ, ಸಂವಾದ ಮತ್ತು ರಾಜತಾಂತ್ರಿಕತೆಯು ಮುಂದಿನ ಏಕೈಕ ಕಾರ್ಯಸಾಧ್ಯವಾದ ಮಾರ್ಗವಾಗಿ ಉಳಿದಿದೆ ಎಂದು ಪಾಕಿಸ್ತಾನ ಪುನರುಚ್ಚರಿಸುತ್ತದೆ" ಎಂದು ಅಂದ್ರಾಬಿ ವಾರದ ಮಾಧ್ಯಮಗೋಷ್ಠಿಯಲ್ಲಿ ಹೇಳಿದರು. ಅಮೆರಿಕ ಮತ್ತು ಇರಾನ್ ಮಾತುಕತೆಗಳನ್ನು ಪುನರಾರಂಭಿಸಲು ಪಾಕಿಸ್ತಾನವು "ಸಾಧ್ಯವಾದಷ್ಟು ಪ್ರಯತ್ನಿಸುತ್ತಿದೆ" ಎಂದು ಅವರು ಹೇಳಿದರು ಮತ್ತು ಕದನ ವಿರಾಮವನ್ನು ಕಾಯ್ದುಕೊಳ್ಳುವ ಮತ್ತು ರಾಜತಾಂತ್ರಿಕ ನಿಶ್ಚಿತಾರ್ಥವನ್ನು ಪುನರಾರಂಭಿಸುವ ಗುರಿಯನ್ನು ಹೊಂದಿರುವ ಪ್ರಯತ್ನಗಳನ್ನು ಸ್ವಾಗತಿಸಿದರು.

# ಇರಾನಿನ ಕಡಲ ವಿಮಾದಾರರು, ನೆರಳು ನೌಕಾಪಡೆ ಗುರಿಯಾಗಿಸಿಕೊಂಡು ಅಮೆರಿಕ ಹೊಸ ನಿರ್ಬಂಧ

**ವಾಷಿಂಗ್ಟನ್, ಜುಲೈ 30:** ಟೆಹ್ರಾನ್ನ ಇಂಧನ ಆದಾಯವನ್ನು ನಿಗ್ರಹಿಸಲು ಮತ್ತು ಪ್ರಮುಖ ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಸಾಗಣೆಯ ಮೇಲೆ ನಿಯಂತ್ರಣ ಸಾಧಿಸುವ ಪ್ರಯತ್ನಗಳು ಎಂದು ವಾಷಿಂಗ್ಟನ್ ಹೇಳಿಕೊಳ್ಳುವುದನ್ನು ಎದುರಿಸಲು ಅಮೆರಿಕ ಬುಧವಾರ ಇರಾನಿನ ಸಂಸ್ಥೆಗಳನ್ನು ಗುರಿಯಾಗಿಸಿಕೊಂಡು ಹೊಸ ನಿರ್ಬಂಧಗಳನ್ನು ಘೋಷಿಸಿದೆ. ಅಮೆರಿಕ ಖಜಾನೆಯು ಎರಡು ಇರಾನಿನ ವಿಮಾ ಸಂಸ್ಥೆಗಳಾದ ಪರ್ಷಿಯನ್ ಗಲ್ಫ್ ಮೆರೈನ್ ಇನ್ಶುರೆನ್ಸ್ ಕಂಪನಿ ಮತ್ತು ಹಾರ್ಮುಜ್ ಸೇಫ್ ಮೆರೈನ್ ಸರ್ವೀಸಸ್ ಅಥಾರಿಟಿಯನ್ನು ಮಂಜೂರು ಮಾಡಿದೆ ಎಂದು ಹೇಳಿಕೆಯಲ್ಲಿ ವಿದೇಶಾಂಗ ಇಲಾಖೆಯ ವಕ್ತಾರ ಟಾಮಿ ಪಿಗೋಟ್ ಹೇಳಿದ್ದಾರೆ, ಇವೆರಡೂ ಇರಾನ್ನ ಪ್ರಬಲ ದೇವಪ್ರಭುತ್ವ ಕಾವಲುಗಾರ ಐಆರ್‌ಜಿಸಿಯಿಂದ ಬೆಂಬಲಿತವಾಗಿವೆ ಎಂದು ಹೇಳಿಕೊಂಡಿದ್ದಾರೆ. ಪಿಗೋಟ್



ಪ್ರಕಾರ, ಕಂಪನಿಗಳು ಇರಾನಿನ ಸರ್ಕಾರವು ಸೃಷ್ಟಿಸುವ ಅಪಾಯಗಳಿಂದ ಲಾಭ ಪಡೆಯುವ ಯೋಜನೆಗಳನ್ನು ನಿರ್ವಹಿಸುತ್ತವೆ. "ಹಡಗು ವಶಪಡಿಸಿಕೊಳ್ಳುವ ಬೆದರಿಕೆ ಸೇರಿದಂತೆ – ಭದ್ರತಾ ಬೆದರಿಕೆಗಳನ್ನು ಸೃಷ್ಟಿಸುವ ಮೂಲಕ ಸಂಸ್ಥೆಗಳು ಅಂತರರಾಷ್ಟ್ರೀಯ ಸಾಗಣೆಯನ್ನು ಸುಲಿಗೆ ಮಾಡುತ್ತವೆ – ಮತ್ತು ನಂತರ ಆಡಳಿತವು ಸೃಷ್ಟಿಸುವ ಅಪಾಯಗಳ ವಿರುದ್ಧ ವ್ಯಾಪ್ತಿಗಾಗಿ ವಾಣಿಜ್ಯ ಹಡಗುಗಳಿಗೆ ಶುಲ್ಕ ವಿಧಿಸುತ್ತವೆ, ಇದು ಐಆರ್‌ಜಿಸಿ ಕಾರ್ಯಾಚರಣೆಗಳು ಮತ್ತು ಇರಾನ್ನ ಪ್ರಾದೇಶಿಕ ಅಸ್ಥಿರತೆಯ ವಿಶಾಲ ಅಭಿಯಾನವನ್ನು ಉಳಿಸಿಕೊಳ್ಳುವ ಆದಾಯವನ್ನು ಉತ್ಪಾದಿಸುತ್ತದೆ" ಎಂದು ಅವರು ಹೇಳಿದರು. ಹಾರ್ಮುಜ್ ಜಲಸಂಧಿಗೆ ಹೊಸ ಹಡಗು ವ್ಯವಸ್ಥೆಯ ಕುರಿತು ಇರಾನ್ ಒಮಾನ್ ಜೊತೆ ಮಾತುಕತೆ ಮುಂದುವರಿಸುತ್ತಿರುವಾಗ ಈ ನಿರ್ಬಂಧಗಳು ಬಂದಿವೆ, ಇದರಲ್ಲಿ ಸಾಗಣೆ ಶುಲ್ಕಗಳು ಮತ್ತು ಕಾರ್ಯತಂತ್ರದ ಜಲಮಾರ್ಗದ ಮೂಲಕ ವಾಣಿಜ್ಯ ಸಂಚಾರದ ಹೆಚ್ಚಿನ ಇರಾನಿನ ಮೇಲ್ವಿಚಾರಣೆಗೆ ಪ್ರಸ್ತಾವನೆಗಳು ಸೇರಿವೆ. ಏತನ್ಮಧ್ಯೆ, ಅಂತರರಾಷ್ಟ್ರೀಯ ನಿರ್ಬಂಧಗಳನ್ನು ತಪ್ಪಿಸಲು ಟೆಹ್ರಾನ್ನ "ನೆರಳು ನೌಕಾಪಡೆ" ಎಂದು ಕರೆಯಲ್ಪಡುವ ಭಾಗವಾಗಿ ಚೀನಾ ಮತ್ತು ಯುಎಇಗೆ ಇರಾನಿನ ಕಚ್ಚಾ ತೈಲ ಮತ್ತು ಪೆಟ್ರೋಕೆಮಿಕಲ್ ಉತ್ಪನ್ನಗಳನ್ನು ಸಾಗಿಸುವ ಹಡಗುಗಳನ್ನು ನಿರ್ವಹಿಸುತ್ತಿದ್ದ ಎಂಟು ಕಂಪನಿಗಳನ್ನು ವಾಷಿಂಗ್ಟನ್ ಸಹ ಗೊತ್ತುಪಡಿಸಿದೆ. ಇತ್ತೀಚಿನ ಕ್ರಮಗಳು ಇರಾನಿನ ಬಂದರುಗಳು ಮತ್ತು ಕರಾವಳಿಯ ದಿಗ್ಬಂಧನ ಎಂದು ವಾಷಿಂಗ್ಟನ್ ವಿವರಿಸುವ ಯುಎಸ್ ನೌಕಾಪಡೆಯ ಜಾರಿಗೊಳಿಸುವಿಕೆಯನ್ನು ಬೆಂಬಲಿಸುತ್ತದೆ ಎಂದು ಪಿಗೋಟ್ ಹೇಳಿದರು. ಈ ಕ್ರಮವು ವಿಶಾಲವಾದ ನಿರ್ಬಂಧಗಳ ಅಭಿಯಾನದ ಭಾಗವಾಗಿದೆ ಎಂದು ಅವರು ಹೇಳಿದರು, ಇದರ ಅಡಿಯಲ್ಲಿ ಈ ವರ್ಷ ಯುಎಸ್ ಇರಾನ್ಗೆ ಸಂಬಂಧಿಸಿದ 100 ಕ್ಕೂ ಹೆಚ್ಚು ಹಡಗುಗಳನ್ನು ಗೊತ್ತುಪಡಿಸಿದೆ ಎಂದು ಅವರು ಹೇಳಿದರು.

# ಪ್ಯಾರಾ ಟ್ರ್ಯಾಕ್‌ನಲ್ಲಿ ದಿಲೀಪ್ ಮಹಾದು ಗಾವಿತ್‌ಗೆ ಚಿನ್ನ

ಗ್ಲಾಸ್ಗೋದಲ್ಲಿ ನಡೆಯುತ್ತಿರುವ 2026ರ ಕಾಮನ್‌ವೆಲ್ತ್ ಗೇಮ್ಸ್‌ನ 6ನೇ ದಿನದಂದು ಭಾರತೀಯ ಕ್ರೀಡಾಪಟುಗಳು ಒಟ್ಟು ಮೂರು ಪದಕಗಳನ್ನು ಗೆದ್ದಿದ್ದಾರೆ. ಈ ಮೂರು ಪದಕಗಳು ಟ್ರ್ಯಾಕ್ ಅಂಡ್ ಫೀಲ್ಡ್ (ಅಥ್ಲೆಟಿಕ್ಸ್ ಮತ್ತು ಪ್ಯಾರಾ ಅಥ್ಲೆಟಿಕ್ಸ್) ವಿಭಾಗದಲ್ಲೇ ಬಂದಿರುವುದು ವಿಶೇಷ. ಪ್ಯಾರಾ ಟ್ರ್ಯಾಕ್‌ನಲ್ಲಿ ದಿಲೀಪ್ ಮಹಾದು ಗಾವಿತ್ ಚಿನ್ನ ಗೆದ್ದರೆ, ಮೊಹಮ್ಮದ್ ಬಾಸಿಲ್‌ಗೆ ಬೆಳ್ಳಿ ಪದಕಕ್ಕೆ ಕೊರಳೊಡ್ಡಿದ್ದಾರೆ. ಇನ್ನು ಲಾಂಗ್ ಜಂಪ್‌ನಲ್ಲಿ ಮುರಳಿ ಶ್ರೀಶಂಕರ್ ಬೆಳ್ಳಿ ಪದಕ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

**ಗಾವಿತ್‌ಗೆ ಚಿನ್ನ, ಬಾಸಿಲ್‌ಗೆ ಬೆಳ್ಳಿ:**

ಪುರುಷರ 100 ಮೀಟರ್ (T47 ವಿಭಾಗ) ಓಟದ ಸ್ಪರ್ಧೆಯಲ್ಲಿ. ಭಾರತದ ಹೆಮ್ಮೆಯ ಪ್ಯಾರಾ ಅಥ್ಲೀಟ್ ದಿಲೀಪ್ ಮಹಾದು ಗಾವಿತ್ ಕೇವಲ 10.71 ಸೆಕೆಂಡುಗಳಲ್ಲಿ ಗುರಿ ತಲುಪಿ ಚಿನ್ನದ ಪದಕವನ್ನು ಮುಡಿಗೇರಿಸಿಕೊಂಡರು. ಇದು ಕೇವಲ ಚಿನ್ನದ ಪದಕವಲ್ಲ, ಬದಲಿಗೆ ಹೊಸ ಕಾಮನ್‌ವೆಲ್ತ್ ಗೇಮ್ಸ್ ದಾಖಲೆಯಾಗಿದೆ!

ಏಕೆಂದರೆ ಕಾಮನ್‌ವೆಲ್ತ್ ಗೇಮ್ಸ್ ಇತಿಹಾಸದಲ್ಲೇ ಈ ನಿರ್ದಿಷ್ಟ ವಿಭಾಗದಲ್ಲಿ ಇದುವರೆಗೆ ಯಾವುದೇ ಕ್ರೀಡಾಪಟು 10.71 ಸೆಕೆಂಡುಗಳಷ್ಟು ವೇಗವಾಗಿ ಓಡಿ ಗುರಿ ತಲುಪಿಲ್ಲ.

ಇದೇ ರೇಸ್‌ನಲ್ಲಿ ಭಾರತದ ಮತ್ತೊಬ್ಬ ಪ್ರತಿಭಾವಂತ ಓಟಗಾರ ಮೊಹಮ್ಮದ್ ಬಾಸಿಲ್ ಎಂ 10.83 ಸೆಕೆಂಡುಗಳಲ್ಲಿ ಗುರಿ ತಲುಪಿ ಬೆಳ್ಳಿಯ ಪದಕವನ್ನು ತನ್ನದಾಗಿಸಿಕೊಂಡರು.

**ಲಾಂಗ್ ಜಂಪ್‌ನಲ್ಲಿ ಮುರಳಿ ಮಿಂಚಿಂಗ್:**

ಭಾರತದ ಸ್ಟಾರ್ ಅಥ್ಲೀಟ್ ಮುರಳಿ ಶ್ರೀಶಂಕರ್ ಪುರುಷರ ಲಾಂಗ್ ಜಂಪ್ ಫೈನಲ್‌ನಲ್ಲಿ ದೇಶದ ಕೀರ್ತಿ ಪತಾಕೆ ಹಾರಿಸಿದರು. ಅತ್ಯಂತ ತೀವ್ರ ಪೈಪೋಟಿಯಿಂದ ಕೂಡಿದ್ದ ಈ ಸ್ಪರ್ಧೆಯಲ್ಲಿ ಶ್ರೀಶಂಕರ್ 8.09 ಮೀಟರ್ ದೂರ ಜಿಗಿಯುವ ಮೂಲಕ ಜಂಟಿಯಾಗಿ ಬೆಳ್ಳಿಯ ಪದಕಕ್ಕೆ ಮುತ್ತಿಕ್ಕಿದರು. ಗಾಯದ ಸಮಸ್ಯೆಯಿಂದ ಚೇತರಿಸಿಕೊಂಡು ಬಂದ ನಂತರ ಶ್ರೀಶಂಕರ್ ನೀಡಿದ ಈ ಪ್ರದರ್ಶನ ಅವರ ಕಠಿಣ ಪರಿಶ್ರಮಕ್ಕೆ ಸಾಕ್ಷಿಯಾಗಿದೆ.




# ಇರಾನ್ ಯುದ್ಧದ ಮೇಲೆ ಟ್ರಂಪ್ ಪ್ರಭಾವ ಬೀರುವುದನ್ನು ನಿರಾಕರಿಸಿದ ನೆತನ್ಯಾಹು

ವಾಷಿಂಗ್ಟನ್, ಜುಲೈ 30: ಇರಾನ್ ಯುದ್ಧದಲ್ಲಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸರಿಯಾದ ನಿರ್ಧಾರ ತೆಗೆದುಕೊಳ್ಳುತ್ತಿದ್ದಾರೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಟೀಕಿಸಿದ್ದಾರೆ ಮತ್ತು ಇತ್ತೀಚಿನ ಶ್ವೇತಭವನದ ಮಾತುಕತೆಗಳ ನಂತರ ಟೆಹ್ರಾನ್ ವಿರುದ್ಧ ಮಿಲಿಟರಿ ಕಾರ್ಯಾಚರಣೆಯನ್ನು ಪುನರಾರಂಭಿಸುವಂತೆ ಟ್ರಂಪ್ ಅವರನ್ನು ಒತ್ತಾಯಿಸುತ್ತಿದ್ದಾರೆ ಎಂಬ ವರದಿಗಳನ್ನು ನಿರಾಕರಿಸಿದ್ದಾರೆ. ಆದಾಗ್ಯೂ, ಇಸ್ಲಾಮಿಕ್ ಗಣರಾಜ್ಯದೊಂದಿಗೆ ಯಾವುದೇ ರೀತಿಯ ರಾಜತಾಂತ್ರಿಕ ಪ್ರಗತಿ ಸಾಧ್ಯವೇ ಎಂದು ಅವರು ಸಂದೇಹ ವ್ಯಕ್ತಪಡಿಸಿದರು. ಮಂಗಳವಾರ ಶ್ವೇತಭವನದಲ್ಲಿ ನಡೆದ ಮುಚ್ಚಿದ ಬಾಗಿಲುಗಳ ಸಭೆಯ ನಂತರ ಟ್ರಂಪ್ ಯುಎಸ್–ಇಸ್ರೇಲ್ ಮೈತ್ರಿಕೂಟದ ಉಸ್ತುವಾರಿ ವಹಿಸಿದ್ದಾರೆ ಎಂದು ನೆತನ್ಯಾಹು ಮತ್ತಷ್ಟು ದೃಢಪಡಿಸಿದರು. ಯುದ್ಧವು ಆರನೇ ತಿಂಗಳಿಗೆ ಪ್ರವೇಶಿಸುತ್ತಿರುವಾಗ, ಎರಡೂ ನಾಯಕರ ನಡುವಿನ ಸಂಬಂಧವು ಸ್ವಲ್ಪಮಟ್ಟಿಗೆ ಹದಗೆಟ್ಟಿರುವಾಗ ಇಸ್ರೇಲ್ ಪ್ರಧಾನಿಯ ಹೇಳಿಕೆಗಳು ಬಂದಿವೆ. ಇರಾನ್ ಜೊತೆಗಿನ ರಾಜತಾಂತ್ರಿಕ ನಿಶ್ಚಿತಾರ್ಥದ ಪರವಾಗಿ ಟ್ರಂಪ್ ಆಡಳಿತದಲ್ಲಿ ಅತಿದೊಡ್ಡ ವ್ಯಕ್ತಿಯಾಗಿರುವ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರೊಂದಿಗಿನ ಭಿನ್ನಾಭಿಪ್ರಾಯಗಳ



ವರದಿಗಳನ್ನು ನೆತನ್ಯಾಹು ಕಡಿಮೆ ಮಾಡಲು ಪ್ರಯತ್ನಿಸಿದರು, ಇಸ್ರೇಲ್ ಆಡಳಿತದೊಳಗಿನ ಅಂಶಗಳು ಯುದ್ಧವನ್ನು ಅನಿರ್ದಿಷ್ಟವಾಗಿ ವಿಸ್ತರಿಸಲು ಪ್ರಯತ್ನಿಸುತ್ತಿವೆ ಎಂದು ಹೇಳಿಕೊಂಡರು. ರಾಜತಾಂತ್ರಿಕ ನಿಶ್ಚಿತಾರ್ಥ, ಹಾರ್ಮುಜ್ ಜಲಸಂಧಿಯ ದಿಗ್ಬಂಧನವನ್ನು ಕಾಯ್ದುಕೊಳ್ಳುವುದು ಅಥವಾ ಮುಂದಿನ ಮಿಲಿಟರಿ ಕಾರ್ಯಾಚರಣೆಗಳನ್ನು ನಡೆಸುವುದು ಸೇರಿದಂತೆ ಇರಾನ್ ವಿರುದ್ಧದ ಮೂರು ಸಂಭಾವ್ಯ ಕ್ರಮಗಳ ಬಗ್ಗೆಯೂ ಇಬ್ಬರೂ ನಾಯಕರು ಚರ್ಚಿಸಿದರು ಎಂದು ನೆತನ್ಯಾಹು ಹೇಳಿದರು. ಇರಾನ್ನಲ್ಲಿ ಮಿಲಿಟರಿ ಯಶಸ್ಸು ಅಥವಾ ಆಡಳಿತ ಬದಲಾವಣೆಯ ಸಾಧ್ಯತೆಗಳ ಬಗ್ಗೆ ಟ್ರಂಪ್ ಅವರನ್ನು ದಾರಿ ತಪ್ಪಿಸಿದ್ದಾರೆ ಎಂಬ ಸಲಹೆಗಳನ್ನು ನೆತನ್ಯಾಹು ತಿರಸ್ಕರಿಸಿದರು. "ಇಲ್ಲ, ನಾನು ಏನನ್ನೂ ದಾರಿ ತಪ್ಪಿಸಲಿಲ್ಲ... ಅಧ್ಯಕ್ಷ ಟ್ರಂಪ್‌ಗೆ ಏನು ಮಾಡಬೇಕೆಂದು ಯಾರೂ ಹೇಳುವುದಿಲ್ಲ" ಎಂದು ಅವರು ಹೇಳಿದರು.

ಇತ್ತೀಚಿನ ವರ್ಷಗಳಲ್ಲಿ ಯಾವುದೇ ಹಂತಕ್ಕಿಂತ ಇರಾನ್ ದುರ್ಬಲವಾಗಿದೆ ಎಂದು ವಾದಿಸಿದರೂ, ಅದರ ನಾಯಕತ್ವವು ದೃಢವಾಗಿ ನಿಯಂತ್ರಣದಲ್ಲಿದೆ ಎಂದು ನೆತನ್ಯಾಹು ಒಪ್ಪಿಕೊಂಡರು. ಹಾರ್ಮುಜ್ ಜಲಸಂಧಿಯ ಕಾರ್ಯತಂತ್ರದ ಮಹತ್ವದ ಕುರಿತು, ಪರ್ಯಾಯ ರಫ್ತು ಮಾರ್ಗಗಳ ಅಭಿವೃದ್ಧಿಯ ಮೂಲಕ ಟೆಹ್ರಾನ್ನ ಜಲಮಾರ್ಗದ ಮೇಲಿನ ಹಿಡಿತ ಮತ್ತು ಜಾಗತಿಕ ಇಂಧನ ಮಾರುಕಟ್ಟೆಗಳ ಮೇಲೆ ಅದನ್ನು ಹತೋಟಿಯಾಗಿ ಬಳಸುವ ಸಾಮರ್ಥ್ಯವು ಕಾಲಾನಂತರದಲ್ಲಿ ಕಡಿಮೆಯಾಗಬಹುದು ಎಂದು ನೆತನ್ಯಾಹು ಹೇಳಿದರು. ಇರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಪಡೆಯುವುದನ್ನು ತಡೆಯುವುದು ತನ್ನ ಸರ್ಕಾರದ ಪ್ರಾಥಮಿಕ ಉದ್ದೇಶವಾಗಿದೆ ಎಂದು ನೆತನ್ಯಾಹು ಪುನರುಚ್ಚರಿಸಿದರು ಮತ್ತು ಭವಿಷ್ಯದ ಯಾವುದೇ ಇರಾನಿನ ದಾಳಿಗೆ ಇಸ್ರೇಲ್ ಬಲವಾಗಿ ಪ್ರತಿಕ್ರಿಯಿಸುತ್ತದೆ ಎಂದು ಎಚ್ಚರಿಸಿದರು.

# ಕಾಮನ್‌ವೆಲ್ತ್: ಇಂದು ನೀರಜ್ ಚೋಪ್ರಾ ಕಣಕ್ಕೆ

ಗ್ಲಾಸ್ಗೋ: ಕಾಮನ್‌ವೆಲ್ತ್ ಕ್ರೀಡಾಕೂಟ 8ನೇ ದಿನಕ್ಕೆ ಕಾಲಿಟ್ಟಿದ್ದು, ಇಂದು ಭಾರತದ ಮಾಜಿ ಒಲಿಂಪಿಕ್ ಮತ್ತು ವಿಶ್ವ ಚಾಂಪಿಯನ್ ನೀರಜ್ ಚೋಪ್ರಾ ಕಣಕ್ಕಿಳಿಯಲು ಸಜ್ಜಾಗಿದ್ದಾರೆ. ಇದು ಅರ್ಹತಾ ಸುತ್ತಿನ ಪಂದ್ಯವಾಗಿರಲಿದೆ. ಇದರೊಂದಿಗೆ ಗೋಲ್ಡನ್ ಬಾಯ್ ನೀರಜ್ ಪುರುಷರ ಜಾವೆಲಿನ್ ಥ್ರೋ ಪ್ರಶಸ್ತಿಯನ್ನು ಮರಳಿ ಪಡೆಯುವ ಪ್ರಯತ್ನವನ್ನು ಪ್ರಾರಂಭಿಸಲಿದ್ದಾರೆ .

2018ರ ಗೋಲ್ಡ್ ಕೋಸ್ಟ್‌ನಲ್ಲಿ ಚಿನ್ನದ ಪದಕ ಗೆದ್ದ ನೀರಜ್, ಗಾಯದಿಂದಾಗಿ ಬರ್ಮಿಂಗ್ಹ್ಯಾಮ್‌ನಲ್ಲಿ ನಡೆದಿದ್ದ 2022ರ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ತಪ್ಪಿಸಿಕೊಂಡಿದ್ದರು. ಏತನ್ಮಧ್ಯೆ ಈ ಆವೃತ್ತಿಯಲ್ಲಿ ಅವರು ತಮ್ಮದೇ ತಂಡದ ಆಟಗಾರರಾದ ಯಶ್ವೀರ್ ಸಿಂಗ್ ಮತ್ತು ರೋಹಿತ್ ಯಾದವ್ ಅವರೊಂದಿಗೆ ಅರ್ಹತಾ ಸುತ್ತಿನಲ್ಲಿ ಸ್ಪರ್ಧಿಸಲಿದ್ದಾರೆ.

ಮತ್ತೊಂದೆಡೆ, ರಾಷ್ಟ್ರೀಯ ದಾಖಲೆ ಹೊಂದಿರುವ ತೇಜಿಂದರ್‌ಪಾಲ್ ಸಿಂಗ್ ತೂರ್ ಶಾಟ್‌ಪುಟ್ ಫೈನಲ್‌ನಲ್ಲಿ ಸ್ಪರ್ಧಿಸಲಿದ್ದು, ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ತಮ್ಮ ಮೊದಲ ಪದಕ ಗೆಲ್ಲುವ ಗುರಿಯನ್ನು ಹೊಂದಿದ್ದಾರೆ . ಅವರೊಂದಿಗೆ ಸಮರ್ದೀಪ್ ಸಿಂಗ್ ಗಿಲ್ ಕೂಡ ಸೇರಿದ್ದಾರೆ. ಏಷ್ಯನ್ ಗೇಮ್ಸ್ ಮತ್ತು ಏಷ್ಯನ್ ಚಾಂಪಿಯನ್‌ಶಿಪ್‌ಗಳಲ್ಲಿ ಎರಡು ಚಿನ್ನದ ಪದಕಗಳನ್ನು ಗೆದ್ದಿದ್ದರೂ , ತೂರ್ ಇನ್ನೂ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಪದಕ ಗೆಲ್ಲಲು ಸಾಧ್ಯವಾಗಿಲ್ಲ.

ಇನ್ನು ಮಹಿಳೆಯರ ಡಿಸ್ಕಸ್ ಥ್ರೋ ಜೊತೆಗೆ, ಮಹಿಳೆಯರ 5000 ಮೀಟರ್ ಓಟವೂ ಪದಕ ಸ್ಪರ್ಧೆಯಾಗಿದೆ. ಇದರ ಹೊರತಾಗಿ, ಮಾರ್ಟಿನಾ ದೇವಿ ಮೈಬಮ್ ಮತ್ತು ಲವ್‌ಪ್ರೀತ್ ಸಿಂಗ್ ವೇಟ್‌ಲಿಫ್ಟಿಂಗ್‌ನಲ್ಲಿ ಪದಕ ಗೆಲ್ಲಲು ಪ್ರಯತ್ನಿಸಲಿದ್ದಾರೆ.

ಗುರುವಾರ ಗ್ಲಾಸ್ಗೋದ ಸ್ಕಾಟ್ಸ್ಟೌನ್ ಕ್ರೀಡಾಂಗಣದಲ್ಲಿ ನಡೆದ ಕಠಿಣ ಪರಿಸ್ಥಿತಿಯಲ್ಲಿ ನೀರಜ್ ಚೋಪ್ರಾ 79.61 ಮೀಟರ್ ಗರಿಷ್ಠ ಪ್ರಯತ್ನದೊಂದಿಗೆ 2026 ರ ಕಾಮನ್ವೆಲ್ತ್ ಕ್ರೀಡಾಕೂಟದಲ್ಲಿ ಪುರುಷರ ಜಾವೆಲಿನ್ ಥ್ರೋ ಫೈನಲ್ಗೆ ಅರ್ಹತೆ ಪಡೆದರು. ಗ್ಲಾಸ್ಗೋ 2026 ರಲ್ಲಿ ನಡೆದ ಜಾವೆಲಿನ್ ಥ್ರೋ ಸ್ಪರ್ಧೆಯ ಸ್ವರೂಪದ ಪ್ರಕಾರ, ಅರ್ಹತಾ ಸುತ್ತಿನಲ್ಲಿ 84.00 ಮೀ ಅಥವಾ ಅದಕ್ಕಿಂತ ಹೆಚ್ಚು ದೂರ ಎಸೆಯುವ ಕ್ರೀಡಾಪಟುಗಳು ಸ್ವಯಂಚಾಲಿತವಾಗಿ ಫೈನಲ್‌ಗೆ ಮುನ್ನಡೆಯುತ್ತಾರೆ.




ಭಾರತೀಯ ಅಥ್ಲೀಟ್ ತನ್ನ ಮೊದಲ ಪ್ರಯತ್ನದಲ್ಲೇ 76.28 ಮೀ ದೂರ ಎಸೆದು ಎರಡನೇ ಪ್ರಯತ್ನದಲ್ಲಿ ಅದನ್ನು 79.61 ಮೀ ಗೆ ಸುಧಾರಿಸಿಕೊಂಡರು. 90.23 ಮೀ ಓಟದ ರಾಷ್ಟ್ರೀಯ ದಾಖಲೆಯನ್ನು ಹೊಂದಿರುವ ನೀರಜ್, ಮೂರನೇ ಪ್ರಯತ್ನ ಮಾಡಲಿಲ್ಲ ಏಕೆಂದರೆ ಅವರು ಈಗಾಗಲೇ ಐದನೇ ಸ್ಥಾನವನ್ನು ಪಡೆಯುವ ಮೂಲಕ ಫೈನಲ್‌ನಲ್ಲಿ ತಮ್ಮ ಸ್ಥಾನವನ್ನು ಭದ್ರಪಡಿಸಿಕೊಂಡಿದ್ದಾರೆ.